ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

46

ನವೆಂಬರ್ 5 ಬುಧವಾರ 2025

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 46 | ಸಂಚಿಕೆ: 197 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4



ಭೀಮಾ ಜ್ಯುವೆಲ್ಸ್ ಗೋಲ್ಡ್ ಟ್ರೀ ಪ್ರಿವಿಲೇಜ್ ಕಾರ್ಯಕ್ರಮ



ಭೀಮಾ ಜ್ಯುವೆಲ್ಸ್ 100ನೇ ವಾರ್ಷಿಕೋತ್ಸವದ ಅಂಗವಾಗಿ ಗೋಲ್ಡ್ ಟ್ರೀ ಪ್ರಿವಿಲೇಜ್ ಪ್ರೋಗ್ರಾಂ ಅನ್ನು ಪ್ರಾರಂಭಿಸಿದೆ.

ಮೈಸೂರು, ನ. 4–ಭಾರತದ ಅತ್ಯಂತ ವಿಶ್ವಾಸಾರ್ಹ ಆಭರಣ ಬ್ರಾಂಡ್‌ಗಳಲ್ಲಿ ಒಂದಾದ ಭೀಮಾ ಜ್ಯುವೆಲ್ಸ್ 100ನೇ ವಾರ್ಷಿಕೋತ್ಸವದ ಅಂಗವಾಗಿ, ತನ್ನ ಗೋಲ್ಡ್ ಟ್ರೀ ಗ್ರಾಹಕರಿಗಾಗಿ ಪ್ರತ್ಯೇಕವಾಗಿ ವಿನ್ಯಾಸಗೊಳಿಸಲಾದ ಪ್ರೀಮಿಯಂ ಲಾಯಲ್ಟಿ ಗೋಲ್ಡ್ ಟ್ರೀ ಪ್ರಿವಿಲೇಜ್ ಪ್ರೋಗ್ರಾಂ ಅನ್ನು ಪ್ರಾರಂಭಿಸಿದೆ.

ಕಾರ್ಯಕ್ರಮವು ಮೈಸೂರಿನ ಬಿಎನ್ ರಸ್ತೆಯಲ್ಲಿರುವ ತನ್ನ ಶೋರೂಂನಲ್ಲಿ ನಡೆಯಲಿದೆ. ಕಾರ್ಯಕ್ರಮವು ಭೀಮಾ ಜ್ಯುವೆಲ್ಸ್ ತನ್ನ ಗ್ರಾಹಕರು ವರ್ಷಗಳಿಂದ ನಮ್ಮೊಂದಿಗೆ ನಿರ್ಮಿಸಿರುವ ನಂಬಿಕೆ ಮತ್ತು ಶಾಶ್ವತ ಸಂಬಂಧಗಳಿಗೆ ಹೊಂದಿರುವ ಅಪಾರ ಮೆಚ್ಚುಗೆಯನ್ನು ಪ್ರತಿಬಿಂಬಿಸುತ್ತದೆ. ಭೀಮಾ ತನ್ನ ಪ್ರಮುಖ ಗೋಲ್ಡ್ ಟ್ರೀ–ಗೋಲ್ಡ್ ಪರ್ಚೇಸ್ ಪ್ಲಾನ್ ಅನ್ನು ಮತ್ತಷ್ಟು ವಿಸ್ತರಿಸುತ್ತಿದೆ. ಇದು ಚಿನ್ನದ ಆಭರಣ ಖರೀದಿಗೆ ವಿಶಿಷ್ಟ ಮತ್ತು ಸೂಕ್ತವಾದ ಉಳಿತಾಯ ಯೋಜನೆಯಾಗಿದೆ. ಈ ಯೋಜನೆಯು ಸದಸ್ಯರಿಗೆ ಮಾಸಿಕ ಮುಂಗಡ ಪಾವತಿಗಳನ್ನು ಅಥವಾ ಒಂದು ಬಾರಿ ಪಾವತಿಯನ್ನು ಮಾಡಲು ಅವಕಾಶ ನೀಡುತ್ತದೆ, ಇದು ಕೇವಲ ರೂ. 1,000ದಿಂದ ಪ್ರಾರಂಭವಾಗುತ್ತದೆ. ಈ ಮುಂಗಡಗಳನ್ನು 11ತಿಂಗಳ ಅವಧಿಯಲ್ಲಿ ಪಾವತಿಸಬಹುದು ಮತ್ತು ಚಿನ್ನದ ಆಭರಣಗಳಾಗಿ ಬಳಸಿಕೊಳ್ಳಬಹುದು.

ಕ್ಷಮೆಯಾಚಿಸಿದರೂ ಪ್ರಕರಣ ಜೀವಂತವಾಗಿರಿಸಲು ಯತ್ನ

ಮೈಸೂರು,ನ.4(ಜಿಎ)–ವಿಧಾನಪರಿಷತ್ ಸದಸ್ಯ ಸಿ.ಟಿ.ರವಿ ಅವರು ಸವಿತಾ ಸಮಾಜದ ಬಗ್ಗೆ ನಿಂದನಾರ್ಹ ಪದ ಬಳಸಿದ ಬಳಿಕ ಕ್ಷಮೆಯಾಚಿಸಿದ್ದಾರೆ. ಆದರೂ ಈ ಪ್ರಕರಣ ಜೀವಂತವಾಗಿರಿಸುವ ಮೂಲಕ ಅವರ ತೇಜೋವಧೆ ಮುಂದುವರಿದಿದೆ. ಇದನ್ನು ಜಿಲ್ಲಾ ಕಾಯಕ ಸಮುದಾಯಗಳ ಒಕ್ಕೂಟ ಖಂಡಿಸುತ್ತದೆ ಎಂದು ಸವಿತಾ ಸಮಾಜದ ಅಧ್ಯಕ್ಷ ಮೈ.ನಾ. ಲೋಕೇಶ್ ತಿಳಿಸಿದರು. ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರಕರಣದ ದುರ್ಬಳಕೆ ಮಾಡಿಕೊಳ್ಳುತ್ತಿರುವ ಸಚಿವ ಮಧು ಬಂಗಾರಪ್ಪ ಅವರು ಸಿ.ಟಿ.ರವಿ ವಿರುದ್ಧ ನ.5 ಮತ್ತು 6ರಂದು ರಾಜ್ಯಾದ್ಯಂತ ಪ್ರತಿಭಟನೆ ನಡೆಸಲು ಹಾಗೂ ಸಿ.ಟಿ.ರವಿ ವಿರುದ್ಧ ಪ್ರತಿಭಟನೆ ನಡೆಸುವಂತೆ ಪ್ರಚೋದನೆ ನೀಡುತ್ತಿರುವುದು ಸರಿಯಲ್ಲ. ಒಂದು ವೇಳೆ ಆ ರೀತಿ ಮಾಡಿದಲ್ಲಿ ತಾವೂ ಅದನ್ನು ವಿರೋಧಿಸಿ ಹೋರಾಟ ನಡೆಸುವುದಾಗಿ ಎಚ್ಚರಿಸಿದರು. ಸುದ್ದಿಗೋಷ್ಠಿಯಲ್ಲಿ ಗೌರವಾಧ್ಯಕ್ಷ ಎಂ.ನಾಗರಾಜ್, ಮಡಿವಾಳ ಸಮುದಾಯದ ಮುಖಂಡ ಪಿ.ಗಿರೀಶ್, ಈಡಿಗ ಸಮುದಾಯದ ಮುಖಂಡ ಪರಶುರಾಮಪ್ಪ ಉಪಸ್ಥಿತರಿದ್ದರು.

ಜರ್ಕಿನ್ ವಿತರಣೆ...



ಮೈಸೂರು ಜಿಲ್ಲಾ ಹಾಲು ಒಕ್ಕೂಟದ ಕೃತಕ ಗರ್ಭಧಾರಣ ಕಾರ್ಯಕರ್ತರಿಗೆ ಮೈಮುಲ್ ಅಧ್ಯಕ್ಷ ಕೆ.ಈರೇಗೌಡರು ಜರ್ಕಿನ್ ವಿತರಿಸಿದರು. ಈ ವೇಳೆ ಒಕ್ಕೂಟದ ವ್ಯವಸ್ಥಾಪಕ ನಿರ್ದೇಶಕ ಕೆ.ಎನ್.ಸುರೇಶ್‌ನಾಯ್ಕ್, ಪಿ & ಐ ವ್ಯವಸ್ಥಾಪಕ ಎಲ್.ಕರಿಬಸವರಾಜು, ಆಡಳಿತ ಮಂಡಳಿ ಸದಸ್ಯರು ಹಾಜರಿದ್ದರು.

ಕಾಂಗ್ರೆಸ್ ಹಿರಿಯ ಶಾಸಕ ಎಚ್.ವೈ. ಮೇಟಿ ನಿಧನ

ಬೆಂಗಳೂರು, ನ.4(ಕೆಎಂಶಿ)– ಮಾಜಿ ಸಚಿವ, ಕಾಂಗ್ರೆಸ್‌ನ ಹಾಲಿ ಹಿರಿಯ ಶಾಸಕರಾಗಿದ್ದ ಎಚ್.ವೈ.ಮೇಟಿ (79) ಇಂದಿಲ್ಲಿ ನಿಧನರಾಗಿದ್ದಾರೆ.



ಎಚ್.ವೈ.ಮೇಟಿ

ಕೆಲವು ದಿನಗಳಿಂದ ಉಸಿರಾಟದ ತೊಂದರೆಯಿಂದ ಬಳಲುತ್ತಿದ್ದ ಅವರು ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದರು. ನಿಧನದ ವಿಷಯ ತಿಳಿಯುತ್ತಿದ್ದಂತೆ ಆಸ್ಪತ್ರೆಗೆ ತೆರಳಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಮೇಟಿ ಕುಟುಂಬದವರಿಗೆ ಸಾಂತ್ವನ ಹೇಳಿ, ಪಾರ್ಥಿವ ಶರೀರವನ್ನು ಬಾಗಲಕೋಟೆಗೆ ಕೊಂಡೊಯ್ಯಲು ವ್ಯವಸ್ಥೆ ಮಾಡಿದರು.

ಆರ್.ಟಿ.ನಗರ ನಿವಾಸದಲ್ಲಿ ಸಂಜೆವರೆಗೆ ಸಾರ್ವಜನಿಕರಿಗೆ ಪಾರ್ಥಿವ ಶರೀರದ ಅಂತಿಮ ದರ್ಶನಕ್ಕೆ ಅವಕಾಶ ಮಾಡಿಕೊಟ್ಟು ನಂತರ ಬಾಗಲಕೋಟೆಗೆ ಕೊಂಡೊಯ್ಯಲಾಯಿತು.


ಅಂತ್ಯಕ್ರಿಯೆ ನಾಳೆ, (ನವೆಂಬರ್ 5) ಸಕಲ ಸರ್ಕಾರಿ ಗೌರವದೊಂದಿಗೆ ಅವರ ಹುಟ್ಟೂರಾದ ಬಾಗಲಕೋಟೆ ಜಿಲ್ಲೆಯ ತಿಮ್ಮಾಪುರದಲ್ಲಿ ನಡೆಯಲಿದೆ.

ಅಂತ್ಯಕ್ರಿಯೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೇರಿದಂತೆ ಕಾಂಗ್ರೆಸ್‌ನ ಪ್ರಮುಖ ನಾಯಕರು ಹಾಗೂ ವಿವಿಧ ರಾಜಕೀಯ ಪಕ್ಷಗಳ ಪ್ರಮುಖ ನಾಯಕರು ಭಾಗಿಯಾಗಲಿದ್ದಾರೆ. ಎಚ್.ಡಿ. ದೇವೇಗೌಡ ಹಾಗೂ ಸಿದ್ದರಾಮಯ್ಯ ಸಂಪುಟದಲ್ಲಿ ಸಚಿವರಾಗಿ ಕಾರ್ಯನಿರ್ವಹಿಸಿದ್ದ ಮೇಟಿ ಐದು ಬಾರಿ ಶಾಸಕರಾಗಿದ್ದರು. ಒಮ್ಮೆ ಲೋಕಸಭೆಗೂ ಬಾಗಲಕೋಟೆ ಕ್ಷೇತ್ರದಿಂದ ಆಯ್ಕೆಯಾಗಿದ್ದರು.

ಮೂರು ಬಾರಿ ಗುಳೇದಗುಡ್ಡ ವಿಧಾನ ಸಭಾ ಕ್ಷೇತ್ರದಿಂದ, ಎರಡು ಬಾರಿ ಬಾಗಲಕೋಟೆ ಕ್ಷೇತ್ರದಿಂದ ವಿಧಾನಸಭೆಗೆ ಆಯ್ಕೆಯಾಗಿ ಅಬಕಾರಿ ಹಾಗೂ ಅರಣ್ಯ ಸಚಿವರಾಗಿ ಕರ್ತವ್ಯ ನಿರ್ವಹಿಸಿದ್ದಾರೆ.


ಸಿದ್ದರಾಮಯ್ಯ ಜನತಾ ಪರಿವಾರದಿಂದ ಉಚ್ಚಾಟನೆಗೊಂಡ ನಂತರ ಅವರ ಜೊತೆ ಮೇಟಿ ಸಹಾ ಕಾಂಗ್ರೆಸ್‌ಗೆ ಸೇರ್ಪಡೆಯಾದರು. ಮುಖ್ಯಮಂತ್ರಿ ಅವರ ಆಪ್ತ ವಲಯದಲ್ಲಿದ್ದ ಮೇಟಿ, ಹಿಂದೆ ಅಬಕಾರಿ ಸಚಿವರಾಗಿದ್ದಾಗ, ಲೈಂಗಿಕ ದೌರ್ಜನ್ಯ ಆರೋಪದ ಹಿನ್ನೆಲೆಯಲ್ಲಿ ಸಂಪುಟದಿಂದ ಹೊರಬರಬೇಕಾಯಿತು. ಎಚ್.ವೈ.ಮೇಟಿ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಹಲವು ರಾಜಕೀಯ ನಾಯಕರು ಸಂತಾಪ ಸೂಚಿಸಿದ್ದಾರೆ.

ಎಂ.ಪುಟ್ಟಮಾದಪ್ಪ



ಮೈಸೂರು ನಗರ ಕೆ.ಆರ್.ಮೊಹಲ್ಲಾದ ಹೊಸ ಬಂಡಿಕೇರಿ ನಿವಾಸಿ ಎಂ.ಪುಟ್ಟಮಾದಪ್ಪ (89) ಅವರು ಅಲ್ಪಕಾಲದ ಅಸ್ವಸ್ಥತೆ ನಂತರ ನ.3(ಸೋಮವಾರ) ನಿಧನರಾದರು. ಮೃತರು ಪತ್ನಿ ಶ್ರೀಮತಿ ರಾಮಮ್ಮ, ಪುತ್ರ ಗುರುಪ್ರಸಾದ್, ಪುತ್ರಿ ಮನೋನ್ಮಣಿ ಸೇರಿದಂತೆ ಅಪಾರ ಬಂಧು ವರ್ಗ ಅಗಲಿದ್ದಾರೆ. ಅಂತ್ಯಕ್ರಿಯೆ ಇಂದು ಮಧ್ಯಾಹ್ನ ಚಾಮುಂಡಿಬೆಟ್ಟ ತಪ್ಪಲಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಜಿ.ಸುಕನ್ಯಾ



ಮೈಸೂರು: ಮೈಸೂರು ಬನ್ನಿಮಂಟಪ ಹುಡ್ಕೋ ಬಿ.ಬಿ. ಬ್ಲಾಕ್‌ನ ನಂ.596ರ ನಿವಾಸಿ ಹಾಗೂ ದಿವಂಗತ ಎಂ.ಜಿ.ರಾಮಚಂದ್ರ ಅವರ ಪತ್ನಿ ಶ್ರೀಮತಿ ಜಿ.ಸುಕನ್ಯಾ (65) ಅವರು ಇಂದು ಬೆಳಗ್ಗೆ ನಿಧನರಾದರು. ಮೃತರು ಪುತ್ರ, ಆರ್.ಶ್ಯಾಂ, ಸೊಸೆ ರಮ್ಯಾ, ಪುತ್ರಿ, ಮೊಮ್ಮಕ್ಕಳು ಮತ್ತು ಅಪಾರ ಬಂಧು ವರ್ಗ, ಸ್ನೇಹಿತರನ್ನು ಅಗಲಿದ್ದಾರೆ. ಇವರ ಅಂತ್ಯಕ್ರಿಯೆ ಇಂದು ಮಧ್ಯಾಹ್ನ ಚಾಮುಂಡಿಬೆಟ್ಟ ತಪ್ಪಲಲ್ಲಿ ನೆರವೇರಿಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಭಾರತ ಮಧುಮೇಹಿಗಳ ರಾಜಧಾನಿ ಎಂಬುದು ಶುದ್ಧ ಸುಳ್ಳು

ಸಿಎಫ್‌ಟಿಆರ್‌ಐ ನಿವೃತ್ತ ನಿರ್ದೇಶಕ ಡಾ.ಪ್ರಕಾಶ್ ಸ್ಪಷ್ಟನೆ



ಮೈಸೂರಿನ ಯುವರಾಜ ಕಾಲೇಜಿನ ಅಮೃತ ಮಹೋತ್ಸವ ಸಭಾಂಗಣದಲ್ಲಿ ಸರ್ಕಾರಿ ಆಯುರ್ವೇದ ಸಂಶೋಧನಾ ಸಂಸ್ಥೆ ಆಯೋಜಿಸಿದ್ದ ಆಹಾರ ವೇದ ರಾಷ್ಟ್ರೀಯ ವಿಚಾರ ಸಂಕಿರಣವನ್ನು ಮೈಸೂರು ವಿವಿ ಕುಲಸಚಿವೆ ಎಂ.ಕೆ.ಸವಿತಾ ಉದ್ಘಾಟಿಸಿದರು.

ಮೈಸೂರು, ನ.4(ಬಿಎಲ್‌ಯು)– ಭಾರತ ಮಧುಮೇಹಿಗಳ ರಾಜಧಾನಿ ಎಂದು ಮಾಧ್ಯಮಗಳಲ್ಲಿ ನಡೆಯುತ್ತಿರುವ ಪ್ರಚಾರ ಶುದ್ಧ ಸುಳ್ಳು ಎಂದು ಸಿಎಫ್‌ಟಿಆರ್‌ಐ ನಿವೃತ್ತ ನಿರ್ದೇಶಕ ಡಾ.ವಿ. ಪ್ರಕಾಶ್ ಸ್ಪಷ್ಟಪಡಿಸಿದರು.

ಮೈಸೂರಿನ ಯುವರಾಜ ಕಾಲೇಜಿನ ಅಮೃತ ಮಹೋತ್ಸವ ಸಭಾಂಗಣದಲ್ಲಿ ಇಂದು ಸರ್ಕಾರಿ ಆಯುರ್ವೇದ ಸಂಶೋಧನಾ ಸಂಸ್ಥೆ ಆಯೋಜಿಸಿದ್ದ ಆಹಾರ ವೇದ ರಾಷ್ಟ್ರೀಯ ವಿಚಾರ ಸಂಕಿರಣದಲ್ಲಿ ಮಾತನಾಡಿದ ಅವರು, ಭಾರತದ ಜನಸಂಖ್ಯೆ ಹೆಚ್ಚಿದೆ. ಈ ಹಿನ್ನೆಲೆಯಲ್ಲಿ ಸುಮಾರು 14 ಕೋಟಿ ಮಧುಮೇಹಿಗಳಿದ್ದಾರೆ. ಆದರೆ ಈ ಪ್ರಮಾಣ ಅಂತರ ರಾಷ್ಟ್ರೀಯ ಮಟ್ಟದಲ್ಲಿ ಶೇಕಡ 11 ರಷ್ಟು ಮಾತ್ರ ಇದೆ ಎಂದು ಮಾಹಿತಿ ನೀಡಿದರು.

ಮನುಷ್ಯನಿಗೆ ಮೂಲಭೂತವಾಗಿ ಸೇವಿಸುವ ಆಹಾರ ಸರಿ ಇರಬೇಕು, ಸರಿಯಾದ ಸಮಯಕ್ಕೆ ಊಟ ಆಹಾರ ಸೇವಿಸಿದಾಗ ಮಾತ್ರ ಸ್ವಾಸ್ಥ್ಯ, ಆರೋಗ್ಯ ಕಾಪಾಡಿಕೊಳ್ಳಬಹುದು. ಇದರಿಂದ ಮನುಷ್ಯ ಚಟುವಟಿಕೆಯಿಂದ ಇರಲು ಸಾಧ್ಯ ಎಂದು ಡಾ.ಪ್ರಕಾಶ್ ಅಭಿಪ್ರಾಯಪಟ್ಟರು.

ಆಯುರ್ವೇದ ವಿಜ್ಞಾನದ ಪ್ರಕಾರ ಅಗತ್ಯವಿರುವಷ್ಟು ಮಾತ್ರ ಆಹಾರ ಸೇವನೆ ಮಾಡಬೇಕು. ಯೋಗ, ವ್ಯಾಯಾಮ ಮಾಡಬೇಕು. ರೈತರು ಕಷ್ಟಪಟ್ಟು ಬೆಳೆ ಬೆಳೆಯುತ್ತಾರೆ. ಈ ಹಿನ್ನೆಲೆಯಲ್ಲಿ ಯಾರೂ ಆಹಾರ ಪದಾರ್ಥಗಳನ್ನು ಪೋಲು ಮಾಡಬಾರದು ಎಂದು ಸಲಹೆ ನೀಡಿದರು.

ಆಯುರ್ವೇದ ಪದ್ಧತಿ ಬಗ್ಗೆ ಜಾಗೃತಿ ಮೂಡಿಸಬೇಕು. ಸಾಂಪ್ರದಾಯಿಕ ಜ್ಞಾನ, ಆಧುನಿಕ ತಂತ್ರಜ್ಞಾನ, ಸ್ಪಷ್ಟ ದೂರ ದರ್ಶಿತ್ವದ ಮೂಲಕ ನವ ಭಾರತವನ್ನು ನಿರ್ಮಾಣ ಮಾಡಬೇಕು ಎಂದು ಡಾ.ಪ್ರಕಾಶ್ ಕರೆ ನೀಡಿದರು.

ವಿಚಾರ ಸಂಕಿರಣ ಉದ್ಘಾಟಿಸಿ ಮಾತನಾಡಿದ ಮೈಸೂರು ವಿಶ್ವವಿದ್ಯಾನಿಲಯದ ಕುಲಸಚಿವೆ ಎಂ.ಕೆ.ಸವಿತಾ ಅವರು, ಸ್ವಾಸ್ಥ್ಯ, ಆರೋಗ್ಯ ಕಾಪಾಡಲು ಆಹಾರದಲ್ಲಿ ಶಿಸ್ತು ಇರಬೇಕು. ಆಹಾರದ ಕ್ರಮ ಜೀವನದ ಮೌಲ್ಯವಾಗಿರುತ್ತದೆ ಎಂದರು.

ಈಗಿನ ಮಕ್ಕಳು ಗೋಬಿ ಮಂಚೂರಿ, ಪಿಜ್ಜಾ, ಬರ್ಗರ್ ಸೇರಿದಂತೆ ಬೇಕರಿ ಆಹಾರಗಳನ್ನು ಹೆಚ್ಚಾಗಿ ಸೇವಿಸುತ್ತಿದ್ದಾರೆ. ಇದರ ಬದಲು ಸೊಪ್ಪು ಸೇರಿದಂತೆ ಇತರೆ ಪೌಷ್ಠಿಕಾಂಶ ಆಹಾರ ಸೇವಿಸಬೇಕು. ಇವತ್ತಿನ ಒತ್ತಡದ ಬದುಕಿನಲ್ಲಿ ಆಹಾರದಲ್ಲಿ ಶಿಸ್ತು ಇಲ್ಲದಿದ್ದರೆ ಅನಾರೋಗ್ಯ ಉಂಟಾಗುತ್ತದೆ ಎಂದು ಎಚ್ಚರಿಸಿದರು.

ಈ ಹಿಂದೆ ನಮ್ಮ ಹಿರಿಯರು ಪೌಷ್ಟಿಕಾಂಶ ಆಹಾರ ಸೇವಿಸುತ್ತಿದ್ದರು. ಇದರಿಂದ ವಯಸ್ಸಾದರೂ ಇಂದಿಗೂ ಅವರ ಮುಖದಲ್ಲಿ ಕಾಂತಿ ಇರುತ್ತದೆ. ಈ ಹಿನ್ನೆಲೆ ನಮ್ಮ ಹಿರಿಯರ ಆಹಾರ ಪದ್ಧತಿ ನಮಗೆ ಮಾದರಿಯಾಗಿ ಅದನ್ನು ಅನುಸರಿಸಬೇಕು ಎಂದು ಸವಿತಾ ಸಲಹೆ ನೀಡಿದರು.

ಈ ವೇಳೆ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ಹಿರಿಯ ಛಾಯಾಗ್ರಾಹಕ ಶ್ರೀರಾಂ ಅವರನ್ನು ಸನ್ಮಾನಿಸಲಾಯಿತು. ಮೈಸೂರು ವಿವಿ ಕುಲಸಚಿವ ಡಾ.ಎನ್.ನಾಗರಾಜ್, ನಿವೃತ್ತ ಪ್ರಾಧ್ಯಾಪಕಿ ಡಾ.ಜಮುನಾ ಪ್ರಕಾಶ್, ಕಾಲೇಜಿನ ಪ್ರಾಂಶುಪಾಲ ಪ್ರೊ.ಎಸ್.ಮಹದೇವ ಮೂರ್ತಿ, ಪರೀಕ್ಷಾ ನಿಯಂತ್ರಣಾಧಿಕಾರಿ ಸಿ.ನಾಗೇಶ್‌ಬಾಬು, ಆಡಳಿತಾಧಿಕಾರಿ ಪ್ರೊ.ಕೆ.ವಿಜಯಕುಮಾರ್, ಆಹಾರ ಮತ್ತು ಪೋಷಣ ವಿಭಾಗದ ಮುಖ್ಯಸ್ಥ ಪ್ರೊ.ಆರ್. ಶೇಖರ್ ನಾಯಕ್, ಸರ್ಕಾರಿ ಆಯುರ್ವೇದ ಸಂಶೋಧನಾ ಕೇಂದ್ರದ ಸಹಾಯಕ ನಿರ್ದೇಶಕ ಡಾ.ಲಕ್ಷ್ಮಿ ನಾರಾಯಣ ಶಣೈ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಬಾಲ್ ಬ್ಯಾಡ್ಮಿಂಟನ್ ಪಂದ್ಯಾವಳಿಯಲ್ಲಿ ಸೆಂಟ್ ಮರಿನಾಸ್ ಆಂಗ್ಲ ಮಾಧ್ಯಮ ಶಾಲೆ ವಿದ್ಯಾರ್ಥಿಗಳ ಸಾಧನೆ...



ಸಾರ್ವಜನಿಕ ಶಿಕ್ಷಣ ಇಲಾಖೆ ವತಿಯಿಂದ ಮೈಸೂರಿನ ಕೈಲಾಸಪುರಂನ ಸರ್ಕಾರಿ ಪ್ರೌಢಶಾಲೆ ಆವರಣದಲ್ಲಿ ನಡೆದ 14ರ ವಯೋಮಾನದ ವಲಯ ಮತ್ತು ನಗರ ಮಟ್ಟದ ಬಾಲ್ ಬ್ಯಾಡ್‌ಮಿಂಟನ್ ಪಂದ್ಯಾವಳಿಯಲ್ಲಿ ನಗರದ ಸೇಂಟ್ ಮರಿನಾ ಪ್ರೌಢಶಾಲೆಯ ಬಾಲಕರ ಮತ್ತು ಬಾಲಕಿಯರ ತಂಡ ಬಹುಮಾನ ಪಡೆಯುವ ಮೂಲಕ ಸಾಧನೆ ಮಾಡಿವೆ. ಬಾಲಕಿಯರ ತಂಡ ವಲಯ ಮಟ್ಟದಲ್ಲಿ ವಿಜೇತವಾಗಿದ್ದು, ನಗರ ಮಟ್ಟದ ಪಂದ್ಯಾವಳಿಯಲ್ಲಿ ರನ್ನರ್ಸ್ ಅಪ್ ಆಗಿ ಹೊರಹೊಮ್ಮಿವೆ. ಬಾಲಕರ ತಂಡ ವಲಯ ಮಟ್ಟದ ಪಂದ್ಯಾವಳಿಯಲ್ಲಿ ವಿಜೇತವಾಗಿದ್ದು, ಎರಡೂ ತಂಡಗಳು ಜಿಲ್ಲಾ ಮಟ್ಟದ ಪಂದ್ಯಾವಳಿಗೆ ಆಯ್ಕೆಯಾಗಿವೆ.

ಇಂದು ಶನಿ ಮಹಾಶಾಂತಿ

ಮೈಸೂರು: ಮೈಸೂರಿನ ದೇವರಾಜ ಮೊಹಲ್ಲಾದಲ್ಲಿರುವ ಅಮೃತೇಶ್ವರ ದೇವಸ್ಥಾನದಲ್ಲಿ ಹುಣ್ಣಿಮೆ ಪ್ರಯುಕ್ತ ಬುಧವಾರ ಬೆಳಗ್ಗೆ ಮೇಷ, ಸಿಂಹ, ವೃಶ್ಚಿಕ, ಕುಂಭ, ಮೀನಾ ರಾಶಿಯವರಿಗೆ ವಿಶೇಷವಾಗಿ ಶನಿ ಮಹಾಶಾಂತಿ ಏರ್ಪಡಿಸಲಾಗಿದೆ. ಅಲ್ಲದೆ, ನಿವಾರಕ ಮಹಾ ಸುದರ್ಶನ ಹೋಮ, ಮಹಾ ಮೃತ್ಯುಂಜಯ ಹೋಮ ರಾಹು, ಕೇತು ಅಂಗಾರಕ ಶಾಂತಿ ಏರ್ಪಡಿಸಲಾಗಿದೆ. ಬೆಳಗ್ಗೆ 9.30 ಗಂಟೆಗೆ ಪ್ರಾರಂಭವಾಗಿ 12.30ಕ್ಕೆ ಪೂರ್ಣಾಹುತಿ. ಮಂಗಳಾರತಿಯೊಂದಿಗೆ ನೆರವೇರಲಿದೆ.

ಸಿಎ ಪರೀಕ್ಷೆಯಲ್ಲಿ ಸಾಧನೆ



ಮೈಸೂರು: ಬೋಗಾದಿ ಮತ್ತು ದಟ್ಟಗಳ್ಳಿಯ ಎಸ್‌ವಿಜಿ ಸೆಂಟರ್ ಆಫ್ ಎಕ್ಸಲೆನ್ಸ್‌ನ ವಿದ್ಯಾರ್ಥಿ ನಿಖಿಲ್ ಪಿಪಿ ತನ್ನ ಮೊದಲ ಪ್ರಯತ್ನದಲ್ಲೇ ಸಿಎ ಫೌಂಡೇಶನ್ ಪರೀಕ್ಷೆಯಲ್ಲಿ ಉತ್ತೀರ್ಣರಾಗಿದ್ದಾರೆ. ಅಧ್ಯಕ್ಷ ವಿಶ್ವನಾಥ್ ಶೇಷಾಚಲ, ಕಾರ್ಯದರ್ಶಿ ಶ್ರುತಿ ವಿಶ್ವನಾಥ್, ಪ್ರಾಂಶುಪಾಲ ರಚನ್ ಅಪ್ಪಣಮಯ್ಯ ಮತ್ತು ಸಿಎ ಫೌಂಡೇಶನ್ ತಂಡ ಅಭಿನಂದಿಸಿದೆ.

ನ.9ರಿಂದ ಉಚಿತ ವ್ಯಸನಮುಕ್ತ ಶಿಬಿರ

ಮೈಸೂರು, ನ.4– ಬಸವಮಾರ್ಗ ವ್ಯಸನಮುಕ್ತ ಮತ್ತು ಪುನರ್ವಸತಿ ಕೇಂದ್ರದ ವತಿಯಿಂದ ನ.9ರಿಂದ ನ.17ರವರೆಗೆ ಮೈಸೂರಿನ ಹೆಬ್ಬಾಳ ರಿಂಗ್ ರಸ್ತೆಯಲ್ಲಿ ಇರುವ ವ್ಯಸನಮುಕ್ತ ಮತ್ತು ಪುನರ್ವಸತಿ ಕೇಂದ್ರದಲ್ಲಿ ಮಹಿಳೆ ಹಾಗೂ ಪುರುಷರಿಗೆ 55ನೇ ಉಚಿತ ಶಿಬಿರ ಆಯೋಜಿಸಲಾಗಿದೆ. ನ.9ರಂದು ದಾಖಲಾತಿ ಪ್ರಕ್ರಿಯೆ ನಡೆಯಲಿದೆ. 10 ದಿನ ನಡೆಯುವ ಈ ಶಿಬಿರದಲ್ಲಿ ವ್ಯಸನ ಮುಕ್ತರಾಗಲು ಚಿಕಿತ್ಸೆ ನೀಡಲಾಗುತ್ತದೆ. ಶಿಬಿರದಲ್ಲಿ 24x7 ಸೇವೆ, ಪೌಷ್ಟಿಕ ಹಾಗೂ ಆರೋಗ್ಯಕರ ಆಹಾರ, ಯೋಗ, ಸತ್ಸಂಗ ಕಾರ್ಯಕ್ರಮ, ಜಿಮ್, ತರಗತಿಗಳು, ಆಟೋಟ, ಮನೋರಂಜನೆ ಕಾರ್ಯಕ್ರಮ ಸೇರಿದಂತೆ ಇತರೆ ವ್ಯವಸ್ಥೆಯನ್ನು ಕಲ್ಪಿಸಲಾಗುತ್ತದೆ. ಆಸಕ್ತರು ಮೊ. 88033 44999, 9742559999 ಸಂಪರ್ಕಿಸಬಹುದು.

ಕಾರ್ತಿಕ ಪೂಜೆ...



ಕಾರ್ತಿಕ ಸೋಮವಾರದಂದು ಬಲಿಜ ಶ್ರೀ ಬಾಲರಾಮಚಂದ್ರ ಮಂದಿರದ ಬಲಿಜ ಮಹಿಳಾ ಸಮಾಜ ಹಾಗೂ ಬಳಗದವರಿಂದ ಕಾರ್ತಿಕ ಪೂಜೆ ಆಚರಿಸಲಾಯಿತು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

5.11.2025 ಬುಧವಾರ, ಮಳೆ ನಕ್ಷತ್ರ: ಸ್ವಾತಿ 24.10.2025ರಿಂದ 05.11.2025
ವಿಶ್ವಾವಸು ನಾಮ ಸಂವತ್ಸರ, ದಕ್ಷಿಣಾಯನ, ಶರದ್ ಋತು, ಕಾರ್ತಿಕ ಮಾಸ, ಶುಕ್ಲ ಪಕ್ಷ,
ತಿಥಿ: ಹುಣ್ಣಿಮೆ, ನಕ್ಷತ್ರ: ಅಶ್ವಿನಿ, ರಾಹುಕಾಲ: ಮಧ್ಯಾಹ್ನ 12ರಿಂದ 1.30ರವರೆಗೆ

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ಭಾವ ಸೇತು ಭಾಷೆ ಬದಲಾದರು ಭಾವ ಬದಲಾಗದಿರಲಿ ಬಾನುಲಿ ಸರಣಿ, ಪ್ರಸ್ತುತಿ–ಸಿ.ಎಸ್. ಪೂರ್ಣಿಮಾ, 6.40 ಅರಿವಿನ ಶಿಖರ–ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ–ಜಿ. ಪುಷ್ಪಲತಾ ಹಾಗೂ ಎಸ್. ಸಂಗೀತಾ, ವ್ಯಾಖ್ಯಾನ– ಡಾ. ಪ್ರದೀಪ್ ಕುಮಾರ್ ಹೆಬ್ರಿ, 6.50 ರೈತರಿಗೆ ಸಲಹೆ, 7.15 ಭಾವಗೀತೆಗಳು, 8.30 ಚಿತ್ರಗೀತೆಗಳು, 9.05 ರೇಷ್ಮೆ ಸಿರಿ, 9.20 ನಂದನ, ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು, ಪ್ರೇರಣಾ ಆಸ್ಪತ್ರೆ ಮತ್ತು ಪ್ರೇರಣಾ ಫರ್ಟಿಲಿಟಿ, ಮೈಸೂರು, ವಿಷಯ – ಗರ್ಭಧಾರಣೆ ಮತ್ತು ಸಂತಾನಹೀನತೆಯ ಬಗ್ಗೆ ಇರುವ ತಪ್ಪು ಕಲ್ಪನೆಗಳು ಹಾಗೂ ಪರಿಹಾರ. ತಜ್ಞರು–ಡಾ. ಮಾಧುರಿ ಎನ್., ಗೈನಕಾಲಜಿಸ್ಟ್ ಮತ್ತು ಫರ್ಟಿಲಿಟಿ ಸ್ಪೆಷಲಿಸ್ಟ್, ನಡೆಸಿಕೊಡುತ್ತಾರೆ–ತೇಜಸ್ವಿನಿ ಗಿರೀಶ್, 10.00 ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ಹಾಗೂ ಪತ್ರೋತ್ತರ

ಮಧ್ಯಾಹ್ನ: 12.05 ವನಿತಾ ವಿಹಾರ, 12.35 ದೇವರನಾಮ, 12.45 ಜನಪದ ಸಂಗೀತ, 1.00 ಪ್ರಗತಿ ಪಥ – ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಕುರಿತು ಸರಣಿ, 1.20 ಭಾವಗೀತೆಗಳು, 2.40 ಚಿತ್ರಗೀತೆಗಳು, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ, ಕಲಾವತಿ ಅವಧೂತ್–ಹಾಡುಗಾರಿಕೆ, 4.00 ಮಹಿಳಾರಂಗ –ಪ್ರಾಥಮಿಕ ಶಿಕ್ಷಣದಲ್ಲಿ ಮಾತೃಭಾಷೆಯ ಅಗತ್ಯತೆ ಈ ಕುರಿತು ಮಾತನಾಡುತ್ತಾರೆ ಗಾಯತ್ರಿ ಚಂದ್ರಶೇಖರ್, 4.30 ಹಿಂದಿ ಚಿತ್ರಗೀತೆಗಳು, 6.50 ಕೃಷಿರಂಗ–ಒಣಭೂಮಿ ಬೇಸಾಯದ ಪ್ರಾಮುಖ್ಯತೆ ಕುರಿತು ಸಂವಾದ, ಭಾಗವಹಿಸುತ್ತಾರೆ–ನಂಜನಗೂಡು ತಾಲೂಕು ಕುಂಬ್ರಹಳ್ಳಿಯ ಪುಟ್ಟಮಾದನಾಯಕ ಮತ್ತು ಸಿಂಧುವಳ್ಳಿಯ ಕಾಳನಾಯಕ, ಪ್ರಸ್ತುತಿ–ಎನ್. ಕೇಶವ ಮೂರ್ತಿ, 7.45 ಚಿತ್ರಗೀತೆಗಳು, 8.00 ವಿಶೇಷ ಕಾರ್ಯಕ್ರಮ ಸರಣಿ ಆಕಾಶವಾಣಿ 90–ನೆನಪುಗಳ ಹೊತ್ತು, ಮೈಸೂರು ಆಕಾಶವಾಣಿ ತೊಂಬತ್ತು–ನೆನಪುಗಳ ಹೊತ್ತು– ವಿಶೇಷ ಕಾರ್ಯಕ್ರಮ ಸರಣಿ–ಕೃಷಿ ಇಲಾಖೆಯ ನಿವೃತ್ತ ಅಪರ ಕೃಷಿ ನಿರ್ದೇಶಕರಾದ ಮೈಸೂರಿನ ಡಾ. ವಿಷಕಂಠ ಅವರೊಂದಿಗೆ ಸಂವಾದ, ಭಾಗವಹಿಸುತ್ತಾರೆ–ಎನ್. ಕೇಶವಮೂರ್ತಿ, 8.30 ಹಿಂದಿ ಚಿತ್ರಗೀತೆಗಳು, 9.30 ಕ್ರೀಡಾಲೋಕ, 10,00 ಜನಪದ ಸಂಗೀತ, 10.30 ಸವಿನೆನಪು

■ **ಶಾಲಾ ಶಿಕ್ಷಣ ಇಲಾಖೆ (ಪದವಿಪೂರ್ವ), ಆರ್.ವಿ. ಪದವಿಪೂರ್ವ ಕಾಲೇಜು :** ರಾಜ್ಯ ಮಟ್ಟದ ಬಾಲಕಿಯರ ಅಥ್ಲೆಟಿಕ್ ಕ್ರೀಡಾಕೂಟ, ಉದ್ಘಾಟನೆ : ಶಾಲಾ ಶಿಕ್ಷಣ ಇಲಾಖೆ ನಿರ್ದೇಶಕ ಎಸ್. ಭರತ್, ಗೌರವ ಉಪಸ್ಥಿತರು : ಶಾಲಾ ಶಿಕ್ಷಣ ಇಲಾಖೆ ಜಂಟಿ ನಿರ್ದೇಶಕ ಎನ್.ರಾಜು, ಅಧ್ಯಕ್ಷತೆ : ಶಾಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕರಾದ ಶ್ರೀಮತಿ ಎಂ.ಪಿ. ನಾಗಮ್ಮ, ಉಪಸ್ಥಿತರು : ಆರ್‌ವಿ ವಿಶ್ವವಿದ್ಯಾನಿಲಯ ಕುಲಸಚಿವ ಪ್ರೊ. ಸಹನಾ ಡಿ. ಗೌಡ, ಅಂತರರಾಷ್ಟ್ರೀಯ ಕ್ರೀಡಾಪಟು ಎಂ.ವಿ. ನಾಗೇಂದ್ರ ಪ್ರಸಾದ್, ಡಾ.ಸಿ.ಜಿ. ರಮೇಶ್, ಎಂ.ವಿ. ಹನುಮಂತರಾವ್, ಎ.ಸಿ.ಮಂಜೇಗೌಡ, ಎಂ.ಎಂ. ಮಹದೇವ, ಕೆ.ಆರ್. ಮುರಳೀಧರ, ಎಂ. ರಾಜಕುಮಾರ್, ಸ್ಥಳ: ಚಾಮುಂಡಿ ವಿಹಾರ ಕ್ರೀಡಾಂಗಣ, ನಜರ್‌ಬಾದ್, ಬೆಳಗ್ಗೆ 9ಕ್ಕೆ.

■ **ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ, ಕುವೆಂಪು ಸಂಶೋಧನಾ ಮತ್ತು ವಿಸ್ತರಣಾ ಕೇಂದ್ರ :** ಕನ್ನಡ ರಾಜ್ಯೋತ್ಸವ ಮತ್ತು ನಾಡಗೀತೆ ಶತಮಾನ ಸಂಭ್ರಮ, ಉದ್ಘಾಟನೆ : ಚಲನಚಿತ್ರ ನಟಿ ಉಮಾಶ್ರೀ, ಮುಖ್ಯ ಭಾಷಣ : ಜಾನಪದ ವಿದ್ವಾಂಸ ಪ್ರೊ. ಪಿ.ಕೆ. ರಾಜಶೇಖರ್, ಅಧ್ಯಕ್ಷತೆ : ಕರಾಮುವಿವಿ ಕುಲಪತಿ ಪ್ರೊ. ಶರಣಪ್ಪ ವಿ. ಹಲಸೆ, ಉಪಸ್ಥಿತರು : ಕುಲಸಚಿವರಾದ ಪ್ರೊ. ಎಸ್.ಕೆ. ನವೀನ್ ಕುಮಾರ್, ಡಾ. ಸಿ.ಎಸ್. ಆನಂದ್‌ಕುಮಾರ್, ಡೀನ್ ಡಾ.ಎನ್.ಆರ್. ಚಂದ್ರೇಗೌಡ, ಪ್ರೊ. ಎಂ. ರಾಮನಾಥಂ ನಾಯುಡು, ಸ್ಥಳ: ಘಟಿಕೋತ್ಸವ ಭವನ, ಕರಾಮುವಿವಿ, ಬೆಳಗ್ಗೆ 9.45ಕ್ಕೆ.

■ **ಶ್ರೀ ಬಾಲಮುರಳಿ ಮ್ಯೂಸಿಕಲ್ ಗ್ರೂಪ್ :** ಮಧುರ ಗೀತೆಗಳ ಸುಮಧುರ ಸಂಜೆ ಕರೋಕೆ ಗಾಯನ ಕಾರ್ಯಕ್ರಮ, ಹಾಡುವ ಕಲಾವಿದರು : ಕೆ.ಐ. ಪ್ರಕಾಶ್, ಜಿ. ಶ್ರೀಧರ, ಐ.ಪಿ. ಭುವನ್, ನೀತು ಉಮೇಶ್, ಪಲ್ಲವಿ ಪೈ, ಐ.ಪಿ. ಯಶಸ್, ಸ್ಥಳ: ನಾದಬ್ರಹ್ಮ ಸಂಗೀತ ಸಭಾ, ನಂಜು ಮಳಿಗೆ ಸರ್ಕಲ್, ಸಂಜೆ 4.30ಕ್ಕೆ.

■ **ರಾಮ್‌ಸನ್ಸ್ ಬೊಂಬೆ ಮನೆ:** ದಸರೆಯ ಬೊಂಬೆ ಪ್ರದರ್ಶನದ 21ನೇ ಅವತರಣಿಕೆ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, ನಜರ್‌ಬಾದ್ ಮುಖ್ಯ ರಸ್ತೆ, ಬೆಳಗ್ಗೆ 10ರಿಂದ.

■ **ಕಾವೇರಿ ಆಯುರ್ವೇದ ಆಸ್ಪತ್ರೆ:** ಗರ್ಭ ಸಂಸ್ಕಾರ, ಒಣ ಕಣ್ಣಿನ ಆರೋಗ್ಯ ಶಿಬಿರ ಮತ್ತು ತಪಾಸಣೆ, ಸ್ಥಳ: ಕಾವೇರಿ ಆಯುರ್ವೇದ ಆಸ್ಪತ್ರೆ, ದೇವೇಗೌಡ ಸರ್ಕಲ್ ಹತ್ತಿರ, ಕೆಬಿಎಲ್ ಲೇಔಟ್, ಬೆಳಗ್ಗೆ 10 ಗಂಟೆಗೆ.

■ **ಸುಯೋಗ್ ಆಸ್ಪತ್ರೆ :** ಉಚಿತ ಹೃದ್ರೋಗ ತಪಾಸಣಾ ಶಿಬಿರ, ಸ್ಥಳ: ಸುಯೋಗ್ ಆಸ್ಪತ್ರೆ, ರಾಮಕೃಷ್ಣನಗರ, ಬೆಳಗ್ಗೆ 10 ರಿಂದ.

■ **ಕರ್ನಾಟಕ ಗಾನಕಲಾ ಪರಿಷತ್, ಗಾನಭಾರತೀ :** 54ನೇ ಹಿರಿಯ ಸಂಗೀತ ವಿದ್ವಾಂಸರ ಹಾಗೂ 36ನೇ ಯುವ ಸಂಗೀತ ವಿದ್ವಾಂಸರ ರಾಜ್ಯ ಸಂಗೀತ ಸಮ್ಮೇಳನ, ಹಿರಿಯ ಸಂಗೀತ ವಿದ್ವಾಂಸರ ಸಂಗೀತ ಸಮ್ಮೇಳನದ ಅಧ್ಯಕ್ಷರಾಗಿ ಡಾ.ಸಿ.ಎ. ಶ್ರೀಧರ, ಯುವ ಸಂಗೀತ ವಿದ್ವಾಂಸರ ಸಮ್ಮೇಳನದ ಅಧ್ಯಕ್ಷರಾಗಿ ವಿದ್ವಾನ್ ಮತ್ತೂರು ಆರ್. ಶ್ರೀನಿಧಿ, ಉದ್ಘಾಟನೆ : ಸಾಹಿತಿ ಡಾ. ಕಬ್ಬಿನಾಲೆ ವಸಂತ ಭಾರದ್ವಾಜ್, ಬೆಳಗ್ಗೆ 10 ರಿಂದ ರಾತ್ರಿ 10ರವರೆಗೆ ವಿವಿಧ ಸಂಗೀತ ಕಾರ್ಯಕ್ರಮಗಳು, ವಿದ್ವತ್ ಗೋಷ್ಠಿಗಳು, ಸ್ಥಳ: ಗಾನಭಾರತೀ ರಮಾಗೋವಿಂದ ಕಲಾ ವೇದಿಕೆ, ಆದಿಚುಂಚನಗಿರಿ ರಸ್ತೆ, ಕುವೆಂಪುನಗರ.

■ **ಕೃಷ್ಣರಾಜ ವಿಧಾನಸಭಾ ಕ್ಷೇತ್ರ ಯುವ ಕಾಂಗ್ರೆಸ್ ಸಮಿತಿ :** ಮತದಾನ ಪಾರದರ್ಶಕತೆ ಜಾಗೃತಿ ಅಭಿಯಾನ, ಸ್ಥಳ: ಅಗ್ರಹಾರ ವೃತ್ತ, ಬೆಳಗ್ಗೆ 10ಕ್ಕೆ

■ **ಆಯುರ್ವೇದ ಪಂಚಕರ್ಮ ಆಸ್ಪತ್ರೆ ದೀಕ್ಷಿತ್ ಆರೋಗ್ಯ ಧಾಮ :** ಆನಂದ ಆರೋಗ್ಯ ಕಾರ್ತಿಕ ಹುಣ್ಣಿಮೆಯ ವಿಶೇಷ ಮಕ್ಕಳ ಮಾಸದ ಕಾರ್ಯಕ್ರಮ, ಕುಮಾರಿ ಸುದಿತಿ ಅಯ್ಯಂಗಾರ್ ಅವರಿಂದ ಭಕ್ತಿ ಸಂಗೀತ, ಚಿರಂಜೀವಿ ರೂಪನಗುಡಿ ರತ್ನತೇಜ–ಪಿಟೀಲು, ಚಿರಂಜೀವಿ ಸುಹಾಸ್ ರಾಘವನ್ ಅಯ್ಯಂಗಾರ್–ಮೃದಂಗ, ದೀಕ್ಷಿತ್ ಆರೋಗ್ಯ ಧಾಮ ನಿರ್ದೇಶಕ ಡಾ.ಸಿ.ಎಸ್.ಅನಿಲ್‌ಕುಮಾರ್ ಅವರಿಂದ 'ಮಕ್ಕಳ ಪಾಲನೆ, ಆರೋಗ್ಯ ರಕ್ಷಣೆ' ಕುರಿತು ಉಪನ್ಯಾಸ, ಸ್ಥಳ: ದೀಕ್ಷಿತ್ ಆರೋಗ್ಯ ಧಾಮ, ವಿಜಯನಗರ 3ನೇ ಹಂತ, ಸಂಜೆ 5ಕ್ಕೆ.

■ **ಸಾಧನಾ ಮಂದಿರ :** ಪೂಜ್ಯ ಸ್ವಾಮಿ ಹಂಸಾನಂದ ಅವರಿಂದ ಸರಸ್ವತಿ ಪೂಜಾ, ಸಂಜೆ 6 ರಿಂದ ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಸಾಹಿತ್ಯ ಭವನ, ವಿಜಯನಗರ 1ನೇ ಹಂತ; ಸಂಜೆ 7.15 ರಿಂದ ಶ್ರೀ ಸಪ್ತಮಾತೃಕಾ ದೇವಸ್ಥಾನಂ, ವಿಜಯನಗರ 3ನೇ ಹಂತ.

■ **ಮೈಸೂರಿನ ಶ್ರೀ ಸುತ್ತೂರು ಮಠ :** ಬೆಳದಿಂಗಳ ಸಂಗೀತ–285ರ ಅಂಗವಾಗಿ ವಿದುಷಿ ಲಕ್ಷ್ಮಿ ನಾಗರಾಜ್ ಮತ್ತು ವಿದುಷಿ ಇಂದು ನಾಗರಾಜ್ ಅವರಿಂದ ಜುಗಲ್‌ಬಂದಿ ಗಾಯನ, ಸಾನ್ನಿಧ್ಯ : ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ವಿದುಷಿ ಅದಿತಿ ಕೃಷ್ಣಪ್ರಕಾಶ್–ವಯೋಲಿನ್, ವಿದ್ವಾನ್ ಹೆಚ್. ಹರಿಹರನ್–ಮೃದಂಗ, ವಿದ್ವಾನ್ ಶಮಿತ್ ಎಸ್.ಗೌಡ–ಘಟಂ, ಸ್ಥಳ: ಸುತ್ತೂರು ಶ್ರೀಮಠ, ಚಾಮುಂಡಿಬೆಟ್ಟದ ತಪ್ಪಲು, ಸಂಜೆ 6ಕ್ಕೆ

■ **ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಎಜುಕೇಷನಲ್ ಥಿಯೇಟರ್ :** ಭಾರತೀಯ ರಂಗಭೂಮಿಯನ್ನು ರೂಪಿಸುವಲ್ಲಿ ಕನ್ನಡದ ಕೊಡುಗೆ, ಕಮಲಾದೇವಿ ಚಟ್ಟೋಪಾಧ್ಯಾಯ, ಆದ್ಯ ರಂಗಚಾರ್ಯ, ಬಿ.ವಿ. ಕಾರಂತ್, ಎಂ.ಎಸ್. ಸತ್ಯು, ಗಿರೀಶ್ ಕಾರ್ನಾಡ್, ಒಂದು ಭಾಷಣ : ವಿಮರ್ಶಕ ರವೀಂದ್ರ ತ್ರಿಪಾಠಿ, ನಿರ್ವಹಣೆ : ಹಿರಿಯ ರಂಗ ನಿರ್ದೇಶಕ ಪ್ರಸನ್ನ, ಸ್ಥಳ: ಭಾರತೀಯ ಶೈಕ್ಷಣಿಕ ರಂಗಭೂಮಿ ಸಂಸ್ಥೆ, ಹಾರ್ಡ್ವಿಕ್ ಶಾಲಾ ಆವರಣ, ಜೆಎಲ್‌ಬಿ ರಸ್ತೆ, ಸಂಜೆ 6ಕ್ಕೆ.

■ **ಶ್ರೀ ರಾಮಕೃಷ್ಣ ಪರಮಹಂಸ ಸೇವಾ ಪ್ರತಿಷ್ಠಾನ :** ಪ್ರತಿ ಹುಣ್ಣಿಮೆಯಂದು ಜರುಗಲಿರುವ ಉಪನ್ಯಾಸ ಕಾರ್ಯಕ್ರಮ, ತಿಂಗಳ ತಿಳಿವು, ದಿವ್ಯ ಆಶೀರ್ವಾದ : ರಾಮಕೃಷ್ಣ ಆಶ್ರಮದ ಅಧ್ಯಕ್ಷ ಸ್ವಾಮಿ ಮುಕ್ತಿದಾನಂದಜೀ ಮಹಾರಾಜ್, ತಿಂಗಳ ಅತಿಥಿ : ಡಾ. ಆದಿತ್ಯ, ವಿಷಯ : ಕೃತಕ ಬುದ್ಧಿ ಮತ್ತತೆ : ಸಾಧಕ ಬಾಧಕಗಳು, ಉಪಸ್ಥಿತರು : ಡಿ. ಮಾದೇಗೌಡ, ಡಾ. ಎಸ್.ಪಿ. ಯೋಗಣ್ಣ, ಬಸವಣ್ಣ, ಕೆ. ಕೆಂಪಲಿಂಗರಾಜು, ಪ್ರೊ. ಜಿ. ಚಂದ್ರಶೇಖರ್, ಎಸ್. ಪುರುಷೋತ್ತಮ್, ಶ್ರೀಮತಿ ಉಷಾ ಸೋಮಶೇಖರ್ ಅವರಿಂದ ಸಂಗೀತ ಕಾರ್ಯಕ್ರಮ, ಸ್ಥಳ: ಪರಮಹಂಸ ಧ್ಯಾನ ಕೇಂದ್ರ, ರಾಮಕೃಷ್ಣ ವೃತ್ತದ ನೆಲಮಹಡಿ, ಸಂಜೆ 6ಕ್ಕೆ.

■ **ಶ್ರೀ ವೀರಭದ್ರೇಶ್ವರಸ್ವಾಮಿ ಹಾಗೂ ಶ್ರೀ ಚಾಮರಾಜೇಶ್ವರಸ್ವಾಮಿ ದೇವಸ್ಥಾನ ಟ್ರಸ್ಟ್ :** ಕಾರ್ತಿಕ ಮಾಸದ ವಿಶೇಷ ಪೂಜಾ ಮಹೋತ್ಸವ, ಅಗ್ನಿ ಕೊಂಡೋತ್ಸವ ಮತ್ತು ಗಿರಿಜಾ ಕಲ್ಯಾಣ, ಹುಣ್ಣಿಮೆ ಶಿವದೀಪೋತ್ಸವ, ಸ್ಥಳ: ಶ್ರೀ ವೀರಭದ್ರೇಶ್ವರಸ್ವಾಮಿ ಹಗೂ ಶ್ರೀ ಚಾಮರಾಜೇಶ್ವರಸ್ವಾಮಿ ದೇವಸ್ಥಾನ, ಡಿ. ಬನುಮಯ್ಯ ರಸ್ತೆ, ಕೆ.ಆರ್. ಮೊಹಲ್ಲಾ, ಸಂಜೆ 7ಕ್ಕೆ

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ನವೆಂಬರ್ 5 ಬುಧವಾರ 2025

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 46 | ಸಂಚಿಕೆ: 197 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ಕೆ–ಸೆಟ್: ಕೀ ಉತ್ತರ ಪ್ರಕಟ

ಬೆಂಗಳೂರು: ಸಹಾಯಕ ಪ್ರಾಧ್ಯಾಪಕರ ಅರ್ಹತಾ ಪರೀಕ್ಷೆಯ (ಕೆ–ಸೆಟ್) ಕೀ ಉತ್ತರಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಪ್ರಕಟಿಸಿದೆ.

33 ವಿಷಯಗಳಿಗೆ ನಡೆದಿದ್ದ ಕೆ–ಸೆಟ್ ಪರೀಕ್ಷೆಗೆ 1.36 ಲಕ್ಷ ಅಭ್ಯರ್ಥಿಗಳು ನೋಂದಣಿ ಮಾಡಿಕೊಂಡಿದ್ದರು. ಬೆಂಗಳೂರು, ಬಳ್ಳಾರಿ, ಬೆಳಗಾವಿ, ದಾವಣಗೆರೆ, ಧಾರವಾಡ, ಕಲಬುರಗಿ, ಮಂಗಳೂರು, ಮೈಸೂರು, ಶಿವಮೊಗ್ಗ, ತುಮಕೂರು, ವಿಜಯಪುರ ಜಿಲ್ಲೆಗಳ 316 ಕೇಂದ್ರಗಳಲ್ಲಿ ನ.2ರಂದು ಪರೀಕ್ಷೆ ಆಯೋಜಿಸಲಾಗಿತ್ತು. ಈ ಪರೀಕ್ಷೆಗಳಿಗೆ ನೆಗೆಟಿವ್ ಮೌಲ್ಯಮಾಪನ ಇಲ್ಲ. ಅಭ್ಯರ್ಥಿಗಳು 3 ಗಂಟೆಯಲ್ಲಿ 100 ಅಂಕಗಳ ಸಾಮಾನ್ಯ ಜ್ಞಾನ, 200 ಅಂಕಗಳ ವಿಷಯವಾರು ಪತ್ರಿಕೆಗೆ ಉತ್ತರಿಸಿದ್ದರು. ಕೀ ಉತ್ತರಗಳಿಗೆ ಆಕ್ಷೇಪಣೆಗಳು ಇದ್ದರೆ ನ. 6ರ ಮಧ್ಯಾಹ್ನ 3 ಗಂಟೆ ಒಳಗೆ ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ಕೊಟ್ಟಿರುವ ಲಿಂಕ್ ಮೂಲಕ ಅಪ್‌ಲೋಡ್ ಮಾಡಬಹುದು. ಪ್ರತಿಯೊಂದು ಆಕ್ಷೇಪಣೆಗೂ ರೂ. 50 ಪಾವತಿಸಬೇಕು. ಹೆಚ್ಚಿನ ವಿವರಗಳಿಗೆ ವೆಬ್‌ಸೈಟ್ ಗಮನಿಸಬೇಕು ಎಂದು ಪ್ರಾಧಿಕಾರ ಹೇಳಿದೆ.

ಇ–ಸ್ವತ್ತು ಸಮರ್ಪಕ ಅನುಷ್ಠಾನ

ಗ್ರಾಪಂ ಮಟ್ಟದಲ್ಲಿ ಅಧಿಕಾರಿಗಳನ್ನು ಸಜ್ಜುಗೊಳಿಸಿ: ಜಿಪಂ ಸಿಇಓಗಳಿಗೆ ಪ್ರಿಯಾಂಕ್ ಖರ್ಗೆ ತಾಕೀತು

ಬೆಂಗಳೂರು, ನ.4– ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿನ ಸುಮಾರು ಒಂದು ಕೋಟಿ ಆಸ್ತಿಗಳನ್ನು ಇ–ಸ್ವತ್ತು ತೆಕ್ಕೆಗೆ ತರುವ ಮೂಲಕ ಮನೆ ಹಾಗೂ ನಿವೇಶನಗಳನ್ನು ಸಕ್ರಮಗೊಳಿಸುವ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯನ್ನು ಸಮರ್ಪಕವಾಗಿ ಜಾರಿಗೊಳಿಸಲು ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಸೂಚಿಸಿದರು.

ಬೆಂಗಳೂರಿನ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಇ–ಸ್ವತ್ತು ಸಮರ್ಪಕ ಅನುಷ್ಠಾನ ಹಾಗೂ ಇನ್ನಿತರ ಕಾರ್ಯಕ್ರಮಗಳ ಪ್ರಗತಿ ಪರಿಶೀಲನೆ ನಡೆಸಿದ ಸಚಿವರು ಈ ಸಂಬಂಧ ಹೊಸದಾಗಿ ಬಿಡುಗಡೆ ಮಾಡಿರುವ ನಿಯಮಾವಳಿಗಳನ್ನು ಗ್ರಾಪಂ ಮಟ್ಟದಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಮನನ ಮಾಡಿಸಲು ಜಿಲ್ಲಾ ಮಟ್ಟದಲ್ಲಿ



ಇ–ಸ್ವತ್ತು ಅನುಷ್ಠಾನ ಸಂಬಂಧ ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ ಖರ್ಗೆ ಮಂಗಳವಾರ ಸಭೆ ನಡೆಸಿದರು.

ವಿಶೇಷ ತರಬೇತಿ ವ್ಯವಸ್ಥೆ ಮಾಡಲು ತಿಳಿಸಿದರು.

ರಾಜ್ಯದ ಲಕ್ಷಾಂತರ ಮಂದಿ ಈ ಯೋಜನೆಯ ಲಾಭ ಹೊಂದಲು ತವಕದಿಂದ ಕಾಯುತ್ತಿದ್ದಾರೆ. ಸಾರ್ವಜನಿಕರಿಗೆ ಸುಲಲಿತ ಹಾಗೂ ಪಾರದರ್ಶಕವಾಗಿ ಇ–ಸ್ವತ್ತು ಪ್ರಯೋಜನ ದೊರೆಯುವಂತೆ ಸಿಬ್ಬಂದಿಯನ್ನು ಸಜ್ಜು ಮಾಡಬೇಕು. ಜಿಲ್ಲಾ ಉಸ್ತುವಾರಿ ಸಚಿವರು, ಸ್ಥಳೀಯ ಜನಪ್ರತಿನಿಧಿಗಳನ್ನು ವಿಶ್ವಾಸಕ್ಕೆ ತೆಗೆದುಕೊಂಡು, ಅವರ ನೆರವನ್ನು ಪಡೆದು ಸ್ವತ್ತು ಆಂದೋಲನವನ್ನು ಯಶಸ್ವಿಗೊಳಿಸಬೇಕೆಂದು ಸೂಚನೆ ನೀಡಿದರು.

ಗ್ರಾಪಂಗಳಲ್ಲಿ ಸಂಪನ್ಮೂಲ ವೃದ್ಧಿಸಿ: ಗ್ರಾಮ ಪಂಚಾಯತಿಗಳ ಸಂಪನ್ಮೂಲವನ್ನು ವೃದ್ಧಿಸುವ ಮೂಲಕ ಸ್ಥಳೀಯ ಸರ್ಕಾರಗಳ ಆರ್ಥಿಕ ಸ್ಥಿತಿಯನ್ನು ಬಲಪಡಿಸಲು ನೂತನವಾಗಿ ಅನುಷ್ಠಾನಕ್ಕೆ ತಂದಿರುವ ಸ್ಥಳೀಯ ಆರ್ಥಿಕ ವೇಗವರ್ಧಕ ಕಾರ್ಯಕ್ರಮದ (ಲೀಪ್) ಅಡಿ ಗ್ರಾಮ ಪಂಚಾಯತಿ ಮಟ್ಟದಲ್ಲಿ ಲಭ್ಯವಿರುವ ಆಸ್ತಿಗಳನ್ನು ಪತ್ತೆ ಮಾಡಬೇಕು. ಅಂತಹ ಸ್ಥಳದಲ್ಲಿ ಪಂಚಾಯಿತಿಗಳಿಗೆ ಶಾಶ್ವತ ಆದಾಯ ತಂದುಕೊಡುವ ಕಟ್ಟಡಗಳನ್ನು ನಿರ್ಮಾಣ ಮಾಡಲು ಕ್ರಮ ಕೈಗೊಳ್ಳಬೇಕು. ಪ್ರವಾಸಿ ತಾಣಗಳು ಹಾಗೂ ಯಾತ್ರಾಸ್ಥಳಗಳ ಸಮೀಪ ಲಭ್ಯವಿರುವ ಗ್ರಾಮ ಪಂಚಾಯತಿ ಆಸ್ತಿಗಳಲ್ಲಿ ಸಂಪನ್ಮೂಲ ಹೆಚ್ಚಿಸುವ ಯೋಜನೆಗಳನ್ನು ರೂಪಿಸಿದ್ದಲ್ಲಿ ಸರ್ಕಾರ ಅನುದಾನ ನೀಡಲಿದೆ ಎಂದು ಪ್ರಕಟಿಸಿದರು.

ಆಸ್ತಿ ತೆರಿಗೆ ಸಂಗ್ರಹ: ಕೆಲವು ಜಿಲ್ಲೆಗಳಲ್ಲಿ ಆಸ್ತಿತೆರಿಗೆಯನ್ನು ಸಂಗ್ರಹಿಸುವಲ್ಲಿ ಪ್ರಗತಿ ಕುಂಠಿತವಾಗಿರುವ ಬಗ್ಗೆ ಆಕ್ಷೇಪ ವ್ಯಕ್ತಪಡಿಸಿದ ಅವರು, ತೆರಿಗೆ ವಸೂಲಾತಿಗೆ ಆದ್ಯತೆ ನೀಡಲು ಗ್ರಾಮ ಪಂಚಾಯತಿ ಸಿಬ್ಬಂದಿಗೆ ಸೂಚನೆ ನೀಡಲು ಹಾಗೂ ಸಭೆ, ವಿಮರ್ಶೆ, ಸ್ಥಳ ಪರೀಕ್ಷೆ ಮೂಲಕ ಆದ್ಯ ಗಮನ ಹರಿಸಲು ತಾಲೂಕು ಪಂಚಾಯತಿ ಅಧಿಕಾರಿಗಳಿಗೆ ನಿರ್ದೇಶನ ನೀಡಬೇಕು.

■ 6ನೇ ಪುಟಕ್ಕೆ

ಶವ ನೀಡಲು ಲಂಚ: ಇನ್‌ಸ್ಪೆಕ್ಟರ್ ಅಮಾನತು

ಬೆಂಗಳೂರು: ಶವ ಕೊಡಲು ಲಂಚ ಕೇಳಿದ್ದ ಬೆಳ್ಳಂದೂರು ಪೊಲೀಸ್ ಠಾಣೆಯ ಇನ್‌ಸ್ಪೆಕ್ಟರ್ ರಮೇಶ್ ರೊಟ್ಟಿ ಅಮಾನತುಗೊಳಿಸಲಾಗಿದೆ.

ಪ್ರಕರಣದ ಹಿನ್ನಲೆ: ಬೆಂಗಳೂರಿನಲ್ಲಿ ಭಾರತ್ ಪೆಟ್ರೋಲಿಯಂ ನಿಗಮದ ನಿವೃತ್ತ ಸಿಎಫ್‌ಒ ಶಿವಕುಮಾರ್ ಅವರ ಮಗಳ ಸಾವಿನ ನಂತರದ ಪ್ರತಿಯೊಂದು ಹಂತದಲ್ಲೂ ಲಂಚಕ್ಕಾಗಿ ಅಧಿಕಾರಿಗಳು ಪೀಡಿಸಿದ್ದರು. ಈ ಬಗ್ಗೆ ಶಿವಕುಮಾರ್ ಅವರು ತಮ್ಮ ಮಗಳ ಮರಣದ ನಂತರ ಅಧಿಕಾರಿಗಳಿಂದ ತಾವು ಎದುರಿಸಿದ ಕಿರುಕುಳ ಮತ್ತು ಲಂಚಕ್ಕೆ ಸಂಬಂಧಿಸಿದ ಅನುಭವವನ್ನು ಲಿಂಕ್ಡ್‌ಇನ್‌ನಲ್ಲಿ ಪೋಸ್ಟ್ ಮಾಡಿದ್ದರು. ಈ ಪೋಸ್ಟ್‌ನಲ್ಲಿ ಬೆಳ್ಳಂದೂರು ಪೊಲೀಸರ ವಿರುದ್ಧ ಗಂಭೀರ ಆರೋಪ ಕೇಳಿ ಬಂದಿತ್ತು.

ಈ ಆರೋಪದ ನಂತರ ಘಟನೆ ಬಗ್ಗೆ ವರದಿ ನೀಡುವಂತೆ ನಗರ ಪೊಲೀಸ್ ಕಮಿಷನರ್ ಸೀಮಂತ್ ಕುಮಾರ್ ಸಿಂಗ್ ಸೂಚನೆ ನೀಡಿದ್ದರು. ಈ ಬಗ್ಗೆ ತನಿಖೆ ನಡೆಸಿದ ವೈಟ್ ಫೀಲ್ಡ್ ಡಿಸಿಪಿ ಪರಶುರಾಮ್ ಕಮಿಷನರ್ ಅವರಿಗೆ ವರದಿ ಸಲ್ಲಿಸಿದ್ದರು.

ಅಧಿಕಾರ ಹಂಚಿಕೆ: ಹೈಕಮಾಂಡ್ ತೀರ್ಮಾನಕ್ಕೆ ನಾವೆಲ್ಲಾ ಬದ್ಧ

ಬೆಂಗಳೂರು, ನ.4(ಕೆಎಂಶಿ)– ಅಧಿಕಾರ ಹಂಚಿಕೆ ಕುರಿತು ಹೈಕಮಾಂಡ್ ಕೈಗೊಳ್ಳುವ ತೀರ್ಮಾನಕ್ಕೆ ಎಲ್ಲರೂ ಬದ್ಧರಾಗಿರುತ್ತೇವೆ ಎಂದು ಗೃಹ ಸಚಿವ ಡಾ.ಜಿ. ಪರಮೇಶ್ವರ್ ತಿಳಿಸಿದ್ದಾರೆ.



ಪಕ್ಷದ ಸದಸ್ಯರು ಹೈಕಮಾಂಡ್ ತೀರ್ಮಾನ ಗೌರವಿಸುತ್ತಾರೆ ಎಂಬುದಾಗಿ ಪದೇ ಪದೆ ಹೇಳಿದರೂ ಮತ್ತೆ ಮತ್ತೆ ಅದನ್ನೇ ಕೆದಕುತ್ತೀರಿ. ಕಾಂಗ್ರೆಸ್‌ನಲ್ಲಿ ಶಿಸ್ತು ಇದೆ. ಏನು ತೀರ್ಮಾನ ಆಗುವುದೋ ಅದನ್ನು ಪಾಲಿಸಿಕೊಂಡು ಹೋಗುತ್ತೇವೆ. ಪಾಲಿಸದವರ ಮೇಲೆ ಶಿಸ್ತು ಕ್ರಮ ತೆಗೆದುಕೊಳ್ಳುವುದು ಮೊದಲಿನಿಂದಲೂ ನಡೆದುಕೊಂಡು ಬಂದಿರುವ ಪದ್ಧತಿ ಎಂದರು.

ಹೈಕಮಾಂಡ್ ಏನು ಹೇಳುತ್ತದೆಯೋ ಅದನ್ನು ನಾನು ಪಾಲಿಸುತ್ತೇನೆ ಎಂಬ ಮುಖ್ಯಮಂತ್ರಿ ಹೇಳಿಕೆ ಸರಿಯಾಗಿದೆ. ಇದನ್ನು ಅವರು ಮೊದಲಿನಿಂದಲೂ ಹೇಳುತ್ತಿದ್ದಾರೆ. ಈಗಲೂ ಅದನ್ನೇ ಪುನರುಚ್ಚರಿಸಿದ್ದಾರೆ ಎಂದು ಸಮರ್ಥಿಸಿಕೊಂಡರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿ ಅವರು ತುಮಕೂರಿಗೆ ಬಂದಾಗ ಎರಡು–ಮೂರು ಬಾರಿ ಮಾಜಿ ಸಚಿವ ಕೆ.ಎನ್. ರಾಜಣ್ಣ ಮನೆಗೆ ಊಟಕ್ಕೆ ಹೋಗಿದ್ದಾರೆ. ಈಗಲೂ ನಾವೆಲ್ಲರೂ ಹೋಗುತ್ತಿರುತ್ತೇವೆ ಎಂದರು. ದೆಹಲಿಗೆ ಯಾರು ಹೋಗುತ್ತಾರೆ ಎಂಬುದು ನನಗೆ ಗೊತ್ತಿಲ್ಲ. ನಾನು ದೆಹಲಿಗೆ ಹೋಗುವ ಬಗ್ಗೆ ಯೋಚನೆ ಮಾಡಿಲ್ಲ. ಅವಶ್ಯಕತೆ ಬಿದ್ದರೆ ಹೋಗುತ್ತೇನೆ.

ಪೊಲೀಸ್ ಇಲಾಖೆ ಹೊರತುಪಡಿಸಿ, ಎಲ್ಲ ವಿಭಾಗಗಳಲ್ಲಿ ವರ್ಗಾವಣೆ ನಿಂತಿದೆ. ಗೃಹ ಇಲಾಖೆಯಲ್ಲಿ ವರ್ಗಾವಣೆಗೆ ಯಾವುದೇ ಟೈಂ ಫ್ರೇಮ್ ಇಲ್ಲ. ಅಗತ್ಯತೆ ಮೇರೆಗೆ ವರ್ಗಾವಣೆ ನಿರಂತರವಾಗಿ ನಡೆಯುತ್ತಿರುತ್ತದೆ. ಹಿರಿಯ ಸಚಿವರನ್ನು ಸಂಪುಟದಿಂದ ಕೈಬಿಡುವುದು ಮುಖ್ಯಮಂತ್ರಿ ಹಾಗೂ ಹೈಕಮಾಂಡ್ ವಿವೇಚನೆಗೆ ಬಿಟ್ಟ ವಿಚಾರ ಎಂದರು. ಬಾಗಲಕೋಟೆಯಲ್ಲಿ ಕಬ್ಬು ಬೆಳೆಗಾರರ ಪ್ರತಿಭಟನೆಗೆ ಸಂಬಂಧಿಸಿದಂತೆ ಸಕ್ಕರೆ ಖಾತೆ ಸಚಿವ ಶಿವಾನಂದ ಪಾಟೀಲ್ ಜೊತೆ ಚರ್ಚಿಸಿದ್ದು ಆದಷ್ಟು ಶೀಘ್ರ ಸಮಸ್ಯೆಗೆ ಪರಿಹಾರ ಕಂಡುಕೊಳ್ಳುವಂತೆ ತಿಳಿಸಿದ್ದು, ಸಕ್ಕರೆ ಕಾರ್ಖಾನೆಗಳ ಪ್ರತಿನಿಧಿಗಳೊಂದಿಗೆ ಸಚಿವರು ಮಾತುಕತೆ ನಡೆಸಿ ಸಮಸ್ಯೆ ಬಗೆಹರಿಸುವುದಾಗಿ ಭರವಸೆ ನೀಡಿದ್ದಾರೆ.

ಆರ್‌ಎಸ್‌ಎಸ್ ಚಟುವಟಿಕೆಗೆ ನಿರ್ಬಂಧ ಅಧಿಸೂಚನೆಗೆ ತಡೆಯಾಜ್ಞೆ ಪ್ರಶ್ನಿಸಿದ ಮೇಲ್ಮನವಿ

ಕಾಯ್ದಿಟ್ಟ ತೀರ್ಪು



ಬೆಂಗಳೂರು, ನ.4(ಕೆಎಂಶಿ)– ರಾಷ್ಟ್ರೀಯ ಸ್ವಯಂಸೇವಕ ಸಂಘದ (ಆರ್‌ಎಸ್‌ಎಸ್) ಚಟುವಟಿಕೆಗೆ ಪರೋಕ್ಷವಾಗಿ ನಿಷೇಧ ಹೇರುವ ಉದ್ದೇಶದಿಂದ ರಾಜ್ಯ ಸರ್ಕಾರ ಹೊರಡಿಸಿದ್ದ ಅಧಿಸೂಚನೆಗೆ ತಡೆಯಾಜ್ಞೆ ಪ್ರಶ್ನಿಸಿ ಸಲ್ಲಿಸಿದ ಮೇಲ್ಮನವಿ ಮೇಲಿನ ತೀರ್ಪನ್ನು ಹೈಕೋರ್ಟ್ ಕಾಯ್ದಿರಿಸಿದೆ.

ಅರ್ಜಿ ವಿಚಾರಣೆ ನಡೆಸಿದ ಹೈಕೋರ್ಟ್‌ನ ಧಾರವಾಡ ವಿಭಾಗೀಯ ಪೀಠ ಇಂದು ವಾದ–ಪ್ರತಿವಾದ ಆಲಿಸಿದ ನಂತರ ತೀರ್ಪನ್ನು ಕಾಯ್ದಿರಿಸಿತು. ಸರ್ಕಾರದ ಪರ ವಾದ ಮಂಡಿಸಿದ ಅಡ್ವೊಕೇಟ್ ಜನರಲ್ ಶಶಿಕಿರಣ್ ಶೆಟ್ಟಿ, ಸಾರ್ವಜನಿಕ ಸಂಪತ್ತಿಗೆ ಹಾನಿ ಆಗಬಾರದೆಂಬ ಉದ್ದೇಶದಿಂದ ನಿರ್ಬಂಧ ವಿಧಿಸಲಾಗಿದೆ. ಖಾಸಗಿ ಸಂಸ್ಥೆ, ಸಂಘಟನೆಗಳು ಸರ್ಕಾರಕ್ಕೆ ಸಂಬಂಧಿಸಿದ ಜಾಗದಲ್ಲಿ ಅನುಮತಿಯಿಲ್ಲದೆ ಯಾವುದೇ ಕಾರ್ಯಕ್ರಮ ನಡೆಸುವಂತಿಲ್ಲ.

ಹೈಕೋರ್ಟ್ ಕಟ್ಟಡ ಖಾಲಿ ಇದೆಯೆಂದು ಕಾರ್ಯಕ್ರಮ ಮಾಡಲಾಗದು. ಅದೇ ರೀತಿ ಸಾರ್ವಜನಿಕ ಸ್ಥಳಗಳ ಬಳಕೆಗೂ ಅನುಮತಿ ಅಗತ್ಯ ಎಂದರು. ಪ್ರತಿವಾದಿ ಪುನಃಶ್ಚೇತನ ಸೇವಾ ಸಂಸ್ಥೆ ಪರ ಹಿರಿಯ ವಕೀಲ ಅಶೋಕ್ ಹಾರನಹಳ್ಳಿ ವಾದ ಮಂಡಿಸಿ, ಪಾರ್ಕ್, ಮೈದಾನ ಎಲ್ಲ ಸರ್ಕಾರದ ಸ್ವತ್ತೆಂದು ಭಾವಿಸಬಾರದು. ಮೈದಾನದಲ್ಲಿ ಕ್ರಿಕೆಟ್ ಆಡಲೂ ಅನುಮತಿಸಬೇಕು ಎಂಬಂತೆ ನಿಯಮ ತರಲಾಗಿದೆ. ಪೊಲೀಸ್ ಕಾಯ್ದೆ ಪ್ರಕಾರ ಕ್ರಮ ಕೈಗೊಳ್ಳುವ ಅಧಿಕಾರ ಜಿಲ್ಲಾ ದಂಡಾಧಿಕಾರಿಗೆ ಮಾತ್ರ ಇರುತ್ತದೆ. ಏಕಸದಸ್ಯ ಪೀಠದ ಮುಂದೆಯೇ ತಡೆಯಾಜ್ಞೆ ತೆರವಿಗೆ ಅರ್ಜಿ ಸಲ್ಲಿಸಬಹುದಿತ್ತು ಎಂದರು.

ಸರ್ಕಾರ ಹಾಗೂ ಪುನಃಶ್ಚೇತನ ಸೇವಾ ಸಂಸ್ಥೆ ಪರ ವಕೀಲರ ವಾದ–ಪ್ರತಿವಾದದ ನಂತರ ಹೈಕೋರ್ಟ್ ವಿಭಾಗೀಯ ಪೀಠ ತೀರ್ಪು ಕಾಯ್ದಿರಿಸಿದ್ದು, ಮುಂದಿನ ವಿಚಾರಣೆ ನವೆಂಬರ್ 7ರಂದು ನಡೆಯಲಿದೆ.

ನಕ್ಕರೆ ಅದೇ ಸ್ವರ್ಗ

ಹೆಂಡತಿ : ಪಕ್ಕದ ಮನೆಯಲ್ಲಿ ಬೆಳಗ್ಗೆಯಿಂದ ಗಂಡ ಹೆಂಡತಿ ಜಗಳ ಆಡ್ತಾ ಇದ್ದಾರೆ. ನೀವು ಒಮ್ಮೆ ಹೋಗಿ ನೋಡಬಾರದ?

ಗಂಡ : ಒಮ್ಮೆ ನಾನು ಹೋಗಿದ್ದಕ್ಕೆ ಈ ಜಗಳ...

ಮೈಸೂರು ಮಿತ್ರ

ಬುಧವಾರ, 5 ನವೆಂಬರ್ 2025

ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತ ವಾಹಿನಿ......

ಕನ್ನಡಕ ಧರಿಸಿ ಕನ್ನಡವನ್ನು ಹುಡುಕುವ ಸ್ಥಿತಿ ಕರುನಾಡಿನಲ್ಲಿ ಬಾರದಿರಲಿ.

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಕಣ್ಣಿಗೆ ಕಂಡದ್ದೆಲ್ಲಾ ನುಣ್ಣಗಿರುವುದಿಲ್ಲ.

ನಿಮ್ಮ ಪತ್ರಗಳು

■ ಆನ್‌ಲೈನ್ ಅಶ್ಲೀಲತೆ ನಿಯಂತ್ರಣಕ್ಕೆ ರಾಷ್ಟ್ರೀಯ ನೀತಿ ಅಗತ್ಯ

ಮಾನ್ಯರೆ,

ಇತ್ತೀಚೆಗೆ ಅಶ್ಲೀಲ ವೆಬ್‌ಸೈಟ್‌ಗಳ ಮೇಲೆ ನಿಷೇಧ ಹೇರಬೇಕೆಂಬ ಮನವಿಯ ವಿಚಾರದಲ್ಲಿ ಸುಪ್ರೀಂ ಕೋರ್ಟ್ ನೀಡಿದ ಅಭಿಪ್ರಾಯವು ಆನ್‌ಲೈನ್ ವಿಷಯ ನಿಯಂತ್ರಣದ ಅಗತ್ಯವನ್ನು ಮತ್ತೊಮ್ಮೆ ಬೆಳಕಿಗೆ ತಂದಿದೆ. ಅಪ್ರಾಪ್ತರು ಅಶ್ಲೀಲ ವಿಷಯಗಳಿಗೆ ಒಳಪಡುವ ಅಪಾಯ ಅತ್ಯಂತ ಗಂಭೀರ ವಿಷಯವಾಗಿದ್ದು, ಅದನ್ನು ನಿರ್ಲಕ್ಷಿಸಲಾಗದು. ಕೇಂದ್ರ ಸರ್ಕಾರವು ಡಿಜಿಟಲ್ ಸುರಕ್ಷತೆ ಮತ್ತು ಜಾಗೃತಿ ನೀತಿ ರೂಪಿಸಬೇಕಾಗಿದೆ. ತಾಂತ್ರಿಕ ನಿಯಂತ್ರಣ, ಡಿಜಿಟಲ್ ಸಾಕ್ಷರತೆ ಮತ್ತು ಪೋಷಕರ ಸಬಲೀಕರಣ ಮುಖ್ಯ ಅಂಶಗಳಾಗಿರಬೇಕು. ಅಪ್ರಾಪ್ತರು ಬಳಸುವ ಸಾಧನಗಳಲ್ಲಿ ಕಡ್ಡಾಯ ವಿಷಯ ಶೋಧಕ ವ್ಯವಸ್ಥೆ ಇರಬೇಕು. ಜೊತೆಗೆ, ವಯಸ್ಸು ದೃಢೀಕರಿಸುವ ಕೃತಕ ಬುದ್ಧಿಮತ್ತೆ ಆಧಾರಿತ ವ್ಯವಸ್ಥೆ ಹಾಗೂ ಇಂಟರ್ನೆಟ್ ಸೇವಾದಾತರ ಸಹಯೋಗದ ಮೂಲಕ ಅಶ್ಲೀಲ ವಿಷಯಗಳ ಪ್ರವೇಶವನ್ನು ತಡೆಹಿಡಿಯಬೇಕು.ಅದರ ಜೊತೆಗೆ, ಶಾಲಾ ಪಠ್ಯಕ್ರಮದಲ್ಲೇ ಡಿಜಿಟಲ್ ಶಿಕ್ಷಣವನ್ನು ಸೇರಿಸಿ, ಮಕ್ಕಳು ಆರೋಗ್ಯಕರ ಮಾಹಿತಿ ಮತ್ತು ಹಾನಿಕಾರಕ ವಿಷಯಗಳ ನಡುವಿನ ವ್ಯತ್ಯಾಸವನ್ನು ಅರಿಯುವಂತೆ ಮಾಡಲು ಅಗತ್ಯವಿದೆ. ದೇಶದಲ್ಲಿ ಕೇವಲ ದಂಡಾತ್ಮಕ ನಿಷೇಧದ ಬದಲು ಮುಂಜಾಗ್ರತಾ ಕ್ರಮದ ಆಡಳಿತ ಬೇಕಾಗಿದೆ.

–ಡಾ. ಎಚ್.ಕೆ. ವಿಜಯಕುಮಾರ್, ಮೈಸೂರು.

■ ಸಾರ್ವಜನಿಕ ಶೌಚಾಲಯ ತೆರೆಸಿ



ಮಾನ್ಯರೆ,

ಮೈಸೂರಿನ ಗಾಯತ್ರಿಪುರಂ ಮಾನಸ ಶಾಲೆಯ ಮುಂಭಾಗದ ಪಾರ್ಕಿಗೆ ಹೊಂದಿಕೊಂಡಂತೆ ಸಾರ್ವಜನಿಕ ಶೌಚಾಲಯವಿದೆ. ಅದನ್ನು ಮುಚ್ಚಿ ಬೀಗ ಹಾಕಲಾಗಿದೆ. ಕಾರಣ ತಿಳಿಯದು. ಈ ಶೌಚಾಲಯ ಮುಚ್ಚಿರುವುದರಿಂದ ಬೆಳಗಿನ ಸಮಯದಲ್ಲಿ ವಾಕಿಂಗ್ ಮಾಡುವ ಸಾರ್ವಜನಿಕರಿಗೆ ಅದರಲ್ಲೂ ಹಿರಿಯ ನಾಗರಿಕರಿಗೆ ತುಂಬಾ ತೊಂದರೆಯಾಗಿದೆ. ಈ ಕೂಡಲೇ ಸಂಬಂಧಪಟ್ಟ ಅಧಿಕಾರಿಗಳು ಇತ್ತ ಗಮನಹರಿಸಿ ಮುಚ್ಚಿರುವ ಶೌಚಾಲಯ ತೆರೆಸುವಂತೆ ಕ್ರಮ ಕೈಗೊಳ್ಳಬೇಕೆಂದು ಈ ಮೂಲಕ ಮನವಿ.

–ಪಿ.ಸಿ.ಕಂಗಾಣಿಸೋಮು, ಕ್ಯಾತಮಾರನಹಳ್ಳಿ, ಮೈಸೂರು

■ ಇತಿಹಾಸ ಸೃಷ್ಟಿಸಿದ ಮಹಿಳಾ ಕ್ರಿಕೆಟಿಗರು



ಮಾನ್ಯರೆ,

1973ರಲ್ಲಿ ಆರಂಭವಾದ ಮಹಿಳಾ ವಿಶ್ವಕಪ್ ಕ್ರಿಕೆಟ್ ಅನ್ನು 52 ವರ್ಷಗಳ ಬಳಿಕ ಐಸಿಸಿ ಮಹಿಳಾ ಏಕದಿನ ವಿಶ್ವಕಪ್ ಪಂದ್ಯಾವಳಿಯಲ್ಲಿ ಭಾರತ, ದಕ್ಷಿಣ ಆಫ್ರಿಕಾ ತಂಡದ ವಿರುದ್ಧ 52 ರನ್‌ಗಳ ಅಂತರದಿಂದ ಗೆಲುವು ಸಾಧಿಸಿ ಚೊಚ್ಚಲ ಪ್ರಶಸ್ತಿ ಮುಡಿಗೇರಿಸಿಕೊಂಡಿರುವುದು ತುಂಬಾ ಶ್ಲಾಘನೀಯ. ಇದುವರೆಗೆ ಭಾರತ ಮಹಿಳಾ ತಂಡ 2 ಬಾರಿ ಫೈನಲ್ ಪ್ರವೇಶಿಸಿ ರನ್ನರ್ಸ್ ಆಗಿತ್ತು. ಆದರೆ ಈ ಬಾರಿ ಫೈನಲ್ ಪಂದ್ಯದಲ್ಲಿ ಗೆಲುವು ಸಾಧಿಸಿ ಭಾರತದ ಮಹಿಳೆಯರ ತಂಡ ವಿಶ್ವಕಪ್ ಗೆಲ್ಲುವ ಮೂಲಕ ತಮ್ಮ ಕನಸನ್ನು ನನಸಾಗಿ ಸಾಕಾರಗೊಳಿಸಿಕೊಂಡಿರುವುದು ಸ್ವಾಗತಾರ್ಹ. ಫೈನಲ್ ಪಂದ್ಯದಲ್ಲಿ ಗೆಲುವು ಸಾಧಿಸಲು ಪ್ರತಿಯೊಬ್ಬ ಆಟಗಾರ್ತಿಯರು ಪಂದ್ಯ ಆರಂಭದಿಂದಲೂ ಗೆಲುವು ಸಾಧಿಸುವವರೆಗೂ ತಮ್ಮ ಸಾಮರ್ಥ್ಯವನ್ನು ಪಣಕ್ಕಿಟ್ಟಂತೆ ಆಡಿದ ರೀತಿ ಅತ್ಯದ್ಭುತವಾಗಿತ್ತು.ವಿಶ್ವಕಪ್ ಗೆಲ್ಲುವ ಮೂಲಕ 150 ಕೋಟಿ ಭಾರತೀಯರ ಮನ ಗೆದ್ದ ಭಾರತ ಕ್ರಿಕೆಟ್ ವನಿತೆಯರು ಅಭಿನಂದನಾರ್ಹರು.

–ಬೆಸಗರಹಳ್ಳಿ ರವಿ ಪ್ರಸಾದ್, ಮೈಸೂರು.

■ ಲಂಚದ ಹಾವಳಿಗೆ ಕಡಿವಾಣ ಹಾಕಿ

ಮಾನ್ಯರೆ,

ಅಂತ್ಯ ಸಂಸ್ಕಾರ ಮಾಡಲು ಅಡಿಗಡಿಗೂ ಲಂಚ ನೀಡಬೇಕಾದ ಅನಿವಾರ್ಯತೆಯನ್ನು, ಬೆಂಗಳೂರಿನ ನಿವಾಸಿಯೊಬ್ಬರು ಬಹಿರಂಗಪಡಿಸಿದ್ದಾರೆ. ಪುತ್ರಿಯ ಮೃತ ದೇಹ ಸಾಗಿಸಲು ಹಾಗೂ ಮರಣೋತ್ತರ ಪರೀಕ್ಷೆ ನಡೆಸಲು ಪಟ್ಟ ಸಂಕಷ್ಟ, ಅಂಬುಲೆನ್ಸ್ ಚಾಲಕ, ಪೊಲೀಸರು, ಸ್ಮಶಾನದ ಸಿಬ್ಬಂದಿ ಹಣಕ್ಕೆ ಬೇಡಿಕೆ ಇಟ್ಟಿದ್ದು, ಕಡೆಗೆ ಮರಣ ಪ್ರಮಾಣ ಪತ್ರ ಪಡೆಯಲು ಲಂಚ ನೀಡಿದ ಬಗೆಯನ್ನು ಭಾರತ್ ನಿಗಮದ ಅಧಿಕಾರಿಯೊಬ್ಬರು ಎಳೆ ಎಳೆಯಾಗಿ ಬಿಚ್ಚಿಟ್ಟಿದ್ದಾರೆ.

ಇದು ಇವರೊಬ್ಬರ ಕತೆಯಲ್ಲ, ಸಾರ್ವತ್ರಿಕ ಸಮಸ್ಯೆ. ನಮ್ಮ ಇಡೀ ವ್ಯವಸ್ಥೆಯೇ ಗಬ್ಬೆದ್ದು ಹೋಗಿದೆ. ಇದು ಬರೀ ಬೆಂಗಳೂರಿಗೆ ಮಾತ್ರ ಸಿಮಿತವಲ್ಲ, ಎಲ್ಲ ಜಿಲ್ಲಾ, ತಾಲೂಕಿನ ಕೇಂದ್ರಗಳಲ್ಲೂ ಇದೇ ಪರಿಸ್ಥಿತಿ ಇದೆ. ಯಾರೂ ಬಂದರೂ ಈ ಲಂಚದ ಹಾವಳಿಯನ್ನು ತಪ್ಪಿಸಲು ಸಾಧ್ಯವಿಲ್ಲ ಎನ್ನುವಂತಾಗಿದೆ. ಆದರೆ, ಹಣ ತೆಗೆದುಕೊಂಡವರ ಹೆಸರನ್ನು ಧೈರ್ಯವಾಗಿ ಹೇಳಿ ಸಾರ್ವಜನಿಕವಾಗಿ ಬಹಿರಂಗಪಡಿಸಿದರೆ ಅಂತಹ ಸಿಬ್ಬಂದಿಯ ಮೇಲೆ ನಿಷ್ಠೂರವಾಗಿ ಮೇಲಿನ ಅಧಿಕಾರಿಗಳು ಕ್ರಮ ಕೈಗೊಂಡಾಗ ಮಾತ್ರ ಸ್ವಲ್ಪ ಮಟ್ಟಿಗಾದರೂ ಈ ಲಂಚದ ಹಾವಳಿಯನ್ನು ತಪ್ಪಿಸಬಹುದು.

–ಬೂಕನಕೆರೆ ವಿಜೇಂದ್ರ, ಕುವೆಂಪುನಗರ, ಮೈಸೂರು



ಡಾ. ಹೆಚ್.ವಿ. ನಾಗರಾಜ ರಾವ್
ಮೈಸೂರು.

ಸಂಸ್ಕೃತಿ ಚಿಂತನಾ

ಡಾ.ಪಾದೇಕಲ್ಲು ವಿಷ್ಣುಭಟ್ಟರ ಗ್ರಂಥಾಲೋಕ

ಸಂಸ್ಕೃತದಲ್ಲಿ ಆನಂದವರ್ಧನನ ಧ್ವನ್ಯಾಲೋಕ, ಅಭಿನವ ಗುಪ್ತನ ತಂತ್ರಾಲೋಕ, ಪೀಯೂಷವರ್ಷ ಜಯದೇವನ ಚಂದ್ರಾ ಲೋಕ ಎಂಬ ಗ್ರಂಥಗಳು ಪ್ರಸಿದ್ಧವಾಗಿ ಖ್ಯಾತಿಯನ್ನು ಗಳಿಸಿವೆ. ಆಲೋಕ ಎಂದರೆ ಬೆಳಕು. ಈ ದಿಕ್ಕಿನಲ್ಲಿ ಅನೇಕ ಗ್ರಂಥಗಳ ಮೇಲೆ ಬೆಳಕನ್ನು ಚೆಲ್ಲುವ ಪುಸ್ತಕಕ್ಕೆ ಗ್ರಂಥಾಲೋಕ ಎಂಬ ಹೆಸರು ಔಚಿತ್ಯ ಪೂರ್ಣವಾಗಿದೆ. ಕರಾವಳಿ ಕನ್ನಡ ನಾಡಿನ ಪಂಡಿತ ಮೂರ್ಧನ್ಯ ರಾದ ಅಧ್ಯಯನ–ಪ್ರವಚನ–ಲೇಖನಗಳಿಗೆ ಇನ್ನೊಂದು ಹೆಸರಾದ ಡಾ.ಪಾದೇಕಲ್ಲು ವಿಷ್ಣುಭಟ್ಟರ ಐವತ್ತ ಮೂರು ಲೇಖನಗಳ ಸಂಚಯವೇ ಗ್ರಂಥಾಲೋಕ. ಕನ್ನಡ ಸಾಹಿತ್ಯ ಪರಿಷತ್ತಿನ ಉಡುಪಿ ಜಿಲ್ಲಾ ಘಟಕ ಈ ನಾಲ್ಕು ನೂರು ಪುಟಗಳನ್ನು ಹೊಂದಿರುವ ಶ್ರೇಷ್ಠ ಪುಸ್ತಕವನ್ನು ಹದಿನೇಳನೆಯ ಉಡುಪಿ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದ ಸಂದರ್ಭದಲ್ಲಿ ಲೋಕಾರ್ಪಿತವನ್ನಾಗಿ ಮಾಡಿ ಧನ್ಯವಾಗಿದೆ. ಆ ಸಮ್ಮೇಳನಕ್ಕೆ ಡಾ.ಪಾದೇಕಲ್ಲು ವಿಷ್ಣುಭಟ್ಟರೇ ಅಧ್ಯಕ್ಷರೂ ಆಗಿದ್ದರು.



ಡಾ.ಪಾದೇಕಲ್ಲು ವಿಷ್ಣುಭಟ್ಟ

ಬೋದ್ಧಾರೋ ಮತ್ಸರಗ್ರಸ್ತಾ: (ವಿದ್ವಾಂಸರಲ್ಲಿ ಮಾತ್ಸರ್ಯ ಹೆಚ್ಚು) ಎಂಬ ಮಾತನ್ನು ಭರ್ತೃಹರಿ ಆಡಿದ್ದಾನೆ. ಅದಕ್ಕೆ ಅಪವಾದವಾಗಿರುವವರು ವಿಷ್ಣುಭಟ್ಟರು. ಒಳ್ಳೆಯ ಗ್ರಂಥಗಳನ್ನು ತೆಗೆದುಕೊಂಡು ಆಮೂಲಾಗ್ರವಾಗಿ ಓದಿ ಅವುಗಳ ಗುಣ ವಿಶೇಷಗಳನ್ನು ಅವರು ಬಿಚ್ಚು ಕಂಠದಿಂದ ಹೊಗಳಿದ್ದಾರೆ. ಗ್ರಂಥಾಲೋಕದಲ್ಲಿ ಇರುವ ಲೇಖನಗಳಲ್ಲಿ ಕೆಲವು ವಿಷಯಾನುಗುಣವಾಗಿ ದೀರ್ಘವಾಗಿವೆ. ಉದಾಹರಣೆಗೆ 'ದಕ್ಷಿಣದ ಸಿರಿನಾಡು' ಎಂಬ ಡಾ. ಕೆ. ಅನಂತರಾಮು ಅವರ ಗ್ರಂಥದ ಪರಿಚಯ. ಇದು ಎಂಟು ಪುಟಗಳಷ್ಟು ಹರಡಿದೆ. ಮೂಲಗ್ರಂಥ ಸಾವಿರ ಪುಟಗಳನ್ನು ಹೊಂದಿರುವುದರಿಂದ ಅಂಥ ಪರಿಚಯ ಆವಶ್ಯಕ. ಅಂತೆಯೇ ಶತಾವಧಾನಿ ಡಾ.ಆರ್.ಗಣೇಶರ 'ಕನ್ನಡದಲ್ಲಿ ಅವಧಾನ ಕಲೆ' ಎಂಬ ಗ್ರಂಥದ ಪರಿಚಯ. ಇದೂ ಹತ್ತು ಪುಟಗಳ ವಿಸ್ತರವನ್ನು ಪಡೆದಿರುವುದು ಯೋಗ್ಯವೇ ಆಗಿದೆ. ಕೆಲವು ಲೇಖನಗಳು ಎರಡು ಮೂರು ಪುಟಗಳಷ್ಟೇ ಇವೆ. ಪ್ರತಿಯೊಂದರಲ್ಲೂ ಎದ್ದು ಕಾಣುವುದು ವಿಷ್ಣುಭಟ್ಟರ ಎಚ್ಚರಿಕೆಯ ಓದಿನ ಆಳ ಅಗಲಗಳು. ಯಾವ ಆಗ್ರಹವೂ ಇಲ್ಲದೆ ನಿಷ್ಪಕ್ಷಪಾತವಾಗಿ ವಿಷಯಗ್ರಹಣಪೂರ್ವಕವಾಗಿ ಅವರು ತಮ್ಮ ನುಡಿಗಳನ್ನಿಟ್ಟಿದ್ದಾರೆ. ದಕ್ಷಿಣದ ಸಿರಿನಾಡಿನ ಬಗೆಗೆ ಬರೆಯುತ್ತಾ 'ಈ ಗ್ರಂಥವು ಕೇವಲ ಪ್ರವಾಸ ಕಥನವಲ್ಲ; ಒಂದು ವಿಶ್ವಕೋಶದ ಮಾದರಿಯ ರಚನೆ' ಎಂದು ಪ್ರಾಮಾಣಿಕವಾಗಿ ಹೊಗಳಿದ್ದಾರೆ.

ಡಾ. ಆರ್. ಗಣೇಶರ ಪುಸ್ತಕ ಪರಿಚಯದ ಲೇಖನಕ್ಕೆ ವಿಷ್ಣುಭಟ್ಟರು ಕೊಟ್ಟಿರುವ ಹೆಸರೇ ಹೇಗಿದೆ ನೋಡಿ –**'ಕನ್ನಡದಲ್ಲಿ ಅವಧಾನ ವಿಶ್ವಕೋಶ'**. ಇದು ಪ್ರಾಂಜಲವಿಮರ್ಶೆಯ ಲಕ್ಷಣ. ತೆಲುಗಿನಲ್ಲಿ ಅವಧಾನ ಕಲೆ ಹೆಚ್ಚು ಜನಪ್ರಿಯ. ಅವಧಾನ ಕಲೆಯ ಬಗೆಗೆ ಆ ಭಾಷೆಯಲ್ಲಿ ಅನೇಕ ಗ್ರಂಥಗಳೂ ಬಂದಿವೆ. ಅವೆಲ್ಲವನ್ನೂ ಡಾ. ಗಣೇಶರು ಪರಿಶೀಲಿಸಿದ್ದಾರೆ ಎಂಬ ಅಂಶವನ್ನೂ ವಿಷ್ಣುಭಟ್ಟರು ಉಲ್ಲೇಖಿಸಿದ್ದಾರೆ. ಇಂದು ಹಲವರು ಯುವಕರು ಕನ್ನಡ–ಸಂಸ್ಕೃತ ಅವಧಾನಗಳನ್ನು ನಡೆಸುತ್ತಿದ್ದರೆ ಅದಕ್ಕೆ ಕಾರಣ ಡಾ. ಗಣೇಶರು ಕೊಟ್ಟ ಪ್ರೋತ್ಸಾಹ ಮತ್ತು ತರಬೇತಿ ಎಂಬುದನ್ನೂ ಸೂಚಿಸಿದ್ದಾರೆ.

ವರ್ಣನಾತ್ಮಕ ವಚನ ಪದಕೋಶ ಎಂಬ ಗ್ರಂಥದ ಪರಿಚಯ ಮಾಡಿಸುವ ವಿಷ್ಣುಭಟ್ಟರು 'ಭಾಷಾ ವಿಜ್ಞಾನ ಕ್ಷೇತ್ರದಲ್ಲಿ ವಿಶಿಷ್ಟ ಅಧ್ಯಯನಗಳನ್ನು ಮಾಡಿ ಹಲವು ಗ್ರಂಥಗಳನ್ನು ಬರೆದ ಪ್ರಾಧ್ಯಾಪಕ ಡಾ. ಸಂಗಮೇಶ ಸವದತ್ತಿ ಮಠ ಅವರು ಈ ಕೋಶವನ್ನು ಸಿದ್ಧಪಡಿಸುವಲ್ಲಿ ಉತ್ಸಾಹಪೂರ್ವಕವಾಗಿ ತಮ್ಮನ್ನು ತಾವು ತೊಡಗಿಸಿಕೊಂಡುದು ಕನ್ನಡ ಸಾಹಿತ್ಯ ಮತ್ತು ಸಂಶೋಧನಾ ಕ್ಷೇತ್ರಕ್ಕೆ ಒಂದು ದೊಡ್ಡ ಲಾಭವನ್ನೇ ಒದಗಿಸಿಕೊಟ್ಟಿತು ಎಂದು ಸತ್ಯವನ್ನೇ ಹೇಳಿದ್ದಾರೆ.

ಗೋವಿಂದ ಪೈ ಸಂಶೋಧನಾ ಸಂಪುಟ ಎಂಬ ಬೃಹದ್ ಗ್ರಂಥದ ಪರಿಚಯವನ್ನು ಮಾಡಿಸುವ ವಿಷ್ಣುಭಟ್ಟರ ಲೇಖನ ಕನ್ನಡದ ಪ್ರಥಮ ರಾಷ್ಟ್ರ ಕವಿ ಗೋವಿಂದ ಪೈಗಳ ಸಾಹಿತ್ಯದ ಮಹತ್ತ್ವ–ಬೃಹತ್ತ್ವಗಳನ್ನು ತಿಳಿಸುತ್ತದೆ. ಪೈಗಳ ಸಂಶೋಧನೆಯ ಹಿರಿಮೆ ಗರಿಮೆಗಳು ಆ ಸಂಪುಟವನ್ನು ಓದಿದವರಿಗೇ ಗೋಚರ.

ಕನ್ನಡದಲ್ಲಿ ಮುದ್ರಿತವಾದ ಮೊದಲನೆಯ ಪುಸ್ತಕ ಯಾವುದು ಎಂಬ ಪ್ರಶ್ನೆಗೆ ಉತ್ತರ ನನಗಂತೂ ಗೊತ್ತಿರಲಿಲ್ಲ. ಡಾ. ಪಾದೇಕಲ್ಲು ವಿಷ್ಣುಭಟ್ಟರು ಅದನ್ನೂ ತಿಳಿಸಿದ್ದಾರೆ. ಅದು ಡಾ. ವಿಲಿಯಂ ಕೇರಿ ಎಂಬುವನು ಬರೆದ ಕನ್ನಡ ವ್ಯಾಕರಣವಂತೆ. 1818 ರಲ್ಲಿ ಅದು ಮುದ್ರಿತವಾಗಿದ್ದು ಈಚೆಗೆ ಹಂಪಿಯ ಕನ್ನಡ ವಿಶ್ವವಿದ್ಯಾಲಯದ ಪ್ರಸಾರಾಂಗ 2018 ರಲ್ಲಿ ಅದನ್ನು ಪ್ರಕಟಿಸಿದೆ. ವಿಲಿಯಂ ಕೇರಿ ಬಹುಭಾಷಾಭಿಜ್ಞನಾಗಿ ಅನೇಕ ಶಬ್ದಕೋಶಗಳನ್ನು ರಚಿಸಿದ್ದನೆಂಬ ಮಾಹಿತಿಯೂ ಇಲ್ಲಿದೆ.

ಮುಳಿಯ ತಿಮ್ಮಪ್ಪಯ್ಯನವರ 'ನಾಡೋಜ ಪಂಪ' ಮತ್ತು 'ಕವಿರಾಜ ಮಾರ್ಗ ವಿವೇಕ' ಎಂಬ ವಿಷಯದ ಬಗೆಗೆ ಇಲ್ಲಿ ಎರಡು ಲೇಖನಗಳಿವೆ. ಇವು ವಿಷ್ಣು ಭಟ್ಟರು ಮಂಡಿಸಿದ ಪ್ರಬಂಧ ಮತ್ತು ಮಾಡಿದ ಉಪನ್ಯಾಸದ ಲಿಖಿತರೂಪ. ಪಂಪನ ಮತ್ತು ಕವಿರಾಜ ಮಾರ್ಗದ ಬಗೆಗೆ ತಿಮ್ಮಪ್ಪಯ್ಯನವರ ವಿಚಾರಗಳನ್ನು ತಿಳಿಯಲು ಈ ಲೇಖನಗಳು ಅತ್ಯಂತೋಪಕಾರಕಗಳು.

'ಮೂರು ಪೌರಾಣಿಕ ಕೋಶಗಳು' ಎಂಬ ಲೇಖನದಲ್ಲಿ ವಿಷ್ಣುಭಟ್ಟರು (1) ಬೆನಗಲ್ ರಾಮರಾವ್ ಮತ್ತು ಪಾನ್ಯಂ ಸುಂದರ ಶಾಸ್ತ್ರಿಗಳಿಂದ ರಚಿತವಾದ **ಪುರಾಣನಾಮ ಚೂಡಾಮಣಿ,** (2) ವಿದ್ವಾನ್ ಐರೋಡಿ ಯಜ್ಞ ನಾರಾಯಣ ಉಡುಪರ **ಪುರಾಣ ಭಾರತಕೋಶ,** (3) ಮೂಡಂಬೈಲು ಗೋಪಾಲಕೃಷ್ಣ ಶಾಸ್ತ್ರಿಗಳ **ಮಹಾಭಾರತ ಕೋಶ** ಎಂಬ ಮೂರು ಕೋಶಗಳನ್ನು ವಿಮರ್ಶಿಸಿದ್ದಾರೆ. **ಇಂಗ್ಲೀಷ್–ಕನ್ನಡ–ತುಳು ಪದಕೋಶ** ಎಂಬ ಲೇಖನದಲ್ಲಿ ಕೋಶಗಳನ್ನು ನಿರ್ಮಾಣ ಮಾಡಬೇಕೆಂದು ಹೊರಟ ವಿದ್ವಾಂಸರು ಅನುಸರಿಸಬೇಕಾದ ನಿಯಮಗಳ ಬಗೆಗೆ ವಿಷ್ಣುಭಟ್ಟರು ಬೆಳಕನ್ನು ಚೆಲ್ಲಿದ್ದಾರೆ. **ರಾಮರಾಜ್ಯದ ರೂವಾರಿ : ಒಂದು ವಿವೇಚನೆ** ಎಂಬ ಲೇಖನ ದೇರಾಜೆ ಸೀತಾರಾಮಯ್ಯನವರ ಆ ಹೆಸರಿನ ಪುಸ್ತಕದ ವಿವೇಚನೆಯನ್ನು ಮಾಡುವುದಲ್ಲದೆ, ರಾಮಾಯಣ ಮಹಾಭಾರತಗಳ ಬಗೆಗೆ ಸೀತಾರಾಮಯ್ಯನವರು ರಚಿಸಿದ ಸಾಹಿತ್ಯದ ವೈಶಾಲ್ಯದ ಬಗೆಗೆ ಓದುಗರ ಕಣ್ಣನ್ನು ತೆರೆಸುತ್ತದೆ. ಇದರ ಮುಂದಿನ ಲೇಖನವೂ ಈ ಬಗೆಗೆ ಹೆಚ್ಚು ತಿಳಿವನ್ನು ನೀಡುತ್ತದೆ. **ವಿಷಯ ವಚನ ಸಂಪುಟಗಳು** ಎಂಬ ಲೇಖನ ವಚನಗಳ ಸಂಪಾದನೆ ವಿವಿಧ ರೀತಿಯಲ್ಲಿ ನಡೆದುದನ್ನು ತಿಳಿಸಿ, ಡಾ.ಸಂಗಮೇಶ ಸವದತ್ತಿ ಮಠ ಅವರು ವಚನ ಸಾಹಿತ್ಯದ ಬಗೆಗೆ ಮಾಡಿದ ಆಳವಾದ ಅಧ್ಯಯನದ ಮತ್ತು ವಿಮರ್ಶೆಯ ಫಲವಾಗಿ ವಿಷಯ ವಚನ ಸಂಪುಟಗಳು ಬಂದಿವೆಯೆಂದು ತಿಳಿಸಿ ದ್ದಾರೆ. ಸಂಸ್ಕೃತ ವಿದ್ವಾಂಸರೂ ಯಕ್ಷಗಾನ ಕಲಾವಿದರೂ ಕವಿಗಳೂ ಆಗಿರುವ ವಿದ್ವಾನ್ ಉಮಾಕಾಂತ ಭಟ್ಟರು ಬರೆದ **ಸದಾತನ** ಎಂಬ ಗ್ರಂಥದ ವಿಮರ್ಶೆಯನ್ನೊಂದು ಲೇಖನದಲ್ಲಿ ಮಾಡಿಕೊಡ ಲಾಗಿದೆ. ನಯವಿವೇಕದ ಕೃತಿ ಸಂಚಯ ಎಂಬ ಲೇಖನದಲ್ಲಿ ಸೇಡಿ ಯಾಪು ಕೃಷ್ಣಭಟ್ಟರ ಶಿಷ್ಯರಾಗಿದ್ದ ಪ್ರೊ.ಎಂ.ರಾಮಚಂದ್ರ ಅವರ ಸಾಹಿತ್ಯ ಪರಿಚಾರಿಕ ಎಷ್ಟು ದೊಡ್ಡದು ಎಂದು ನಿರೂಪಿಸಲಾಗಿದೆ. ರಾಜರತ್ನಂ, ವಿ.ಸೀ., ಮಾಸ್ತಿ ಇತ್ಯಾದಿ ಉಜ್ವಲ ನಕ್ಷತ್ರಗಳ ಬಗೆಗೆ ರಾಮಚಂದ್ರರ ಗ್ರಂಥಗಳು ಕನ್ನಡದ ಶ್ರೇಷ್ಠತೆಯನ್ನು ಹೇಗೆ ಮೆರೆಸಿವೆ ಎಂದಿಲ್ಲಿ ತಿಳಿದುಕೊಳ್ಳಬಹುದು. ವಿದ್ವಾನ್ ರಂಗನಾಥ ಶರ್ಮರ **ಕಾಲ ಮತ್ತು ಕ್ರಿಯೆ** ಎಂಬ ಗ್ರಂಥದ ಬಗೆಗೆ ಇರುವ ಲೇಖನ ವಾಕ್ಯಪದೀಯ ಎಂಬ ಗ್ರಂಥದ ಒಳನೋಟಗಳನ್ನು ನೀಡಿದೆ.

ಗ್ರಂಥಾಲೋಕದಲ್ಲಿರುವ ಎಲ್ಲ ಲೇಖನಗಳ ಬಗೆಗೆ ಬರೆಯಲು ಈ ಅಂಕಣದಲ್ಲಿ ಸ್ಥಳ ಸಾಲದು. ಆದರೆ ಪಾದೇಕಲ್ಲು ವಿಷ್ಣುಭಟ್ಟರು ಎಷ್ಟು ಗ್ರಂಥಗಳ ವಿಮರ್ಶೆ ಮಾಡಿದ್ದಾರೆ, ಎಷ್ಟು ಪುಸ್ತಕಗಳಿಗೆ ಮುನ್ನುಡಿಗಳನ್ನು ಬರೆದಿದ್ದಾರೆ, ಅವರ ಅಧ್ಯಯನದ ವಿಶಾಲತೆ ಮತ್ತು ಗಂಭೀರತೆ ಎಷ್ಟು ಎಂಬುದನ್ನು ಗಮನಿಸಿದಾಗ ಮೂಗಿನ ಮೇಲೆ ಬೆರಳನ್ನಿಟ್ಟುಕೊಳ್ಳುವಂತಾಗುತ್ತದೆ. ಗ್ರಂಥಾಲೋಕದಲ್ಲಿ ವಿಮರ್ಶಿತವಾದ ಎಲ್ಲ ಗ್ರಂಥಗಳನ್ನು ನಾವು ಓದಲು ಸಾಧ್ಯವಾಗುವುದಿಲ್ಲವೇನೋ. ಆದರೆ ಇದನ್ನು ಓದಿದಾಗ ಕನ್ನಡದಲ್ಲಿ ಶ್ರೇಷ್ಠ ಸಾಹಿತ್ಯ ಕೃತಿಗಳು ಉದಿಸುತ್ತಿರುವುದೂ ಹೊಸ ವಿಚಾರಗಳು ಹುಟ್ಟುತ್ತಿರುವುದೂ ಗಮನಕ್ಕೆ ಬಂದು ಖುಷಿಯಾಗುತ್ತದೆ.

ಮುನ್ನುಡಿಯೆಂಬ ಪ್ರಸ್ತಾವನೆ: ನಂದಳಿಕೆಯ ನಂದನ ಎಂಬ ಲೇಖನದಲ್ಲಿ ಮುದ್ದಣನ ಊರಾದ ನಂದಳಿಕೆಯಲ್ಲಿ, ಆ ಕವಿಯ ಹೆಸರಿನಲ್ಲಿ ಎಷ್ಟು ಒಳ್ಳೆಯ ಕೆಲಸಗಳಾಗಿವೆ ಎಂಬ ವಿಷಯ ನಮಗೆ ತಿಳಿದು ಬರುತ್ತದೆ. **ತುಳುವಿಗೆ ಬಂದ ಗಿಲ್ಗಮೆಶ್** ಎಂಬ ಲೇಖನದಲ್ಲಿ ಈಗ್ಗೆ ಸುಮಾರು ಐದು ಸಾವಿರ ವರ್ಷಗಳ ಹಿಂದೆ ಸುಮೇರಿಯನ್ ಭಾಷೆಯಲ್ಲಿ ರಚಿತವಾಗಿದ್ದ ಗಿಲ್ಗಮೆಶ್ ಎಂಬ ಮಹಾಜಾನಪದ ಕಾವ್ಯ ಕ್ರಿ.ಶ. ಹತ್ತೊಂಬತ್ತನೆಯ ಶತಮಾನದಲ್ಲಿ ದೊರಕಿದ ಬಗೆಯನ್ನೂ ಪಾದೇಕಲ್ಲು ಕೃಷ್ಣಭಟ್ಟರು ವಿವರಿಸಿದ್ದಾರೆ. ಅಂಶುಮಾಲಿ ಎಂಬ ಸಾಹಿತಿಗಳು ಗಿಲ್ಗಮೆಶನ ಕಥೆಯನ್ನು ನಾಟಕ ರೂಪದಲ್ಲಿ ತುಳು ಭಾಷೆಯಲ್ಲಿ ಕೊಟ್ಟಿದ್ದಾರೆ ಎಂಬ ಅಂಶವೂ ಈ ಲೇಖನದಲ್ಲಿದೆ. ಇವೆಲ್ಲ ಸಾಹಿತ್ಯಾಸಕ್ತರು ತಿಳಿದುಕೊಳ್ಳಬೇಕಾದ ಸಂಗತಿಗಳು.

ಮುನ್ನುಡಿಯನ್ನು ಬರೆದಿರುವ ಪ್ರೊ.ವಿ.ಬಿ.ಅರ್ತಿಕಜೆ ಅವರು ಬರೆದಿದ್ದಾರೆ ''ಗ್ರಂಥಾಲೋಕವೆಂದರೆ ಪುಸ್ತಕದ ಸಮಗ್ರ ಅವಲೋಕನ, ಒಟ್ಟು ನೋಡುವಿಕೆ. ಕೇವಲ ಮೇಲಿಂದ ಮೇಲೆ ವೀಕ್ಷಿಸುವುದರಿಂದ ಇದು ಸಾಧಿತವಾಗುವುದಿಲ್ಲ. ಕೃತಿಯ ಒಳಹೊಕ್ಕು ಅದರ ನೆಲೆ ಬೆಲೆ ಗಳನ್ನು ತಿಳಿದುಕೊಳ್ಳುವುದು ಮತ್ತು ಅದರಲ್ಲಿರುವ ವಸ್ತುವಿನ ಸಾರ– ವಿಸ್ತಾರಗಳನ್ನು ಆಮೂಲಾಗ್ರವಾಗಿ ಗ್ರಹಿಸಿಕೊಳ್ಳುವುದು ನೋಡುವಿಕೆ ಗುರಿಯಾಗಿರಬೇಕು.'' ಈ ಗುರಿಯನ್ನು ಪರಿಪೂರ್ಣವಾಗಿ ಸಾಧಿಸಿರುವ ಆದರಣೀಯ ಪಾದೇಕಲ್ಲು ವಿಷ್ಣುಭಟ್ಟರಿಗೆ ನಮನಪೂರ್ವಕ ಅಭಿನಂದನೆಗಳು.

ಮಹಿಳಾ ವಿಶ್ವಕಪ್ ವಿಜೇತ ಭಾರತ ತಂಡಕ್ಕೆ ಸೂರತ್ ಉದ್ಯಮಿ ವಜ್ರದ ಉಡುಗೊರೆ

ಸೂರತ್: ಮಹಿಳಾ ವಿಶ್ವಕಪ್ ವಿಜೇತ ಭಾರತ ತಂಡದ ಆಟಗಾರ್ತಿಯರಿಗೆ ವಜ್ರದ ಆಭರಣ ಹಾಗೂ ಸೋಲರ್ ಪ್ಯಾನೆಲ್ ಅನ್ನು ಉಡುಗೊರೆ ನೀಡುವುದಾಗಿ ಉದ್ಯಮಿ ಹಾಗೂ ರಾಜ್ಯಸಭಾ ಸದಸ್ಯರಾಗಿರುವ ಗೋವಿಂದ ಧೋಲಾಕಿಯಾ ಘೋಷಿಸಿದ್ದಾರೆ.

ಭಾರತ ಮಹಿಳಾ ತಂಡವು ಭಾನುವಾರ ನವಿ ಮುಂಬೈನಲ್ಲಿ ನಡೆದ ಫೈನಲ್ ಪಂದ್ಯದಲ್ಲಿ ದಕ್ಷಿಣ ಆಫ್ರಿಕಾ ತಂಡದ ವಿರುದ್ಧ 52 ರನ್‌ಗಳ ಗೆಲುವು ಸಾಧಿಸುವ ಮೂಲಕ ಚೊಚ್ಚಲ ವಿಶ್ವಕಪ್ ಮುಡಿಗೇರಿಸಿಕೊಂಡಿತು.

ಉಡುಗೊರೆ ನೀಡುವ ಕುರಿತು ಬಿಸಿಸಿಐ ಉಪಾಧ್ಯಕ್ಷ ರಾಜೀವ್ ಶುಕ್ಲಾ ಅವರಿಗೆ ಶ್ರೀ ರಾಮಕೃಷ್ಣ ಎಕ್ಸ್‌ಪೋರ್ಟ್ಸ್ ಪ್ರೈವೇಟ್ ಲಿಮಿಟೆಡ್ ಸ್ಥಾಪಕ ಹಾಗೂ ಮುಖ್ಯಸ್ಥರಾಗಿರುವ ಗೋವಿಂದ ಧೋಲಾಕಿಯಾ ಪತ್ರ ಬರೆದಿದ್ದಾರೆ.

ರೇಣುಕಾಸ್ವಾಮಿ ಕೊಲೆ ಕೇಸ್; ಆದೇಶ ಪುನರ್ ಪರಿಶೀಲಿಸುವಂತೆ ಸುಪ್ರೀಂಗೆ ಪವಿತ್ರಾ ಗೌಡ ಅರ್ಜಿ

ನವದೆಹಲಿ: ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಪುನರ್ ಪರಿಶೀಲಿಸುವಂತೆ ಸುಪ್ರೀಂಕೋರ್ಟ್‌ಗೆ ಆರೋಪಿ ಪವಿತ್ರಾ ಗೌಡ ಅರ್ಜಿ ಸಲ್ಲಿಸಿದ್ದಾರೆ. ಈ ಹಿಂದೆ ಹೈಕೋರ್ಟ್ ನೀಡಿದ್ದ ಜಾಮೀನು ರದ್ದುಗೊಳಿಸಿ ಸುಪ್ರೀಂಕೋರ್ಟ್ ಆದೇಶ ಹೊರಡಿಸಿತ್ತು. ಆದೇಶ ಪರಿಶೀಲನೆ ಕೋರಿ ಸುಪ್ರೀಂಗೆ ಕೊಲೆ ಆರೋಪಿ ಪವಿತ್ರಾ ಗೌಡ ಅರ್ಜಿ ಸಲ್ಲಿಕೆ ಮಾಡಿದ್ದಾರೆ. ಸುಪ್ರೀಂಕೋರ್ಟ್ ಗುರುವಾರ ಅರ್ಜಿ ವಿಚಾರಣೆ ನಡೆಸಲಿದೆ.

ಈ ಕುರಿತು ದೆಹಲಿಯಲ್ಲಿ ರಾಜ್ಯ ಸರ್ಕಾರದ ಪರ ವಕೀಲ ಅನಿಲ್ ನಿಶಾನಿ ಪ್ರತಿಕ್ರಿಯೆ ನೀಡಿದ್ದಾರೆ. ಪವಿತ್ರ ಗೌಡ ಪುನರ್ ಪರಿಶೀಲನೆ ಅರ್ಜಿ ಸಲ್ಲಿಸಿದ್ದಾರೆ. ಜಾಮೀನು ರದ್ದು ಮಾಡಿದ ಸುಪ್ರೀಂಕೋರ್ಟ್ ಆದೇಶದ ಪುನರ್ ಪರಿಶೀಲನೆ ಕೋರಿದ್ದಾರೆ. ಗುರುವಾರ ನ್ಯಾ. ಪರ್ದಿವಾಲಾ ನೇತೃತ್ವದ ದ್ವಿಸದಸ್ಯ ಪೀಠದಲ್ಲಿ ವಿಚಾರಣೆ ನಡೆಯಲಿದೆ.

ನಿಧಿ ಕೊರತೆ, ನೇಮಕವಾಗದ ಸಂದರ್ಶಕ ಪ್ರಾಧ್ಯಾಪಕರು

ಡಿ.ದೇವರಾಜ ಅರಸು ಅಧ್ಯಯನ ಪೀಠದ ಕಾರ್ಯಚಟುವಟಿಕೆ ಸ್ಥಗಿತ



ಮಾನಸ ಗಂಗೋತ್ರಿಯಲ್ಲಿರುವ ಡಿ.ದೇವರಾಜ ಅರಸು ಅಧ್ಯಯನ ಪೀಠದ ಅರಸು ಭವನಕ್ಕೆ ಬೀಗ ಹಾಕಿರುವುದು.



ನಿರ್ವಹಣೆಯೂ ಇಲ್ಲದೇ ಕಸಕಡ್ಡಿ ನಡುವೆ ಸೊರಗುತ್ತಿರುವ ಡಿ.ದೇವರಾಜ ಅರಸು ಭವನ

ಮೈಸೂರು,ನ.4(ಪಿಎಂ)– ಮೈಸೂರು ವಿವಿ ಅಭಿವೃದ್ಧಿ ಅಧ್ಯಯನ ಸಂಸ್ಥೆ (ಐಡಿಎಸ್) ಅಧೀನದ ಡಿ.ದೇವರಾಜ ಅರಸ್ ಅಧ್ಯಯನ ಪೀಠವು ವರ್ಷದಿಂದ ಕಾರ್ಯಚಟುವಟಿಕೆ ಇಲ್ಲದೆ ನಿಷ್ಕ್ರಿಯವಾಗಿದೆ.


ನಿಧಿ ಕೊರತೆ ಹಾಗೂ ಸಂದರ್ಶಕ ಪ್ರಾಧ್ಯಾಪಕರ ನೇಮಕವಾಗದ ಹಿನ್ನೆಲೆಯಲ್ಲಿ ಸದರಿ ಪೀಠದ ಭವನಕ್ಕೆ ಬೀಗ ಜಡಿಯಲಾಗಿದೆ. ಮಾನಸ ಗಂಗೋತ್ರಿಯ ಐಡಿಎಸ್ ಪಕ್ಕದಲ್ಲಿ ಎರಡು ಕೊಠಡಿ ಹಾಗೂ ವಿಶಾಲ ಸಭಾಂಗಣ ಹೊಂದಿರುವ ಪೀಠದ ಡಿ.ದೇವರಾಜ ಅರಸು ಭವನ ಇದೀಗ ನಿರ್ವಹಣೆಯೂ ಇಲ್ಲದೇ ಕಸಕಡ್ಡಿ ಹಾಗೂ ಗಿಡಗಂಟಿಗಳ ನಡುವೆ ಸೊರಗುವಂತಾಗಿದೆ.



ಭವನದ ಗೋಡೆ ಪಕ್ಕದಲ್ಲಿ ಗಿಡಗಂಟಿ ಬೆಳೆದಿರುವುದನ್ನು ಕಾಣಬಹುದು.

ದೀನದಲಿತರು ಮತ್ತು ಹಿಂದುಳಿದ ವರ್ಗಗಳ ಶ್ರೇಯೋಭಿವೃದ್ಧಿಗೆ ತಮ್ಮ ಆಡಳಿತಾವಧಿಯಲ್ಲಿ ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸು ಅವರು ಪರಿಚಯಿಸಿದ ಕಾರ್ಯಕ್ರಮಗಳ ಪರಿಶೀಲಿಸಿ, ಆ ಮೂಲಕ ಈ ಸಮುದಾಯಗಳ ಸಾಮಾಜಿಕ ಮತ್ತು ಆರ್ಥಿಕ ಕಲ್ಯಾಣ ಸಾಧಿಸುವ ಬಗ್ಗೆ ಅಧ್ಯಯನ ನಡೆಸುವುದು ಸೇರಿದಂತೆ ಅನೇಕ ಮಹತ್ವದ ಉದ್ದೇಶಗಳೊಂದಿಗೆ ಅರಸು ಅವರ ಹೆಸರಿನಲ್ಲಿ ಸದರಿ ಪೀಠ ಸ್ಥಾಪಿಸಲಾಗಿದೆ. ಪ್ರತ್ಯೇಕ ಕಟ್ಟಡ ಹೊಂದಿರುವ ಪೀಠದ ಬಾಗಿಲು ವರ್ಷಕ್ಕೂ ಹೆಚ್ಚು ಕಾಲದಿಂದ ಮುಚ್ಚಿದೆ.

5 ಲಕ್ಷ ರೂ. ಠೇವಣಿ: 2001ರಲ್ಲಿ ಅಂದಿನ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ ಅವರ ಸಂಪುಟದಲ್ಲಿ ಉನ್ನತ ಶಿಕ್ಷಣ ಸಚಿವರಾಗಿದ್ದ ಕೆ.ಪರಮೇಶ್ವರ ಅವರ ಅವಧಿಯಲ್ಲಿ ಪೀಠ ಸ್ಥಾಪನೆಯಾಯಿತು. ಅದರ ನಿರ್ವಹಣೆಗೆ 5 ಲಕ್ಷ ರೂ. ಅನುದಾನ ಬಿಡುಗಡೆ ಮಾಡಲಾಗಿತ್ತು. ಇದರ ಠೇವಣಿ ಹಣದ ಬಡ್ಡಿಯಲ್ಲಿ ಸಂಶೋಧನೆ, ವಿಚಾರ ಸಂಕಿರಣ, ಕಾರ್ಯಾಗಾರ ನಡೆಯುತ್ತಿತ್ತು. ಆರಂಭದಲ್ಲಿ ಪ್ರತ್ಯೇಕ ಕಟ್ಟಡ ಇಲ್ಲವಾದರೂ ಪೀಠದ ಚಟುವಟಿಕೆ



ಬೀಗ ಹಾಕಿರುವ ಮುಖ್ಯದ್ವಾರದ ಎದುರು ತರಗೆಲೆ ಸೇರಿದಂತೆ ಕಸಕಡ್ಡಿ ಬಿದ್ದಿರುವುದು.

ನಡೆಯುತ್ತಿತ್ತು ಎನ್ನುತ್ತಾರೆ ಪೀಠದ ನಿರ್ದೇಶಕರಾಗಿ ನಿವೃತ್ತರಾಗಿರುವ ಪ್ರೊ.ಕೆ.ವಿ.ಅಯ್ಯಣ್ಣ.

ಅರಸು ಅವರ ಕಲ್ಯಾಣ ಕಾರ್ಯಕ್ರಮ ನೆನೆಯುವುದಕ್ಕಾಗಲೀ, ಅವರ ಜನ್ಮದಿನ ಮತ್ತು ಪುಣ್ಯಸ್ಮರಣೆ ಮಾಡಲು ಸಹ ಕಾಯಂ ನಿರ್ದೇಶಕರಿಲ್ಲ. ಸಂದರ್ಶಕ ಪ್ರಾಧ್ಯಾಪಕರೂ ಇಲ್ಲ. ಹೀಗಾಗಿ ವರ್ಷದಿಂದ ಯಾವುದೇ ಕಾರ್ಯಕ್ರಮವೂ ನಡೆದಿಲ್ಲ. ಅರಸು ಪೀಠವನ್ನು ಅಂಬೇಡ್ಕರ್ ಸಂಶೋಧನಾ ಮತ್ತು ವಿಸ್ತರಣಾ ಕೇಂದ್ರದ ಮಾದರಿಯಲ್ಲಿ ದೇವರಾಜ ಅರಸು ಹಿಂದುಳಿದ ವರ್ಗಗಳ ಅಧ್ಯಯನ ಕೇಂದ್ರವನ್ನಾಗಿ ರೂಪಿಸಿದರೆ, ಕಾಯಕಲ್ಪ ನೀಡಬಹುದು. ಅದಕ್ಕೆ ಬೇಕಾದ 5 ಕೋಟಿ ಅನುದಾನ ನೀಡುವಂತೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿತ್ತು ಎಂದು ಅಯ್ಯಣ್ಣ ಹೇಳಿದರು.

ಅರಸು ಭವನ: ಅಂದು ಅಡಗೂರು ಹೆಚ್.ವಿಶ್ವನಾಥ್ ಅವರ ಸಂಸದರ ನಿಧಿಯಿಂದ 'ಅರಸು ಭವನ' ಕಟ್ಟಡ ನಿರ್ಮಾಣಕ್ಕೆ ಅನುದಾನ ಬಿಡುಗಡೆಯಾಗಿತ್ತು. ನಂತರ 2016ರಲ್ಲಿ ಅಂದಿನ ಕುಲಪತಿ ಪ್ರೊ.ಕೆ.ಎಸ್.ರಂಗಪ್ಪ ಅವರ ಅವಧಿಯಲ್ಲಿ ವಿವಿಯಿಂದಲೂ ಅನು ದಾನ ದೊರಕಿತ್ತು. 2017ರ ನ.19ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನಿರ್ಮಾಣಗೊಂಡ ಅರಸು ಭವನದ ಉದ್ಘಾಟನೆ ನೆರವೇರಿಸಿ, ಅರಸು ಅವರ ಭಾವಚಿತ್ರ ಸಹ ಅನಾವರಣಗೊಳಿಸಿದ್ದರು. ಭವನದಲ್ಲಿ ವಿಚಾರ ಸಂಕಿರಣಗಳು, ಕಾರ್ಯಾಗಾರಗಳು ನಡೆಯುತ್ತಿದ್ದವು. ಪ್ರೊ.ವಿ.ಕೆ.ನಟರಾಜ್, ಪ್ರೊ.ಮಿಶ್ರಾ, ಪ್ರೊ.ಅಲೆಕ್ಸಾಂಡರ್ ಸೇರಿದಂತೆ 8ಕ್ಕೂ ಹೆಚ್ಚು ಸಂದರ್ಶಕ ಪ್ರಾಧ್ಯಾಪಕರು ಇಲ್ಲಿ ಸೇವೆ ಸಲ್ಲಿಸಿದ್ದಾರೆ.

ಶೀಘ್ರದಲ್ಲಿ ಪೀಠಕ್ಕೆ ಕಾಯಕಲ್ಪ

ಹಿಂದೆ ಠೇವಣಿ ಇಟ್ಟಿದ್ದ ಹಣ ತುಂಬ ಕಡಿಮೆ ಇದೆ. ಇದರಿಂದ ಕೇವಲ 5 ಸಾವಿರ ರೂ. ಬಡ್ಡಿಯಷ್ಟೇ ಬರುತ್ತಿದೆ. ನೇಮಕ ಗೊಳ್ಳುವ ಸಂದರ್ಶಕ ಪ್ರಾಧ್ಯಾಪಕರಿಗೆ ಮಾಸಿಕ ಗೌರವಧನ 8 ಸಾವಿರ ರೂ. ನೀಡುವಷ್ಟು ಮೂಲ ದತ್ತಿ ಇಲ್ಲ. ಸಂದರ್ಶಕ ಪ್ರಾಧ್ಯಾಪಕರೊಬ್ಬ ರನ್ನು ನೇಮಕ ಮಾಡಬೇಕಿದ್ದು, ಆದಷ್ಟು ಶೀಘ್ರದಲ್ಲಿ ನೇಮಕ ಮಾಡಲಾಗುವುದು. ಅರ್ಥಶಾಸ್ತ್ರ ವಿಷಯ ತಜ್ಞರೇ ಸಂದರ್ಶಕ ಪ್ರಾಧ್ಯಾಪಕ ರಾಗಬೇಕೆಂಬ ನಿಯಮವೂ ಇದೆ. ಅತೀ ಶೀಘ್ರದಲ್ಲಿ ಪೀಠಕ್ಕೆ ಕಾಯಕಲ್ಪ ದೊರಕಿಸಿಕೊಡಲಾಗುವುದು.

-ಪ್ರೊ.ಎನ್.ಕೆ.ಲೋಕನಾಥ್.
ಕುಲಪತಿ, ಮೈಸೂರು ವಿಶ್ವವಿದ್ಯಾನಿಲಯ.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಗ್ರೇಡ್-1 ನಗರವಾಗಿ ಮೈಸೂರು ಉನ್ನತಿ: ಪಾಲಿಕೆ ಅನುಮೋದನೆ

ಮೈಸೂರು ನಗರಕ್ಕೆ ಹೊಂದಿಕೊಂಡಂತೆ ಇರುವ ವಸತಿ ಬಡಾವಣೆಗಳಿಗೆ ಮೂಲ ಸೌಕರ್ಯ ವಿಸ್ತರಣೆ; ಇದು ಆಸ್ತಿ ಮೌಲ್ಯ ಹೆಚ್ಚಳಕ್ಕೂ ಪೂರಕವಾಗಲಿದೆ

ಮೈಸೂರು, ನ.4(ಆರ್‌ಕೆ)-ಹಾಲಿ ಗ್ರೇಡ್-2ರ ಸ್ಥಾನದಲ್ಲಿರುವ ಮೈಸೂರನ್ನು ಗ್ರೇಡ್-1 ನಗರವನ್ನಾಗಿ ಉನ್ನತೀಕರಿಸುವ ಯೋಜನೆಗೆ ಮೈಸೂರು ಮಹಾನಗರ ಪಾಲಿಕೆಯು ಅನುಮೋದನೆ ನೀಡಿದೆ.

ಪಾಲಿಕೆ ಹೆಚ್ಚುವರಿ ಆಯುಕ್ತರಾದ ಕುಸುಮಾ ಕುಮಾರಿ ಹಾಗೂ ಉಪ ಆಯುಕ್ತ (ಕಂದಾಯ) ಜಿ.ಎಸ್. ಸೋಮಶೇಖರ್ ನೇತೃತ್ವದಲ್ಲಿ ಇಂದು ನಡೆದ ಪಾಲಿಕೆ ಕೌನ್ಸಿಲ್ ಸಭೆಯಲ್ಲಿ ಮೈಸೂರು ನಗರ ಪಾಲಿಕೆ ವ್ಯಾಪ್ತಿಯನ್ನು ವಿಸ್ತರಿಸುವ ಹಾಗೂ ಗ್ರೇಡ್-1 ನಗರ ಯೋಜನೆಗೆ ಅನುಮೋದನೆ ನೀಡಲಾಯಿತು. ನಿನ್ನೆಯಷ್ಟೇ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಗ್ರೇಟರ್ ಬೆಂಗಳೂರು ಮಾದರಿಯಲ್ಲಿ ಗ್ರೇಟರ್ ಮೈಸೂರು ನಗರವನ್ನಾಗಿ ಉನ್ನತೀಕರಿಸುವ ಕುರಿತು ನಿರ್ಧಾರ ಕೈಗೊಳ್ಳಲಾಯಿತು.

ಅದರಂತೆ ಒಂದು ನಗರಸಭೆ, 4 ಪಟ್ಟಣ ಪಂಚಾಯ್ತಿ ಹಾಗೂ 8 ಗ್ರಾಮ ಪಂಚಾಯ್ತಿಗಳನ್ನು ಮೈಸೂರು ಮಹಾನಗರ ಪಾಲಿಕೆ ವ್ಯಾಪ್ತಿಗೆ ಸೇರಿಸಿಕೊಳ್ಳಲಾಗಿದ್ದು, ಅಲ್ಲಿನ ವಸತಿ ಬಡಾವಣೆಗಳಿಗೆ ಕುಡಿಯುವ ನೀರು, ಒಳಚರಂಡಿ, ಬೀದಿ ದೀಪ, ರಸ್ತೆ ಸೇರಿದಂತೆ ಇನ್ನಿತರ ಮೂಲಭೂತ ಸೌಕರ್ಯ ಗಳನ್ನು ಕಲ್ಪಿಸುವ ಮೂಲಕ ಮೈಸೂರು ನಗರವನ್ನು ಏಕರೂಪತೆ ನಗರವಾಗಿ ಅಭಿವೃದ್ಧಿಪಡಿಸುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿದೆ.

ಈ ಕುರಿತಂತೆ 'ಮೈಸೂರು ಮಿತ್ರ'ನಿಗೆ ಮಾಹಿತಿ ನೀಡಿದ ಜಿ.ಎಸ್. ಸೋಮಶೇಖರ್, ಕೇವಲ ಉತ್ತಮ ಸೌಲಭ್ಯ ಒದಗಿಸುವುದಲ್ಲದೇ ರಾಜ್ಯ ಮತ್ತು ಕೇಂದ್ರ ಸರ್ಕಾರಗಳ ಅನುದಾನಗಳು ಹಾಗೂ ಸಬ್ಸಿಡಿ ಯೋಜನೆಗಳನ್ನು ಪಡೆಯುವಲ್ಲಿ ಅನುಕೂಲವಾಗಲಿದೆ. ಮೈಸೂರು ಮಹಾನಗರ ಪಾಲಿಕೆ ವ್ಯಾಪ್ತಿಯನ್ನು ಮತ್ತಷ್ಟು ವಿಸ್ತರಿಸಲು ಹಾಗೂ ಪಾಲಿಕೆಗೆ ಹೆಚ್ಚುವರಿಯಾಗಿ 500 ಸಿಬ್ಬಂದಿಗಳನ್ನು ನಿಯೋಜಿಸಲು ಅವಕಾಶವಾಗಲಿದೆ ಎಂದರು.

ನಾವು ಈಗಾಗಲೇ ಪಾಲಿಕೆಯಿಂದ ಮೈಸೂರು ನಗರಕ್ಕೆ ಹೊಂದಿಕೊಂಡಂತಿರುವ ಹಲವು ವಸತಿ ಬಡಾವಣೆ ನಿವಾಸಿಗಳಿಗೆ ಕುಡಿಯುವ ನೀರು, ಒಳಚರಂಡಿ, ಬೀದಿ ದೀಪ, ರಸ್ತೆ, ಸ್ವಚ್ಛತೆ ಸೇರಿದಂತೆ ಇನ್ನಿತರ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗುತ್ತಿದೆ. ಆದರೆ ಅಲ್ಲಿಂದ ಪಾಲಿಕೆಗೆ ಯಾವುದೇ ವರಮಾನ ಬರುತ್ತಿಲ್ಲ. ಈಗ ವ್ಯಾಪ್ತಿ ವಿಸ್ತರಿಸಿದಲ್ಲಿ ನಾವು ಉತ್ತಮ ಸೌಲಭ್ಯ ನೀಡುವುದಕ್ಕೆ ಅಲ್ಲಿಂದ ತೆರಿಗೆ ರೂಪದಲ್ಲಿ ಸಂಪನ್ಮೂಲವನ್ನು ಕ್ರೋಢೀಕರಿಸಬಹುದಾಗಿದೆ ಎಂದು ತಿಳಿಸಿದರು.

ಮತ್ತೊಂದೆಡೆ, ನಗರಾಭಿವೃದ್ಧಿ ಆಯುಕ್ತಾಲಯದ ಕಮಿಷ್ನರ್ ವೆಂಕಟಾಚಲಪತಿ ಅವರು ಬೆಂಗಳೂರಿನ ಎಂ.ಎಸ್. ಬಿಲ್ಡಿಂಗ್‌ನಲ್ಲಿ ಇಂದು ಗ್ರೇಟರ್ ಮೈಸೂರು ಯೋಜನೆ ಸಂಬಂಧ ಸಭೆ ನಡೆಸಿ ಡಿಪಿಆರ್ ಸಿದ್ಧಪಡಿಸುವಂತೆ ನಗರಾಭಿವೃದ್ಧಿ ಮತ್ತು ಪೌರಾಡಳಿತ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಆ ಸಭೆಯಲ್ಲಿ ಮೈಸೂರು ಅಭಿವೃದ್ಧಿ ಪ್ರಾಧಿಕಾರದ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಸಂಪತ್ ಕುಮಾರ್ ಪಾಲ್ಗೊಂಡಿದ್ದರು.



ಉಚಿತ ವಾಕ್-ಶ್ರವಣ ತಪಾಸಣೆ

ಕನ್ನಡ ರಾಜ್ಯೋತ್ಸವದ ಅಂಗವಾಗಿ ಮೈಸೂರಿನ ಕುಂಬಾರ ಸಾರ್ವಜನಿಕ ವಿದ್ಯಾರ್ಥಿ ನಿಲಯ ಹಾಗೂ ಹೆರಿಟೇಜ್ ಕಾಲೇಜಿನ ಸಹಯೋಗದಲ್ಲಿ ಉಚಿತ ವಾಕ್ ಮತ್ತು ಶ್ರವಣ ತಪಾಸಣಾ ಶಿಬಿರವನ್ನು ಆಯೋಜಿಸಲಾಗಿತ್ತು. ಟ್ರಸ್ಟ್ ಕಾರ್ಯದರ್ಶಿ ಟಿ.ರಾಜು, ಪದಾಧಿಕಾರಿಗಳಾದ ಚಂದ್ರಶೆಟ್ಟಿ, ಎಸ್.ಡಿ.ಶ್ರೀಧರ್, ಸಿ.ರಾಮಣ್ಣ, ಎಂ.ನಾಗರಾಜು, ರಂಗಶೆಟ್ಟಿ, ಚಿಕ್ಕಸ್ವಾಮಿ ಮತ್ತಿತರರು ಉಪಸ್ಥಿತರಿದ್ದರು.

ಭಾವಪೂರ್ಣ ಶ್ರದ್ಧಾಂಜಲಿ



ಶ್ರೀಮತಿ
ಎಸ್. ಶಾರದಮ್ಮ ಬೋರೇಗೌಡ

ಇವರು ದಿನಾಂಕ 04.11.2025ನೇ ಮಂಗಳವಾರದಂದು ದೈವಾಧೀನರಾಗಿದ್ದು ಇದರ ನಿಮಿತ್ತ ಇವರ ಅಂತ್ಯ ಕ್ರಿಯೆಯನ್ನು ದಿನಾಂಕ 05.11.2025ನೇ ಬುಧವಾರ ಮಧ್ಯಾಹ್ನ 1 ಗಂಟೆಗೆ ಮೈಸೂರಿನ ಕುವೆಂಪುನಗರದ ಕಾವೇರಿ ಶಾಲೆಯ ಸಮೀಪ ಇರುವ ರುದ್ರಭೂಮಿಯಲ್ಲಿ ನೆರವೇರಿಸಲಾಗುತ್ತದೆ.

ಇಂತಿ ದುಃಖತಪ್ತ ಕುಟುಂಬಸ್ಥರು
ಸ್ಥಳ: ನಂ. 311, 13ನೇ ಮೇನ್, 3ನೇ ಕ್ರಾಸ್, ಸರಸ್ವತಿಪುರಂ, ಮೈಸೂರು.
ಮೊಬೈಲ್: 9448053230

6ನೇ ವರ್ಷದ ಸವಿನೆನಪು



ಶ್ರೀ ಸಿ.ಬಾಲಕೊಂಡಯ್ಯ
ಸಮಾಜ ಸೇವಕರು

ದುಃಖತಪ್ತರು : ವೆಂಕಟಲಕ್ಷ್ಮಮ್ಮ
ಮಾಜಿ ಉಪಮಹಾಪೌರರು ಮೈಸೂರು ಮಹಾನಗರ ಪಾಲಿಕೆ ಹಾಗೂ ದೇವಿ ಮತ್ತು ಮಕ್ಕಳು, ಮೊಮ್ಮಕ್ಕಳು ಹಾಗೂ ಕುಟುಂಬವರ್ಗದವರು

ಉತ್ತರ ಕ್ರಿಯಾದಿ ಆಹ್ವಾನ ಪತ್ರಿಕೆ



ಶ್ರೀ ಹೆಚ್.ಡಿ. ಯೋಗೇಂದ್ರ
ನಿವೃತ್ತ ಆಂಗ್ಲ ಭಾಷಾ ಉಪನ್ಯಾಸಕರು

ಇವರು ದಿ. 27.10.2025ನೇ ಸೋಮವಾರದಂದು ದೈವಾಧೀನರಾಗಿದ್ದು ತತ್ಸಂಬಂಧವಾಗಿ ಉತ್ತರ ಕ್ರಿಯಾದಿ ಕಾರ್ಯವನ್ನು,
ದಿ: 07-11-2025ನೇ ಶುಕ್ರವಾರ ಬೆಳಗ್ಗೆ 11.00 ಗಂಟೆಗೆ ನಮ್ಮ ಸ್ವಗೃಹ ಹರಿಹರಪುರ, ಕೆ.ಆರ್. ಪೇಟೆ ತಾಲೂಕಿನಲ್ಲಿ ಏರ್ಪಡಿಸಿರುವುದರಿಂದ ತಾವುಗಳು ಸಕಾಲಕ್ಕೆ ಆಗಮಿಸಿ ಮೃತರ ಆತ್ಮಕ್ಕೆ ಚಿರಶಾಂತಿ ಕೋರಬೇಕಾಗಿ ವಿನಂತಿ

ದುಃಖತಪ್ತರು: ಶ್ರೀಮತಿ ಗೀತಾ ಯೋಗೇಂದ್ರ, ಸಹೋದರರು, ಸಹೋದರಿ, ಮಕ್ಕಳು, ಅಳಿಯಂದಿರು ಮೊಮ್ಮಕ್ಕಳು, ಕುಟುಂಬವರ್ಗದವರು ಹಾಗೂ ಗ್ರಾಮಸ್ಥರು

ಭೋಜನ: ಮಧ್ಯಾಹ್ನ 1.00 ಗಂಟೆಗೆ

ಮೈಸೂರು ಜಿಲ್ಲಾ ಸಹಕಾರಿ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿ.,
ಮೆಗಾ ಡೈರಿ ಸಂಕೀರ್ಣ, ಬನ್ನೂರು ರಸ್ತೆ, ಆಲನಹಳ್ಳಿ ಅಂಚೆ, ಮೈಸೂರು - 570028.
ದೂರವಾಣಿ ಸಂಖ್ಯೆ:0821-2474475, ಫ್ಯಾಕ್ಸ್ ನಂ.0821-2474476,
ಇ-ಮೇಲ್ : purmymul@gmail.com

ಅಲ್ಪಾವಧಿ ಟೆಂಡರ್ ಪ್ರಕಟಣೆ (ಇ-ಟೆಂಡರ್ ಮುಖಾಂತರ ಮಾತ್ರ)

ಮೈಸೂರು ಜಿಲ್ಲಾ ಸಹಕಾರಿ ಹಾಲು ಒಕ್ಕೂಟಕ್ಕೆ ಅವಶ್ಯವಿರುವ ಈ ಕೆಳಕಂಡ ಸಾಮಾಗ್ರಿಗಳನ್ನು ಖರೀದಿಸಲು /ಸೇವೆಯನ್ನು ಪಡೆಯಲು ಅರ್ಹ ಟೆಂಡರ್‌ದಾರರಿಂದ ಇ-ಪ್ರೊಕ್ಯೂರ್‌ಮೆಂಟ್ ಮುಖೇನ ಟೆಂಡರನ್ನು ಆಹ್ವಾನಿಸಲಾಗಿದೆ. ಟೆಂಡರ್ ದಾಖಲಾತಿಗಳನ್ನು ಕರ್ನಾಟಕ ಸರ್ಕಾರದ ಇ-ಪ್ರೊಕ್ಯೂರ್‌ಮೆಂಟ್ ಪ್ಲಾಟ್‌ಫಾರಂ ಅದ https://kppp.karnataka.gov.in ಅಪ್‌ಲೋಡ್ ಮಾಡಬಹುದಾಗಿರುತ್ತದೆ.

ಕ್ರ ಸಂ	ಟೆಂಡರ್ ಪ್ರಕಟಣೆ	ಸೇವೆಯ ವಿವರ	ಟೆಂಡರ್ ಸಲ್ಲಿಸಲು ಕೊನೆಯ ದಿನಾಂಕ
1	KMF/2025-26/ SE4166	ಮೈಮುಲ್‌ನ ಸಿವಿಲ್ ಇಂಜಿನಿಯರಿಂಗ್ ಕೆಲಸಗಳಿಗಾಗಿ ಆರ್ಕಿಟೆಕ್ಟ್ / ಸಲಹೆಗಾರರು/ ಪಿ.ಎಂ.ಸಿ ಸೇವೆಗಳನ್ನು ಪಡೆಯುವ ಬಗ್ಗೆ.	10.11.2025 ಸಂಜೆ 5.00 ಗಂಟೆಯವರೆಗೆ
2	KMF/2025-26/ IND1765	ಒಕ್ಕೂಟಕ್ಕೆ ಅಗತ್ಯವಿರುವ ಜರ್ಕಿನ್ ಹಾಗೂ 25 ಕೆ.ವಿ.ಎ ಡಿ.ಜಿ ಸೆಟ್‌ಗಳನ್ನು ಖರೀದಿಸುವ ಬಗ್ಗೆ.	11.11.2025 ಸಂಜೆ 5.00 ಗಂಟೆಯವರೆಗೆ
3	KMF/2025-26/ IND1764	ಒಕ್ಕೂಟಕ್ಕೆ ಅಗತ್ಯವಿರುವ ಬಟರ್ ಡೊವ್ಲೆಕ್ಸ್ ಕರ್ಟನ್ ಹಾಗೂ ಪೆರಾಕ್ಸೈಡ್ ಅನ್ನು ದ್ವೈವಾರ್ಷಿಕ ದರ ಗುತ್ತಿಗೆ ಆಧಾರದಲ್ಲಿ ಹಾಗೂ ಕಾಸ್ಟಿಕ್ ಸೋಡ ಲೇ ಅನ್ನು ವಾರ್ಷಿಕ ದರ ಗುತ್ತಿಗೆ ಆಧಾರದಲ್ಲಿ ಖರೀದಿಸುವ ಬಗ್ಗೆ.	15.11.2025 ಸಂಜೆ 5.00 ಗಂಟೆಯವರೆಗೆ
4	KMF/2025-26/ IND1763	ಧೂತಾಳ ಬಿಚ್ ಮೈದಾನದಲ್ಲಿ ಒಕ್ಕೂಟದ ಮಿಲ್ಕ್ ಪಾರ್ಲರ್ ಸ್ಟಕ್ಚರ್ ಅನ್ನು ಅಳವಡಿಸುವ ಹಾಗೂ ಇತರೆ ಕೆಲಸಗಳನ್ನು ನಿರ್ವಹಿಸುವ ಬಗ್ಗೆ.	15.11.2025 ಸಂಜೆ 5.00 ಗಂಟೆಯವರೆಗೆ
5	KMF/2025-26/ IND1762	ಒಕ್ಕೂಟಕ್ಕೆ ಅಗತ್ಯವಿರುವ ಪ್ಯಾಲೆಟ್ಸ್‌ಗಳನ್ನು ವಾರ್ಷಿಕ ದರ ಗುತ್ತಿಗೆ ಆಧಾರದಲ್ಲಿ ಖರೀದಿಸುವ ಬಗ್ಗೆ.	15.11.2025 ಸಂಜೆ 5.00 ಗಂಟೆಯವರೆಗೆ

ಹೆಚ್ಚಿನ ಮಾಹಿತಿಗಾಗಿ ಖರೀದಿ ವಿಭಾಗವನ್ನು (6366430821, 9482231739) ಸಂಪರ್ಕಿಸಬಹುದಾಗಿದೆ.
ಸಹಿ/-, ವ್ಯವಸ್ಥಾಪಕ ನಿರ್ದೇಶಕರು
ಮೈಸೂರು ಜಿಲ್ಲಾ ಸಹಕಾರಿ ಹಾಲು ಒಕ್ಕೂಟ ನಿ.,

ಐ.ಎಸ್/ಐ.ಎಸ್.ಓ 9001-2015 & 14001-2015 ಐ.ಎಸ್.ಓ ಪ್ರಮಾಣಿತ ಸಂಸ್ಥೆ
ಕರ್ನಾಟಕ ರೇಷ್ಮೆ ಉದ್ಯಮಗಳ ನಿಗಮ ನಿಯಮಿತ
Mysore Silk ಘಟಕ: ರೇಷ್ಮೆ ನೇಯ್ಗೆ ಕಾರ್ಖಾನೆ,
ಮಾನಂದವಾಡಿ ರಸ್ತೆ, ಮೈಸೂರು 570 008
GSTNo.29AAACK6554 AIZP, Ph: 0821-2481803,
Fax: 0821-2483544, Email: gmksic@gmail.com
ಸಂ: ಕೆಎಸ್‌ಐಸಿ/ಎಸ್‌ಡಬ್ಲ್ಯೂಎಫ್/ಡಿಸಿಎ/2025-26/5292 ದಿ: 30.10.2025

ಮರು ಟೆಂಡರ್ ಹರಾಜು ಪ್ರಕಟಣೆ

ಕಿಟ್ಟದ ಜೊತೆಗೆ ಕಲ್ಲಿದ್ದಲು ಬೂದಿಯ ಮರು ಟೆಂಡರ್ ಹಾಗೂ ಹರಾಜು ಪ್ರಕಟಣೆ

ರೇಷ್ಮೆ ನೇಯ್ಗೆ ಕಾರ್ಖಾನೆ ಮೈಸೂರು ನಲ್ಲಿ ಲಭ್ಯವಿರುವ ಕಿಟ್ಟ ಮತ್ತು ಕಲ್ಲಿದ್ದಲು ಬೂದಿಯನ್ನು ಎಲ್ಲಿ ಹೇಗಿದೆಯೋ ಹಾಗೆ ತೂಕದ ಆಧಾರದ ಮೇಲೆ ಖರೀದಿಸಲು ಇಚ್ಛೆಯುಳ್ಳವರಿಂದ ಟೆಂಡರುಗಳನ್ನು ಆಹ್ವಾನಿಸಲಾಗಿದೆ. ಈ ಘಟಕಗಳಲ್ಲಿನ ಅಂದಾಜು ಪರಿಮಾಣ, ನಿಗಧಿಪಡಿಸಿದ ಇ.ಎಂ.ಡಿ ಮತ್ತು ಹರಾಜು ದಿನಾಂಕಗಳನ್ನು ಈ ಕೆಳಕಂಡಂತಿರುತ್ತದೆ.
ಕ್ರ.ಸಂ.1 **ಘಟಕದ ಹೆಸರು:** ರೇಷ್ಮೆ ನೇಯ್ಗೆ ಕಾರ್ಖಾನೆ, ಮೈಸೂರು. **ಅಂದಾಜು ಪರಿಮಾಣ:** 80 ಮೆಟ್ರಿಕ್ ಟನ್. **ನಿಗಧಿತ ಇ.ಎಂ.ಡಿ ರೂ.ಗಳಲ್ಲಿ:** ರೂ.20000/- ನಗದು ಅಥವಾ ಡಿ.ಡಿ. **ಟೆಂಡರ್ ಮತ್ತು ಹರಾಜಿನ ದಿನಾಂಕ:** 18.11.2025
ಇಚ್ಛೆಯುಳ್ಳ ಪಾನ್ ಕಾರ್ಡ್ ಹೊಂದಿರುವ ಬಿಡ್ಡುದಾರರು ಟೆಂಡರ್ ಫಾರಂಗಳನ್ನು ಮತ್ತು ನೀತಿ ನಿಯಮಾವಳಿಗಳ ಪ್ರತಿಗಳನ್ನು ಸಂಬಂಧಪಟ್ಟ ಘಟಕಗಳ ಪ್ರಧಾನ ವ್ಯವಸ್ಥಾಪಕರಿಂದ ಆಯಾ ಘಟಕಗಳ ಮುಂದೆ ಸೂಚಿಸಿರುವ ದಿನಾಂಕದೊಳಗೆ ಮಧ್ಯಾಹ್ನ 1.00 (ಒಂದು) ಗಂಟೆಯೊಳಗಾಗಿ ರೂ.100.00 ಗಳ ಅರ್ಜಿ ಶುಲ್ಕ (ತೆರಿಗೆ ಸೇರಿ) ಪಾವತಿ ಮಾಡಿ ಪಡೆಯತಕ್ಕದ್ದು. ಭರ್ತಿ ಮಾಡಿದ ಟೆಂಡರ್ ಗಳನ್ನು ಆಯಾ ಘಟಕದ ಪ್ರಧಾನ ವ್ಯವಸ್ಥಾಪಕರ ಹೆಸರಿಗೆ ರೂ.20,000/- ಗಳ ಡಿ.ಡಿ ಯನ್ನು ಅಥವಾ ಆಯಾ ಘಟಕದ ನಗದು ಪಾವತಿಸಿದ ರಶೀದಿಯನ್ನು ಲಗತ್ತಿಸಿ ಮಧ್ಯಾಹ್ನ 2.30 ಗಂಟೆಯೊಳಗಾಗಿ ಸಲ್ಲಿಸತಕ್ಕದ್ದು. ಅದೇ ದಿನ ಮಧ್ಯಾಹ್ನ 3.00 ಗಂಟೆಗೆ ಹರಾಜು ಮಾಡಲಾಗುವುದು ಹರಾಜು ನಡೆದ ತಕ್ಷಣ ಟೆಂಡರ್‌ಗಳನ್ನು ತೆರೆಯಲಾಗುವುದು. ಟೆಂಡರ್ ಫಾರಂಗಳನ್ನು ದಿ: 18.11.2025 ರಿಂದ ಆಯಾ ಘಟಕಗಳಲ್ಲಿ ವಿತರಿಸಲಾಗುವುದು. ಈ ಬಗ್ಗೆ ಯಾವುದೇ ವಿವಾದ ಬಂದರೆ ನಮ್ಮ ವ್ಯವಸ್ಥಾಪಕ ನಿರ್ದೇಶಕರ ತೀರ್ಮಾನವೇ ಅಂತಿಮವಾಗಿರುತ್ತದೆ.

DIPR/DDMYS/1161/KSMCA/636/2025-26 ಸಹಿ/- ಪ್ರಧಾನ ವ್ಯವಸ್ಥಾಪಕರು

ಮೈಸೂರು ಮಿತ್ರ 46
ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವು ಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸ ಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.

-ಜಾಹೀರಾತು ವ್ಯವಸ್ಥಾಪಕರು

ಮೈಸೂರು ಮಿತ್ರ ಬುಧವಾರ 5 ನವೆಂಬರ್ 2025

ಜಮೀನು ವಿವಾದ ಬಗೆಹರಿಯದ ಹಿನ್ನೆಲೆ

ಮಂಡ್ಯ ಡಿಸಿ ಕಚೇರಿ ಮುಂದೆ ಪೆಟ್ರೋಲ್ ಸುರಿದು ಬೆಂಕಿ ಹಚ್ಚಿಕೊಂಡು ಆತ್ಮಹತ್ಯೆಗೆ ಯತ್ನಿಸಿದ ರೈತ

ಮಂಡ್ಯ: ಜಮೀನು ವಿವಾದ ಬಗೆಹರಿಸಿಕೊಡದ ಹಿನ್ನೆಲೆಯಲ್ಲಿ ಬೇಸತ್ತ ರೈತನೋರ್ವ ನಗರದ ಜಿಲ್ಲಾಧಿಕಾರಿ ಕಚೇರಿ ಎದುರಿನ ಕಾವೇರಿ ಉದ್ಯಾನವನದಲ್ಲಿ ಪೆಟ್ರೋಲ್ ಸುರಿದು ಬೆಂಕಿ ಹಚ್ಚಿಕೊಂಡು ಆತ್ಮಹತ್ಯೆಗೆ ಯತ್ನಿಸಿರುವ ಘಟನೆ ಮಂಗಳವಾರ ಬೆಳಗ್ಗೆ ಸಂಭವಿಸಿದೆ.

ಕೆ.ಆರ್.ಪೇಟೆ ತಾಲೂಕು ಮೂಡನಹಳ್ಳಿ ಗ್ರಾಮದ ಮಂಜೇಗೌಡ (55) ಆತ್ಮಹತ್ಯೆಗೆ ಯತ್ನಿಸಿದ ರೈತ. ಸ್ಥಳೀಯರು ಆತನನ್ನು ರಕ್ಷಣೆ ಮಾಡಿ, ನಂತರ ಮಿಮ್ಸ್‌ಗೆ ದಾಖಲಿಸಿ ಚಿಕಿತ್ಸೆ ಕೊಡಿಸಲಾಗುತ್ತಿದೆ. ಆದಾಗ್ಯೂ ಶೇ.60ರಷ್ಟು ದೇಹ ಸುಟ್ಟು ಹೋಗಿರುವುದರಿಂದ ಸಾವು-ಬದುಕಿನ ನಡುವೆ ಹೋರಾಟ ಮಾಡುತ್ತಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಮೂಡನಹಳ್ಳಿ ಗ್ರಾಮದಲ್ಲಿ ಮಂಜೇಗೌಡರ ಕುಟುಂಬಕ್ಕೆ ಸೇರಿದ ಎರಡು ಎಕರೆ



ಸುಟ್ಟ ಗಾಯಗಳಾಗಿರುವ ಮಂಜೇಗೌಡ.

ಜಮೀನಿದ್ದು, ಕೆಲ ವರ್ಷದ ಹಿಂದೆಯೇ ಅದನ್ನು ಸರ್ಕಾರ ವಶಪಡಿಸಿಕೊಂಡು 49 ನಿವೇಶನ ಮಾಡಿ ಬಡವರಿಗೆ ಹಂಚಿಕೆ ಮಾಡಿದೆ. ಆದರೆ, ಇದಕ್ಕೆ ಪ್ರತಿಯಾಗಿ ತಮಗೆ ಯಾವುದೇ ಪರಿಹಾರ ಬಂದಿಲ್ಲ. ಜತೆಗೆ ಪರ್ಯಾಯ ಜಮೀನು ನೀಡಿಲ್ಲ. ಈ ಬಗ್ಗೆ ಹಲವು ಬಾರಿ ಜಿಲ್ಲಾಧಿಕಾರಿ ಹಾಗೂ ತಾಲೂಕು ಕಚೇರಿಗೆ ಮನವಿ ಕೊಟ್ಟರೂ ಪ್ರಯೋಜನವಾಗಿಲ್ಲ ಎನ್ನುವ ಆರೋಪ ಕೇಳಿಬಂದಿದೆ.

ಸೋಮವಾರವೂ ಜಿಲ್ಲಾಧಿಕಾರಿ ಕಚೇರಿಗೆ ಆಗಮಿಸಿದ ಮಂಜೇಗೌಡ ಮತ್ತೊಮ್ಮೆ ಮನವಿ ಸಲ್ಲಿಸಿದ್ದಾರೆಂದು ಹೇಳಲಾಗುತ್ತಿದೆ. ರಾತ್ರಿ ಉದ್ಯಾನದಲ್ಲೇ ಮಲಗಿದ್ದ ಈತ, ಬೆಳಗ್ಗೆ ಮೈಮೇಲೆ ಪೆಟ್ರೋಲ್ ಸುರಿದು ಬೆಂಕಿ ಹಚ್ಚಿಕೊಂಡಿದ್ದಾನೆ. ಇದನ್ನು ನೋಡಿದ ಸಾರ್ವಜನಿಕರು ತಕ್ಷಣ ನೀರು ಹಾಕಿ ಬೆಂಕಿ ನಂದಿಸಿದ್ದಾರೆ. ಮೊದಲು ವಿದ್ಯುತ್ ಶಾಕ್‌ನಿಂದಾಗಿ ಬೆಂಕಿ ಹೊತ್ತಿಕೊಂಡಿದೆ ಎಂದು ಹೇಳಿದ ಮಂಜೇಗೌಡ ನಂತರ ತಾನೇ ಪೆಟ್ರೋಲ್ ಸುರಿದುಕೊಂಡು ಬೆಂಕಿ ಹಚ್ಚಿಕೊಂಡಿದ್ದಾಗಿ ಹೇಳಿದ್ದಾನೆ.

ಪೊಲೀಸರು ಹಾಗೂ ಅಗ್ನಿಶಾಮಕ ಸಿಬ್ಬಂದಿ ಸ್ಥಳಕ್ಕೆ ಆಗಮಿಸಿ ಆತನನ್ನು ರಕ್ಷಿಸಿ ಚಿಕಿತ್ಸೆಗಾಗಿ ಜಿಲ್ಲಾಸ್ಪತ್ರೆಗೆ ದಾಖಲಿಸಿದ್ದು, ಸಾವು-ಬದುಕಿನ ನಡುವೆ ಹೋರಾಟ ನಡೆಸುತ್ತಿದ್ದಾನೆ.

ಶ್ರೀರಂಗಪಟ್ಟಣದಲ್ಲಿ ಅಕ್ರಮ ಗಣಿಗಾರಿಕೆಗೆ ಕಡಿವಾಣ ಹಾಕಿ

ಮಂಡ್ಯ: ಶ್ರೀರಂಗಪಟ್ಟಣ ತಾಲೂಕಿನಲ್ಲಿ ಎಗ್ಗಿಲ್ಲದೇ ನಡೆಯುತ್ತಿರುವ ಅಕ್ರಮ ಗಣಿಗಾರಿಕೆಗೆ ಕಡಿವಾಣ ಹಾಕಲು ವಿಫಲವಾಗಿರುವ ಅಧಿಕಾರಿಗಳು ಸ್ವತಃ ತಾವೇ ಗಣಿಗಾರಿಕೆಯಲ್ಲಿ ಶಾಮೀಲಾಗಿರುವ ಅನುಮಾನ ಮೂಡುತ್ತಿದೆ ಎಂದು ಕರ್ನಾಟಕ ರಾಜ್ಯ ರೈತ ಸಂಘದ ಜಿಲ್ಲಾಧ್ಯಕ್ಷ ಇಂಡುವಾಳು ಚಂದ್ರಶೇಖರ್ ಶಂಕೆ ವ್ಯಕ್ತಪಡಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೆಆರ್‌ಎಸ್ ಹಿತದೃಷ್ಟಿಯಿಂದ 20 ಕಿ.ಮೀ ವ್ಯಾಪ್ತಿಯಲ್ಲಿ ಯಾವುದೇ ಗಣಿಗಾರಿಕೆ ನಡೆಸದಂತೆ ಆದೇಶ ನೀಡಿದೆ. ಆದರೂ ತಾಲೂಕಿನಲ್ಲಿ ನಡೆಯುತ್ತಿರುವ ಗಣಿಗಾರಿಕೆ ತಡೆಯಲು ತಾಲೂಕು ಆಡಳಿತ ಮತ್ತು ಭೂ ಮತ್ತು ಗಣಿ ವಿಜ್ಞಾನ ಇಲಾಖೆಯ ಅಧಿಕಾರಿಗಳು ನಿರ್ಲಕ್ಷ್ಯ ತೋರಿ, ನ್ಯಾಯಾಲಯ ಆದೇಶದ ಸ್ಪಷ್ಟ ಉಲ್ಲಂಘನೆ ಮಾಡಿದ್ದಾರೆ ಎಂದು ಆರೋಪಿಸಿದರು.

ಕಾಳೇನಹಳ್ಳಿ- ಆಲಗೂಡು ಗ್ರಾಮಗಳ ಹಾದು ಹೋಗುವ ವಿ.ಸಿ.ಸಂಪರ್ಕ ನಾಲೆಯ 1.2 ಕಿಮಿ ಉದ್ದದ ಸುರಂಗದ ಪಕ್ಕದಲ್ಲಿ



ಸುದ್ದಿಗೋಷ್ಠಿಯಲ್ಲಿ ಮಾತನಾಡುತ್ತಿರುವ ರೈತ ಮುಖಂಡರು.

20 ಕ್ವಾರಿಗಳು ಅಕ್ರಮವಾಗಿ ನಡೆಯುತ್ತಿದ್ದು, 5 ಕ್ರಷರ್‌ಗಳು ಎಗ್ಗಿಲ್ಲದೇ ರಿಗ್ ಬೋರ್ ಬ್ಲಾಸ್ಟಿಂಗ್ ಮಾಡುತ್ತಿದ್ದಾರೆ. ಇದರಿಂದ ನಾಲಾ ಸುರಂಗ ಕುಸಿಯುವ ಭೀತಿ ಎದುರಾಗಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಈ ಸುರಂಗಕ್ಕೆ ಹಾನಿಯಾದರೆ ಬನ್ನೂರು, ಟಿ.ನರಸೀಪುರ, ಮಳವಳ್ಳಿ ಭಾಗದ ರೈತರಿಗೆ ನೀರು ಪೂರೈಸಲು ಸಾಧ್ಯವಾಗುವುದಿಲ್ಲ. ಕಾಳೇನಹಳ್ಳಿ ಸರ್ವೇ ನಂ.21ರಲ್ಲಿ 7.20 ಎಕರೆಯ ಕೆರೆ ಮತ್ತು ಗೋಮಾಳ ಅತಿಕ್ರಮಿಸಿ ಅಕ್ರಮವಾಗಿ ಗಣಿಗಾರಿಕೆ ಮಾಡುತ್ತಿರುವುದು ಇದಕ್ಕೆ ಕಾರಣವಾಗಿದೆ. ಇದರಿಂದ ಪರಿಸರ, ಪ್ರಾಣಿ, ಪಕ್ಷಿ ಸಂಕುಲ ಸೇರಿದಂತೆ ಮೇವು, ಕುಡಿಯುವ ನೀರಿಗೆ ತೊಡಕು ಎದುರಾಗಲಿದೆ ಎಂದು ದೂರಿದರು.

ಪ್ರಧಾನ ಕಾರ್ಯದರ್ಶಿ ಎಸ್.ಮಂಜೇಶ್ ಗೌಡ ಮಾತನಾಡಿ, ಜಿಲ್ಲಾಧಿಕಾರಿಗಳು, ತಹಸೀಲ್ದಾರ್ ಅವರಿಗೆ ಮನವಿ ಮಾಡಿದಾಗ ಅಧಿಕಾರಿಗಳು ಗಣಿಗಾರಿಕೆ ಮುಚ್ಚಿಸಿದ್ದರು. ಆದರೆ ಅದು ಈಗ ಕಡತಗಳಲ್ಲಿ ಮಾತ್ರ ಸ್ಥಗಿತಗೊಂಡು, ರಾತ್ರೋರಾತ್ರಿ ಮರು ಪ್ರಾರಂಭವಾಗಿದೆ ಎಂದು ಹೇಳಿದರು.

ಶ್ರೀರಂಗಪಟ್ಟಣ ವ್ಯಾಪ್ತಿಯಲ್ಲಿ 24 ಕ್ವಾರಿಗಳಿಗೆ ಅನುಮತಿ ಪಡೆಯಲಾಗಿದೆ. 17 ಬ್ಲಾಸ್ಟಿಂಗ್ ಕ್ರಷರ್‌ಗಳಿಗೆ ಅನುಮತಿ ಪಡೆಯಲಾಗಿದೆ. ಆದರೆ ಅಕ್ರಮವಾಗಿ 52ಕ್ಕೂ ಹೆಚ್ಚು ಕ್ರಷರ್‌ಗಳು ನಡೆಯುತ್ತಿವೆ. ಇದರ ಹಿಂದೆ ಮಂಡ್ಯ ಹಾಗೂ ಮೈಸೂರಿನ ರಾಜಕಾರಣಿಗಳ ಕೈವಾಡವಿದೆ ಎಂದು ಗಂಭೀರ ಆರೋಪ ಮಾಡಿದರು.

ಇದು ಮಾತ್ರವಲ್ಲದೆ, ಅನುಮತಿ ಪಡೆದದ್ದಕ್ಕಿಂತ ಹೆಚ್ಚು ನೈಸರ್ಗಿಕ ಸಂಪನ್ಮೂಲ ದೋಚಿ, ರಾಜಧನ ಲೂಟಿ ಮಾಡಲಾಗುತ್ತಿದೆ. ಅಕ್ರಮ ಗಣಿಗಾರಿಕೆ, ಕ್ರಷರ್ ಸಂಬಂಧ ಕ್ರಮ ಕೈಗೊಳ್ಳಲು ಮತ್ತೊಮ್ಮೆ ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಲಾಗುವುದು. ಮತ್ತೆ ಮುಂದುವರೆದಲ್ಲಿ ಹೋರಾಟ ಮಾಡಲಾಗುವುದು. ಸಮಸ್ಯೆ ಬಗೆಹರಿಯದಿದ್ದರೆ ನ್ಯಾಯಾಲಯದ ಮೊರೆ ಹೋಗುವುದಾಗಿ ಇದೇ ವೇಳೆ ತಿಳಿಸಿದರು.

ಗೋಷ್ಠಿಯಲ್ಲಿ ಜಿಲ್ಲಾ ಉಪಾಧ್ಯಕ್ಷ ನಾಗೇಂದ್ರಸ್ವಾಮಿ, ಶ್ರೀರಂಗಪಟ್ಟಣ ತಾಲೂಕು ಕಾರ್ಯಾಧ್ಯಕ್ಷ ಡಿ.ಎಸ್.ಚಂದ್ರಶೇಖರ್, ಡಿಎಸ್‌ಎಸ್ ಜಿಲ್ಲಾ ಸಂಚಾಲಕ ರವಿಚಂದ್ರ, ಡಿಎಸ್‌ಎಸ್ ಮುಖಂಡ ಕುಕ್ಕೂರ್ ರಾಜು ಇದ್ದರು.

ಕಬ್ಬು ಬೆಳೆಗಾರರ ಬಾಕಿ ಹಣವನ್ನು ಶೀಘ್ರವಾಗಿ ಪಾವತಿಸಿ

ಮಂಡ್ಯ, ನ.4- ಜಿಲ್ಲೆಯ ಕಬ್ಬು ಬೆಳೆಗಾರರ ಬಾಕಿ ಹಣವನ್ನು ಸಕ್ಕರೆ ಕಾರ್ಖಾನೆಗಳು ಯಾವುದೇ ವಿಳಂಬ ಮಾಡದೆ ಶೀಘ್ರವಾಗಿ ಪಾವತಿ ಮಾಡಬೇಕು ಇಲ್ಲವಾದಲ್ಲಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ಡಾ.ಕುಮಾರ ಹೇಳಿದರು.

ಮಂಗಳವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಜಿಲ್ಲೆಯ ರೈತರ ಸಮಸ್ಯೆಗಳನ್ನು ಚರ್ಚಿಸಲು ಆಯೋಜಿಸಲಾಗಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಮೈಷುಗರ್ ಕಾರ್ಖಾನೆಯ ಬಾಯ್ಲರ್ ಹೌಸ್ ನಿರ್ಮಾಣದ ಕುರಿತು ಡಿ.ಪಿ.ಆರ್ ಕಳುಹಿಸಲಾಗಿದೆ. ಶೀಘ್ರವಾಗಿ ಮೈಷುಗರ್ ಕಾರ್ಖಾನೆಯಲ್ಲಿ ಬಾಯ್ಲರ್ ಸ್ಥಾಪನೆ ಮಾಡಲಾಗುವುದು ಎಂದರು.

ಸಿಡಿಎಸ್ ನಾಲೆ ಸುಮಾರು 400 ವರ್ಷಗಳ ಹಳೆಯ ನಾಲೆಯಾಗಿದೆ. ಪ್ರಸ್ತುತ ಸಿಡಿಎಸ್ ನಾಲೆಯ ಪ್ರಮುಖ ಅಭಿವೃದ್ಧಿ ಕಾರ್ಯಗಳನ್ನು ಮಾಡಲಾಗುತ್ತಿದೆ. ರೈತರು ಸಹಕರಿಸಬೇಕು. ಶ್ರೀರಂಗಪಟ್ಟಣದಲ್ಲಿ ಸಿಡಿಎಸ್ ನಾಲೆ ಒಡೆದು ರೈತರಿಗೆ ಉಂಟಾಗಿದ್ದ ಬೆಳೆ ಹಾನಿ ಕುರಿತಾಗಿ ಸಮೀಕ್ಷೆ ಮಾಡಲಾಗಿದ್ದು, ಪರಿಹಾರದ ಪೋರ್ಟಲ್‌ನಲ್ಲಿ ಮಾಹಿತಿ ದಾಖಲಿಸಲಾಗಿದೆ. ಮುಂದಿನ ದಿನಗಳಲ್ಲಿ ಅರ್ಹ ಫಲಾನುಭವಿಗಳ ಖಾತೆಗೆ ಪರಿಹಾರದ ಹಣ ನೇರವಾಗಿ ಜಮೆಯಾಗುತ್ತದೆ ಎಂದು ಹೇಳಿದರು. ಬ್ಯಾಂಕ್‌ಗಳು ರೈತರಿಗೆ ಸರ್ಕಾರ ನೀಡುವ ಪರಿಹಾರದ ಹಣ



ರೈತರ ಸಮಸ್ಯೆ ಕುರಿತು ಜಿಲ್ಲಾಧಿಕಾರಿ ಡಾ.ಕುಮಾರ್ ಚರ್ಚಿಸಿದರು.

ಹಾಗೂ ಗೌರವಧನವನ್ನು ಬ್ಯಾಂಕುಗಳ ಸಾಲಕ್ಕೆ ಮನ್ನ ಮಾಡಿಕೊಳ್ಳುವಂತಿಲ್ಲ, ನಾವು ಆರ್‌ಬಿಐ ನಿಯಮಗಳನ್ನು ಉಲ್ಲಂಘಿಸಿ ಏನನ್ನು ಮಾಡುವಂತಿಲ್ಲ. ರೈತರು ಬ್ಯಾಂಕ್‌ಗಳಲ್ಲಿ ತಮಗೆ ಉಂಟಾಗುತ್ತಿರುವ ಸಮಸ್ಯೆಗಳನ್ನು ಪಟ್ಟಿ ಮಾಡಿ ಕೊಡಿ. ಆರ್‌ಬಿಐ ನಿಯಮಗಳ ಸಡಿಲೀಕರಣಕ್ಕೆ ಶಿಫಾರಸ್ಸು ಮಾಡಿ ಮನವಿ ಸಲ್ಲಿಸುತ್ತೇವೆ ಎಂದು ಹೇಳಿದರು.

ರೈತರಿಗೆ ಬಾಧಿಸುತ್ತಿರುವ ಮೈಕ್ರೋ ಫೈನಾನ್ಸ್‌ಗಳಿಗೆ ಈಗಾಗಲೇ ಎರಡು ಸಭೆ ನಡೆಸಿ ಸೂಚನೆ ನೀಡಲಾಗಿದೆ, ಮೈಕ್ರೋ ಫೈನಾನ್ಸ್‌ಗಳು ಜಿಲ್ಲಾಡಳಿತದ ಸೂಚನೆಯಂತೆ ಕಾರ್ಯನಿರ್ವಹಿಸುತ್ತಿರುವ ಕುರಿತು ಪರಿಶೀಲನೆ ನಡೆಸಲಾಗುವುದು ಎಂದು ಹೇಳಿದರು.

ಕೆ.ಆರ್‌ಎಸ್ 20 ಕಿ.ಮೀ ವ್ಯಾಪ್ತಿಯಲ್ಲಿ ಬ್ಲಾಸ್ಟಿಂಗ್ ಮಾಡಲು ಅವಕಾಶ ಕೊಟ್ಟಿಲ್ಲ, ಸದರಿ ವ್ಯಾಪ್ತಿಯಲ್ಲಿ ಯಾರೇ ಬ್ಲಾಸ್ಟಿಂಗ್ ಮಾಡುತ್ತಿದ್ದರೆ ಅವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು, ಜಿಲ್ಲೆಯಲ್ಲಿ ಯಾರೇ ಅಕ್ರಮವಾಗಿ ಗಣಿಗಾರಿಕೆ ಮಾಡಿದರೆ ಮುಲಾಜಿಲ್ಲದೆ ಕಠಿಣ ಕಾನೂನು ಕ್ರಮ ಜಾರಿಗೊಳಿಸಲಾಗುವುದು ಎಂದು ಎಚ್ಚರಿಸಿದರು.

ಜಿಲ್ಲೆಯಲ್ಲಿ ಈಗಾಗಲೇ ತಾತ್ಕಾಲಿಕ ಭತ್ತ, ರಾಗಿ ನೋಂದಣಿ ಕೇಂದ್ರಗಳನ್ನು ತೆರೆಯಲಾಗಿದೆ, ಶಾಶ್ವತವಾಗಿ ನೋಂದಣಿ ಕೇಂದ್ರಗಳನ್ನು ತೆರೆಯಲು ಸರ್ಕಾರಕ್ಕೆ ಶಿಫಾರಸ್ಸು ಮಾಡಲಾಗಿದೆ, ಪ್ರಸ್ತುತ ರಾಗಿ ಕೊಡಲು ರೈತರು ಮುಂದಾಗಿದ್ದಾರೆ. ಭತ್ತಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ರೈತರು ನೋಂದಣಿ ಆಗಿಲ್ಲ, ನೋಂದಣಿಗೆ ಇನ್ನೂ ದಿನಗಳು ಬಾಕಿ ಇರುವುದರಿಂದ ರೈತರು ಭತ್ತಕ್ಕೆ ನೋಂದಣಿ ಮಾಡಿಕೊಳ್ಳುವ ನಿರೀಕ್ಷೆ ಇದೆ ಎಂದು ಹೇಳಿದರು.

ಸಭೆಯಲ್ಲಿ ಮೈಶುಗರ್ ಅಧ್ಯಕ್ಷ ಸಿ.ಡಿ. ಗಂಗಾಧರ್, ಕಾವೇರಿ ನೀರಾವರಿ ನಿಗಮದ ರಘುರಾಮ್, ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಅಶೋಕ್, ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಪುಷ್ಪ, ಲೀಡ್ ಬ್ಯಾಂಕ್ ವ್ಯವಸ್ಥಾಪಕ ಅರುಣ್ ಕುಮಾರ್, ರೈತ ಮುಖಂಡರುಗಳಾದ ಸುನಂದಾ ಜಯರಾಂ, ಇಂಡುವಾಳು ಚಂದ್ರಶೇಖರ್, ಮಂಜೇಶ್‌ಗೌಡ ಉಪಸ್ಥಿತರಿದ್ದರು.

ಡಿಸಿಸಿ ಬ್ಯಾಂಕ್ ನಿರ್ದೇಶಕರಿಗೆ ಅಭಿನಂದನೆ



ಮಂಡ್ಯ ಜಿಲ್ಲಾ ಸಹಕಾರಿ ಕೇಂದ್ರ ಬ್ಯಾಂಕ್(ಡಿಸಿಸಿ) ನಿರ್ದೇಶಕರಾಗಿ ಆಯ್ಕೆಯಾದ ಜೆಡಿಎಸ್ ಬೆಂಬಲಿತ ನಿರ್ದೇಶಕ ಎಚ್.ಸಿ.ಪುಟ್ಟಸ್ವಾಮೀಗೌಡ (ಹೊಸಕೋಟೆ ಪುಟ್ಟಣ್ಣ) ಅವರನ್ನು ಪಟ್ಟಣದಲ್ಲಿ ಜೆಡಿಎಸ್ ಮುಖಂಡರು ಹಾಗೂ ಹಳೇಬೀಡು ಗ್ರಾಮ ವ್ಯಾಪ್ತಿಯ ಮುಖಂಡರು ಅಭಿನಂದಿಸಿದರು.

ನ.9, ಮೇಲುಕೋಟೆಗೆ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಭೇಟಿ

ಮೇಲುಕೋಟೆ: ರಾಮಾನುಜರ ಕರ್ಮಭೂಮಿ ಮೇಲುಕೋಟೆಯ ಚೆಲುವ ನಾರಾಯಣಸ್ವಾಮಿ ದರ್ಶನಕ್ಕೆ ನೂತನ ಉಪ ರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ನ.9 ರಂದು ಆಗಮಿಸಲಿದ್ದಾರೆ.



ಭಾನುವಾರ ಬೆಳಗ್ಗೆ 10 ಗಂಟೆಗೆ ಮೇಲುಕೋಟೆಗೆ ಆಗಮಿಸಲಿರುವ ಉಪರಾಷ್ಟ್ರಪತಿಗಳು ಚೆಲುವನಾರಾಯಣಸ್ವಾಮಿ ರಾಮಾನುಜಚಾರ್ಯರ ದರ್ಶನ ಪಡೆಯಲಿದ್ದಾರೆ. ದೇವಾಲಯದಲ್ಲಿ ಸಾಂಪ್ರದಾಯಿಕ ಪೂರ್ಣಕುಂಭ ಸ್ವಾಗತ ಬೀಳ್ಕೊಡುವಾಗ ರಾಜಾಶೀರ್ವಾದದ ಕಾರ್ಯಕ್ರಮ ಇರಲಿದೆ. 11ಗಂಟೆಗೆ ಮೇಲುಕೋಟೆಯಿಂದ ನಿರ್ಗಮಿಸಲಿದ್ದಾರೆ.



ಜಿಲ್ಲಾಧಿಕಾರಿ ಮತ್ತು ಎಸ್ಪಿ ಮೇಲುಕೋಟೆಗೆ ಭೇಟಿ ನೀಡಿ ಸಿದ್ಧತೆ ಪರಿಶೀಲಿಸಿದರು.

ಉಪರಾಷ್ಟ್ರಪತಿಗಳ ಭೇಟಿಯ ಹಿನ್ನೆಲೆಯಲ್ಲಿ ಮಂಡ್ಯ ಜಿಲ್ಲಾಧಿಕಾರಿ ಡಾ.ಕುಮಾರ್ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ ಮೇಲುಕೋಟೆಗೆ ಭೇಟಿ ನೀಡಿ ಪ್ರಾಥಮಿಕ ಆರೋಗ್ಯ ಕೇಂದ್ರದ ಮೈದಾನದಲ್ಲಿ ಹೆಲಿಪ್ಯಾಡ್ ನಿರ್ಮಿಸಲು ಉದ್ದೇಶಿಸಿರುವ ಸ್ಥಳ ಪರಿಶೀಲಿಸಿದರು. ಹೆಲಿಪ್ಯಾಡನ್ನು ಅಚ್ಚುಕಟ್ಟಾಗಿ ಸಿದ್ಧಗೊಳಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದರು. ಹೆಲಿಪ್ಯಾಡ್‌ನಿಂದ ದೇವಾಲಯಕ್ಕೆ ನೇರವಾಗಿ ಕರೆತಂದು ಪೂರ್ಣ ಕುಂಭಸ್ವಾಗತ ನೀಡಿ ದರ್ಶನ ಮಾಡಿಸಲು ದೇವಾಲಯದ ಕಾರ್ಯನಿರ್ವಾಹಕ ಅಧಿಕಾರಿ ಶೀಲಾ ಮತ್ತು ಪಾರುಪತ್ತೇಗಾರ್ ಸ್ಥಾನಾಚಾರ್ಯ ಶ್ರೀನಿವಾಸನರಸಿಂಹನ್ ಗುರೂಜಿಯೊಂದಿಗೆ ಚರ್ಚಿಸಿ ವ್ಯವಸ್ಥಿತ ದರ್ಶನಕ್ಕೆ ಸೂಕ್ತ ವ್ಯವಸ್ಥೆ ಮಾಡಿಕೊಳ್ಳಬೇಕು ಉಪರಾಷ್ಟ್ರಪತಿಗಳು ಬರುವ ರಸ್ತೆಮಾರ್ಗದಲ್ಲಿ ಯಾವುದೇ ಲೋಪವಾಗದಂತೆ ಎಚ್ಚರವಹಿಸಬೇಕು ಎಂದರು.

ನ.9ರಂದು ಮೇಲುಕೋಟೆಯಲ್ಲಿ ಭಕ್ತರಿಗೆ ದರ್ಶನಕ್ಕೆ ಅವಕಾಶವಿಲ್ಲ

ಭಾರತದ ಉಪರಾಷ್ಟ್ರಪತಿಗಳು ಮೇಲುಕೋಟೆ ಚೆಲುವನಾರಾಯಣ ಸ್ವಾಮಿ ದೇವಾಲಯಕ್ಕೆ ಭೇಟಿ ನೀಡುತ್ತಿರುವ ಕಾರಣ ಭಾನುವಾರ(ನ.9) ಬೆಳಗಿನ 9 ಗಂಟೆಯಿಂದ ಉಪರಾಷ್ಟ್ರಪತಿಗಳು ದೇವರದರ್ಶನ ಮುಗಿಸಿ ದೇವಾಲಯದಿಂದ ನಿರ್ಗಮಿಸುವವರೆಗೆ ಭಕ್ತರಿಗೆ ದೇವರದರ್ಶನ ಇರುವುದಿಲ್ಲ ಎಂದು ಜಿಲ್ಲಾಧಿಕಾರಿ ಡಾ.ಕುಮಾರ್ ತಿಳಿಸಿದ್ದಾರೆ.

ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಡಾ.ಎನ್.ಎಸ್. ರಾಮೇಗೌಡರಿಗೆ ಕೆಎಸ್‌ಎಫ್ ವತಿಯಿಂದ ಸನ್ಮಾನ



ಕೃಷಿಕ್ ಸರ್ವೋದಯ ಫೌಂಡೇಶನ್(ಕೆಎಸ್‌ಎಫ್) ಮೈಸೂರು ಶಾಖೆ ವತಿಯಿಂದ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಡಾ.ಎನ್.ಎಸ್.ರಾಮೇಗೌಡ ಅವರನ್ನು ಆತ್ಮೀಯವಾಗಿ ಅಭಿನಂದಿಸಲಾಯಿತು.

ಮೈಸೂರು, ನ4- ಕೃಷಿಕ್ ಸರ್ವೋದಯ ಫೌಂಡೇಶನ್(ಕೆಎಸ್‌ಎಫ್) ಮೈಸೂರು ಶಾಖೆ ವತಿಯಿಂದ ಕನ್ನಡ ರಾಜ್ಯೋತ್ಸವ ಪ್ರಶಸ್ತಿಗೆ ಭಾಜನರಾದ ಶಾಖೆಯ ಅಧ್ಯಕ್ಷ ಡಾ.ಎನ್.ಎಸ್.ರಾಮೇಗೌಡ ಅವರನ್ನು ಆತ್ಮೀಯವಾಗಿ ಅಭಿನಂದಿಸಲಾಯಿತು.

ಶಾಖೆಯ ಆವರಣದಲ್ಲಿ ಮಂಗಳವಾರ ನಡೆದ ಕಾರ್ಯಕ್ರಮದಲ್ಲಿ ಕಾರ್ಯಕಾರಿ ಸಮಿತಿ ವತಿಯಿಂದ ಡಾ.ಎನ್.ಎಸ್.ರಾಮೇಗೌಡರಿಗೆ ಮೈಸೂರು ಪೇಟ ತೊಡಿಸಿ ಸಾಂಪ್ರದಾಯಿಕವಾಗಿ ಅಭಿನಂದಿಸಿ, ಶುಭಾಶಯ ಕೋರಲಾಯಿತು. ಈ ವೇಳೆ ಕೆಎಸ್‌ಎಫ್ ಮೈಸೂರು ಶಾಖೆ ಕಾರ್ಯದರ್ಶಿ ಹೆಚ್. ಕಿಶೋರ್‌ಚಂದ್ರ, ಅಕಾಡೆಮಿಕ್ ನಿರ್ದೇಶಕ ಪ್ರೊ.ಬಿ. ಶಂಕರ್ ಹಾಗೂ ಟ್ರಸ್ಟಿ ಕೆ.ಎಂ. ಚಂದ್ರೇಗೌಡ ಅವರು ಮಾತನಾಡಿ, ಡಾ. ರಾಮೇಗೌಡರ ಜೀವನ ಮತ್ತು ಸಾಧನೆ ಜೊತೆಗೆ ಶೈಕ್ಷಣಿಕ ಕ್ಷೇತ್ರಕ್ಕೆ ನೀಡಿರುವ ಅಪೂರ್ವ ಕೊಡುಗೆಯನ್ನು ಕೊಂಡಾಡಿದರು. ಇದೇ ವೇಳೆ ರಾ.ರಾಮೇಗೌಡರು ಕೆಎಸ್‌ಎಫ್ ಬಳಗಕ್ಕೆ ಧನ್ಯವಾದ ತಿಳಿಸಿದರು.

ಕಾರ್ಯಕ್ರಮದಲ್ಲಿ ಉಪಾಧ್ಯಕ್ಷ ಬಿ.ಕೆ.ಶಿವಣ್ಣ, ಖಜಾಂಚಿ ಎಸ್.ವಿ.ಗೌಡಪ್ಪ, ಕಾರ್ಯಕಾರಿ ಸದಸ್ಯರಾದ ಪಿ.ಶಾರದಮ್ಮ, ಪ್ರೊ.ಬಿ.ಕೆ.ಜಗದೀಶ್, ಎಂ.ಕೆ.ಜಯರಾಮ, ಕೆ.ಟಿ.ವೀರಪ್ಪ, ಉಪನ್ಯಾಸಕರು, ಸಂಯೋಜಕರು, ಪೋಷಕರು, ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

ನ.11ಕ್ಕೆ ಮಾಲೂರು ಮರು ಮತಎಣಿಕೆ

ಬೆಂಗಳೂರು, ನ.4: ತೀವ್ರ ಕುತೂಹಲಕ್ಕೆ ಕಾರಣವಾಗಿರುವ ಮಾಲೂರು ವಿಧಾನಸಭೆ ಕ್ಷೇತ್ರದ ಮರು ಮತ ಎಣಿಕೆ ಇದೇ ನವೆಂಬರ್ 11ರಂದು ನಡೆಯಲಿದೆ. ದಿನಾಂಕ ನಿಗದಿಪಡಿಸಿ ಕರ್ನಾಟಕ ಚುನಾವಣಾ ಆಯೋಗವು, ಜಿಲ್ಲಾ ಚುನಾವಣಾಧಿಕಾರಿ ಹಾಗೂ ಕೋಲಾರ ಜಿಲ್ಲಾಧಿಕಾರಿಗೆ ಪತ್ರದ ಮೂಲಕ ಸೂಚನೆ ನೀಡಿದೆ.

ಮರು ಮತ ಎಣಿಕೆಗೆ ಆಗ್ರಹಿಸಿ ಕೋರ್ಟ್ ಮೆಟ್ಟಿಲೇರಿದ್ದ ಪರಾಜಿತ ಅಭ್ಯರ್ಥಿ ಮಂಜುನಾಥ್ ಗೌಡ, ತಹಶೀಲ್ದಾರ್ ಕೆಲ ಚುನಾವಣಾ ಸಾಮಗ್ರಿಗಳ ಅಕ್ರಮವಾಗಿ ವಶಕ್ಕೆ ಪಡೆದಿರುವ ಬಗ್ಗೆ ಧ್ವನಿ ಎತ್ತಿದ್ದರು. ಅಲ್ಲದೇ ಈ ಬಗ್ಗೆ ಪತ್ರ ಬರೆದು ಚುನಾವಣಾ ಆಯೋಗದ ಗಮನಕ್ಕೆ ತಂದಿದ್ದರು. ಇದರ ಬೆನ್ನಲ್ಲೇ ಇದೀಗ ಚುನಾವಣೆ ಆಯೋಗವು ಸಹ ಕೋಲಾರ ಜಿಲ್ಲಾಧಿಕಾರಿಗೆ ಪತ್ರ ಬರೆದಿದ್ದು, ನ.11 ರಂದು ಮರು ಮತ ಎಣಿಕೆ ಮಾಡುವಂತೆ ಸೂಚಿಸಿದ್ದಾರೆ. ಹಾಲಿ ಕಾಂಗ್ರೆಸ್ ಶಾಸಕ ನಂಜೇಗೌಡ ಇಲ್ಲಿ 248 ಮತಗಳಿಂದ ಗೆದ್ದಿದ್ದರು.

ಮೂರನೇ ಪುಟದಿಂದ

ಇ-ಸ್ವತ್ತು ಸಮರ್ಪಕ ಅನುಷ್ಠಾನ

ವಿಡಿಯೋ ಸಂವಾದ ಸಭೆಯಲ್ಲಿ ಸೂಚನೆ ನೀಡಿರುವಂತೆ ಕಾರ್ಯಕ್ರಮ ಯಶಸ್ಸಿಗೆ ಕ್ರಮ ಕೈಗೊಂಡು, ಗ್ರಾಮ ಪಂಚಾಯತಿಗಳನ್ನು ದತ್ತು ತೆಗೆದುಕೊಂಡು ಅವುಗಳ ಸರ್ವತೋಮುಖ ಅಭಿವೃದ್ಧಿಗೆ ಮೊದಲ ಆದ್ಯತೆ ನೀಡಬೇಕೆಂದು ಅಧಿಕಾರಿಗಳಿಗೆ ತಿಳಿಸಿದರು.

ದೂರುಗಳ ಗಂಭೀರವಾಗಿ ಪರಿಗಣಿಸಿ: ಸಾರ್ವಜನಿಕರು ನೀಡುವ ದೂರುಗಳನ್ನು ಗಂಭೀರವಾಗಿ ಪರಿಗಣಿಸಿ, ಅವುಗಳ ನಿವಾರಣೆಗೆ ಕ್ರಮ ತೆಗೆದುಕೊಳ್ಳಿ. ಮೇಜಿನಿಂದ ಮೇಜಿಗೆ ಪತ್ರ ರವಾನೆ ಆದ ಮಾತ್ರಕ್ಕೆ ಸಾರ್ವಜನಿಕರ ಸಮಸ್ಯೆ ಬಗೆಹರಿಯುವುದಿಲ್ಲ, ಅವರ ಸಮಸ್ಯೆಗೆ ಪ್ರಾಮಾಣಿಕ ಪ್ರಯತ್ನ ಮಾಡಿ, ಕೆಳಹಂತದ ಅಧಿಕಾರಿಗಳಿಗೆ ಕಳುಹಿಸಿದ ದೂರುಗಳ ಸ್ಥಿತಿ ಗತಿಗಳ ಬಗ್ಗೆ ವಿವರಗಳನ್ನು ಪಡೆಯಿರಿ. ಸಮಸ್ಯೆ ಬಗೆಹರಿದ ನಂತರ ದೂರುದಾರರಿಗೆ ಉತ್ತರ ನೀಡುವ ಪರಿಪಾಠ ಬೆಳೆಸಿಕೊಳ್ಳಿ ಎಂದು ಸಲಹೆ ನೀಡಿದರು. ಸಭೆಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಕಾರ್ಯದರ್ಶಿ ಸಮೀರ್ ಶುಕ್ಲಾ, ಪಂಚಾಯತ್ ರಾಜ್ ಇಲಾಖೆ ಆಯುಕ್ತೆ ಡಾ.ಅರುಂಧತಿ ಚಂದ್ರಶೇಖರ್ ಹಾಗೂ ಅಧಿಕಾರಿಗಳು ಪಾಲ್ಗೊಂಡಿದ್ದರು.

ದಕ್ಷಿಣ ಭಾರತ ನಗರ ಸಹಕಾರಿ ಬ್ಯಾಂಕ್‌ಗಳ ಶೃಂಗಸಭೆ

ಬ್ಯಾಂಕ್‌ಗಳ ವಹಿವಾಟಲ್ಲಿ ತಂತ್ರಜ್ಞಾನ ಮಹತ್ವಕಾರಿ

ಶಾಸಕ ಜಿ.ಡಿ. ಹರೀಶ್‌ಗೌಡ ಅಭಿಮತ

ಮೈಸೂರು, ನ.4- ಕರ್ನಾಟಕ ರಾಜ್ಯ ಸಹಕಾರ ಪಟ್ಟಣ ಬ್ಯಾಂಕುಗಳ ಮಹಾಮಂಡಲದ ವತಿಯಿಂದ ಮೈಸೂರಿನ ರ‍್ಯಾಡಿಸನ್ ಬ್ಲೂ ಹೋಟೆಲ್ ಸಭಾಂಗಣದಲ್ಲಿ ಕ್ರೆಸ್ಟ್ ಇನ್ಫೋ ಮೀಡಿಯಾ ಸಹಯೋಗದೊಂದಿಗೆ 2025ನೇ ಸಾಲಿನ ದಕ್ಷಿಣ ಭಾರತ ನಗರ ಸಹಕಾರಿ ಬ್ಯಾಂಕಿಂಗ್ ಶೃಂಗಸಭೆ ಜರುಗಿತು. ಕಾರ್ಯಕ್ರಮವನ್ನು ಹುಣಸೂರು ಶಾಸಕರೂ ಆದ ಎಂಸಿಡಿಸಿಸಿ ಬ್ಯಾಂಕ್ ಮಾಜಿ ಅಧ್ಯಕ್ಷ ಜಿ.ಡಿ.ಹರೀಶ್‌ಗೌಡ ಉದ್ಘಾಟಿಸಿದರು.

ನಂತರ ಮಾತನಾಡಿದ ಅವರು, ಸ್ಪರ್ಧಾತ್ಮಕ ಯುಗದಲ್ಲಿ ಬ್ಯಾಂಕಿಂಗ್ ಕ್ಷೇತ್ರದಲ್ಲಿ ಮಾಹಿತಿ ತಂತ್ರಜ್ಞಾನ ಮಹತ್ವದ್ದಾಗಿದೆ. ತಂತ್ರಜ್ಞಾನದ ಸಹಕಾರದಿಂದ ದೇಶದ ಎಲ್ಲೋ ಮೂಲೆಯಲ್ಲಿರುವ ಶಾಖಾ ಕಚೇರಿಯ ವಹಿವಾಟನ್ನು ಡಾಟಾ ಮೂಲಕ ತಿಳಿದುಕೊಳ್ಳಬಹುದಾಗಿದೆ. ಹಾಗಾಗಿ ಬ್ಯಾಂಕುಗಳು ಯಶಸ್ವಿಯಾಗಿ ನಡೆದುಕೊಂಡು ಬರುತ್ತಿವೆ ಎಂದರು.

ತಾವು ಮೈಸೂರು ಮತ್ತು ಚಾಮರಾಜನಗರ ಜಿಲ್ಲಾ ಸಹಕಾರ ಬ್ಯಾಂಕ್ ಅಧ್ಯಕ್ಷರಾಗಿದ್ದಾಗ ನ್ಯಾಯಾಲಯದ ಆದೇಶದ ಪ್ರತಿಯೊಂದಿಗೆ ಅಮೀನರು ಜಪ್ತಿಗೆ ಬರುತ್ತಿದ್ದ ಪ್ರಸಂಗಗಳನ್ನು ಸ್ಮರಿಸಿದ ಅವರು, ನಂತರ ಬ್ಯಾಂಕ್ ಲಾಭದಾಯಕ ಹಾದಿಯಲ್ಲಿ ಸಾಗಿತು. 650 ಕೋಟಿ ಇದ್ದ ಠೇವಣಿ 1000 ಕೋಟಿ ದಾಟಿತು. ಮೈಸೂರು-ಚಾಮರಾಜನಗರ ಜಿಲ್ಲೆಯ 1.50 ಲಕ್ಷ



ದಕ್ಷಿಣ ಭಾರತ ನಗರ ಸಹಕಾರಿ ಬ್ಯಾಂಕಿಂಗ್ ಶೃಂಗಸಭೆಯನ್ನು, ಹುಣಸೂರು ಶಾಸಕರೂ ಆದ ಎಂಸಿಡಿಸಿಸಿ ಬ್ಯಾಂಕ್ ಮಾಜಿ ಅಧ್ಯಕ್ಷ ಜಿ.ಡಿ.ಹರೀಶ್‌ಗೌಡ ಉದ್ಘಾಟಿಸಿದರು.

ರೈತರಿಗೆ 1600 ಕೋಟಿ ಶೂನ್ಯ ಬಡ್ಡಿ ದರದ ಸಾಲವನ್ನು ನೀಡಲಾಯಿತು.

ಯಾವುದೇ ಬ್ಯಾಂಕ್ ಗ್ರಾಹಕರ ನಂಬಿಕೆಯನ್ನು ಕಳೆದುಕೊಂಡರೆ ಅದು ಪುನಃ ಚೇತರಿಸಿಕೊಳ್ಳುವುದು ಕಷ್ಟಸಾಧ್ಯವಾದ ಕೆಲಸ. ಪಟ್ಟಣ ಸಹಕಾರ ಬ್ಯಾಂಕುಗಳು ಜನರಿಗೆ ಸಾಲವನ್ನು ರಾಷ್ಟ್ರೀಕೃತ ಬ್ಯಾಂಕುಗಳಿಗಿಂತ ಸುಲಭವಾಗಿ ನೀಡುವ ಮೂಲಕ ಜನಸ್ನೇಹಿಯಾಗಿ ಕೆಲಸ ಮಾಡುತ್ತಿವೆ. ಸಾಲ ವಸೂಲಾತಿಯಲ್ಲೂ ಬೆರಳೆಣಿಕೆಯಷ್ಟು ಮಾತ್ರ ಹಿಂದೆ ಇದ್ದು, ಉಳಿದಂತೆ ವಸೂಲಾತಿ ಉತ್ತಮವಾಗಿದೆ. ಹಾಗಾಗಿ ಬ್ಯಾಂಕುಗಳು ಲಾಭವನ್ನು ಗಳಿಸುತ್ತಿವೆ. ಸಾಲದ ವಿಚಾರದಲ್ಲಿ ಆಡಳಿತ ಮಂಡಳಿಯವರು ಸದಸ್ಯರ ನಂಬಿಕೆಯನ್ನು ಉಳಿಸಿಕೊಳ್ಳುವ ರೀತಿ ಕಾರ್ಯ ನಿರ್ವಹಿಸುವ ಮೂಲಕ ಪ್ರಗತಿಯ ಜೊತೆಗೆ ಡಿವಿಡೆಂಟ್ ವಿತರಣಾ ವ್ಯವಸ್ಥೆಯಾದರೆ ಅಭಿವೃದ್ಧಿ ಸಾಧ್ಯವಾಗುತ್ತದೆ ಎಂದರು.

ರಾಜ್ಯ ಪಟ್ಟಣ ಸಹಕಾರ ಮಹಾಮಂಡಳದ ನಿರ್ದೇಶಕರಾದ ಎಸ್‌ಬಿಎಂ ಮಂಜು ಮಾತನಾಡಿ, ನಮ್ಮ ರಾಜ್ಯದಲ್ಲಿ ಸಹಕಾರ ಚಳುವಳಿಯ ಬೆಳವಣಿಗೆಯಲ್ಲಿ ಸಹಕಾರಿ ಭೀಷ್ಮ ಎಂದೇ ಹೆಸರು ಪಡೆದಿದ್ದ ಕೆ.ಹೆಚ್.ಪಾಟೀಲರನ್ನು ಸದಾ ಸ್ಮರಿಸಬೇಕು. ಅವರ ಪುತ್ರರು, ಹಾಲಿ ರಾಜ್ಯದ ಕಾನೂನು ಸಚಿವ ಕೆ.ಹೆಚ್. ಪಾಟೀಲ್, ಬ್ಯಾಂಕುಗಳ ಉಳಿವಿಗಾಗಿ ಸಹಕಾರಿ ಕಾಯ್ದೆಗಳ ತಿದ್ದುಪಡಿಯ ಮೂಲಕ ಕಾನೂನಿನ ಶಕ್ತಿಯನ್ನು ನೀಡಿ ಬೆನ್ನೆಲುಬಾಗಿ ಖಾಸಗಿ ಬ್ಯಾಂಕುಗಳ ಸ್ಪರ್ಧಾತ್ಮಕ ಮಾರುಕಟ್ಟೆಯಲ್ಲಿ ಸಹಕಾರಿ ಕ್ಷೇತ್ರದ ಬ್ಯಾಂಕುಗಳ ಉಳಿಸಿಕೊಳ್ಳಲು ಸಹಕಾರ ನೀಡಿದ್ದಾರೆ ಎಂದರು

ಕಾರ್ಯಕ್ರಮದಲ್ಲಿ ರಾಜ್ಯ ಪಟ್ಟಣ ಸಹಕಾರ ಮಹಾಮಂಡಳ ನಿರ್ದೇಶಕರಾದ ಬಿ.ಕೋದಂಡ ರಾಮು, ವೀರಮ್ಮ, ಎಂ.ಬಿ.ಮಂಜೇಗೌಡ, ದಿ ಮೈಸೂರು ಕೋ ಆಪರೇಟಿವ್ ಬ್ಯಾಂಕ್ ಅಧ್ಯಕ್ಷ ಜೆ.ಯೋಗೇಶ್ ಮಹಿಳಾ ಬ್ಯಾಂಕ್ ಅಧ್ಯಕ್ಷರಾದ ಮಂಜುಳಾ ಮಾನಸ, ಮರ್ಚೆಂಟ್ ಬ್ಯಾಂಕ್ ಉಪಾಧ್ಯಕ್ಷ ಮಹೇಶ್, ಕನ್ಯಾಕಾ ಪರಮೇಶ್ವರಿ ಬ್ಯಾಂಕ್ ಅಧ್ಯಕ್ಷ ಸಂದೀಪ್, ಮುಸ್ಲಿಂ ಕೋ-ಆಪರೇಟಿವ್ ಬ್ಯಾಂಕ್ ಅಧ್ಯಕ್ಷ ಶೌಕತ್ ಪಾಷಾ, ಗ್ರಾಜುಯೇಟ್ ಬ್ಯಾಂಕ್ ಅಧ್ಯಕ್ಷ ಶ್ರೀನಿವಾಸ, ನವನಗರ ಬ್ಯಾಂಕ್ ಅಧ್ಯಕ್ಷ ಬಸಂತ್ ನಂಜಪ್ಪ, ಕೆ.ಆರ್.ಬ್ಯಾಂಕ್ ಅಧ್ಯಕ್ಷ ಬಸಪ್ಪ, ಹೆಚ್.ವಾಸು, ದಿ ಮೈಸೂರು ಕೋ ಆಪರೇಟಿವ್ ಬ್ಯಾಂಕ್ ಉಪಾಧ್ಯಕ್ಷ ಟಿ.ರವಿ, ನಿರ್ದೇಶಕರಾದ ಪಡುವಾರಹಳ್ಳಿ ಎಂ.ರಾಮಕೃಷ್ಣ, ಎನ್.ಯೋಗಾನಂದ್, ಆರ್.ಸೋಮಣ್ಣ, ಹರೀಶ್, ಎಂ.ಶಿವಪ್ರಕಾಶ್, ಪಿ.ಗೀತಾ, ಲಕ್ಷ್ಮೀ ದಿನೇಶ್, ಎಸ್.ಆರ್.ಸುನಿಲ್, ವೆಂಕಟೇಶ, ಕೃಷ್ಣಪ್ರಸಾದ್, ಸುಷ್ಮಾ ಹಾಗೂ ಮಹಾಮಂಡಳ, ಉಪ ಕಾರ್ಯನಿರ್ವಾಹಕ ಅನಿಲ್ ಕೊರೋಸು, ಕೇರಳ, ಆಂಧ್ರಪ್ರದೇಶ, ತಮಿಳುನಾಡು ತೆಲಂಗಾಣದ ವಿವಿಧ ಸಹಕಾರಿ ಬ್ಯಾಂಕುಗಳ ನಿರ್ದೇಶಕರು, ಸಂಪನ್ಮೂಲ ವ್ಯಕ್ತಿಗಳು, ಸಂಘಟನೆಯ ಆಯೋಜಕರು, ಸದಸ್ಯರು ಮತ್ತಿತರ ಪ್ರಮುಖರು ಹಾಜರಿದ್ದರು.

ರೈತನ ಬಲಿ ಪಡೆದ ಹುಲಿ ಸೆರೆಗೆ ಕಾರ್ಯಾಚರಣೆ

ಕಣ್ಣಾಮುಚ್ಚಾಲೆಗೆ ಕಂಗಾಲಾದ ಅರಣ್ಯ ಸಿಬ್ಬಂದಿ

ಕಾರ್ಯಾಚರಣೆ ಸ್ಥಳಕ್ಕೆ ಹೆಚ್‌ಓಪಿಸಿಸಿಎಫ್ ಮೀನಾಕ್ಷಿ ನೇಗಿ ಭೇಟಿ

ಮೈಸೂರು, ನ4(ಎಂಟಿವೈ)- ಸರಗೂರು ತಾಲೂಕಿನ ಕಾಡಂಚಿನ ಗ್ರಾಮಗಳ ಪಾಳು ಭೂಮಿಯಲ್ಲಿ ಕಣ್ಣಾಮುಚ್ಚಾಲೆ ಆಡುತ್ತಿರುವ ಹುಲಿಗಳ ಸೆರೆಗೆ ರೈತರು, ಗ್ರಾಮಸ್ಥರು ಹಾಗೂ ಹಿರಿಯ ಅಧಿಕಾರಿಗಳಿಂದ ವ್ಯಾಪಕ ಒತ್ತಡ ತರುತ್ತಿರುವುದು ಕೂಂಬಿಂಗ್ ಕಾರ್ಯಾಚರಣೆಯಲ್ಲಿ ತೊಡಗಿರುವ ಸಿಬ್ಬಂದಿಗೆ ಸವಾಲಾಗಿದೆ.


ಸರಗೂರು ತಾಲೂಕಿನ ವ್ಯಾಪ್ತಿಯಲ್ಲೇ ಹುಲಿ ದಾಳಿ ಮೂರು ಪ್ರಕರಣ ದಾಖಲಾಗಿ, ಅದರಲ್ಲಿ ಇಬ್ಬರು ಮೃತಪಟ್ಟಿದ್ದರೆ, ಓರ್ವ ಗಂಭೀರವಾಗಿ ಗಾಯಗೊಂಡು ಇನ್ನೂ ಆಸ್ಪತ್ರೆಯಲ್ಲಿಯೇ ಚಿಕಿತ್ಸೆ ಪಡೆಯುತ್ತಿದ್ದಾರೆ. ಹುಲಿ ದಾಳಿ ಖಂಡಿಸಿ ಕಾಡಂಚಿನ ಗ್ರಾಮಗಳ ಜನರು ಮಾಡಿದ ಹೋರಾಟದ ಫಲವಾಗಿ ಈಗಾಗಲೇ ಎರಡು ಹುಲಿ ಸೆರೆ ಹಿಡಿದು, ಮತ್ತೆರಡು ಮರಿಗಳನ್ನು ರಕ್ಷಣೆ ಮಾಡಲಾಗಿದೆ. ಕೂಂಬಿಂಗ್ ತಂಡ, ಅ.26 ರಂದು ಮುಳ್ಳೂರು ಸಮೀಪದ ಬೆಣ್ಣೆಗೆರೆ ಬಳಿ ರಾಜಶೇಖರ್ ಎಂಬುವರ ಬಲಿ ಪಡೆದ ಹುಲಿ ಸೆರೆಗೆ ಹಗಲು-ರಾತ್ರಿ ಶ್ರಮಿಸುತ್ತಿದೆ. ಆದರೆ, ಚಾಣಾಕ್ಷ ಹುಲಿ ಕಾಡಂಚಿನ ಪಾಳು ಭೂಮಿಯ ಪೊದೆಗಳಲ್ಲಿ ಅಡಗಿ ಅರಣ್ಯ ಇಲಾಖೆಗೆ ಸವಾಲಾಗಿ ಪರಿಣಮಿಸಿದೆ.

ಹುಲಿ ಪತ್ತೆಗಾಗಿ 14 ತಂಡದಲ್ಲಿ 150ಕ್ಕೂ ಹೆಚ್ಚು ಸಿಬ್ಬಂದಿ ಕೂಂಬಿಂಗ್ ಕಾರ್ಯಾಚರಣೆಯಲ್ಲಿ ತೊಡಗಿದ್ದಾರೆ. ಅಲ್ಲದೆ, ವಿವಿಧ ಸ್ಥಳಗಳಲ್ಲಿ 46 ಕ್ಯಾಮರಾ ಟ್ರ್ಯಾಪ್, 10 ಲೈವ್ ಕ್ಯಾಮರಾ ಅಳವಡಿಸಿ ಹುಲಿಯ ಚಲನವಲನವನ್ನು ಪರಿಶೀಲಿಸಲಾಗುತ್ತಿದೆ. ಜೊತೆಗೆ ಥರ್ಮಲ್ ಡ್ರೋನ್ ಬಳಸಿ ಹುಲಿ ಪತ್ತೆಗೆ ಕ್ರಮ ಕೈಗೊಳ್ಳಲಾಗಿದೆ. ಅಲ್ಲದೆ, ತುಮಕೂರು ಮಾದರಿಯ 2 ಬೋನ್, 3 ಸಾಮಾನ್ಯ ಬೋನ್ ಇಟ್ಟು ಹುಲಿ ಸೆರೆಗೆ ಕ್ರಮ ಕೈಗೊಳ್ಳಲಾಗಿದೆ. ಆದರೂ ಹುಲಿ ಸುಳಿವಿಲ್ಲ.

ಹಿರಿಯ ಅಧಿಕಾರಿಗಳ ಸಭೆ: ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ಹೆಡಿಯಾಲ ವಲಯ ಕಚೇರಿಯಲ್ಲಿ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳ ಮುಖ್ಯಸ್ಥ (ಹೆಚ್‌ಓಪಿಸಿಸಿಎಫ್) ಡಾ. ಮೀನಾಕ್ಷಿ ನೇಗಿ ತುರ್ತು ಸಭೆ ನಡೆಸಿ, ರೈತನ ಮೇಲೆ ದಾಳಿ ನಡೆಸಿರುವ ಹುಲಿ ಸೆರೆಗೆ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ವಿವರಿಸಿದರು.

ಕಾಡಂಚಿನ ಗ್ರಾಮಗಳ ಜನರೊಂದಿಗೆ ಉತ್ತಮ ಬಾಂಧವ್ಯ ಹೊಂದಿರಬೇಕು. ಹೆಚ್ಚಿನ ಜಾಗೃತಿ ಮೂಡಿಸುವ ಕಾರ್ಯ ರೂಪಿಸಬೇಕು. ಅರಣ್ಯ ಪ್ರದೇಶಕ್ಕೆ ಕಾಡಂಚಿನ ಜನ ಹೋಗದಂತೆ ಅರಿವು ಮೂಡಿಸಲು ಇನ್ನೋವೇಟಿವ್ ಜಾಗೃತಿ ಫಲಕವನ್ನು ಅಳವಡಿಸಬೇಕು. ಆ ಮೂಲಕ ಮಾನವ-ವನ್ಯಜೀವಿ ಸಂಘರ್ಷದ ಬಗ್ಗೆ ಮನವರಿಕೆ ಮಾಡಿಕೊಡಬೇಕು. ಕಾರ್ಯಾಚರಣೆ ವೇಳೆ ಪೊಲೀಸ್, ಕಂದಾಯ ಇಲಾಖೆ ಸೇರಿದಂತೆ ವಿವಿಧ ಇಲಾಖೆಯೊಂದಿಗೆ ಸಮನ್ವಯತೆ ಕಾಯ್ದುಕೊಳ್ಳಬೇಕು. ಪ್ರಮುಖವಾಗಿ ಸಿಎಫ್‌ಗೆ ಎಸಿಎಫ್, ಆರ್‌ಎಫ್‌ಓ ಸಹಕಾರ ನೀಡುವ ಮೂಲಕ ಮಾನವ-ವನ್ಯಜೀವಿ ಸಂಘರ್ಷ ತಡೆಗೆ ಮುಂದಾಗಬೇಕು ಎಂದು ಸೂಚನೆ ನೀಡಿದರು.

ಸ್ಥಳಕ್ಕೆ ಭೇಟಿ: ಸಭೆ ಬಳಿಕ ಅ.26ರಂದು ಮುಳ್ಳೂರು ಸಮೀಪದ ಬೆಣ್ಣೆಗೆರೆ ಬಳಿ ರಾಜಶೇಖರ್ ಎಂಬುವರ ಮೇಲೆ ಹುಲಿ ದಾಳಿ ನಡೆಸಿದ ಸ್ಥಳಕ್ಕೆ ಹೆಚ್‌ಓಪಿಸಿಸಿಎಫ್ ಡಾ.ಮೀನಾಕ್ಷಿ ನೇಗಿ, ಅಧಿಕಾರಿಗಳೊಂದಿಗೆ ಭೇಟಿ ನೀಡಿ ಪರಿಶೀಲಿಸಿದರು. ಈ ವೇಳೆ ಕೂಂಬಿಂಗ್ ಕಾರ್ಯಾಚರಣೆಯಲ್ಲಿ ತೊಡಗಿರುವ ಸಿಬ್ಬಂದಿಗಳೊಂದಿಗೂ ಸಮಾಲೋಚಿಸಿದರು.



ಸರಗೂರು ತಾಲೂಕಿನ ಮುಳ್ಳೂರು ಸಮೀಪದ ಬೆಣ್ಣೆಗೆರೆ ಬಳಿ ರೈತ ರಾಜಶೇಖರ್ ಮೇಲೆ ಹುಲಿ ದಾಳಿ ನಡೆಸಿದ ಸ್ಥಳಕ್ಕೆ ಹೆಚ್‌ಓಪಿಸಿಸಿಎಫ್ ಡಾ.ಮೀನಾಕ್ಷಿ ನೇಗಿ, ಅಧಿಕಾರಿಗಳೊಂದಿಗೆ ಭೇಟಿ ನೀಡಿ ಪರಿಶೀಲಿಸಿದರು.

ಅರಣ್ಯದಂಚಿನ ಅಲ್ಲದೆ, ಸಿಬ್ಬಂದಿಗಳ ವರ್ಗಾವಣೆಯ ಕೌನ್ಸಿಲಿಂಗ್ ಪ್ರಕ್ರಿಯೆಯಲ್ಲಿ ಕೆಲ ಲೋಪವಿದೆ. ಯಾವುದೇ ತಾಲೂಕಿನಲ್ಲಿ ವಾಸಿಸುತ್ತಿರುವ ಅರಣ್ಯ ಸಿಬ್ಬಂದಿತವರು ತಾಲೂಕಿನಲ್ಲಿ ಕಾರ್ಯನಿರ್ವಹಿಸಲು ಅವಕಾಶ ನೀಡದಂತೆ ನಿಯಮ ರೂಪಿಸಲಾಗಿದೆ. ಅದನ್ನು ತೆಗೆದು ಹಾಕಬೇಕು. ಅದೇ ತಾಲೂಕಿನಲ್ಲಿ ನಿಯೋಜನೆಗೊಂಡರೆ ಮಾನವ-ವನ್ಯಜೀವಿ ಸಂಘರ್ಷದಂತಹ ಘಟನೆ ವೇಳೆ ಸ್ಥಳೀಯರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಕಾರ್ಯನಿರ್ವಹಿಸಬಹುದು. ಆ ಕಾರಣಕ್ಕಾಗಿ ಕೌನ್ಸಿಲಿಂಗ್ ನೀತಿಯಲ್ಲಿ ಕೆಲ ಮಾರ್ಪಾಡು ಮಾಡುವಂತೆ ಹೆಚ್‌ಓಪಿಸಿಸಿಎಫ್ ಡಾ.ಮೀನಾಕ್ಷಿ ನೇಗಿ ಅವರಲ್ಲಿ ಮನವಿ ಮಾಡಿದ್ದು, ಪರಿಶೀಲಿಸುವುದಾಗಿ ಡಾ. ನೇಗಿ ಭರವಸೆ ನೀಡಿದ್ದಾರೆ.

ಈ ಸಂದರ್ಭದಲ್ಲಿ ಅರಣ್ಯ ಇಲಾಖೆಯ ವನ್ಯಜೀವಿ ವಿಭಾಗದ ಎಪಿಸಿಸಿಎಫ್ ಮನೋಜ್ ತ್ರಿಪಾಠಿ, ಬೆಂಗಳೂರು ಅರಣ್ಯ ಸಂರಕ್ಷಣೆ ವಿಭಾಗದ ಸಿಸಿಎಫ್ ಪ್ರಾಚಿ ಗಂಗ್ವಾರ್, ಹುಲಿ ಯೋಜನೆಯ ಸಿಎಫ್ ಡಾ.ಪಿ.ರಮೇಶ್ ಕುಮಾರ್, ಮೈಸೂರು ವೃತ್ತದ ಸಿಎಫ್ ರವಿಶಂಕರ್, ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ಸಿಎಫ್ ಎಸ್. ಪ್ರಭಾಕರನ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಮೈಸೂರು ವಿಮಾನ ನಿಲ್ದಾಣದ ಪ್ರಥಮ ಮಹಿಳಾ ನಿರ್ದೇಶಕಿಯಾಗಿ ಪಿ.ವಿ.ಉಷಾಕುಮಾರಿ ನೇಮಕ


ಪಿ.ವಿ.ಉಷಾಕುಮಾರಿ

ಮೈಸೂರು,ನ.4(ಆರ್‌ಕೆ)– ಮೈಸೂರು ವಿಮಾನ ನಿಲ್ದಾಣದ ಪ್ರಥಮ ಮಹಿಳಾ ನಿರ್ದೇಶಕಿಯಾಗಿ ಪಿ.ವಿ.ಉಷಾಕುಮಾರಿ ನೇಮಕಗೊಂಡಿದ್ದು, ಅವರು ನಿರ್ಗಮಿತ ನಿರ್ದೇಶಕ ಜೆ.ಆರ್. ಅನೂಪ್ ಅವರಿಂದ ಅಕ್ಟೋಬರ್ 31ರಂದು ಅಧಿಕಾರ ವಹಿಸಿಕೊಂಡರು.

ಕೇರಳದ ಕೋಜಿಕೊಡ್ ಕಾರಿಪುರ್ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದ ಡೆಪ್ಯೂಟಿ ಜನರಲ್ ಮ್ಯಾನೇಜರ್ ಆಗಿ ಸೇವೆ ಸಲ್ಲಿಸುತ್ತಿದ ಅವರನ್ನು ಮೈಸೂರಿನ ಮಂಡಕಳ್ಳಿ ವಿಮಾನ ನಿಲ್ದಾಣದ ನಿರ್ದೇಶಕರನ್ನಾಗಿ ವರ್ಗಾವಣೆ ಮಾಡಲಾಗಿದೆ. ಮೂಲತಃ ಕೇರಳದ ತಿರುವನಂತಪುರಂ ಅನಯರದವರಾದ ಉಷಾ ಕುಮಾರಿ, ತಿರುವನಂತಪುರಂ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದ ಸೆಕ್ಯೂರಿಟಿ ಸೂಪರ್‌ವೈಸರ್ ಆಗಿ ಮೊದಲು ವೃತ್ತಿ ಆರಂಭಿಸಿದ್ದರು. ಚೆನ್ನೈ ಏರ್‌ಪೋರ್ಟ್‌ನಲ್ಲಿ ಸೇವೆ ಸಲ್ಲಿಸುತ್ತಿದ್ದಾಗ ಏರ್‌ಪೋರ್ಟ್ ಆಪರೇಷನ್ಸ್ ಕಂಟ್ರೋಲ್ ಸೆಂಟರ್ ಸ್ಥಾಪಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದ ಅವರು 2015ರ ಪ್ರವಾಹದ ವೇಳೆ ಸಂಕಷ್ಟದಲ್ಲಿದ್ದವರನ್ನು ಸುರಕ್ಷಾ ಸ್ಥಳಕ್ಕೆ ರವಾನಿಸುವಲ್ಲಿ ಯಶಸ್ವಿಯಾಗಿದ್ದರು. 2018ರ ಕೇರಳ ಪ್ರವಾಹದ ವೇಳೆಯು ತಿರುವನಂತಪುರಂ ವಿಮಾನ ನಿಲ್ದಾಣದಿಂದ ಪ್ರಯಾಣಿಕರನ್ನು ಸ್ಥಳಾಂತರಿಸುವ ಕಾರ್ಯದಲ್ಲಿ ಯಶಸ್ವಿಯಾಗಿ, ಸಂಕಷ್ಟದಲ್ಲಿದ್ದವರನ್ನು ಪಾರು ಮಾಡಿದ್ದರು.

2025ರ ಪ್ರಯಾಗ್‌ರಾಜ್ 'ಮಹಾಕುಂಭ'ಮೇಳದ ಸಂದರ್ಭದಲ್ಲೂ ಏರ್ ಪೋರ್ಟ್ ಆಪರೇಷನ್‌ನಲ್ಲಿ ಸಾಧನೆ ಮಾಡಿದ್ದ ಉಷಾ ಕುಮಾರಿ ಅವರು, ಕ್ಯಾಲಿಕಟ್ ಏರ್‌ಪೋರ್ಟ್‌ನ ಏರ್‌ಸೈಡ್ ಆಪರೇಷನ್ಸ್ ಮುಖ್ಯಸ್ಥರಾಗಿ ಗಣನೀಯ ಸೇವೆ ಸಲ್ಲಿಸಿದ್ದರಲ್ಲದೇ, ಮಲ್ಲಪುರಂ ಜಿಲ್ಲಾಡಳಿತದ ಸಹಕಾರದೊಂದಿಗೆ ವಿಮಾನ ನಿಲ್ದಾಣದ ಸುತ್ತಲಿನ ಪರಿಸರ ಸಂರಕ್ಷಣೆ ಯಲ್ಲೂ ಪ್ರಮುಖ ಪಾತ್ರ ವಹಿಸಿದ್ದರು.

2006ರಲ್ಲಿ ಮೈಸೂರಿನ ಮಂಡಕಳ್ಳಿ ವಿಮಾನ ನಿಲ್ದಾಣ ಯೋಜನೆ ಆರಂಭವಾಯಿತು. ಇದು, 2010ರಲ್ಲಿ ಉದ್ಘಾಟನೆಗೊಂಡಿತು. ಮೊದಲ ಬಾರಿ ಪ್ರಭಾರ ನಿರ್ದೇಶಕರಾಗಿ ಎನ್‌ಎನ್‌ಎನ್ ರಾವ್ ಕಾರ್ಯನಿರ್ವಹಿಸಿದ್ದರು. ನಂತರ ರಾಜೀವ್ ಕುಮಾರ್‌ಗುಪ್ತ, ಸಿ.ಮಂಜುನಾಥ್, ಮನೋಜ್‌ಕುಮಾರ್ ಸಿಂಗ್, ಆರ್ ಮಂಜನಾಥ್ ಮತ್ತು ಜೆ.ಆರ್.ಅನೂಪ್ ವಿಮಾನ ನಿಲ್ದಾಣದ ನಿರ್ದೇಶಕರಾಗಿ ಸೇವೆ ಸಲ್ಲಿಸಿದ್ದಾರೆ. ಇದೀಗ ಉಷಾ ಕುಮಾರಿ ಅವರು 7ನೇ ನಿರ್ದೇಶಕರಾಗಿ ಅಧಿಕಾರ ವಹಿಸಿಕೊಂಡಿದ್ದಾರೆ.

ಪೂರ್ಣ ಪ್ರಮಾಣದ ಒಳ ಮೀಸಲಾತಿ ಜಾರಿ ಮಾಡಿ; ಇಲ್ಲ ಕುರ್ಚಿ ಖಾಲಿ ಮಾಡಿ

ಸಂವಿಧಾನ ಸಮರ್ಪಣಾ ದಿನವಾದ ನ.26 ಸಿಎಂ ತವರು ಸಿದ್ದರಾಮನಹುಂಡಿ, ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್‌ಸಿಎಂ ತವರು ನರಸೀಪುರದಿಂದ ಜಾಥಾ

ಮೈಸೂರು,ನ.4(ಜಿಎ)–ಒಳ ಮೀಸಲಾತಿಯ ವರ್ಗೀಕರಣ ಜಾರಿ ಮಾಡಲು ಸರ್ಕಾರ ಉದ್ದೇಶಪೂರ್ವಕವಾಗಿ ವಿಳಂಬ ಮಾಡುತ್ತಿರುವುದನ್ನು ಖಂಡಿಸಿ, ಸಂವಿಧಾನ ಸಮರ್ಪಣಾ ದಿನದ ಅಂಗವಾಗಿ ನ.26ರಂದು ಮುಖ್ಯಮಂತ್ರಿಗಳ ತವರೂರು ಸಿದ್ದರಾಮನ ಹುಂಡಿ ಮತ್ತು ಮೈಸೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಹೆಚ್.ಸಿ.ಮಹದೇವಪ್ಪ ಅವರ ಕ್ಷೇತ್ರ ಟಿ.ನರಸೀಪುರದಿಂದ ಮೈಸೂರಿಗೆ ಜಾಥಾ ಹಮ್ಮಿಕೊಳ್ಳಲಾಗಿದೆ ಎಂದು, ಸಾಮಾಜಿಕ ನ್ಯಾಯಕ್ಕಾಗಿ ಒಳಮೀಸಲಾತಿ ಹೋರಾಟ ಸಮಿತಿಯ ಮುಖಂಡರಾದ ಎಸ್.ಮಾರಪ್ಪ ತಿಳಿಸಿದರು.


ಸಾಮಾಜಿಕ ನ್ಯಾಯಕ್ಕಾಗಿ ಒಳಮೀಸಲಾತಿ ಹೋರಾಟ ಸಮಿತಿ ವತಿಯಿಂದ ಚಾಮುಂಡಿ ಗೆಸ್ಟ್‌ಹೌಸ್‌ನಲ್ಲಿ ಸಭೆ ನಡೆಸಲಾಯಿತು.

ಮೈಸೂರಿನ ಚಾಮುಂಡಿ ಗೆಸ್ಟ್‌ಹೌಸ್‌ನಲ್ಲಿ ಏರ್ಪಡಿಸಿದ್ದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಅಂದು ಸಿದ್ದರಾಮನ ಹುಂಡಿಯಿಂದ ಆರಂಭವಾಗುವ ಜಾಥಾದಲ್ಲಿ 'ಪೂರ್ಣ ಪ್ರಮಾಣದ ಒಳ ಮೀಸಲಾತಿ ಜಾರಿ ಮಾಡಿ ಇಲ್ಲವೇ ಕುರ್ಚಿ ಖಾಲಿ ಮಾಡಿ' ಎಂಬ ಘೋಷಣೆಯನ್ನು ಕೂಗುವ ಮೂಲಕ ಜಾಥ ನಡೆಸುತ್ತೇವೆ ಎಂದರು.

ಶೀಘ್ರ ಪೂರ್ಣ ಪ್ರಮಾಣದ ಒಳ ಮೀಸಲಾತಿ ಜಾರಿ ಮಾಡದಿದ್ದರೆ ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷವನ್ನು ಸೋಲಿಸುತ್ತೇವೆ. ಸಾಮಾಜಿಕ ನ್ಯಾಯದ ಹೆಸರಿನಲ್ಲಿ ಒಳ ಮೀಸಲಾತಿ ವರ್ಗೀಕರಣಕ್ಕೆ ಸಚಿವ ಸಂಪುಟ ಅನುಮೋದನೆ ಮಾಡಿದ್ದು ಎಷ್ಟು ಸತ್ಯವೋ! ಸದರಿ ವಿಷಯವಾಗಿ ಅನವಶ್ಯಕ ಗೊಂದಲ, ಸೃಷ್ಟಿ ಮಾಡಿ ಇಡೀ ಒಳಮಿಸಲಾತಿ ವರ್ಗೀಕರಣ ಪ್ರಕ್ರಿಯೆಯನ್ನು ದೀರ್ಘಕಾಲಿಕ ವಿಳಂಬ ಧೋರಣೆಗೆ ದೂಡಲಾಗಿದೆ. ಜನವಿರೋಧಿ, ಹಾಗೂ ಸಾಮಾಜಿಕ ನ್ಯಾಯ ವಿರೋಧಿ ಧೋರಣೆಯನ್ನು ನಾವು ಖಂಡಿಸುತ್ತೇವೆ ಎಂದು ತಿಳಿಸಿದರು.

ರಾಜಕೀಯ ಅನೈತಿಕ ಕಾರ್ಯಕ್ಕಾಗಿ ವರ್ಗೀಕರಣದ ಹೆಸರಿನಲ್ಲಿ ಒಳ ಮೀಸಲಾತಿ ಜಾರಿ ವಿಳಂಬಗೊಂಡಿದೆ. ಸಮಾಜ ಕಲ್ಯಾಣ ಇಲಾಖೆ ಉದ್ದೇಶಪೂರ್ವಕ ವಿಳಂಬ ಧೋರಣೆ ಅನುಸರಿಸಿದರೆ ಅದರ ಹೊಣೆಗಾರಿಕೆಯನ್ನು ಸಂಬಂಧಪಟ್ಟ ಮಂತ್ರಿಯೇ ವಹಿಸಿಕೊಂಡು ಜಾರಿ ಪಡಿಸಬೇಕಿದೆ ಇಲ್ಲದಿದ್ದರೆ 35 ವರ್ಷದ ಹೋರಾಟ, ಆಯೋಗದ ವರದಿಗಳು, ಸುಪ್ರೀಂ ಕೋರ್ಟಿನ ಆದೇಶ, ಜನತೆಗೆ ಕೊಟ್ಟಿರುವ ಭರವಸೆ ಎಲ್ಲವನ್ನು ಕೂಡ ಮಾತು ತಪ್ಪಿದಂತಾಗುವುದು ಎಂದು ಕಿಡಿಕಾರಿದರು.

ಅನೈತಿಕ ರಾಜಕಾರಣದ ಅಗೋಚರ ಒತ್ತಡವೇ ಮೂಲ ಕಾರಣ ಮೇಲ್ನೋಟಕ್ಕೆ ಕಾಣಿಸುತ್ತಿದೆ. ಸರ್ಕಾರದ ನಿಲುವು ಸ್ಪಷ್ಟಪಡಿಸಿ ಜಾರಿಯ ಉಪಕ್ರಮಗಳನ್ನು ಪೂರ್ಣಗೊಳಿಸುವುದಾದರೆ ಸರ್ಕಾರಕ್ಕೆ ಕೇವಲ ಮೂರು ದಿನವೇ ಸಾಕು. ಆದರೆ, ಉದ್ದೇಶಪೂರ್ವಕವಾಗಿ ದುರುದ್ದೇಶದಿಂದ ಸಮಯ ವ್ಯರ್ಥ ಮಾಡುತ್ತಿರುವುದು ಸಾಮಾಜಿಕ ನ್ಯಾಯವಿರೋಧಿಯಾಗಿದೆ. ಈ ಹಿನ್ನೆಲೆಯಲ್ಲಿ ಜನರನ್ನು ಮೋಸಗೊಳಿಸುವ ಈ ಒಳ ಮೀಸಲಾತಿ ವಿರೋಧಿ ಅನೈತಿಕ ರಾಜಕಾರಣಕ್ಕೆ ಪಾಠ ಕಲಿಸಬೇಕಿದೆ ಎಂದು ಎಚ್ಚರಿಸಿದರು.

ಸಭೆಯಲ್ಲಿ ಒಳ ಮೀಸಲಾತಿ ಹೋರಾಟದ ಮುಖಂಡರಾದ ಶಿವರಾಯ ಅಟ್ಟಲಿಕ, ಅಂಬಣ್ಣ ಅರೋಲಿಕ್, ಕನಕೇನಹಳ್ಳಿ ಕೃಷ್ಣಪ್ಪ, ಹೇಮರಾಜ, ಸ್ವಾಮಿ, ಆನಂದ ಕುಮಾರ್, ಹನುಮೇಶ್, ಬಸವರಾಜ ಕಾತಾಳ್, ರಾಜಣ್ಣ, ನರಸಿಂಹ ಮತ್ತಿ ತರರು ಉಪಸ್ಥಿತರಿದ್ದರು.

ಶಾಸಕ ತನ್ವೀರ್ ಸೇಠ್‌ಗೆ ಸಚಿವ ಸ್ಥಾನ ನೀಡುವಂತೆ ಪೋಸ್ಟ್ ಕಾರ್ಡ್ ಚಳುವಳಿ


ತನ್ವೀರ್ ಸೇಠ್

ಮೈಸೂರು,ನ.4(ಜಿಎ)–ಶಾಸಕ ತನ್ವೀರ್ ಸೇಠ್ ಅವರಿಗೆ ಸಚಿವ ಸ್ಥಾನ ನೀಡಬೇಕೆಂದು ಆಗ್ರಹಿಸಿ ನ.7ರಂದು ಪೋಸ್ಟ್ ಕಾರ್ಡ್ ಚಳುವಳಿ ನಡೆಸಲಾಗುವುದು ಎಂದು ಅಜೀಜ್ ಸೇಠ್ ಬ್ಲಾಕ್ ಕಾಂಗ್ರೆಸ್ ಎಸ್‌ಸಿ ಘಟಕದ ಅಧ್ಯಕ್ಷ ಎಸ್.ರಾಜೇಶ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಆರು ಬಾರಿ ಶಾಸಕರಾಗಿ ಆಯ್ಕೆಯಾಗಿರುವ ತನ್ವೀರ್ ಸೇಠ್ ಎನ್.ಆರ್. ಕ್ಷೇತ್ರದಲ್ಲಿ ಜನರ ಪರವಾಗಿ ಕೆಲಸ ಮಾಡುತ್ತಿದ್ದು, ಕೋಮು ಸಂಘರ್ಷಕ್ಕೆ ಅವಕಾಶ ನೀಡದೇ ಆಡಳಿತ ನಡೆಸುತ್ತಿದ್ದಾರೆ. ವಸತಿ ನಿಲಯಗಳು, ಅಲ್ಪಸಂಖ್ಯಾತ ವಿದ್ಯಾರ್ಥಿಗಳ ಅನುಕೂಲಕ್ಕೆ ಸಾಕಷ್ಟು ಕೆಲಸ ಮಾಡಿದ್ದಾರೆ. ಈ ಎಲ್ಲಾ ಮಾನದಂಡಗಳ ಮೇಲೆ ತನ್ವೀರ್ ಸೇಠ್ ಅವರಿಗೆ ಸಚಿವ ಸ್ಥಾನ ನೀಡಬೇಕು ಎಂದು ಪತ್ರದ ಮೂಲಕ ಕಾಂಗ್ರೆಸ್ ಹೈಕಮಾಂಡ್ ಅನ್ನು ಆಗ್ರಹಿಸುತ್ತೇವೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ನಗರಪಾಲಿಕೆ ಮಾಜಿ ಸದಸ್ಯರಾದ ಪ್ರದೀಪ್ ಚಂದ್ರ, ಸತ್ಯರಾಜ್, ಯೂತ್ ಕಾಂಗ್ರೆಸ್ ಕಾರ್ಯದರ್ಶಿ ಪ್ರತಾಪ್, ಬೀದಿ ಬದಿ ವ್ಯಾಪಾರಿಗಳ ಸಂಘದ ಅಧ್ಯಕ್ಷ ರಾಸೂಲ್, ಹಿರಿಯ ಉಪಾಧ್ಯಕ್ಷ ರಾಮು ಉಪಸ್ಥಿತರಿದ್ದರು.

ಸಂತ ಫಿಲೋಮಿನಾ ಕಾಲೇಜಲ್ಲಿ

ಶೈಕ್ಷಣಿಕ–ಸಂಶೋಧನಾ ಶ್ರೇಷ್ಠತೆ ಕುರಿತು ಕಾರ್ಯಾಗಾರ


ಕಾರ್ಯಾಗಾರ ಉದ್ಘಾಟಿಸಿದ ಮೈಸೂರು ವಿವಿ ಹಿರಿಯ ಪ್ರಾಧ್ಯಾಪಕ ಪ್ರೊ.ಡಿ.ಎಸ್.ಗುರು ಅವರನ್ನು ಸನ್ಮಾನಿಸಲಾಯಿತು.

ಮೈಸೂರು,ನ.4(ಪಿಎಂ)– ಮೈಸೂರಿನ ಬನ್ನಿಮಂಟಪದ ಸಂತ ಫಿಲೋಮಿನಾ ಕಾಲೇಜು (ಸ್ವಾಯತ್ತ) ಹಾಗೂ ಕಾಲೇಜಿನ ಕೇಂದ್ರ ಗ್ರಂಥಾಲಯ ಹಾಗೂ ಇಂಟರನಲ್ ಕ್ವಾಲಿಟಿ ಅಶೂರೆನ್ಸ್ ಸೆಲ್ (ಐಕ್ಯೂಎಸಿ) ವತಿಯಿಂದ ಶೈಕ್ಷಣಿಕ ಮತ್ತು ಸಂಶೋಧನಾ ಶ್ರೇಷ್ಠತೆ ಕುರಿತು ಒಂದು ದಿನದ ಕಾರ್ಯಾಗಾರ ಮಂಗಳವಾರ ನಡೆಯಿತು.

ಕಾಲೇಜಿನ ಅಧ್ಯಾಪಕರು ಮತ್ತು ಸಂಶೋಧಕರಿಗಾಗಿ ಕಾಲೇಜು ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಕಾರ್ಯಾಗಾರ ಉದ್ಘಾಟಿಸಿದ ಮೈಸೂರು ವಿವಿ ಕಂಪ್ಯೂಟರ್ ವಿಜ್ಞಾನ ಅಧ್ಯಯನ ವಿಭಾಗದ ಹಿರಿಯ ಪ್ರಾಧ್ಯಾಪಕ ಪ್ರೊ.ಡಿ.ಎಸ್.ಗುರು, 'ಶೈಕ್ಷಣಿಕ ಉತ್ಕೃಷ್ಟತೆಯ ವಿಕಾಸ ಹಾಗೂ ಸಂಶೋಧನಾ ಕಾರ್ಯತಂತ್ರ'ದ ಬಗ್ಗೆ ಮುಖ್ಯ ಭಾಷಣ ಮಾಡಿದರು.

ಬಳಿಕ ನಡೆದ ಅಧಿವೇಶನಗಳಲ್ಲಿ 'ಅನ್ವೇಷಣಾ ಪರಿಕರಗಳು' ಕುರಿತು ರತೀಶ್ ಐಯ್ಯರ್, 'ಹುಡುಕಾಟ ತಂತ್ರಗಳು' ಕುರಿತು ಎಂ.ಎಸ್.ಶ್ರೀನಿವಾಸ, 'ಕೃತಿಚೌರ್ಯ ಪತ್ತೆ ಮತ್ತು ಸಂಶೋಧನಾ ಅಭ್ಯಾಸಗಳು' ಕುರಿತು ಎಸ್.ಆಕಾಶ್ ವಿಷಯ ಮಂಡಿಸಿದರು.

ಸದರಿ ಶಿಕ್ಷಣ ಸಂಸ್ಥೆ ಅಧ್ಯಕ್ಷ ರೆ.ಡಾ. ಲೂರ್ದು ಪ್ರಸಾದ್ ಜೋಸೆಫ್, ಕ್ಯಾಂಪಸ್ ಆಡಳಿತಾಧಿಕಾರಿ ರೆ.ಫಾ.ಜ್ಞಾನ ಪ್ರಕಾಶಂ, ಆಡಳಿತಾಧಿಕಾರಿ ರೆ.ಫಾ. ಡೇವಿಡ್ ಸಗಾಯರಾಜ್, ಕಾಲೇಜಿನ ಪ್ರಾಂಶುಪಾಲ ಡಾ.ರವಿ ಜೆ.ಡಿ.ಸಲ್ಡಾನ್ಹಾ, ಉಪ ಪ್ರಾಂಶುಪಾಲ ರೋನಾಲ್ಡ್ ಪ್ರಕಾಶ್ ಕುಟಿನ್ಹಾ, ಪಿಜಿ ಸಂಯೋಜಕ ಡಾ.ನೂರ್ ಮುಬಶೀರ್, ಐಕ್ಯೂಎಸಿ ಸಂಚಾಲಕಿ ಡಾ.ವಿ.ದೀಪಾ, ಕಾಲೇಜಿನ ಭೌತಶಾಸ್ತ್ರ ವಿಭಾಗದ ಮುಖ್ಯಸ್ಥ ಎ.ಥಾಮಸ್ ಗುಣಶೀಲನ್ ಮತ್ತಿತರರು ಹಾಜರಿದ್ದರು.

ಮೈಸೂರು ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿ ಪ್ರದಾನ...




ಮೈಸೂರು ಜಿಲ್ಲಾಡಳಿತದ ವತಿಯಿಂದ ಓವೆಲ್ಸ್ ಮೈದಾನದಲ್ಲಿ ಆಚರಿಸಿದ 70ನೇ ಕನ್ನಡ ರಾಜ್ಯೋತ್ಸವದಲ್ಲಿ ಶಿಕ್ಷಣ ಕ್ಷೇತ್ರದಿಂದ ಮೈಸೂರು ಸದ್ವಿದ್ಯಾ ಶಿಕ್ಷಣ ಸಂಸ್ಥೆ ಕಾರ್ಯದರ್ಶಿ, ಅಗಸ್ತ್ಯ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿ ಅಧ್ಯಕ್ಷ ಎಂ.ಡಿ.ಗೋಪಿನಾಥ್, ಅಂತರರಾಷ್ಟ್ರೀಯ ವಿಶೇಷ ಚೇತನರ ಕ್ರೀಡಾಪಟು ಅಲೋಕ್ ಆರ್.ಜೈನ್ ಹಾಗೂ ಸಮಾಜ ಸೇವಕ ಡಾ.ಎಂ.ರವಿಕುಮಾರ್ ಅವರಿಗೆ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಸಿ.ಮಹದೇವಪ್ಪ ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿ ನೀಡಿ ಅಭಿನಂದಿಸಿದರು.

ಬೋವಿ ನಿಗಮದ ಅಧ್ಯಕ್ಷ ರಾಮಪ್ಪ ಅವರಿಗೆ ಅಭಿನಂದನೆ...


ವಿಜಯಶ್ರೀಪುರ ಕ್ಷೇಮಾಭಿವೃದ್ಧಿ ಒಕ್ಕೂಟದ ವತಿಯಿಂದ ಬೋವಿ ನಿಗಮದ ಅಧ್ಯಕ್ಷ ರಾಮಪ್ಪ ಅವರನ್ನು ಆತ್ಮೀಯವಾಗಿ ಅಭಿನಂದಿಸಲಾಯಿತು. ಇದೇ ವೇಳೆ ಚಾಮರಾಜ ಕ್ಷೇತ್ರದ ಶಾಸಕ ಕೆ.ಹರೀಶ್‌ಗೌಡ, ವಿಧಾನಪರಿಷತ್ ಸದಸ್ಯ ಡಾ.ಡಿ.ತಿಮ್ಮಯ್ಯ ಅವರೂ ರಾಮಪ್ಪ ಅವರನ್ನು ಅಭಿನಂದಿಸಿದರು. ಸಂಘದ ಪದಾಧಿಕಾರಿಗಳು, ವಿಜಯಶ್ರೀಪುರದ ನಿವಾಸಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

70ನೇ ಕನ್ನಡ ರಾಜ್ಯೋತ್ಸವ ಆಚರಣೆ



ಮೈಸೂರು, ನ. 4– ಮೈಸೂರಿನ ಅಧ್ಯಯನ ಶಾಲೆಯಲ್ಲಿ 70ನೇ ಕನ್ನಡ ರಾಜ್ಯೋತ್ಸವವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

ಕೃಷ್ಣರಾಜೇಂದ್ರ ಸಹಕಾರ ಬ್ಯಾಂಕಿನ ಅಧ್ಯಕ್ಷರಾದ ಬಸವರಾಜು ಮತ್ತಿತರ ಗಣ್ಯರು ರಾಷ್ಟ್ರಧ್ವಜಾರೋಹಣ, ನಾಡ ಧ್ವಜಾರೋಹಣ, ತಾಯಿ ಭುವನೇಶ್ವರಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ, ದೀಪ ಬೆಳಗಿಸಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಕನ್ನಡ ರಾಜ್ಯೋತ್ಸವದ ಕುರಿತು ಬಸವರಾಜು ಮಾತನಾಡಿ, ಮಕ್ಕಳಿಗೆ ಶುಭ ಕೋರಿದರು. ಮಿಸ್ಸೆಸ್ ಇಂಡಿಯಾ ರನ್ನರ್ ಅಪ್ ಖುಷಿ ವಿನು ಅವರು ಕನ್ನಡ ಎಲ್ಲಾ ಕಡೆ ಎಲ್ಲಾ ಕ್ಷೇತ್ರಗಳಲ್ಲಿ ಬೆಳೆಯಲಿ, ಕನ್ನಡ ಇತಿಹಾಸ ಪುಟಗಳಲ್ಲಿ ಸೇರುವಂತೆ ಮಾಡಬೇಕು ಎಂದು ಕರೆ ನೀಡಿದರು.

ಶಾಲೆ ಕಾರ್ಯದರ್ಶಿ ಎಂ.ಪಾರ್ವತಿ ದೇವಿ ಮಾತನಾಡಿ, ಕನ್ನಡ ಕಲಿಸಿ, ಕನ್ನಡ ಮಾತನಾಡೋಣ ಕನ್ನಡ ಬೆಳೆಸೋಣ ಕನ್ನಡ ನಾಡಿನಲ್ಲಿ ಹುಟ್ಟಿರುವುದು ಹೆಮ್ಮೆ ಎಂದರು. ಶಾಲೆಯ ಮುಖ್ಯೋಪಾಧ್ಯಾಯ ಹೆಚ್.ಎಂ.ಪುಟ್ಟಸ್ವಾಮಿಗೌಡರು ಕನ್ನಡವನ್ನು ಕಡ್ಡಾಯವಾಗಿ ಮಾತ ನಾಡೋಣ ಎಂದು ಹೇಳಿ, ಕನ್ನಡ ನಾಡಿನ ಮಹತ್ವ ಮತ್ತು ಕನ್ನಡ ಭಾಷೆಯ ಮಹತ್ವವನ್ನು ತಿಳಿಸಿಕೊಟ್ಟರು. ಈ ಸಂದರ್ಭದಲ್ಲಿ ಮಕ್ಕಳಿಗೆ ವೇಷಭೂಷಣ, ಚಿತ್ರಕಲಾ, ಪ್ರಬಂಧ ಸ್ಪರ್ಧೆ ಆಯೋಜಿಸಿ ವಿಜೇತ ಮಕ್ಕಳಿಗೆ ಬಹುಮಾನ ವಿತರಿಸಲಾಯಿತು.

ಅಂಕಪಟ್ಟಿಗಾಗಿ ಹಣ ವಸೂಲಿ; ಎಐಡಿಎಸ್‌ಓ ಹೋರಾಟದ ಎಚ್ಚರಿಕೆ

ಮೈಸೂರು, ನ.4(ಎಸ್‌ಪಿಎನ್)– ರಾಷ್ಟ್ರೀಯ ಶಿಕ್ಷಣ ನೀತಿ(ಎನ್‌ಇಪಿ)ಯಡಿ ಪದವಿ, ಸ್ನಾತಕೋತ್ತರ ಪದವಿ ಅಧ್ಯಯನ ಮಾಡಿದ ವಿದ್ಯಾರ್ಥಿಗಳಿಗೆ ಕಳೆದ ನಾಲ್ಕು ವರ್ಷಗಳಿಂದ ಮೈಸೂರು ವಿಶ್ವವಿದ್ಯಾನಿಲಯವು ಅಂಕಪಟ್ಟಿಗಳನ್ನು ವಿತರಣೆ ಮಾಡದಿರುವುದನ್ನು ಎಐಡಿಎಸ್‌ಓ ಮೈಸೂರು ಜಿಲ್ಲಾ ಸಮಿತಿ ಖಂಡಿಸಿದೆ.

ವಿಶ್ವವಿದ್ಯಾಲಯದ ಈ ನಿರ್ಲಕ್ಷ್ಯ ಕ್ರಮದಿಂದಾಗಿ ಸಾವಿರಾರು ವಿದ್ಯಾರ್ಥಿಗಳಿಗೆ ತೊಂದರೆಯಾಗಿದ್ದು, ಉದ್ಯೋಗಕ್ಕೆ ಸೇರಲು ಅಥವಾ ಮುಂದಿನ ವಿದ್ಯಾಭ್ಯಾಸಕ್ಕೆ ಅಗತ್ಯವಿರುವ ಅಂಕಪಟ್ಟಿಗಳು ವಿದ್ಯಾರ್ಥಿಗಳ ಕೈ ಸೇರುತ್ತಿಲ್ಲ.

ಪ್ರತಿ ಸೆಮಿಸ್ಟರ್‌ನಲ್ಲಿ ಅಂಕಪಟ್ಟಿ ಪಡೆಯಲು ವಿದ್ಯಾರ್ಥಿಗಳಿಂದ ಶುಲ್ಕವನ್ನು ಕಟ್ಟಿಸಿಕೊಳ್ಳುತ್ತಿದ್ದರು. ಪದವಿ ಮುಗಿದ ನಂತರ ಪದವೀಧರರಿಗೆ ಅಂಕಪಟ್ಟಿ ನೀಡದಿರುವುದು ವಿಶ್ವವಿದ್ಯಾಲಯದ ಮತ್ತು ಉನ್ನತ ಶಿಕ್ಷಣ ಇಲಾಖೆಯ ಸಂಪೂರ್ಣ ಆಡಳಿತ ವೈಫಲ್ಯವನ್ನು ಎತ್ತಿ ತೋರಿಸುತ್ತದೆ.


ಇಂದು ಅಂಕಪಟ್ಟಿ ಕೇಳಲು ಮೈಸೂರು ವಿಶ್ವವಿದ್ಯಾಲಯಕ್ಕೆ ತೆರಳಿದ್ದ ಓರ್ವ ವಿದ್ಯಾರ್ಥಿನಿಗೆ ಮೈಸೂರು ವಿವಿ ಅಧಿಕಾರಿಗಳು 18 ಸಾವಿರಕ್ಕೆ ಬೇಡಿಕೆ ಇಟ್ಟಿರುವ ಸಿಬ್ಬಂದಿಯನ್ನು ಕೂಡಲೇ ಕರ್ತವ್ಯದಿಂದ ವಜಾಗೊಳಿಸಬೇಕು. ಇದು ದೊಡ್ಡ ಹಗರಣದ ಮುನ್ಸೂಚನೆ ನೀಡುತ್ತಿದೆ. ಹಾಗಾಗಿ ಇಲ್ಲಿನ ಭ್ರಷ್ಟಾಚಾರದ ವಿರುದ್ಧ ಏಕಾಂಗಿಯಾಗಿ ನಡೆಸುತ್ತಿರುವ ಹೋರಾಟಕ್ಕೆ ಎಐಡಿಎಸ್‌ಓ ಸಂಪೂರ್ಣ ಬೆಂಬಲ ವ್ಯಕ್ತಪಡಿಸಿದೆ.

ಇನ್ನು ಬಾಕಿ ಉಳಿದಿರುವ ಎಲ್ಲಾ ವಿದ್ಯಾರ್ಥಿಗಳಿಗೆ ಉಚಿತವಾಗಿ ಅಂಕಪಟ್ಟಿಗಳನ್ನು ವಿತರಿಸಲು ವಿಶ್ವವಿದ್ಯಾಲಯವು ತಕ್ಷಣವೇ ಕ್ರಮ ಕೈಗೊಳ್ಳಬೇಕು. ಇಲ್ಲದಿದ್ದರೆ ರಾಜ್ಯಾದ್ಯಂತ ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ಅಂಕಪಟ್ಟಿಗಳು ವಿತರಣೆಯಾಗುವವರೆಗೂ ಹೋರಾಟ ಮುಂದುವರೆಸುವುದಾಗಿ ಎಐಡಿಎಸ್‌ಓ ಜಿಲ್ಲಾ ಸಮಿತಿ ಸಂಚಾಲಕ ನಿತಿನ್ ಪ್ರಕಟಣೆ ಮೂಲಕ ಎಚ್ಚರಿಸಿದ್ದಾರೆ.

ಉದ್ಬೂರು ಬಳಿ ನೋಟ್‌ಬುಕ್ ತಯಾರಿಕಾ ಘಟಕದಲ್ಲಿ ಬೆಂಕಿ

ಮೈಸೂರು ನ.4 (ಆರ್‌ಕೆ)– ಆಕಸ್ಮಿಕ ಬೆಂಕಿ ತಗುಲಿದ ಪರಿಣಾಮ, ಮೈಸೂರು ತಾಲೂಕು ಜಯಪುರ ಹೋಬಳಿ ಉದ್ಬೂರು ಬಳಿ ನೋಟ್‌ಬುಕ್ ತಯಾರಿಕಾ ಘಟಕ ಸುಟ್ಟು ಭಸ್ಮವಾಗಿರುವ ಘಟನೆ ಕಳೆದ ಶನಿವಾರ ಸಂಭವಿಸಿದೆ.

ಎಂ.ಶಾಂತಿಲಾಲ್ ಎಂಬುವರಿಗೆ ಸೇರಿದ ಎಂ.ಎಂ.ಪೇಪರ್ ಇಂಡಸ್ಟ್ರೀಸ್‌ಗೆ ಶನಿವಾರ ರಾತ್ರಿ ಬೆಂಕಿ ತಗುಲಿದ್ದು, ನಂತರ ಇಡೀ ಕಾರ್ಖಾನೆಗೆ ಜ್ವಾಲೆ ಹರಡಿ ಅಲ್ಲಿನ ಯಂತ್ರೋಪಕರಣಗಳು, ಕಚ್ಚಾ ಪದಾರ್ಥ, ನೋಟ್‌ಬುಕ್ ಮತ್ತು ಪೇಪರ್ ರಾಶಿ ಹಾಗೂ ಕಟ್ಟಡದ ಬಹುಭಾಗ ಸುಟ್ಟು ಕರಕಲಾಗಿದೆ ವಿಷಯ ತಿಳಿಯುತ್ತಿದ್ದಂತೆಯೇ ಸ್ಥಳಕ್ಕೆ ಆಗಮಿಸಿದ ಜಯಪುರ ಪೊಲೀಸರು ಮಾಹಿತಿ ನೀಡಿ ಮೈಸೂರಿನ ಸರಸ್ವತಿಪುರಂ, ಬನ್ನಿಮಂಟಪ ಹಾಗೂ ಹೆಬ್ಬಾಳು ಕೈಗಾರಿಕಾ ಪ್ರದೇಶದ ಅಗ್ನಿ ಶಾಮಕ ಠಾಣೆ ಸಿಬ್ಬಂದಿಗಳನ್ನು ಕರೆಸಿ ಕೊಂಡು ರಾತ್ರಿ ಇಡೀ ಕಾರ್ಯಾಚರಣೆ ನಡೆಸಿ ಬೆಂಕಿ ನಂದಿಸಿದರು. ಘಟನೆಯಿಂದ ಕಚ್ಚಾ ಸಾಮಗ್ರಿ, ನೋಟ್‌ಬುಕ್, ಯಂತ್ರಗಳು ಹಾಗೂ ಕಟ್ಟಡ ಸೇರಿದಂತೆ ಸುಮಾರು 15 ಕೋಟಿ ರೂ. ನಷ್ಟ ಉಂಟಾಗಿದೆ ಎಂದು ಮಾಲೀಕ ಶಾಂತಿಲಾಲ್ ಅವರು ಪೊಲೀಸರಿಗೆ ಲಿಖಿತ ಹೇಳಿಕೆ ನೀಡಿದ್ದಾರೆ. ಸ್ಥಳ ಮಹಜರು ನಡೆಸಿದ ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸುತ್ತಿದ್ದಾರೆ. ಮೈಸೂರು ಜಿಲ್ಲಾ ಅಗ್ನಿಶಾಮಕ ಅಧಿಕಾರಿ ಗುರುರಾಜ್, ಪ್ರಾದೇಶಿಕ ಅಧಿಕಾರಿ ಚಂದನ್, ರಾಜೇಶ್, ನಾಗರಾಜೇ ಅರಸ್ ಸೇರಿದಂತೆ 50ಕ್ಕೂ ಹೆಚ್ಚು ಅಗ್ನಿಶಾಮಕ ಸಿಬ್ಬಂದಿ ಬೆಂಕಿ ನಂದಿಸುವ ಕಾರ್ಯದಲ್ಲಿ ಪಾಲ್ಗೊಂಡಿದ್ದರು.



ಮೈಸೂರು ತಾಲೂಕು ಜಯಪುರ ಹೋಬಳಿ ಉದ್ಬೂರು ಬಳಿ ನೋಟ್‌ಬುಕ್ ತಯಾರಿಕಾ ಘಟಕ ಸುಟ್ಟು ಭಸ್ಮವಾಗಿರುವುದು.

ದೇಶ - ವಿದೇಶ

ಲೈಬ್ರರಿಗೆ ಓದಲು ಬರುತ್ತಿದ್ದ ಬಾಲಕಿಗೆ ಗುಂಡು ಹಾರಿಸಿ ಆರೋಪಿ ಎಸ್ಕೇಪ್



ಚಂಡೀಗಢ: ಫರಿದಾಬಾದ್‌ನಲ್ಲಿ 17 ವರ್ಷದ ಬಾಲಕಿಯನ್ನು ಹಲವಾರು ದಿನಗಳಿಂದ ಹಿಂಬಾಲಿಸುತ್ತಿದ್ದ ವ್ಯಕ್ತಿಯೊಬ್ಬ ಆಕೆಯ ಮೇಲೆ ಗುಂಡು ಹಾರಿಸಿದ್ದಾನೆ.

ಆರೋಪಿಗೆ ಹುಡುಗಿಯ ದಿನಚರಿ ಬಗ್ಗೆ ತಿಳಿದಿತ್ತು. ಅವಳ ಆಗಮನಕ್ಕಾಗಿ ಮುಂಚಿತವಾಗಿ ಬಂದು ಕಾಯುತ್ತಿದ್ದ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಆರೋಪಿಯು ಹುಡುಗಿಯ ಚಲನವಲನಗಳನ್ನು ಗಮನಿಸುತ್ತಿದ್ದ. ಆಕೆ ಗ್ರಂಥಾಲಯಕ್ಕೆ ಬರುವುದನ್ನೇ ಕಾದು ಕುಳಿತುಕೊಳ್ಳುತ್ತಿದ್ದ. ಗಾಯಗೊಂಡಿರುವ ಬಾಲಕಿ ವೈದ್ಯಕೀಯ ಚಿಕಿತ್ಸೆ ಪಡೆಯುತ್ತಿದ್ದು, ಆತ ಹಲವು ಬಾರಿ ಕಿರುಕುಳ ನೀಡುತ್ತಿದ್ದ. ಆತ ಬಹಳ ಸಮಯದಿಂದ ನನಗೆ ತೊಂದರೆ ನೀಡುತ್ತಿದ್ದ ಎಂದು ಪೊಲೀಸರು ಬಳಿ ಬಾಲಕಿ ದೂರಿದ್ದಾಳೆ. ಬಾಲಕಿ ಮೇಲೆ ಗುಂಡು ಹಾರಿಸಿದ ನಂತರ, ಆರೋಪಿಯು ಸ್ಥಳದಲ್ಲಿ ಪಿಸ್ತೂಲ್ ಎಸೆದು ಪರಾರಿಯಾಗಿದ್ದಾನೆ. ಪೊಲೀಸರು ಪಿಸ್ತೂಲ್ ವಶಕ್ಕೆ ಪಡೆದು, ಆರೋಪಿ ಬಂಧನಕ್ಕೆ ತಂಡಗಳನ್ನು ರಚಿಸಲಾಗಿದೆ ಎಂದು ಪೊಲೀಸ್ ವಕ್ತಾರರು ತಿಳಿಸಿದ್ದಾರೆ.

ಪರಮಾಣು ಪರೀಕ್ಷೆ ಮೊದಲು ಪುನರಾರಂಭಿಸಿದವರು ನಾವಲ್ಲ: ಟ್ರಂಪ್ ಹೇಳಿಕೆಗೆ ಪಾಕ್ ತಿರುಗೇಟು



ಇಸ್ಲಾಮಾಬಾದ್: ರಷ್ಯಾ, ಚೀನಾ ಜೊತೆಗೆ ಪಾಕಿಸ್ತಾನ ಕೂಡ ಪರಮಾಣು ಶಸ್ತ್ರಾಸ್ತ್ರ ಪರೀಕ್ಷೆ ನಡೆಸುತ್ತಿದೆ ಎಂಬ ಯುಎಸ್ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿಕೆಗೆ ಪಾಕಿಸ್ತಾನದ ಹಿರಿಯ ಅಧಿಕಾರಿ ಪ್ರತಿಕ್ರಿಯೆ ನೀಡಿದ್ದಾರೆ.

ಪರಮಾಣು ಪರೀಕ್ಷೆಗಳನ್ನು ಪುನರಾರಂಭಿಸಿದ ಮೊದಲಿಗರು ನಾವಲ್ಲ ಎಂದು ಹೇಳಿದ್ದಾರೆ. ಸುದ್ದಿವಾಹಿನಿಯೊಂದರಲ್ಲಿ ಮಾತನಾಡಿದ ಪಾಕ್ ಅಧಿಕಾರಿಯೊಬ್ಬರು, ಪರಮಾಣು ಪರೀಕ್ಷೆಗಳನ್ನ ಮೊದಲು ನಡೆಸಿದ್ದು ಪಾಕಿಸ್ತಾನವಲ್ಲ, ಪುನರಾರಂಭಿಸಿದ್ದೂ ನಾವಲ್ಲ ಎಂದು ಕುಟುಕಿದ್ದಾರೆ. ಚೀನಾ ನ್ಯೂಕ್ಲಿಯರ್ ಟೆಸ್ಟ್ ಆರೋಪ ನಿರಾಕರಿಸಿತು. ಪಾಕಿಸ್ತಾನ, ಚೀನಾ, ರಷ್ಯಾ, ಉತ್ತರ ಕೊರಿಯಾ ದೇಶಗಳು ಪರಮಾಣು ಪರೀಕ್ಷೆಗಳನ್ನು ನಡೆಸುತ್ತಿವೆ. ಹೀಗಿರುವಾಗ ಅಮೆರಿಕ ಮಾತ್ರ ಸಂಯಮ ತೋರಿಸುವ ದೇಶವಾಗಿ ಉಳಿಯಲು ಸಾಧ್ಯವಿಲ್ಲ. ನಾವೂ ಪರಮಾಣು ಪರೀಕ್ಷೆಗಳನ್ನು ನಡೆಸುತ್ತೇವೆ ಎಂದು ಡೊನಾಲ್ಡ್ ಟ್ರಂಪ್ ಹೇಳಿದ್ದರು.

ಹಿಂದೂ ದೇವತೆಗಳ ವಿರುದ್ಧ ಅವಹೇಳನಕಾರಿ ಪೋಸ್ಟ್; ಬಾಲಕಿಯ ಪೋಷಕರು ಜೈಲಿಗೆ

ಲಕ್ನೋ: ಹಿಂದೂ ದೇವತೆಗಳ ವಿರುದ್ಧ ಅವಹೇಳನಕಾರಿ ಹೇಳಿಕೆ ನೀಡಿ ಬಾಲಕಿ ರೀಲ್ಸ್ ಪೋಸ್ಟ್ ಮಾಡಿದ್ದಕ್ಕೆ ಆಕೆಯ ಪೋಷಕರನ್ನು ಪೊಲೀಸರು ಬಂಧಿಸಿದ್ದಾರೆ. ಅಪ್ರಾಪ್ತೆಯನ್ನು ಬಾಲಾಪರಾಧಿ ಗೃಹಕ್ಕೆ ಕಳುಹಿಸಲಾಗಿದೆ. ಇನ್‌ಸ್ಟಾಗ್ರಾಮ್‌ನಲ್ಲಿ ಫಾಲೋವರ್ಸ್ ಹೆಚ್ಚಾಗಲೆಂದು ಬಾಲಕಿ ಈ ಅಪರಾಧ ಎಸಗಿದ್ದಾಳೆ. ಸುಮಾರು ಒಂದು ನಿಮಿಷದ ಈ ವಿಡಿಯೋವನ್ನು ಅ.27ರಂದು ಬಾಲಕಿ ಪೋಸ್ಟ್ ಮಾಡಿದ್ದಳು.

ವೀಡಿಯೋದಲ್ಲಿ ಆಕೆ ಹಿಂದೂ ದೇವರನ್ನು ಟೀಕಿಸಿದ್ದಾಳೆ. ಸೋಷಿಯಲ್ ಮೀಡಿಯಾದಲ್ಲಿ ವಿಡಿಯೋ ವೈರಲ್ ಆಗಿದ್ದು, ನೆಟ್ಟಿಗರು ಆಕ್ರೋಶ ಹೊರಹಾಕಿದ್ದರು. ಈಕೆ ವಿರುದ್ಧ ಕ್ರಮಕೈಗೊಳ್ಳಬೇಕೆಂದು ಆಗ್ರಹಿಸಿದ್ದರು. ಅನೇಕ ಹಿಂದೂ ಸಂಘಟನೆಗಳು ಬಾಲಕಿ ಮತ್ತು ಆಕೆಯ ಕುಟುಂಬದ ವಿರುದ್ಧ ಪ್ರತಿಭಟನೆ ನಡೆಸಿ ದೂರು ದಾಖಲಿಸಿದ್ದವು. ದೂರನ್ನು ಆಧರಿಸಿ ಪೊಲೀಸರು ಬಾಲಕಿ ಮತ್ತು ಪೋಷಕರನ್ನು ಬಂಧಿಸಿದ್ದಾರೆ. ಅಪ್ರಾಪ್ತೆಯನ್ನು ಬಾಲಾಪರಾಧಿ ಗೃಹಕ್ಕೆ ಕಳುಹಿಸಿದ್ದಾರೆ. ಪ್ರಕರಣ ಸಂಬಂಧ ಮತ್ತೊಬ್ಬ ವ್ಯಕ್ತಿ ಪರಾರಿಯಾಗಿದ್ದು, ಆತನ ವಿರುದ್ಧವೂ ಪ್ರಕರಣ ದಾಖಲಾಗಿದೆ.

ಪಾಕಿಸ್ತಾನದ ಸುಪ್ರೀಂಕೋರ್ಟ್‌ನಲ್ಲಿ ಭಾರೀ ಸ್ಫೋಟ: ನಾಲ್ವರಿಗೆ ಗಾಯ



ಇಸ್ಲಾಮಾಬಾದ್: ಇಸ್ಲಾಮಾಬಾದ್‌ನಲ್ಲಿ ಪಾಕಿಸ್ತಾನದ ಸುಪ್ರೀಂಕೋರ್ಟ್‌ನ ನೆಲ ಮಾಳಿಗೆಯಲ್ಲಿ ಸ್ಫೋಟ ಸಂಭವಿಸಿದ್ದು, ನಾಲ್ವರು ಗಂಭೀರವಾಗಿ ಗಾಯಗೊಂಡಿದ್ದಾರೆ. ಘಟನೆ ನಂತರ ಎಲ್ಲಾ ಸರ್ಕಾರಿ ಕಟ್ಟಡಗಳನ್ನು ಕಟ್ಟೆಚ್ಚರದಲ್ಲಿ ಇರಿಸಲಾಗಿತ್ತು. ಸ್ಥಳೀಯ ಪೊಲೀಸರು ಮತ್ತು ರಕ್ಷಣಾ ಇಲಾಖೆ ಪ್ರಕಾರ, ಸುಪ್ರೀಂಕೋರ್ಟ್‌ನ ನೆಲ ಮಾಳಿಗೆಯಲ್ಲಿರುವ ಹವಾನಿಯಂತ್ರಣ ಅನಿಲ ಸ್ಥಾವರದ ಬಳಿ ಸ್ಫೋಟ ಸಂಭವಿಸಿದೆ. ಅಲ್ಲಿ ತಾಂತ್ರಿಕ ಸಿಬ್ಬಂದಿ ದುರಸ್ತಿ ಕಾರ್ಯ ನಡೆಸುತ್ತಿದ್ದರು. ಅನಿಲ ಸೋರಿಕೆಯಿಂದಾಗಿ ವ್ಯವಸ್ಥೆಯಲ್ಲಿ ಬೆಂಕಿ ಕಾಣಿಸಿಕೊಂಡಿದ್ದು, ಸ್ಫೋಟಕ್ಕೆ ಕಾರಣವಾಯಿತು ಎಂದು ಪ್ರಾಥಮಿಕ ತನಿಖೆಗಳು ಬಹಿರಂಗಪಡಿಸಿವೆ. ಸುಪ್ರೀಂಕೋರ್ಟ್ ಕ್ಯಾಂಟೀನ್ ಬಳಿ ಗ್ಯಾಸ್ ಸಿಲಿಂಡರ್ ಸ್ಫೋಟಗೊಂಡ ಕಾರಣ ಸ್ಫೋಟ ಸಂಭವಿಸಿದೆ ಎಂದು ಹೇಳಿವೆ. ಸ್ಫೋಟವು ಎಷ್ಟು ಪ್ರಬಲವಾಗಿತ್ತೆಂದರೆ ಅದು ನ್ಯಾಯಾಲಯದ ಸಂಕೀರ್ಣದ ಕೆಲವು ಭಾಗಗಳು ಹಾನಿಗೊಂಡಿವೆ. ಹಲವಾರು ಉದ್ಯೋಗಿಗಳಿಗೆ ಸಣ್ಣಪುಟ್ಟ ಗಾಯಗಳಾಗಿವೆ. ಸ್ಫೋಟದ ಶಬ್ದ ಎಷ್ಟು ಜೋರಾಗಿತ್ತು ಎಂದರೆ ವಕೀಲರು, ಭದ್ರತಾ ಸಿಬ್ಬಂದಿ ಮತ್ತು ಹತ್ತಿರದ ನೌಕರರು ಭಯಭೀತರಾಗಿ ಕಟ್ಟಡದಿಂದ ಹೊರಗೆ ಓಡಿ ಬಂದರು.

ಗುಂಡಿನ ಚಕಮಕಿ: ಯುನೈಟೆಡ್ ಕುಕಿ ರಾಷ್ಟ್ರೀಯ ಸೇನೆಯ 4 ಉಗ್ರರು ಸಾವು



ಇಂಫಾಲ್: ಮಣಿಪುರದ ಚುರಚಂದ್‌ಪುರ ಜಿಲ್ಲೆಯ ಪಶ್ಚಿಮಕ್ಕೆ ಸುಮಾರು 80 ಕಿ.ಮೀ ದೂರದಲ್ಲಿರುವ ಖಾನ್ಪಿ ಗ್ರಾಮದಲ್ಲಿ ಸೋಮವಾರ ಮುಂಜಾನೆ ಸೇನೆ ಮತ್ತು ಉಗ್ರರ ನಡುವೆ ನಡೆದ ಗುಂಡಿನ ಚಕಮಕಿಯಲ್ಲಿ ನಾಲ್ವರು ಯುನೈಟೆಡ್ ಕುಕಿ ರಾಷ್ಟ್ರೀಯ ಸೇನೆ ಉಗ್ರರು ಸಾವನ್ನಪ್ಪಿದ್ದಾರೆ. ಇತ್ತೀಚಿನ ದಿನಗಳಲ್ಲಿ ಈ ಗುಂಪು ಗ್ರಾಮದ ಮುಖ್ಯಸ್ಥನ ಹತ್ಯೆ, ಸ್ಥಳೀಯ ನಿವಾಸಿಗಳ ಬೆದರಿಕೆ ಮತ್ತು ಪ್ರದೇಶದಲ್ಲಿ ಶಾಂತಿಯನ್ನು ಭಂಗ ಗೊಳಿಸುವ ಪ್ರಯತ್ನಗಳು ಸೇರಿದಂತೆ ಹಲವಾರು ಹಿಂಸಾತ್ಮಕ ಘಟನೆಗಳನ್ನು ನಡೆಸಿದೆ. ಇದರ ನಂತರ ಸೇನೆ ಈ ಕ್ರಮ ಕೈಗೊಂಡಿದೆ. ಈ ಕಾರ್ಯಾಚರಣೆಯು ಪ್ರದೇಶದಲ್ಲಿ ಶಾಂತಿ ಮತ್ತು ಸ್ಥಿರತೆಯನ್ನು ಖಚಿತಪಡಿಸಿಕೊಳ್ಳಲು ಮತ್ತು ನಾಗರಿಕರ ಸುರಕ್ಷತೆಗೆ ತಮ್ಮ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ ಎಂದು ಸೇನೆ ಮತ್ತು ಅಸ್ಸಾಂ ರೈಫಲ್ಸ್ ಹೇಳಿಕೆಯಲ್ಲಿ ತಿಳಿಸಿದೆ. ಸುತ್ತಮುತ್ತಲಿನ ಪ್ರದೇಶಗಳಲ್ಲಿ ಪ್ರಸ್ತುತ ಶೋಧ ಕಾರ್ಯಾಚರಣೆಗಳು ನಡೆಯುತ್ತಿವೆ.

ಜನರ ಆಶೋತ್ತರಗಳಿಗೆ ಸ್ಪಂದಿಸುವ ನಿಟ್ಟಿನಲ್ಲಿ ಪತ್ರಕರ್ತರು ಕೆಲಸ ಮಾಡಲಿ

ಉಪಕುಲಪತಿ ಅಶೋಕ್ ಸಂಗಪ್ಪ ಆಲೂರ ಅಭಿಮತ



ಕೊಡಗು ವಿವಿ ಉಪಕುಲಪತಿ ಅಶೋಕ್ ಸಂಗಪ್ಪ ಆಲೂರ ಪತ್ರಿಕಾ ಭವನ ಟ್ರಸ್ಟ್‌ನ 24ನೇ ವಾರ್ಷಿಕೋತ್ಸವವನ್ನು ಉದ್ಘಾಟಿಸಿ ಮಾತನಾಡಿದರು

ಮಡಿಕೇರಿ, ನ.4–ಪತ್ರಿಕಾ ರಂಗ ಅತ್ಯಂತ ಮಹತ್ವದ ಜವಾಬ್ದಾರಿಯನ್ನು ಹೊಂದಿರುವ ಪ್ರಜಾಪ್ರಭುತ್ವದ ಅಂಗವಾಗಿದ್ದು, ಸಾಮಾಜಿಕ ವ್ಯವಸ್ಥೆಯ ಓರೆಕೋರೆಗಳನ್ನು ತಿದ್ದಿ, ಜನರ ಆಶೋತ್ತರಗಳಿಗೆ ಸ್ಪಂದಿಸುವ ನಿಟ್ಟಿನಲ್ಲಿ ಪತ್ರಕರ್ತರು ಕೆಲಸ ಮಾಡಬೇಕು ಎಂದು ಕೊಡಗು ವಿವಿ ಉಪ ಕುಲಪತಿ ಅಶೋಕ್ ಸಂಗಪ್ಪ ಆಲೂರ ಅಭಿಪ್ರಾಯ ವ್ಯಕ್ತಪಡಿಸಿದರು.

ನಗರದ ಪತ್ರಿಕಾ ಭವನದಲ್ಲಿ ಆಯೋಜಿಸಿದ್ದ ಕೊಡಗು ಪತ್ರಿಕಾ ಭವನ ಟ್ರಸ್ಟ್‌ನ 24ನೇ ವಾರ್ಷಿಕೋತ್ಸವವನ್ನು ಉದ್ಘಾಟಿಸಿದ ಅವರು, ಸಮಾಜದ ಆಗು–ಹೋಗುಗಳನ್ನು ತಿಳಿಸಿ ಸಮಾಜವನ್ನು ಸರಿದಾರಿಗೆ ತರುವ ಕೆಲಸ ಪತ್ರಕರ್ತರಿಂದ ಆಗುತ್ತಿದೆ. ಗ್ರಾಮೀಣ ಭಾಗದ ಜನರ ಧ್ವನಿಯಾಗಿ ಕೆಲಸ ಮಾಡುವ ಹೆಚ್ಚಿನ ಜವಾಬ್ದಾರಿ ಪತ್ರಕರ್ತರ ಮೇಲಿದೆ ಎಂದು ಅಭಿಪ್ರಾಯಿಸಿದರು.

ಆಧುನಿಕ ಡಿಜಿಟಲ್ ಯುಗದಲ್ಲಿ ಪತ್ರಕರ್ತರು ಹಲವು ಸವಾಲುಗಳನ್ನು ಎದುರಿಸಬೇಕಾಗಿದೆ. ಇವುಗಳನ್ನು ಮೆಟ್ಟಿ ನಿಂತು ತಾಂತ್ರಿಕವಾಗಿ ಮುಂದುವರೆಯುವಂತೆ ಕಿವಿಮಾತು ಹೇಳಿದ ಅವರು, ಹೊಸ ಪೀಳಿಗೆಯ ಪತ್ರಕರ್ತರನ್ನು ಬೆಳೆಸುವಂತಾಗಬೇಕು. ಈ ದಿಸೆಯಲ್ಲಿ ಚಿಕ್ಕ ಅಳವಾರದಲ್ಲಿ ಸಮೂಹ ಸಂವಹನ ಪತ್ರಿಕೋದ್ಯಮ ಕೋರ್ಸ್ ಆರಂಭಿಸಲಾಗಿದೆ. ಪತ್ರಿಕೋದ್ಯಮದ ವಿದ್ಯಾರ್ಥಿಗಳು ಹಾಗೂ ಪತ್ರಕರ್ತರ ಅನುಕೂಲಕ್ಕಾಗಿ 'ವಿಜ್ಞಾನ ಹಾಗೂ ತಂತ್ರ ಜ್ಞಾನ' ವಿಷಯದ ಕುರಿತು ಒಂದು ದಿನದ ಕಾರ್ಯಾಗಾರವನ್ನು ಆಯೋಜಿಸಲಾಗುತ್ತದೆ ಎಂದು ಮಾಹಿತಿ ನೀಡಿದರು.

ಹಿರಿಯ ಪತ್ರಕರ್ತ ಐತಿಚಂಡ ರಮೇಶ್ ಉತ್ತಪ್ಪ ಮಾತನಾಡಿ, ಬರೆಯುವವರೆಲ್ಲರೂ ಪತ್ರಕರ್ತರಾಗಲು ಸಾಧ್ಯವಿಲ್ಲ. ಪತ್ರಕರ್ತರು ಸುದ್ದಿಗೆ ಮಾತ್ರ ಸೀಮಿತವಾಗಬಾರದು. ಸುದ್ದಿಗೆ ಹೊರತಾಗಿ ಸಮಾಜದ ನಡುವೆ ಕೆಲಸ ಮಾಡಿ ಉತ್ತಮ ಮಾರ್ಗದಲ್ಲಿ ಕೊಂಡೊಯ್ಯುವ ನಿಟ್ಟಿನಲ್ಲಿ ಸದಾ ಜನತೆಯನ್ನು ಎಚ್ಚರಿಸುವ ಕೆಲಸವನ್ನು ಪತ್ರಕರ್ತರು ಮಾಡಬೇಕು ಎಂದರು.

ಕೊಡಗು ಪತ್ರಿಕಾ ಭವನದ ಸಂಸ್ಥಾಪಕ ಮ್ಯಾನೇಜಿಂಗ್ ಟ್ರಸ್ಟಿ ಟಿ.ಪಿ.ರಮೇಶ್, ಪತ್ರಕರ್ತರ ಸಂಘದ ಅಧ್ಯಕ್ಷ ಹೆಚ್.ಟಿ. ಅನಿಲ್, ಹಿರಿಯ ಟ್ರಸ್ಟಿ ಜಿ.ಚಿದ್ವಿಲಾಸ್ ಮಾತನಾಡಿದರು. ಕೊಡಗು ಪತ್ರಿಕಾ ಭವನ ಟ್ರಸ್ಟ್‌ನ ಮ್ಯಾನೇಜಿಂಗ್ ಟ್ರಸ್ಟಿ ಎಂ.ಪಿ. ಕೇಶವ ಕಾಮತ್ ಅಧ್ಯಕ್ಷತೆ ವಹಿಸಿದ್ದರು. ಪತ್ರಿಕಾ ಭವನ ಟ್ರಸ್ಟ್‌ನ ಪ್ರಧಾನ ಕಾರ್ಯದರ್ಶಿ ಎಸ್.ಜಿ.ಉಮೇಶ್, ಕೋಶಾಧಿಕಾರಿ ಕೆತಿಮ್ಮಪ್ಪ ಟ್ರಸ್ಟಿಗಳಾದ ವಿ.ಪಿ.ಸುರೇಶ್, ಜೀವನ್ ಚಿಣ್ಣಪ್ಪ, ಶ್ರೀಧರ್ ಹೂವಲ್ಲಿ, ಮಧೋಶ್ ಪೂವಯ್ಯ ಸೇರಿದಂತೆ ಜಿಲ್ಲೆಯ ವಿವಿಧ ಭಾಗಗಳಿಂದ ಆಗಮಿಸಿದ್ದ ಪತ್ರಕರ್ತರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ಕ್ರಿಕೆಟ್ ಪಂದ್ಯಾಟ: ಕುಲಾಲ ಬಳಗಕ್ಕೆ ಚಾಂಪಿಯನ್ಸ್ ಟ್ರೋಫಿ




ಕೊಡಗು ಜಿಲ್ಲಾ ಕುಲಾಲ ಕುಂಬಾರ ಚಾಂಪಿಯನ್ಸ್ ಟ್ರೋಫಿ ಕ್ರಿಕೆಟ್ ಪಂದ್ಯಾಟದ ವಿಜೇತ ತಂಡ.

ನಾಪೋಕ್ಲು, ನ.4–ಸಮೀಪದ ಮೂರ್ನಾಡಿನ ಬಾಚೆಟ್ಟಿರ ಲಾಲು ಮುದ್ದಯ್ಯ ಕ್ರೀಡಾಂಗಣದಲ್ಲಿ ಜಿಲ್ಲಾ ಕುಲಾಲ (ಕುಂಬಾರ)ರ ಸಂಘದ ಯುವ ಘಟಕದ ಆಶ್ರಯದಲ್ಲಿ ಆಯೋಜಿಸಲಾಗಿದ್ದ ಜಿಲ್ಲಾ ಕುಲಾಲ (ಕುಂಬಾರ) ಚಾಂಪಿಯನ್ಸ್ ಟ್ರೋಫಿ–2025 ಸೀಸನ್ 1 ಕ್ರಿಕೆಟ್ ಪಂದ್ಯಾಟದಲ್ಲಿ ಮಡಿಕೆ ಬೀಡುವಿನ ಕುಲಾಲ ಕುಂಬಾರ ಬಳಗ ಪ್ರಶಸ್ತಿಯನ್ನು ತನ್ನದಾಗಿಸಿಕೊಂಡಿತು. ವಿಜೇತ ತಂಡಕ್ಕೆ 20,000 ರೂ. ನಗದು ಹಾಗೂ ಟ್ರೋಫಿಯನ್ನು ವಿತರಿಸಲಾಯಿತು. ದ್ವಿತೀಯ ಸ್ಥಾನವನ್ನು ಕುಂಬಾರ ರಾಕರ್ಸ್ ತಂಡ ಪಡೆದುಕೊಂಡಿತು ಈ ತಂಡಕ್ಕೆ 15,000 ನಗದು ಹಾಗೂ ಟ್ರೋಫಿಯನ್ನು ವಿತರಿಸಲಾಯಿತು. ಮಡಿಕೇರಿಯ ಕುಲಾಲ ಬ್ರದರ್ಸ್ 11 ತಂಡ ತೃತೀಯ ಸ್ಥಾನ ಪಡೆದು 5000 ನಗದು ಹಾಗೂ ಟ್ರೋಫಿಯನ್ನು ಮೂರ್ನಾಡಿನ ಟೀಮ್ ಶ್ರೀದೇವಿ ತಂಡ ನಾಲ್ಕನೇ ಸ್ಥಾನ ತನ್ನದಾಗಿಸಿಕೊಂಡಿತು.

ಸಮಾರೋಪ ಸಮಾರಂಭದಲ್ಲಿ ಜಿಲ್ಲಾಧ್ಯಕ್ಷ ಕೆ ಕುಶಾಲಪ್ಪ ಮೂಲ್ಯ ಮಾತನಾಡಿ ಸಮಾಜ ಬಾಂಧವರಲ್ಲಿ ಯಾರಾದರೂ ಐಎಎಸ್, ಐಪಿಎಸ್ ಕಲಿಯಲು ಇಚ್ಚಿಸುವ ಮಕ್ಕಳಿಗೆ ವೈಯಕ್ತಿಕವಾಗಿ ರೂ.25 ಸಾವಿರ ನೀಡುವುದಾಗಿ ಹೇಳಿದರು. ಯುವ ಘಟಕದ ಅಧ್ಯಕ್ಷ ಚಂದ್ರಶೇಖರ್ ಕುಲಾಲ್ ಮೂರ್ನಾಡು ಮಾತನಾಡಿ ಕಾರ್ಯಕ್ರಮದ ಯಶಸ್ಸಿನ ಹಿಂದೆ ಯುವ ಘಟಕದ ಸದಸ್ಯರ ಶ್ರಮ ಬಹಳಷ್ಟು ಇದೆ ಎಂದು ಹೇಳಿದರು. ಜಿಲ್ಲಾ ಕುಲಾಲ ಕುಂಬಾರ ಸಂಘದ ಸ್ಥಾಪಕ ಅಧ್ಯಕ್ಷ ಮುತ್ತಮ್ಮ ಕೋಟಿ ಮಾತನಾಡಿ ಸಂಘಟನೆಯಾದಾಗ ಮಾತ್ರ ಸಮಾಜದಲ್ಲಿ ನಾವು ಗುರುತಿಸಿಕೊಳ್ಳಲು ಸಾಧ್ಯ ಆ ಮೂಲಕ ನಾವೆಲ್ಲರೂ ಹೆಚ್ಚಿನ ಸಂಖ್ಯೆಯಲ್ಲಿ ಸಂಘಟಿತರಾಗೋಣ ಎಂದು ತಿಳಿಸಿದರು.

ವೇದಿಕೆಯಲ್ಲಿ ವಿರಾಜಪೇಟೆ ಜೀವವಿಮಾ ನಿಗಮದ ಮ್ಯಾನೇಜರ್ ಮಧುಸೂದನ, ಉಪಾಧ್ಯಕ್ಷ ಕೆ.ಕೆ ದಾಮೋದರ್, ಪ್ರಧಾನ ಕಾರ್ಯದರ್ಶಿ ಅರುಣ್ ಕುಮಾರ್ ಕೂಡಿಗೆ, ಖಜಾಂಚಿ ಗಿರೀಶ್ ಮಡಿಕೆಬೀಡು, ಕ್ರೀಡಾ ಸಮಿತಿ ಅಧ್ಯಕ್ಷ, ಕೆ.ಡಿ, ಶಾಂತಕುಮಾರ್ ಶ್ರೀ ಅರುಣ ಪಿಯು ಕಾಲೇಜ್ ಪ್ರಾಂಶುಪಾಲ ಕೆ ಆರ್. ರಮೇಶ್ ಚೇರಂಬಾಣೆ, ಶ್ರೀ ಪಾಂಡೇಶ್ವರ ಎ ಎಸ್ಐ ಚಂದ್ರಶೇಖರ್ ಪದಾಧಿಕಾರಿಗಳಾದ ಎಂಡಿ ಸುರೇಶ್ ಕುಲಾಲ್, ಬೆಂಗಳೂರಿನ ಉದ್ಯಮಿ ಪೂವಯ್ಯ ಲಕ್ಷ್ಮಣ್, ತಮ್ಮಯ್ಯ , ರಮೇಶ್, ಮನು ಚಂಗಪ್ಪ ಜಿಲ್ಲಾ ಘಟಕ ಮತ್ತು ಯುವ ಘಟಕದ ಪದಾಧಿಕಾರಿಗಳು ಸಮಾಜ ಬಾಂಧವರು, ಕ್ರೀಡಾಭಿಮಾನಿಗಳು ಉಪಸ್ಥಿತರಿದ್ದರು. ನವೀನ್ ಕುಲಾಲ್ ಪುತ್ತೂರು ಕಾರ್ಯಕ್ರಮ ನಿರೂಪಿಸಿ ಪವನ್ ಕುಲಾಲ್ ವಂದಿಸಿದರು.


ಏರ್ ಪಿಸ್ತೂಲ್ ಶೂಟಿಂಗ್ ಸ್ಪರ್ಧೆಯಲ್ಲಿ ಕೊಡಗಿಗೆ ಕಂಚಿನ ಪದಕ



ಮಡಿಕೇರಿ, ನ.4–ನ್ಯಾಷನಲ್ ರೈಫಲ್ ಅಸೋಸಿಯೇಷನ್ ಆಫ್ ಇಂಡಿಯಾ ವತಿಯಿಂದ ಚೆನ್ನೈಯಲ್ಲಿ ನಡೆದ 27ನೇ ರಾಷ್ಟ್ರೀಯ 'ಕುಮಾರ್ ಸುರೇಂದರ್ ಸಿಂಗ್ ಇಂಟರ್ ಸ್ಕೂಲ್ ಶೂಟಿಂಗ್ ಚಾಂಪಿಯನ್ ಶಿಪ್' ಸ್ಪರ್ಧೆಯಲ್ಲಿ ಕಾನಡ್ಕ ಧನ್ವಿ 10 ಮೀಟರ್ ಏರ್ ಪಿಸ್ತೂಲ್ ಶೂಟಿಂಗ್ ಸ್ಪರ್ಧೆಯಲ್ಲಿ ಸಬ್ ಯೂತ್ ಮಹಿಳೆಯರ ವಿಭಾಗದಲ್ಲಿ ಕಂಚಿನ ಪದಕವನ್ನು ಗೆದ್ದು ಕರ್ನಾಟಕಕ್ಕೆ ಕೀರ್ತಿ ತಂದಿದ್ದಾರೆ. ರಾಷ್ಟ್ರದ ವಿವಿಧ ಭಾಗಗಳ 2500ಕ್ಕೂ ಹೆಚ್ಚು ಯುವ ಶೂಟರ್ ಗಳು ಸ್ಪರ್ಧೆಯಲ್ಲಿ ಪಾಲ್ಗೊಂಡಿದ್ದರು. ಕಾನಡ್ಕ ಧನ್ವಿ ಬೆಂಗಳೂರಿನ ಡೆಲ್ಲಿ ಪಬ್ಲಿಕ್ ಶಾಲೆಯ 10ನೇ ತರಗತಿ ವಿದ್ಯಾರ್ಥಿನಿಯಾಗಿದ್ದು, ಅಂತರ್‌ರಾಷ್ಟ್ರೀಯ ಕೋಚ್ ಕೆ.ವೈ ಶರಣೇಂದ್ರ ಮಾರ್ಗದರ್ಶನದಲ್ಲಿ ಹಾಕ್ ಐ ಸ್ಪೋರ್ಟ್ಸ್ ರೈಫಲ್ ಮತ್ತು ಪಿಸ್ತೂಲ್ ಶೂಟಿಂಗ್ ಅಕಾಡೆಮಿಯಲ್ಲಿ ತರಬೇತಿಯನ್ನು ಪಡೆಯುತ್ತಿದ್ದಾಳೆ. ಧನ್ವಿ ತಾಲೂಕಿನ ಮರಗೋಡು ಗ್ರಾಮದ ಕೃಷಿಕ ಕಾನಡ್ಕ ಹನೀಶ್ ಹಾಗೂ ಆಶಾ ದಂಪತಿಯ ಪುತ್ರಿಯಾಗಿದ್ದಾರೆ.


ಪತಿಯಿಂದ ಪತ್ನಿಯ ಬರ್ಬರ ಹತ್ಯೆ

ಸುಂಟಿಕೊಪ್ಪ, ನ.4– ಅತಿಯಾದ ಮದ್ಯ ಸೇವಿಸಿ ಕ್ಷುಲ್ಲಕ ವಿಚಾರಕ್ಕೆ ಪತ್ನಿಯೊಂದಿಗೆ ಜಗಳ ತೆಗೆದು ಆಕೆಯನ್ನು ಬರ್ಬರವಾಗಿ ಹತ್ಯೆ ಮಾಡಿರುವ ಘಟನೆ ಕೊಡಗರಹಳ್ಳಿ ಗ್ರಾಮದ ಅಂದಗೋವೆಯಲ್ಲಿ ನಡೆದಿದೆ.



ಅಂದಗೋವೆ ಖಾಸಗಿ ಕಾಫಿ ತೋಟವೊಂದರ ಲೈನ್‌ಮನೆಯಲ್ಲಿ ವಾಸವಿದ್ದ ಮುತ್ತ(50) ತನ್ನ ಪತ್ನಿ ಲತಾ(45) ಎಂಬಾಕೆಯನ್ನು ಹತ್ಯೆಗೈದಿದ್ದು, ಪೊಲೀಸರು ಆರೋಪಿ ಮುತ್ತನನ್ನು ಬಂಧಿಸಿದ್ದಾರೆ. ಘಟನಾ ಸ್ಥಳಕ್ಕೆ ಅಡಿಷನಲ್ ಎಸ್.ಪಿ ದಿನೇಶ್‌ಕುಮಾರ್, ಸುಂಟಿಕೊಪ್ಪ ಮತ್ತು ಕುಶಾಲನಗರ ಗ್ರಾಮಾಂತರ ಠಾಣಾ ಪೊಲೀಸ್ ಅಧಿಕಾರಿಗಳು ಸಿಬ್ಬಂದಿ ಪರಿಶೀಲನೆ ನಡೆಸಿದರು. ಮೇಲ್ನೋಟಕ್ಕೆ ಕೌಟುಂಬಿಕ ಕಲಹ ಕೃತ್ಯಕ್ಕೆ ಕಾರಣ ಎಂಬ ಶಂಕೆ ವ್ಯಕ್ತವಾಗಿದ್ದು, ಪೊಲೀಸರು ತನಿಖೆ ಚುರುಕುಗೊಳಿಸಿದ್ದಾರೆ.

ಮಾದಾಪುರ ಡಿ.ಚೆನ್ನಮ್ಮ ವಿದ್ಯಾಸಂಸ್ಥೆಗೆ ಕೋದಂಡ ಪಿ.ಕಾರ್ಯಪ್ಪ ಭೇಟಿ



ನಿವೃತ್ತ ಲೆಫ್ಟಿನೆಂಟ್ ಜನರಲ್ ಕೋದಂಡ ಪಿ.ಕಾರ್ಯಪ್ಪ ಮಂಗಳವಾರ ಮಾದಾಪುರ ಡಿ.ಚೆನ್ನಮ್ಮ ವಿದ್ಯಾ ಸಂಸ್ಥೆಗೆ ಭೇಟಿ ನೀಡಿದ್ದರು.

ಮಡಿಕೇರಿ, ನ.4– ಮಾಜಿ ರಾಷ್ಟ್ರಪತಿ ರಾಮನಾಥ್ ಕೋವಿಂದ್ ಅವರ ಮಿಲಿಟರಿ ಕಾರ್ಯದರ್ಶಿಯಾಗಿ ಸೇವೆ ಸಲ್ಲಿಸಿದ್ದ ಗರಗಂದೂರು ಗ್ರಾಮದವರಾದ ನಿವೃತ್ತ ಲೆಫ್ಟಿನೆಂಟ್ ಜನರಲ್ ಕೋದಂಡ ಪಿ.ಕಾರ್ಯಪ್ಪ ಮಂಗಳವಾರ ಮಾದಾಪುರ ಡಿ.ಚೆನ್ನಮ್ಮ ವಿದ್ಯಾಸಂಸ್ಥೆಗೆ ಭೇಟಿ ನೀಡಿದ್ದರು. ತಮ್ಮ ಜೀವನದ ಅನುಭವ ಹಾಗೂ ಸಾಧನೆಗಳನ್ನು ಪ್ರಾತ್ಯಕ್ಷಿಕೆ ಮೂಲಕ ತೋರಿಸಿ ವಿದ್ಯಾರ್ಥಿಗಳಿಗೆ ಪ್ರೇರಣೆಯಾದರು. ವಿದ್ಯಾರ್ಥಿಗಳು ದೈಹಿಕ, ಮಾನಸಿಕ ಆರೋಗ್ಯಕ್ಕೆ ಹೆಚ್ಚಿನ ಮಹತ್ವ ನೀಡುವುದರೊಂದಿಗೆ ಕ್ರೀಡೆ ಮತ್ತು ಶಿಕ್ಷಣಕ್ಕೂ ಸಮಾನ ಆಸಕ್ತಿಯನ್ನು ತೋರಬೇಕು ಎಂದು ಹೇಳಿದರು.

ವೇದಿಕೆಯಲ್ಲಿ ಸಂಸ್ಥೆಯ ಅಧ್ಯಕ್ಷ ಕರ್ನಲ್ ಬಿ.ಜಿ.ವಿ ಕುಮಾರ್, ಕಾರ್ಯದರ್ಶಿ ಎಂ.ಬಿ ಬೋಪಣ್ಣ, ಪೋಷಕ ಸದಸ್ಯರಾದ ಖ್ಯಾತ ಅಂತಾರಾಷ್ಟ್ರೀಯ ಟೆನಿಸ್‌ಪಟು ರೋಹನ್ ಬೋಪಣ್ಣ, ಅವರ ತಂದೆ ಮಚ್ಚಂಡ ಬೋಪಣ್ಣ ಆಡಳಿತ ಮಂಡಳಿ ಸದಸ್ಯರು, ಪ್ರಾಂಶುಪಾಲ ಮಂದಪ್ಪ, ಮುಖ್ಯ ಶಿಕ್ಷಕಿ ರೀಟಾ, ಶಿಕ್ಷಕ ವೃಂದ, ವಿದ್ಯಾರ್ಥಿಗಳು ಹಾಜರಿದ್ದರು.

ಇಂದು ಸೋಮವಾರಪೇಟೆ ತ್ರೈಮಾಸಿಕ ಕೆಡಿಪಿ ಸಭೆ

ಮಡಿಕೇರಿ ನ.4– ಸೋಮವಾರಪೇಟೆ ತಾಲೂಕು ತ್ರೈಮಾಸಿಕ ಕೆಡಿಪಿ ಸಭೆಯು ಶಾಸಕ ಡಾ.ಮಂತರ್ ಗೌಡ ಅಧ್ಯಕ್ಷತೆಯಲ್ಲಿ ನ.5 ರ ಬೆಳಿಗ್ಗೆ 10.30 ಗಂಟೆಗೆ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ನಡೆಯಲಿದೆ ಎಂದು ಸೋಮವಾರಪೇಟೆ ತಾ.ಪಂ. ಕಾರ್ಯನಿರ್ವಾಹಕ ಅಧಿಕಾರಿ ತಿಳಿಸಿದ್ದಾರೆ.

ನಾಳೆ ತಲಕಾವೇರಿ ದೇವಾಲಯ ಸ್ವಚ್ಛತಾ ಕಾರ್ಯ

ಮಡಿಕೇರಿ, ನ.4– ತಲಕಾವೇರಿ ದೇವಾಲಯಲ್ಲಿ ನ. .6 ರಂದು ಸ್ವಚ್ಛತಾ ಕಾರ್ಯದ ಪ್ರಯುಕ್ತ ಮಧ್ಯಾಹ್ನ 2 ಗಂಟೆಯ ನಂತರ ದೇವಾಲಯಕ್ಕೆ ಪ್ರವೇಶ ಇರುವುದಿಲ್ಲ. ಆದ್ದರಿಂದ ಸಾರ್ವಜನಿಕ ಭಕ್ತಾದಿಗಳು ಸಹಕರಿಸಬೇಕೆಂದು ದೇವಾಲಯದ ಕಾರ್ಯನಿರ್ವಾಹಕ ಅಧಿಕಾರಿ ಎನ್.ಜಿ. ಚಂದ್ರಶೇಖರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಯೋಗಿನಾರೇಯಣ ಬಲಿಜ ಸಂಘದ ಅಧ್ಯಕ್ಷರಾಗಿ ಆರ್.ಸೋಮಶೇಖರ್



ಯೋಗಿನಾರೇಯಣ ಬಲಿಜ ಸಂಘದ ಅಧ್ಯಕ್ಷರಾಗಿ ಆಯ್ಕೆಯಾದ ಆರ್.ಸೋಮಶೇಖರ್ ಅವರನ್ನು ಸದಸ್ಯರು ಅಭಿನಂದಿಸಿದರು.

ಕುಶಾಲನಗರ, ನ.4–ಸೋಮವಾರಪೇಟೆ ಹಾಗೂ ಕುಶಾಲನಗರ ತಾಲೂಕಿನ ಶ್ರೀ ಯೋಗಿನಾರೇಯಣ ಬಲಿಜ ಸಂಘದ ನೂತನ ಅಧ್ಯಕ್ಷರಾಗಿ ಆರ್. ಸೋಮಶೇಖರ್ ಆಯ್ಕೆಯಾಗಿದ್ದಾರೆ.

ಪಟ್ಟಣದ ಸಂಘದ ಕಚೇರಿಯಲ್ಲಿ ಹಿಂದಿನ ಅಧ್ಯಕ್ಷ ಬಿ.ಎಸ್. ಆರ್.ಬಾಬಣ್ಣ ಅಧ್ಯಕ್ಷತೆಯಲ್ಲಿ ನಡೆದ ಸದಸ್ಯರ ಸಭೆಯಲ್ಲಿ ನೂತನ ಪದಾಧಿಕಾರಿಗಳ ಆಯ್ಕೆ ನಡೆಯಿತು. ಸಂಘದ ಗೌರವ ಅಧ್ಯಕ್ಷರಾಗಿ ಆರ್.ಬಾಬಣ್ಣ, ಉಪಾಧ್ಯಕ್ಷರಾಗಿ ಟಿ.ಎಸ್.ನಿರಂಜನ್, ಟಿ.ಆರ್. ಜಗದೀಶ್, ಸಿ.ಆರ್.ಮದನ್, ಕಾರ್ಯದರ್ಶಿಯಾಗಿ ಟಿ.ಎನ್.ಜಯರಾಮ್, ಸಹಕಾರ್ಯದರ್ಶಿಯಾಗಿ ಸಿ.ಜಗದೀಶ್, ಖಜಾಂಚಿಯಾಗಿ ಜಿ.ಆರ್.ಸಂಧ್ಯಾ ಗಣೇಶ್, ನಿರ್ದೇಶಕರಾಗಿ ಕೆ.ಬಾಲಸುಬ್ರಮಣ್ಯಂ, ಉಮೇಶ್, ಕಿರಣ್, ಕುಶ, ನೂತನ್, ಸವಿತಾ ದಯಾನಂದ, ಮಂಜುಳಾ, ಗೌರವ ಸಲಹೆಗಾರರಾಗಿ ಟಿ.ಎಸ್. ಬಾಲಕೃಷ್ಣ, ಟಿ.ಬಿ.ಸತೀಶ್, ಟಿ.ಡಿ.ದಯಾನಂದ, ಎಂ.ಆರ್.ಗಣೇಶ್ ನೇಮಕವಾಗಿದ್ದಾರೆ.

ರಾಜ್ಯೋತ್ಸವದ ಅಂಗವಾಗಿ ನಗರದಲ್ಲಿ ಸ್ಕೇಟಿಂಗ್ ಜಾಥಾ



ಕನ್ನಡ ರಾಜ್ಯೋತ್ಸವದ ಅಂಗವಾಗಿ ಜಿಲ್ಲಾ ನೆಟ್‌ಬಾಲ್ ಅಸೋಸಿಯೇಷನ್ ಅಧ್ಯಕ್ಷ ವಿ.ಶ್ರೀನಿವಾಸ ಪ್ರಸಾದ್ ಸ್ಕೇಟಿಂಗ್ ಜಾಥಾಕ್ಕೆ ಹಸಿರು ನಿಶಾನೆ ತೋರಿಸಿದರು.

ಚಾಮರಾಜನಗರ, ನ.4– ಕನ್ನಡ ರಾಜ್ಯೋತ್ಸವದ ಅಂಗವಾಗಿ ನಗರದಲ್ಲಿ ಜಿಲ್ಲಾ ಸ್ಕೇಟಿಂಗ್ ಅಸೋಸಿಯೇಷನ್ ವತಿಯಿಂದ ನಗರದ ಪ್ರಮುಖ ಬೀದಿಗಳಲ್ಲಿ ಜಾಥಾ ನಡೆಯಿತು.

ನಗರದ ಸುಲ್ತಾನ್ ಷರೀಫ್ ವೃತ್ತದಲ್ಲಿ ಜಿಲ್ಲಾ ನೆಟ್ ಬಾಲ್ ಅಸೋಸಿಯೇಷನ್ ಅಧ್ಯಕ್ಷ, ಹಿರಿಯ ಕ್ರೀಡಾಪಟು ವಿ. ಶ್ರೀನಿವಾಸ ಪ್ರಸಾದ್ ಜಾಥಾಕ್ಕೆ ಹಸಿರು ನಿಶಾನೆ ತೋರಿಸಿ ರಾಜ್ಯೋತ್ಸವದ ಹೊತ್ತಿನಲ್ಲಿ ಜಿಲ್ಲೆಯಲ್ಲಿ ಕ್ರೀಡಾ ಕ್ಷೇತ್ರದಲ್ಲಿ ಸಾಧನೆ ಮಾಡಿರುವವರನ್ನು ಗುರುತಿಸಿ, ಅಭಿನಂದಿಸುವ ಕೆಲಸವನ್ನು ಸರ್ಕಾರ ಹಾಗೂ ಜಿಲ್ಲಾಡಳಿತ ಮಾಡಬೇಕು ಎಂದು ಆಗ್ರಹಿಸಿದರು.

ಉದ್ಯಮಿ ಶ್ರೀನಿಧಿಕುದರ್ ಮಾತನಾಡಿ, ಕನ್ನಡ ರಾಜ್ಯೋತ್ಸವದ ಅಂಗವಾಗಿ ನಗರದಲ್ಲಿ ಜಿಲ್ಲಾ ಸ್ಕೇಟಿಂಗ್ ಅಸೋಸಿಯೇಷನ್ ವತಿಯಿಂದ ಜಾಥಾ ಆಯೋಜಿಸಿರುವುದು ಉತ್ತಮ ಬೆಳವಣಿಗೆ, ಸಂಸ್ಥೆಯಿಂದ ಜಿಲ್ಲೆಯ ಕ್ರೀಡಾಪಟುಗಳಿಗೆ ಮತ್ತಷ್ಟು ಅನುಕೂಲತೆಗಳು ಲಭ್ಯವಾಗಬೇಕು, ಸ್ಕೇಟಿಂಗ್ ಕ್ರೀಡಾಪಟುಗಳು ರಾಜ್ಯ, ರಾಷ್ಟ್ರ, ಅಂತಾರಾಷ್ಟ್ರೀಯ ಮಟ್ಟದಲ್ಲಿ ಭಾಗವಹಿಸಿ ಉತ್ತಮ ಪ್ರದರ್ಶನ ನೀಡುವ ಮೂಲಕ ಜಿಲ್ಲೆಗೆ ಕೀರ್ತಿ ತರಬೇಕು ಎಂದು ಹಾರೈಸಿದರು.

ಈ ಸಂದರ್ಭದಲ್ಲಿ ಸ್ಕೇಟಿಂಗ್ ತರಬೇತುದಾರ ಪುರ್ಖಾನ್, ಅಜೀಂ ಮಕ್ಕಳ ಪೋಷಕರು ಹಾಜರಿದ್ದರು.

ಅಂಬೇಡ್ಕರ್ ಫ್ಲೆಕ್ಸ್, ಬುದ್ಧನ ವಿಗ್ರಹ ವಿರೂಪ; ಆರೋಪಿ ಬಂಧನ



ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಬಿ.ಟಿ.ಕವಿತಾ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು. ಎಎಸ್‌ಪಿ ಶಶಿಧರ್, ಡಿವೈಎಸ್‌ಪಿಗಳಾದ ಸ್ನೇಹರಾಜ್, ಧರ್ಮೇಂದ್ರ ಉಪಸ್ಥಿತರಿದ್ದರು

ಚಾಮರಾಜನಗರ, ನ.4–ತಾಲೂಕಿನ ಜ್ಯೋತಿಗೌಡನಪುರದಲ್ಲಿ ಅಂಬೇಡ್ಕರ್ ಫ್ಲೆಕ್ಸ್ ಬುದ್ಧರ ವಿಗ್ರಹವನ್ನು ಭಗ್ನ ಮಾಡಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ಓರ್ವ ಆರೋಪಿಯನ್ನು ಬಂಧಿಸುವಲ್ಲಿ ಪೊಲೀಸರು ಯಶಸ್ವಿಯಾಗಿದ್ದಾರೆ

ಜ್ಯೋತಿಗೌಡನಪುರ ಗ್ರಾಮದವನೇ ಆದ ಮಂಜುನಾಥ್ ಅಲಿಯಾಸ್ ಪೆಂಡಾಲ್ ಮಂಜು (31) ಎಂಬಾತನನ್ನು ಬಂಧಿಸಿರುವುದಾಗಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಬಿ.ಟಿ. ಕವಿತಾ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು. ಕಳೆದ ಅ. 23ರಂದು ಜ್ಯೋತಿಗೌಡನಪುರ ಗ್ರಾಮದ ಲುಂಬಿನಿ ಬುದ್ಧ ವಿಹಾರದಲ್ಲಿದ್ದ ಬುದ್ಧ ಹಾಗೂ ಅಂಬೇಡ್ಕರ್‌ರವರ ವಿಗ್ರಹಗಳನ್ನು ಭಗ್ನ ಮಾಡಿ, ಫ್ಲೆಕ್ಸ್‌ಗಳನ್ನು ಹರಿದು ಹಾಕಿದ್ದನು. ಈ ಘಟನೆ ಸಾಕಷ್ಟು ಆಕ್ರೋಶಕ್ಕೆ ಕಾರಣವಾಗಿ ಜ್ಯೋತಿಗೌಡನಪುರ ಅಷ್ಟೇ ಅಲ್ಲದೇ ಜಿಲ್ಲೆಯ ವಿವಿಧೆಡೆ ಪ್ರತಿಭಟನೆ ನಡೆದು ಆರೋಪಿ ಬಂಧನಕ್ಕೆ ಒತ್ತಾಯಿಸಲಾಗಿತ್ತು.

ಯಶಸ್ವಿ ಕಾರ್ಯಾಚರಣೆ: ಗ್ರಾಮದ ಮುಖಂಡ ಜೆ.ಸಿ. ರಾಘವೇಂದ್ರ ಪ್ರಸನ್ನ ಚಾಮರಾಜನಗರ ಪೂರ್ವ ಪೊಲೀಸ್ ಠಾಣೆಗೆ ದೂರು ನೀಡಿದ ಕೂಡಲೇ ಆರೋಪಿಗಳ ಪತ್ತೆಗಾಗಿ 7 ವಿಶೇಷ ತನಿಖಾ ತಂಡಗಳನ್ನು ರಚಿಸಿದ್ದಲ್ಲದೆ, ಜ್ಯೋತಿಗೌಡನಪುರ ಹಾಗೂ ಸುತ್ತಮುತ್ತಲ ವ್ಯಾಪ್ತಿಯಲ್ಲಿ 86 ಸಿಸಿಟಿವಿ ಕ್ಯಾಮೆರಾಗಳನ್ನು ಪರಿಶೀಲಿಸಿ, ಒಟ್ಟು 1,877 ಕಾಲ್ ಡೀಟೆಲ್ಸ್ ರೆಕಾರ್ಡ್‌ಗಳನ್ನು ಹಾಗೂ 24 ಸ್ಥಳಗಳ ಸೆಲ್ ಐ.ಡಿ. ಟವರ್‌ಡಂಪ್ ವಿವರಗಳನ್ನು ಪಡೆದು ವಿಶ್ಲೇಷಿಸಿ ಪರಿಶೀಲಿಸಲಾಯಿತು. ಇದರೊಂದಿಗೆ ಇತರೆ ತಾಂತ್ರಿಕ ಹಾಗೂ ವೈಜ್ಞಾನಿಕ ವಿಧಾನಗಳನ್ನು ತನಿಖೆಯಲ್ಲಿ ಅಳವಡಿಸಿಕೊಂಡು ಆರೋಪಿತರ ಪತ್ತೆಗೆ ಕ್ರಮ ಕೈಗೊಂಡಿದ್ದೆವು. ಎಂದರು.

ವಿಗ್ರಹ ಭಗ್ನಕ್ಕೆ ಕಾರಣ : ಎರಡು ತಿಂಗಳ ಹಿಂದೆ ಆರೋಪಿ ಪೆಂಡಾಲ್ ಮಂಜನು ಮದ್ಯಪಾನ ಮಾಡಿ ದಲಿತ ಮಹಿಳೆ ಜೊತೆ ಜಗಳವಾಡಿ ಆಕೆಗೆ ಚಪ್ಪಲಿಯಿಂದ ಹೊಡೆದಿದ್ದನು. ಈ ಘಟನೆಗೆ ಸಂಬಂಧಿಸಿದಂತೆ ಗ್ರಾಮದ ಯಜಮಾನರು ಮಂಜನಿಗೆ 60 ಸಾವಿರ ದಂಡ ವಿಧಿಸಿದ್ದರು. ಈತನ ಮನೆಯವರು ಚಿನ್ನ ಗಿರವಿಗೆ ಇಟ್ಟು 30 ಸಾವಿರ ದಂಡ ಪಾವತಿ ಮಾಡಿದ್ದರು. ತನ್ನ ಬಳಿಯಿದ್ದ ಬೈಕ್ ಮಾರಿ ಉಳಿದ 30 ಸಾವಿರ ದಂಡದ ಹಣವನ್ನು ಮಂಜ ಪಾವತಿಸಿದ್ದನು. ಇದೇ ಕಾರಣಕ್ಕೆ ಅ.23ರ ರಾತ್ರಿ ಮದ್ಯಪಾನ ಮಾಡಿ ಬುದ್ಧ, ಅಂಬೇಡ್ಕರ್ ವಿಗ್ರಹ ಭಗ್ನ ಮಾಡಿ ದ್ದಾಗಿ ವಿಚಾರಣೆ ಸಮಯದಲ್ಲಿ ಪೊಲೀಸರಿಗೆ ನೀಡಿರುವ ಹೇಳಿಕೆಯಲ್ಲಿ ತಿಳಿಸಿದ್ದಾನೆಂದು ಎಸ್‌ಪಿ ಹೇಳಿದರು.

ಪ್ರಕರಣದಲ್ಲಿ ಎಸ್‌ಪಿ ಡಾ.ಬಿ.ಟಿ. ಕವಿತಾ, ಎಎಸ್‌ಪಿ ಶಶಿಧರ್ ಮಾರ್ಗದರ್ಶನದಲ್ಲಿ ಡಿವೈಎಸ್‌ಪಿಗಳಾದ ಸ್ನೇಹರಾಜ್, ಧರ್ಮೇಂದ್ರ, ಇನ್‌ಸ್ಪೆಕ್ಟರ್‌ಗಳಾದ ಆರ್.ಶ್ರೀಕಾಂತ್, ಸಿ.ಪಿ.ನವೀನ್, ಚಿಕ್ಕರಾಜಶೆಟ್ಟಿ, ಎಸ್.ಎಲ್.ಸಾಗರ್, ಆನಂದಮೂರ್ತಿ, ತಾಜುದ್ದಿನ್, ಮಂಜುನಾಥ್, ವೆಂಕಟೇಶ್, ಮಹೇಶ್ ಸೇರಿದಂತೆ ತಾಂತ್ರಿಕ ವಿಭಾಗದ ಸಿಬ್ಬಂದಿಗಳು, ಶ್ವಾನದಳ, ಬೆರಳುಮುದ್ರೆ ಘಟಕದವರು ಪಾಲ್ಗೊಂಡಿದ್ದರು. ತನಿಖೆಯಲ್ಲಿ ಪಾಲ್ಗೊಂಡ ಎಲ್ಲಾ ಅಧಿಕಾರಿಗಳು ಹಾಗೂ ಸಿಬ್ಬಂದಿಯವರನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಬಿ.ಟಿ. ಕವಿತಾ ಶ್ಲಾಘಿಸಿದ್ದಾರೆ.

ಆನ್‌ಲೈನ್ ಮೂಲಕ ಸಮೀಕ್ಷೆ ಅವಧಿ ವಿಸ್ತರಣೆ

ಚಾಮರಾಜನಗರ: ವಿವಿಧ ಕಾರಣಗಳಿಂದಾಗಿ ಸಮೀಕ್ಷೆಯಲ್ಲಿ ಭಾಗವಹಿಸಲು ಸಾಧ್ಯವಾಗದೇ ಇರುವವರಿಗೆ ಅವಕಾಶ ನೀಡುವ ಹಿನ್ನೆಲೆಯಲ್ಲಿ ಆನ್‌ಲೈನ್ ಮೂಲಕ ಸಮೀಕ್ಷೆಯಲ್ಲಿ ಸ್ವಯಂ ಪಾಲ್ಗೊಳ್ಳುವ ಅವಧಿಯನ್ನು ನ. 10ರವರೆಗೆ ಅಂತಿಮವಾಗಿ ವಿಸ್ತರಿಸಲಾಗಿದೆ.

ರಾಜ್ಯ ಹಿಂದುಳಿದ ವರ್ಗಗಳ ಆಯೋಗದಿಂದ ರಾಜ್ಯದಲ್ಲಿರುವ ಎಲ್ಲಾ ಜನರ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಅ.31ಕ್ಕೆ ಮುಕ್ತಾಯ ವಾಗಿದೆ. ವಿವಿಧ ಕಾರಣಗಳಿಂದಾಗಿ ಸಮೀಕ್ಷೆಯಲ್ಲಿ ಭಾಗವಹಿಸಲು ಸಾಧ್ಯವಾಗದೇ ಇರುವವರಿಗೆ ಅವಕಾಶ ನೀಡುವ ಉದ್ದೇಶದಿಂದ ಆನ್‌ಲೈನ್ ಮೂಲಕ http://kscbc self declaration. karnataka.gov.in ಲಿಂಕ್ ಬಳಸಿಕೊಂಡು ಸಮೀಕ್ಷೆಯಲ್ಲಿ ಸ್ವಯಂ ಪಾಲ್ಗೊಳ್ಳುವ ಅವಧಿಯನ್ನು ನ.10ರವರೆಗೆ ವಿಸ್ತರಿಸಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

ಜ್ಯೋತಿಗೌಡನಪುರಕ್ಕೆ ಬುಡಕಟ್ಟುಗಳ ಆಯೋಗದ ಅಧ್ಯಕ್ಷರ ಭೇಟಿ



ಬುಡಕಟ್ಟು ಆಯೋಗದ ಅಧ್ಯಕ್ಷ ಡಾ.ಎಲ್.ಮೂರ್ತಿ ತಾಲೂಕಿನ ಜ್ಯೋತಿಗೌಡನಪುರ ಗ್ರಾಮಕ್ಕೆ ಭೇಟಿ ನೀಡಿದ್ದರು. ಜಿಲ್ಲಾಧಿಕಾರಿ ಶಿಲ್ಪಾನಾಗ್ ಅಧ್ಯಕ್ಷರೊಂದಿಗಿದ್ದರು.


ಚಾಮರಾಜನಗರ, ನ. 4–ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗದ ಅಧ್ಯಕ್ಷ ಡಾ.ಎಲ್. ಮೂರ್ತಿ ತಾಲೂಕಿನ ಜ್ಯೋತಿಗೌಡನಪುರ ಗ್ರಾಮಕ್ಕೆ ಮಂಗಳವಾರ ಭೇಟಿ ನೀಡಿದ್ದರು.

ಗ್ರಾಮದಲ್ಲಿ ನಡೆದ ಕೃತ್ಯದ ಬಗ್ಗೆ ಜಿಲ್ಲಾಧಿಕಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗಳಿಂದ ಮಾಹಿತಿ ಪಡೆಯಲಾಗಿದೆ. ಅಂದಿನಿಂದಲೂ ನಿರಂತರ ಸಂಪರ್ಕದಲ್ಲಿದ್ದು ಎಲ್ಲ ವಿವರವನ್ನು ಅಧಿಕಾರಿಗಳು ತಿಳಿಸುತ್ತಿದ್ದಾರೆ ಎಂದರು. ದೌರ್ಜನ್ಯ, ಜಮೀನು ವಿವಾದ, ಇನ್ನಿತರ ಹಲವಾರು ಪ್ರಕರಣಗಳ ಅಹವಾಲುಗಳನ್ನು ಆಲಿಸಿ ಪರಿಹಾರಕ್ಕಾಗಿ ಸಂಬಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಈವರೆಗೆ ಆಯೋಗದಲ್ಲಿ 2573 ಪ್ರಕರಣಗಳು ದಾಖಲಾಗಿದ್ದು, ಆಯೋಗದ ಅಧ್ಯಕ್ಷನಾಗಿ ತಿಂಗಳ ಹಿಂದೆಯಷ್ಟೇ ಅಧಿಕಾರ ವಹಿಸಿಕೊಂಡಿದ್ದು, 125 ಪ್ರಕರಣಗಳನ್ನು ಕೈಗೆತ್ತಿಕೊಂಡು ಅದರಲ್ಲಿ 25 ಪ್ರಕರಣಗಳನ್ನು ಇತ್ಯರ್ಥ ಮಾಡಿದ್ದೇನೆ ಎಂದು ತಿಳಿಸಿದರು.

ಖಾತೆ, ಆರ್.ಟಿ.ಸಿಯಂತಹ ಅನೇಕ ಕಾರ್ಯಗಳಿಗೆ ಸಂಬಂಧಿಸಿದಂತೆ ಅಧಿಕಾರಿಗಳು ನ್ಯಾಯಯುತವಾಗಿ ಸ್ಪಂದಿಸಿ ಕೆಲಸ ಮಾಡಿಕೊಡಬೇಕು. ಜಿಲ್ಲಾ, ತಾಲೂಕುಗಳಲ್ಲಿ ಸಾಕಷ್ಟು ಜಮೀನು ಸಂಬಂಧಿತ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಪ್ರಮಾಣ ಪತ್ರಗಳಿರಲಿ, ಯಾವುದೇ ಸೇವೆಗಳಿರಲಿ, ಸರ್ಕಾರಿ ಅಧಿಕಾರಿಗಳು ಆದ್ಯ ಗಮನ ಹರಿಸುವಂತೆ ಆಯೋಗ ಸೂಚನೆ ನೀಡುತ್ತಿದೆ ಎಂದು ಹೇಳಿದರು.

ಜಿಲ್ಲಾಧಿಕಾರಿ ಶಿಲ್ಪಾನಾಗ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಬಿ.ಟಿ. ಕವಿತಾ ಮಾತನಾಡಿದರು. ಆಯೋಗದ ಕಾರ್ಯದರ್ಶಿ ಡಾ. ಹೆಚ್.ಎಸ್. ಶಿವರಾಮು, ತಹಸೀಲ್ದಾರ್ ಗಿರಿಜಾ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಮುನಿರಾಜು, ಮುಖಂಡರಾದ ವೆಂಕಟರಮಣ ಪಾಪು, ಶಿವಕುಮಾರ್, ಆರ್. ಮಹದೇವು, ನರೇಂದ್ರ ಇನ್ನಿತರ ಮುಖಂಡರು ಇದ್ದರು.

ಅಮಚವಾಡಿ ಗ್ರಾಮದಲ್ಲಿ ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆ



ಅಮಚವಾಡಿ ಗ್ರಾಮದಲ್ಲಿ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಆಚರಿಸಿದರು.

ಚಾಮರಾಜನಗರ, ನ4–ಮಹರ್ಷಿ ವಾಲ್ಮೀಕಿ ರಚಿಸಿದ ರಾಮಾಯಣದ ಅಂಶಗಳು ಇಂದಿಗೂ ಪ್ರಸ್ತುತವಾಗಿವೆ. ರಾಮಾಯಣದ ಮೌಲ್ಯಗಳು ಭವಿಷ್ಯಕ್ಕೆ ದಾರಿದೀಪವಾಗಿದ್ದು, ಅವರ ಆದರ್ಶಗಳನ್ನು ಎಲ್ಲರೂ ಅಳವಡಿಸಿಕೊಳ್ಳಬೇಕು ಎಂದು ಕೇಂದ್ರ ಪರಿಹಾರ ಸಮಿತಿ ಮಾಜಿ ಅಧ್ಯಕ್ಷ ಎಂ.ರಾಮಚಂದ್ರ ಸಲಹೆ ನೀಡಿದರು.

ತಾಲೂಕಿನ ಅಮಚವಾಡಿ ಗ್ರಾಮದಲ್ಲಿ ನಾಯಕ ಸಮುದಾಯ ನಡೆಸಿದ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮದಲ್ಲಿ ಮೆರವಣಿಗೆಗೆ ಚಾಲನೆ ನೀಡಿ, ವಾಲ್ಮೀಕಿ ಸಮುದಾಯದವರು ತಮ್ಮ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡಿ ವಿದ್ಯಾವಂತರನ್ನಾಗಿ ಮಾಡಬೇಕು. ಎಲ್ಲರೂ ಶೈಕ್ಷಣಿಕ, ಸಾಮಾಜಿಕ ಹಾಗೂ ಆರ್ಥಿಕವಾಗಿ ಅಭಿವೃದ್ಧಿ ಹೊಂದಿ ಸಮುದಾಯದ ಜನರಲ್ಲಿ ಒಗ್ಗಟ್ಟು ಮೂಡಬೇಕು ಆಗ ಮಾತ್ರ ಸಮಾಜ ಬಲಿಷ್ಠವಾಗಿ ರಚನೆಯಾಗಲು ಸಾಧ್ಯ ಎಂದರು.

ಗ್ರಾಮದ ಮುಖಂಡರು ವಾಲ್ಮೀಕಿ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದರು. ನಂತರ ಆರಂಭಗೊಂಡ ವಾಲ್ಮೀಕಿ ಭಾವಚಿತ್ರ ಮೆರವಣಿಗೆ ಗ್ರಾಮದ ಪ್ರಮುಖ ರಸ್ತೆಗಳ ಮುಖಾಂತರ ಅದ್ದೂರಿಯಾಗಿ ಜರುಗಿತು. ಮೆರವಣಿಗೆಯಲ್ಲಿ ಗ್ರಾಪಂ ಅಧ್ಯಕ್ಷೆ ತೇಜಸ್ವಿನಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಸಮಿತಿ ಅಧ್ಯಕ್ಷ ಹೆಚ್.ವಿ. ಚಂದ್ರು, ತಾಲೂಕು ನಾಯಕ ವಿದ್ಯಾಭಿವೃದ್ಧಿ ಸಂಘದ ಉಪಾಧ್ಯಕ್ಷ ಪು.ಶ್ರೀನಿವಾಸ ನಾಯಕ, ಜಿ.ಪಂ.ಮಾಜಿ ಸದಸ್ಯ ಎಸ್. ಸೋಮನಾಯಕ, ನಗರ ಸಭಾ ಮಾಜಿ ಅಧ್ಯಕ್ಷ ಸುರೇಶ್ ನಾಯಕ, ಬಿಜೆಪಿ ಮಾಜಿ ಅಧ್ಯಕ್ಷ ಆರ್.ಸುಂದರ್, ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ಶಿವು ವಿರಾಟ್, ಮುಖಂಡರಾದ ಚಂದ್ರಶೇಖರ್, ಅಮಚವಾಡಿ ನಾಯಕ ಸಮುದಾಯದ ಯಜಮಾನರು, ಕುಲಸ್ಥರು, ಎಲ್ಲಾ ಕೋಮಿನ ಯಜಮಾನರು, ಗ್ರಾಮಸ್ಥರು ಭಾಗವಹಿಸಿದ್ದರು.

ತಾಲೂಕಿನ ಅಮಚವಾಡಿ ಗ್ರಾಮದಲ್ಲಿ ನಾಯಕ ಸಮುದಾಯದ ವತಿಯಿಂದ ಶ್ರೀಮಹರ್ಷಿ ವಾಲ್ಮೀಕಿ ಜಯಂತಿ ಆಚರಿಸಲಾಯಿತು.

ಕಬ್ಬಹಳ್ಳಿಯಲ್ಲಿ ನಾಳೆ ಮಕ್ಕಳ ಹಕ್ಕುಗಳ ದತ್ತು ಮಾಸಾಚರಣೆ

ಚಾಮರಾಜನಗರ, ನ. 4–ಮಕ್ಕಳ ಹಕ್ಕುಗಳ ರಕ್ಷಣೆಗೆ ಸಂಬಂಧಿಸಿದಂತೆ ವಿವಿಧ ಇಲಾಖೆಯ ಅಧಿಕಾರಿ/ಸಿಬ್ಬಂದಿಗಳಿಗೆ, ಸಮುದಾಯ ಆರೋಗ್ಯ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುವ ಆಶಾ, ಅಂಗನವಾಡಿ ಕಾರ್ಯಕರ್ತೆಯರು, ವೈದ್ಯಾಧಿಕಾರಿಗಳು ಮತ್ತು ಅರೆ ವೈದ್ಯಕೀಯ ಸಿಬ್ಬಂದಿಗಳಿಗೆ ಮಕ್ಕಳ ಹಕ್ಕುಗಳ ಮಾಸ ಪ್ರಯುಕ್ತ ದತ್ತು ಮಾಸಾಚರಣೆ ಕಾರ್ಯಕ್ರಮವನ್ನು ನ. 6ರಂದು ಗುಂಡ್ಲುಪೇಟೆ ತಾಲೂಕಿನ ಕಬ್ಬಹಳ್ಳಿ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಹಮ್ಮಿಕೊಳ್ಳಲಾಗಿದೆ.


ಪ್ರತಿ ವರ್ಷ ನವೆಂಬರ್ ತಿಂಗಳನ್ನು ಮಕ್ಕಳ ಹಕ್ಕುಗಳ ಮತ್ತು ರಾಷ್ಟ್ರೀಯ ದತ್ತು ಮಾಸಾಚರಣೆ ಎಂದು ಗುರುತಿಸಿ ಜಿಲ್ಲೆಯಲ್ಲಿ ಮಕ್ಕಳ ಹಕ್ಕುಗಳ ಗ್ರಾಮಸಭೆಗಳು, ಮಕ್ಕಳಸ್ನೇಹಿ ಗ್ರಾಪಂ ಅಭಿಯಾನ, ಬಾಲಕಾರ್ಮಿಕರು ಹಾಗೂ ಶಾಲೆ ಬಿಟ್ಟ ಮಕ್ಕಳ ಗುರುತಿಸುವಿಕೆ ಮತ್ತು ರಕ್ಷಣೆ, ಮಕ್ಕಳ ರಕ್ಷಣಾ ಸಮಿತಿಗಳ ಬಲವರ್ಧನೆ, ಶೈಕ್ಷಣಿಕ ಸಂಸ್ಥೆಗಳಲ್ಲಿ ಮಕ್ಕಳ ರಕ್ಷಣಾ ನೀತಿ–2016 ಮತ್ತು ತೆರೆದ ಮನೆ ಕಾರ್ಯಕ್ರಮದ ಅನುಷ್ಠಾನ, ಅನಾಥ ಹಾಗೂ ಸಂಕಷ್ಟದಲ್ಲಿರುವ ಮಕ್ಕಳನ್ನು ಗುರುತಿಸಿ ಪುನರ್ವಸತಿಗೊಳಿಸುವ ಕಾರ್ಯದಲ್ಲಿ ಜಿಲ್ಲಾಡಳಿತವು ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಕಾರ್ಯನಿರತವಾಗಿದೆ.

ಕಾರ್ಯಕ್ರಮದ ಉದ್ಘಾಟನೆಯನ್ನು ಹಿರಿಯ ಸಿವಿಲ್ ನ್ಯಾಯಾಧೀಶರಾದ ಈಶ್ವರ ನೆರವೇರಿಸುವವರು. ಕಬ್ಬಹಳ್ಳಿ ಸಮುದಾಯ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿ ಡಾ. ಗಿರೀಶ್ ಅಧ್ಯಕ್ಷತೆ ವಹಿಸುವರು. ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಮಂಜುಳಾ ಬಿ. ಬಾಲನ್ಯಾಯ ಮಂಡಳಿಯ ಸದಸ್ಯೆ ಎನ್.ಎಂ. ಸರಸ್ವತಿ, ಮಕ್ಕಳ ರಕ್ಷಣಾ ಘಟಕದ ಅಧಿಕಾರಿಗಳು ಮುಖ್ಯ ಅತಿಥಿಗಳಾಗಿ ಭಾಗವಹಿಸುವವರು ಎಂದು ಪ್ರಕಟಣೆ ತಿಳಿಸಿದೆ.

ಮೈಸೂರು ಬೆಳವಣಿಗೆಗೆ 'ಗ್ರೇಟರ್ ಮೈಸೂರು' ಟಾನಿಕ್!

ನಿರ್ಮಾಣ ವಹಿವಾಟಿನಲ್ಲಿ ಭಾರೀ ಬೆಳವಣಿಗೆ; ಭೂಮಿ ಬೆಲೆ ಗಗನಕ್ಕೇರುವ ಸಾಧ್ಯತೆ; ನಿವೇಶನ, ಅಪಾರ್ಟ್‌ಮೆಂಟ್‌ಗಳ ಬೆಲೆಯೂ ದುಬಾರಿ

- ರಾಷ್ಟ್ರಮಟ್ಟದ ಪ್ರತಿಷ್ಠಿತ ರಿಯಲ್ ಎಸ್ಟೇಟ್ ಕಂಪನಿಗಳಿಂದ ಭಾರೀ ಹೂಡಿಕೆ
- ಹಳ್ಳಿಗಳ ಆವರಿಸಲಿದೆ ಇನ್ನು ಕಾಂಕ್ರಿಟ್ ಕಾಡು
- ವ್ಯಾಪಾರ–ವಹಿವಾಟು ಜೊತೆಗೆ ಉದ್ಯೋಗಾವಕಾಶ ಹೆಚ್ಚಳ
- ಭೂಮಿಯೆಲ್ಲಾ ಬಡಾವಣೆಯಾಗಿ ತರಕಾರಿ, ಆಹಾರ ಪದಾರ್ಥ ದರವೂ ದುಬಾರಿ!



ಗ್ರೇಟರ್ ಮೈಸೂರು ನಕ್ಷೆ

ಮೈಸೂರು, ನ. 4 (ಬಿಎಲ್‌ಯು)– ಗ್ರೇಟರ್ ಮೈಸೂರು, ಸಾಂಸ್ಕೃತಿಕ ನಗರಿ ಮೈಸೂರಿನ ರಿಯಲ್ ಎಸ್ಟೇಟ್ ಉದ್ಯಮಕ್ಕೆ ಟಾನಿಕ್ ನೀಡಿದಂತಿದೆ. ಮೈಸೂರು ನಗರ ವ್ಯಾಪ್ತಿ ವಿಸ್ತಾರಗೊಂಡು ನಗರ ಪಾಲಿಕೆ ವ್ಯಾಪ್ತಿಗೆ ಒಳಪಡುವ ಹಿನ್ನೆಲೆಯಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ಸಾವಿರಾರು ಕೋಟಿ ಅನುದಾನ ಹರಿದುಬರಲಿದೆ. ಇದರಿಂದ ಮೈಸೂರಿನಲ್ಲಿ ಭೂಮಿಗೆ ಚಿನ್ನದ ಬೆಲೆ ಬರಲಿದ್ದು, ನಿವೇಶನ, ಅಪಾರ್ಟ್‌ಮೆಂಟ್‌ಗಳ ಬೆಲೆ ದುಬಾರಿಯಾಗಲಿದೆ. ಈ ಕಾರಣದಿಂದ ಸಿಲಿಕಾನ್ ಬೆಂಗಳೂರಿನಂತೆ ರಾಷ್ಟ್ರ ಮಟ್ಟದ ರಿಯಲ್ ಎಸ್ಟೇಟ್ ಕಂಪನಿಗಳು ಮೈಸೂರಿನಲ್ಲಿ ಬಂಡವಾಳ ಹೂಡಲಿವೆ.

ಮೈಸೂರಿನ ರಿಯಲ್ ಎಸ್ಟೇಟ್ ಬೆಳವಣಿಗೆಗೆ ಗ್ರೇಟರ್ ಮೈಸೂರು ಇಂಬು ನೀಡಿದಂತೆ ಎಂದು ಹೇಳಲಾಗುತ್ತಿದೆ. ಉದಾಹರಣೆಗೆ; ಮೈಸೂರು ಹೊರ ವಲಯದಲ್ಲಿ 30X40 ನಿವೇಶನಕ್ಕೆ ಈಗಾಗಲೇ ಸುಮಾರು 30 ರಿಂದ 40 ಲಕ್ಷ ಬೆಲೆ ಇದೆ. ಗ್ರೇಟರ್ ಮೈಸೂರು ರಚನೆಯಿಂದ ಇದರ ಬೆಲೆ ಶೇಕಡ ಸುಮಾರು 20 ರಿಂದ 30ರಷ್ಟು ಹೆಚ್ಚಾಗುವ ಸಾಧ್ಯತೆ ಇದೆ.

ನಿವೇಶನಗಳ ಬೆಲೆ ಮಾತ್ರವಲ್ಲದೆ ಅಪಾರ್ಟ್‌ಮೆಂಟ್‌ಗಳ ಬೆಲೆ ಕೂಡ ದುಬಾರಿಯಾಗಲಿದೆ. ಈಗ ಮಧ್ಯಮ ವರ್ಗಕ್ಕೆ ಅಪಾರ್ಟ್‌ಮೆಂಟ್‌ಗಳಲ್ಲಿ ಸುಮಾರು 60 ರಿಂದ 80 ಲಕ್ಷ ರೂಪಾಯಿಗೆ ಫ್ಲಾಟ್ ದೊರೆಯಲಿದ್ದು, ಗ್ರೇಟರ್ ಮೈಸೂರು ಜಾರಿಯಿಂದ ಇದರ ಬೆಲೆ ಕೋಟಿ ದಾಟುವ ಸಾಧ್ಯತೆಯೂ ಇದೆ ಎಂದು ಹೇಳಲಾಗುತ್ತಿದೆ.

ಗ್ರೇಟರ್ ಮೈಸೂರು ವ್ಯಾಪ್ತಿ ಅಂದಾಜಿಸಿರುವ ಪ್ರದೇಶದಲ್ಲಿ ಈಗಾಗಲೇ ಬಡಾವಣೆಗಳು ನಿರ್ಮಾಣವಾಗಿದ್ದು, ಹೊಸ ಬಡಾವಣೆಗೆ ಅವಕಾಶವಿಲ್ಲ. ಹಾಗಾಗಿ ಮೈಸೂರಿನಿಂದ 30 ರಿಂದ 40 ಕಿಲೋ ಮೀಟರ್ ದೂರ ಹೊಸ ಬಡಾವಣೆಗಳು ನಿರ್ಮಾಣವಾಗಲಿವೆ.

ನಿವೇಶನಗಳ ಬೆಲೆ ದುಬಾರಿಯಾಗಿರುವ ಕಾರಣ ಜನರು ಫ್ಲಾಟ್ ಖರೀದಿಗೆ ಮುಗಿ ಬೀಳುತ್ತಾರೆ. ಇದರಿಂದ ಬಡಾವಣೆಗಳಿಗಿಂತ ಅಪಾರ್ಟ್‌ಮೆಂಟ್‌ಗಳ ನಿರ್ಮಾಣ ಹೆಚ್ಚಾಗುತ್ತವೆ. ರಾಷ್ಟ್ರ ಮಟ್ಟದ ರಿಯಲ್ ಎಸ್ಟೇಟ್ ಕಂಪನಿಗಳು ಹೆಚ್ಚಿನ ಪ್ರಮಾಣದಲ್ಲಿ ಅಪಾರ್ಟ್‌ಮೆಂಟ್ ಹಾಗೂ ಗೇಟೆಡ್ ಕಮ್ಯೂನಿಟಿಯ ವಿಲ್ಲಾಗಳನ್ನು ನಿರ್ಮಾಣ ಮಾಡಲಿವೆ.

ಮೈಸೂರಿನಲ್ಲಿ ರಿಯಲ್ ಎಸ್ಟೇಟ್ ಚೇತರಿಕೆಯಿಂದ ಇತರೆ ವ್ಯಾಪಾರ ವಹಿವಾಟು ಬೆಳವಣಿಗೆ ಆಗಲಿದೆ. ಹಾಗಾಗಿ ಉದ್ಯೋಗಾವಕಾಶ ಹೆಚ್ಚಾಗಲಿದೆ.

ಈ ಎಲ್ಲಾ ಕಾರಣಗಳಿಂದ ಭೂಮಿ ಬೆಲೆ ದುಬಾರಿಯಾಗಲಿದೆ. ಬಡ ಹಾಗೂ ಮಧ್ಯಮ ವರ್ಗದವರು ಮನೆ ಕಟ್ಟುವುದಿರಲಿ, ನಿವೇಶನ ಖರೀದಿ ಕೂಡ ಕೈಗೆಟಕುವುದಿಲ್ಲ. ಇದರಿಂದ ನಿವೇಶನ ಖರೀದಿ ಮಾಡಿ ಮನೆ ಕಟ್ಟುವುದು ಕಷ್ಟ ಸಾಧ್ಯ. ಈ ಹಿನ್ನೆಲೆ ಹೆಚ್ಚಿನ ಪ್ರಮಾಣದಲ್ಲಿ ಅಪಾರ್ಟ್‌ಮೆಂಟ್‌ಗಳಲ್ಲಿ ಫ್ಲಾಟ್‌ಗಳನ್ನು ಖರೀದಿ ಮಾಡುವ ಸಾಧ್ಯತೆ ಹೆಚ್ಚಿದೆ.

ಗ್ರೇಟರ್ ಮೈಸೂರು ರಚನೆಗೆ 20 ವರ್ಷಗಳ ಮೈಸೂರು ನಗರದ ಅಭಿವೃದ್ಧಿಯನ್ನು ದೃಷ್ಟಿಯಲ್ಲಿಟ್ಟುಕೊಂಡು ಬ್ಲೂ ಪ್ರಿಂಟ್ ತಯಾರಿಸಲಾಗುತ್ತದೆ. ರಸ್ತೆ, ಸಂಪರ್ಕ ರಸ್ತೆ, ಕುಡಿಯುವ ನೀರು, ಒಳಚರಂಡಿ, ಘನ ತ್ಯಾಜ್ಯ ನಿರ್ವಹಣೆ ಸೇರಿದಂತೆ ಇತರೆ ಮೂಲಭೂತ ಸೌಕರ್ಯ ಕಲ್ಪಿಸಲು ಯೋಜನೆ ರೂಪಿಸಲಾಗುತ್ತದೆ.

ರಾಜರ ಕಾಲದಲ್ಲೇ ಮೈಸೂರು ಯೋಜನಾಬದ್ಧವಾಗಿ ನಿರ್ಮಾಣವಾಗಿದೆ. ಗ್ರೇಟರ್ ಮೈಸೂರು ಯೋಜನೆ ಮೈಸೂರಿನ ಸೌಂದರ್ಯಕ್ಕೆ ಧಕ್ಕೆಯಾಗದಂತೆ ಎಚ್ಚರಿಕೆ ವಹಿಸಲಾಗುತ್ತದೆ ಎಂದು ಈಗಾಗಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಿಸಿರುವುದು ಗಮನಾರ್ಹ ಸಂಗತಿ.

ಮೈಸೂರಿನತ್ತ ಬೆಂಗಳೂರಿಗರ ಚಿತ್ತ



ಗ್ರೇಟರ್ ಮೈಸೂರು ರಚನೆಯಿಂದ ಮೈಸೂರಿನ ರಿಯಲ್ ಎಸ್ಟೇಟ್ ಉದ್ಯಮ ಬೆಳವಣಿಗೆ ಹೊಂದಲಿದೆ. ಮೈಸೂರು ಅಭಿವೃದ್ಧಿ ವೇಗ ಪಡೆಯುತ್ತದೆ ಎಂದು ಲೆಕ್ಕಾಚಾರ ಹಾಕುವ ಬೆಂಗಳೂರಿಗರು ಮೈಸೂರಿನತ್ತ ಮುಖ ಮಾಡಲಿದ್ದಾರೆ. ಇದರಿಂದ ನಿವೇಶನ ಹಾಗೂ ಅಪಾರ್ಟ್‌ಮೆಂಟ್‌ಗಳ ಮಾರಾಟ ಹೆಚ್ಚಾಗಲಿದೆ. ಮೈಸೂರಿನಲ್ಲಿ ಈಗ ಪೆರಿಫೆರಲ್ ರಿಂಗ್ ರಸ್ತೆ ನಿರ್ಮಾಣವಾಗುತ್ತಿದೆ. ಮೈಸೂರು ವಿಮಾನ ನಿಲ್ದಾಣ ವಿಸ್ತರಣೆಗೊಳ್ಳುತ್ತಿದೆ. ಈಗಾಗಲೇ ಮೈಸೂರು–ಬೆಂಗಳೂರು ಎಕ್ಸ್‌ಪ್ರೆಸ್ ಹೈವೆ ನಿರ್ಮಾಣದಿಂದ ಬೆಂಗಳೂರಿಗೆ ಉತ್ತಮ ಸಂಪರ್ಕ ವ್ಯವಸ್ಥೆ ಇದೆ. ಹಾಗಾಗಿ ಬೆಂಗಳೂರಿನ ಟ್ರಾಫಿಕ್ ಜಾಮ್ ಹಾಗೂ ಮಾಲಿನ್ಯದಿಂದ ಜರ್ಝರಿತರಾಗಿರುವ ಬೆಂಗಳೂರು ಜನರು ಮೈಸೂರಿನತ್ತ ದೃಷ್ಟಿ ಹಾಯಿಸುತ್ತಾರೆ.

- ಸುಚೇಂದ್ರ ಜಿ.ಆರ್., ಬ್ರ್ಯಾಂಚ್ ಹೆಡ್, ಬ್ರಿಗೇಡ್ ಗ್ರೂಪ್

ನಿವೇಶನಗಳ ಬೆಲೆ ಶೇಕಡ 20ರಿಂದ 25ರಷ್ಟು ಹೆಚ್ಚಾಗುವ ಸಾಧ್ಯತೆ



ಮೈಸೂರಿನಲ್ಲಿ ಜೀವನ ನಿರ್ವಹಣೆ ವೆಚ್ಚ ಕಡಿಮೆ ಇದೆ. ಬೆಂಗಳೂರಿಗೆ ಹೋಲಿಸಿದರೆ ನಿವೇಶನ ಹಾಗೂ ಅಪಾರ್ಟ್‌ಮೆಂಟ್‌ಗಳ ಬೆಲೆಯೂ ಕಡಿಮೆ ಇದೆ. ಬೆಂಗಳೂರಿನಂತೆ ಟ್ರಾಫಿಕ್ ಸಮಸ್ಯೆ ಇಲ್ಲ. ಅಲ್ಲದೆ ಈಗ ಗ್ರೇಟರ್ ಮೈಸೂರು ರಚನೆಯಾಗಿ, ನಗರ ಅಭಿವೃದ್ಧಿ ಹೊಂದಲಿದೆ. ಹಾಗಾಗಿ ಮೈಸೂರಿನಲ್ಲಿ ಮೂಲಭೂತ ಸೌಕರ್ಯ ಹೆಚ್ಚಾಗಲಿದೆ, ಹೊಸ ಬಡಾವಣೆಗಳು ಉತ್ತಮ ಪರಿಸರದಲ್ಲಿವೆ. ಪೆರಿಫೆರಲ್ ರಿಂಗ್ ರಸ್ತೆ, ಅಂತರರಾಷ್ಟ್ರೀಯ ಕ್ರಿಕೆಟ್ ಸ್ಟೇಡಿಯಂ, ವಿಮಾನ ನಿಲ್ದಾಣ ವಿಸ್ತರಣೆಯಿಂದ ನಗರದ ಅಭಿವೃದ್ಧಿ ವೇಗ ಪಡೆಯುತ್ತಿದೆ. ಇದರಿಂದ ಹೆಚ್ಚಾಗಿ ಬೆಂಗಳೂರಿನ ಜನರು ಮೈಸೂರಿನಲ್ಲಿ ವಾಸ ಮಾಡಲು ಉತ್ಸುಕತೆ ತೋರುತ್ತಾರೆ. ಇದರಿಂದ ಮೈಸೂರಿನಲ್ಲಿ ನಿವೇಶನಗಳ ಬೆಲೆ ಶೇಕಡ 20 ರಿಂದ 25 ರಷ್ಟು ಹೆಚ್ಚಾಗುತ್ತದೆ. ಅಲ್ಲದೆ ಅಪಾರ್ಟ್‌ಮೆಂಟ್‌ಗಳ ಬೆಲೆಯೂ ದುಬಾರಿಯಾಗಲಿದೆ.

- ದೀಪ್ ದರ್ಶನ್, ಪಲ್ಲಿ ಡೆವಲಪರ್ಸ್, ಮುಖ್ಯಸ್ಥರು

ಫಾರಂ ಹೌಸ್ ಬೆಲೆ ದುಬಾರಿ ನಿಶ್ಚಿತ

ಇತ್ತೀಚಿಗೆ ಫಾರಂ ಹೌಸ್ ಕ್ರೇಜ್ ಹೆಚ್ಚಾಗಿದೆ. ಮೈಸೂರು ಸುತ್ತಮುತ್ತ ಜಮೀನು ಖರೀದಿಸಿರುವ ಬಹಳಷ್ಟು ಜನರು ತೋಟ ಹಾಗೂ ಮನೆ ನಿರ್ಮಾಣ ಮಾಡಿ ಅಲ್ಲಿ ವಾಸ ಮಾಡುತ್ತಿದ್ದಾರೆ. ಗ್ರೇಟರ್ ಮೈಸೂರು ರಚನೆಯಾಗಿ ಸುತ್ತಮುತ್ತ ಬಡಾವಣೆ ನಿರ್ಮಾಣವಾದರೆ ಫಾರಂ ಹೌಸ್‌ಗಳ ಬೆಲೆ ದುಬಾರಿಯಾಗಲಿದೆ. ಇದರಿಂದ ಫಾರಂ ಹೌಸ್ ನಿರ್ಮಾಣ ಮಾಡಬೇಕೆಂಬ ಕ್ರೇಜ್ ಇರುವ ಜನರು ನಗರದ ಹೊರ ವಲಯದಲ್ಲಿ ಜಮೀನು ಖರೀದಿ ಮಾಡುತ್ತಾರೆ. ಇದರಿಂದ ಮೈಸೂರು ಜಿಲ್ಲೆಯಲ್ಲಿ ಭೂಮಿಗೆ ಚಿನ್ನದ ಬೆಲೆ ದೊರೆಯಲಿದೆ. ಚಿನ್ನ, ಹಣಕ್ಕಿಂತ ಭೂಮಿ ಹೊಂದಿದವರೇ ಶ್ರೀಮಂತರು.

'ಗ್ರೇಟರ್ ಮೈಸೂರು' ಒಳಗೆ ನಗರಸಭೆ, ಪಟ್ಟಣ ಪಂಚಾಯಿತಿ, ಗ್ರಾಮ ಪಂಚಾಯಿತಿ ವಿಲೀನ

ಗ್ರೇಟರ್ ಮೈಸೂರು ರಚನೆ ಬಳಿಕ ಮೈಸೂರು ನಗರಕ್ಕೆ ಹೊಂದಿಕೊಂಡಿರುವ ಹೂಟಗಳ್ಳಿ ನಗರ ಸಭೆ, ಬೋಗಾದಿ, ಶ್ರೀರಾಂಪುರ, ರಮ್ಮನಹಳ್ಳಿ, ಕಡಕೊಳ ಪಟ್ಟಣ ಪಂಚಾಯಿತಿ ಹಾಗೂ ಇಲವಾಲ, ಸಿದ್ಧಲಿಂಗಪುರ, ಚಾಮುಂಡಿಬೆಟ್ಟ, ನಾಗನಹಳ್ಳಿ, ನಾಗವಾಲ, ಧನಗಳ್ಳಿ, ಬೀರಿಹುಂಡಿ, ಆಲನಹಳ್ಳಿ ಗ್ರಾಮ ಪಂಚಾಯಿತಿಗಳು ಅದರಲ್ಲಿ ವಿಲೀನಗೊಳ್ಳಲಿವೆ. ಇದರಿಂದ ಮೈಸೂರು ನಗರ ಪಾಲಿಕೆಯ ವ್ಯಾಪ್ತಿಯ ಜನಸಂಖ್ಯೆ ಕೂಡ ಹೆಚ್ಚಾಗಲಿದೆ. ಈ ಕಾರಣದಿಂದ ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ಹೆಚ್ಚಿನ ಅನುದಾನ ದೊರೆಯಲಿದೆ. ಗ್ರೇಟರ್ ಮೈಸೂರು ರಚನೆಯನ್ನು ಸರ್ಕಾರ ಈಗಾಗಲೇ ಘೋಷಣೆ ಮಾಡಿದೆ. ಈಗ, ರಚನೆ ಕ್ರಮ ನಿರ್ಧರಿಸಬೇಕಿದೆ. ಗ್ರೇಟರ್ ಮೈಸೂರು ವ್ಯಾಪ್ತಿಗೊಳಪಡುವ ಪ್ರದೇಶಗಳ ಅಭಿವೃದ್ಧಿ ನಗರ ಪಾಲಿಕೆಗೆ ಸೇರಿದೆ. ಇದರಿಂದ ಸಹಜವಾಗಿಯೇ ಮೈಸೂರು ನಗರ ಹೆಚ್ಚಿನ ರೀತಿ ಅಭಿವೃದ್ಧಿಗೊಳ್ಳಲಿದೆ.

-ಷೇಕ್ ಆಸೀಫ್ ತನ್ವೀರ್, ಆಯುಕ್ತರು, ಮೈಸೂರು ಮಹಾನಗರ ಪಾಲಿಕೆ

ಗ್ರೇಟರ್ ಮೈಸೂರು ವಾರ್ಡ್ ಸಂಖ್ಯೆ 65ರಿಂದ 120ಕ್ಕೆ ಹೆಚ್ಚುವ ಸಾಧ್ಯತೆ

ಗ್ರೇಟರ್ ಮೈಸೂರು ರಚನೆಯಿಂದ ಮೈಸೂರು ನಗರ ಪಾಲಿಕೆಯ ವಾರ್ಡ್‌ಗಳ ಸಂಖ್ಯೆ ಕೂಡ ಹೆಚ್ಚಾಗಲಿದೆ. ಈಗ 65 ವಾರ್ಡ್‌ಗಳಿದ್ದು, ಗ್ರೇಟರ್ ಮೈಸೂರು ರಚನೆಯಿಂದ ಅವುಗಳ ಸಂಖ್ಯೆ 120 ದಾಟುವ ಸಾಧ್ಯತೆ ಇದೆ. ಗ್ರೇಟರ್ ಮೈಸೂರು ಬ್ಲೂ ಪ್ರಿಂಟ್ ಸಿದ್ಧವಾದ ಬಳಿಕ ಸರ್ಕಾರ ಯೋಜನಾಬದ್ಧ ನಗರ ನಿರ್ಮಾಣಕ್ಕೆ ಹಣ ಬಿಡುಗಡೆ ಮಾಡಲಿದೆ. ಈ ಮೂಲಕ ಇನ್ನು ನಾಲ್ಕೈದು ತಿಂಗಳಲ್ಲಿ ಗ್ರೇಟರ್ ಮೈಸೂರು ಸ್ಪಷ್ಟ ರೂಪ ತಾಳಲಿದೆ. ನಂತರ ಸರ್ಕಾರದಿಂದ ಬರುವ ಹಣದಿಂದ ಅಭಿವೃದ್ಧಿ ಕಾರ್ಯಗಳು ಹಂತ ಹಂತವಾಗಿ ಅನುಷ್ಠಾನಗೊಳ್ಳಲಿವೆ. ಮೈಸೂರು ನಗರ ಪಾಲಿಕೆ ವ್ಯಾಪ್ತಿಯಲ್ಲಿ 2011ರ ಜನಗಣತಿ ಪ್ರಕಾರ 11,19,705 ಜನ ಸಂಖ್ಯೆ ಇದ್ದು, 2025 ಕ್ಕೆ 14,16,671 ಅಂದಾಜಿಸಲಾಗಿದೆ. ಗ್ರೇಟರ್ ಮೈಸೂರು ವ್ಯಾಪ್ತಿಯ ಜನ ಸಂಖ್ಯೆ ಸುಮಾರು 25 ಲಕ್ಷ ಮೀರುತ್ತದೆ. ಇದರಿಂದ ರಾಜ್ಯ ಸರ್ಕಾರ ಮಾತ್ರವಲ್ಲದೆ ಕೇಂದ್ರ ಸರ್ಕಾರದಿಂದಲೂ ಹೆಚ್ಚಿನ ಅನುದಾನ ದೊರೆಯಲಿದೆ. ನಗರಸಭೆ, ಪಟ್ಟಣ ಪಂಚಾಯಿತಿ ಹಾಗೂ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸಾವಿರಾರು ಹಳ್ಳಿಗಳಿದ್ದು, ಇವೆಲ್ಲವೂ ಗ್ರೇಟರ್ ಮೈಸೂರು ವ್ಯಾಪ್ತಿಗೊಳಪಡಲಿವೆ. ಇದರ ಪರಿಣಾಮ ಹಳ್ಳಿಗಳು ನಗರಗಳಾಗಿ ಪರಿವರ್ತನೆಗೊಳ್ಳಲಿವೆ. ನಗರ ಪಾಲಿಕೆ ಇದನ್ನು ಸಮರ್ಪಕವಾಗಿ ಅಭಿವೃದ್ಧಿ ಮಾಡಲಿದೆ. ಇದರ ಪರಿಣಾಮ ಹಳ್ಳಿ ಜನರ ಜೀವನ ಶೈಲಿ ಕೂಡ ಬದಲಾಗಲಿದೆ. ಈಗ ಮೈಸೂರು ನಗರ ಪಾಲಿಕೆಯು 86.31 ಚದರ ಕಿಲೋ ಮೀಟರ್ ವಿಸ್ತೀರ್ಣ ಹೊಂದಿದ್ದು, ಗ್ರೇಟರ್ ಮೈಸೂರು ಜಾರಿಯಿಂದ ಮೈಸೂರು ನಗರ ಪಾಲಿಕೆಯ ವ್ಯಾಪ್ತಿ 333.46 ಚದರ ಕಿಲೋಮೀಟರ್ ಹೆಚ್ಚಳವಾಗಲಿದೆ. ಇದರಿಂದ ನಗರದ ಹೊರ ವಲಯದಲ್ಲಿರುವ ಬಡಾವಣೆಗಳು ನಗರ ಪಾಲಿಕೆ ವ್ಯಾಪ್ತಿಗೆ ಒಳಪಡಲಿದೆ.

ತರಕಾರಿ, ಇತರೆ ಆಹಾರ ಪದಾರ್ಥ ದುಬಾರಿ

ಗ್ರೇಟರ್ ಮೈಸೂರು ನಿರ್ಮಾಣದಿಂದ ನಗರದ ಅಭಿವೃದ್ಧಿ ವೇಗ ಪಡೆಯಲಿದೆ. ಇದರಿಂದ ಹೆಚ್ಚು ಬಡಾವಣೆ ನಿರ್ಮಾಣವಾಗಲಿದ್ದು, ಸಣ್ಣ ಜಾಗ ಕೂಡ ನಿವೇಶನಗಳಾಗಿ ಪರಿವರ್ತನೆಗೊಳ್ಳಲಿದೆ. ಇದರ ಪರಿಣಾಮ ತರಕಾರಿ ಸೇರಿದಂತೆ ಇತರೆ ಬೆಳೆ ಬೆಳೆಯುತ್ತಿದ್ದ ಭೂಮಿ ಮರೆಯಾಗಿ ಕಾಂಕ್ರಿಟ್ ಕಾಡು ನಿರ್ಮಾಣವಾಗಲಿದೆ. ಇದರಿಂದ ತರಕಾರಿ ಸೇರಿದಂತೆ ಇತರೆ ಬೆಲೆ ದುಬಾರಿಯಾಗಲಿದೆ. ಈ ಎಲ್ಲಾ ಕಾರಣದಿಂದ ಈಗ ಮೈಸೂರಿನಲ್ಲಿರುವ ಜೀವನ ನಿರ್ವಹಣೆಯ ವೆಚ್ಚ ಕಡಿಮೆ ಇರುವುದು ಗ್ರೇಟರ್ ಮೈಸೂರಿನಿಂದ ಹೆಚ್ಚಾಗಲಿದೆ. ಇದರಿಂದ ಗ್ರೇಟರ್ ಮೈಸೂರು ಜನರ ಬದುಕಿಗೆ ಎಷ್ಟು ಉಪಯುಕ್ತವೋ ಅಷ್ಟೇ ದುಬಾರಿಯಾಗಲಿದೆ.

'ಮೆನಿ ಹ್ಯೂಸ್, ಒನ್ ಬ್ಲೂ' ಥೀಮ್‌ನಡಿ

ರ್ಯಾಡಿಸನ್ ಬ್ಲೂ ಪ್ಲಾಜಾ ಹೋಟೆಲ್ 11ನೇ ವಾರ್ಷಿಕೋತ್ಸವ



ರ್ಯಾಡಿಸನ್ ಬ್ಲೂ ಪ್ಲಾಜಾ ಹೋಟೆಲ್‌ನಲ್ಲಿ ಹೋಟೆಲ್‌ನ 11ನೇ ವಾರ್ಷಿಕೋತ್ಸವ ಆಚರಿಸಲಾಯಿತು.

ಮೈಸೂರು,ನ.4(ಪಿಎಂ)– ಮೈಸೂರಿನ ಎಂಜಿ ರಸ್ತೆಯಲ್ಲಿರುವ ರ್ಯಾಡಿಸನ್ ಬ್ಲೂ ಪ್ಲಾಜಾ ಹೋಟೆಲ್ ಮೈಸೂರು ತನ್ನ 11ನೇ ವಾರ್ಷಿಕೋತ್ಸವ ಆಚರಸಿಕೊಂಡಿತು.

ಹೋಟೆಲ್‌ನ ಗ್ರ್ಯಾಂಡ್ ಬಾಲ್ ರೂಂನಲ್ಲಿ ಹಮ್ಮಿಕೊಂಡಿದ್ದ ಅದ್ದೂರಿ ಸಮಾರಂಭದಲ್ಲಿ 'ಮೆನಿ ಹ್ಯೂಸ್, ಒನ್ ಬ್ಲೂ' ಥೀಮ್‌ನೊಂದಿಗೆ ನಡೆದ ವಾರ್ಷಿಕೋತ್ಸವ ಮೂಲಕ ಮಹತ್ವದ ಮೈಲಿಗಲ್ಲನ್ನು ದಾಖಲಿಸಿತು. ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕ (ಎಡಿಜಿಪಿ) ಅಲೋಕ್‌ಕುಮಾರ್ ಅವರು ಸಮಾರಂಭದ ಮುಖ್ಯ ಅತಿಥಿಯಾಗಿ ಪಾಲ್ಗೊಂಡಿದ್ದರು.

ಹೋಟೆಲ್‌ನ ಆತಿಥ್ಯದ ಆತ್ಮವನ್ನು ರೂಪಿಸುವ ತಂಡದ ಸದಸ್ಯರ ವೈವಿಧ್ಯಮಯ ಪ್ರತಿಭೆಗಳು ಹಾಗೂ ಅವರ ಕೊಡುಗೆಗಳಿಗೆ ಗೌರವ ಸಲ್ಲಿಸಲಾಯಿತು. ಸಮಾರಂಭದಲ್ಲಿ 2024–25ರ ಅವಧಿಯಲ್ಲಿ ಅವರ ಸಮರ್ಪಣೆ, ನಾವೀನ್ಯತೆ ಮತ್ತು ಸೇವಾ ಶ್ರೇಷ್ಠತೆಯನ್ನು ಗುರುತಿಸಿ ವಿವಿಧ ವಿಭಾಗಗಳಲ್ಲಿನ ಅತ್ಯುತ್ತಮ ತಂಡದ ಸದಸ್ಯರನ್ನು ಗೌರವಿಸಲಾಯಿತು.

ದೀರ್ಘಕಾಲದ ಅನುಭವಿಗಳಿಂದ ಹಿಡಿದು ಉದಯೋನ್ಮುಖ ಪ್ರತಿಭೆಗಳು ಸ್ವೀಕರಿಸಿದ ಪ್ರತಿ ಪ್ರಶಸ್ತಿಯು ಹೋಟೆಲ್‌ನ ಅನನ್ಯತೆಯ ನೀತಿಯನ್ನು ಪ್ರತಿಬಿಂಬಿಸಿತು. ಹೋಟೆಲ್‌ನ ಪ್ರಧಾನ ವ್ಯವಸ್ಥಾಪಕ ಬಿ.ಹರಿಕುಮಾರ್ ಮಾತನಾಡಿ, ಹೋಟೆಲ್ ಅಭಿವೃದ್ಧಿಗೆ ಶ್ರಮಿಸುತ್ತಿರುವ ಇಡೀ ನೌಕರ ತಂಡಕ್ಕೆ ನಾನು ಹೃತ್ಪೂರ್ವಕ ಕೃತಜ್ಞತೆ ಸಲ್ಲಿಸುತ್ತೇನೆ ಎಂದು ತಿಳಿಸಿದರು.

ಈ ಹೋಟೆಲ್ ಒಂದು ಮರದಂತೆ. ಅದರ ನೆರಳಿನಲ್ಲಿ ನಾವು ಬದುಕುತ್ತಿದ್ದೇವೆ. ನಮ್ಮ ಹೋಟೆಲ್ ಮೌಲ್ಯಗಳಲ್ಲಿ ಬೇರೂರಿದೆ. ಸಾಧ್ಯತೆಗಳಲ್ಲಿ ಕವಲೊಡೆಯುತ್ತಿದೆ. ವೈವಿಧ್ಯತೆಯಲ್ಲಿ ಏಕತೆ ಸಾಧಿಸಬಹುದು ಎಂಬುದಕ್ಕೆ ಇದು ಸಾಕ್ಷಿಯಾಗಿದೆ. 'ಮೆನಿ ಹ್ಯೂಸ್, ಒನ್ ಬ್ಲೂ' (ಬಹುವರ್ಣ, ಒಂದು ನೀಲಿ) ಕೇವಲ ಒಂದು ಥೀಮ್ ಮಾತ್ರವಲ್ಲ, ಅದೊಂದು ನಮ್ಮ ಹೋಟೆಲ್‌ನ ಒಡಲಾಳದ ಪ್ರತಿಬಿಂಬವಾಗಿದೆ ಎಂದು ಹೇಳಿದರು.

ಇದೇ ವೇಳೆ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು. ಕಾರ್ಯಕ್ರಮವು ಪ್ರತಿಯೊಬ್ಬ ಅತಿಥಿಗೂ ಮರೆಯಲಾಗದ ಅನುಭವಗಳನ್ನು ನೀಡಿತು. ಅಂತಿಮವಾಗಿ ಹೋಟೆಲ್‌ನ ಇಡೀ ನೌಕರ ತಂಡವು ಸೇವೆಯಲ್ಲಿ ತಮ್ಮ ಬದ್ಧತೆಯನ್ನು ಪುನರುಚ್ಚರಿಸಿತು.

ವೃದ್ಧ ದಂಪತಿ ಕೈಕಾಲು ಕಟ್ಟಿ ಚಿನ್ನಾಭರಣ, ನಗದು ದರೋಡೆ; ಮೂವರಿಗೆ 7 ವರ್ಷ ಜೈಲು ಶಿಕ್ಷೆ

ಮೈಸೂರು, ನ.4– ಮನೆಗೆ ನುಗ್ಗಿ ವೃದ್ಧ ದಂಪತಿಯ ಕೈಕಾಲು ಕಟ್ಟಿ ದರೋಡೆ ಮಾಡಿದ್ದ ಪ್ರಕರಣದಲ್ಲಿ ಮೂವರಿಗೆ ಮೈಸೂರಿನ 7ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲಯವು 7 ವರ್ಷ ಜೈಲು ಶಿಕ್ಷೆ ವಿಧಿಸಿದೆ.

ನಗರದ ಸರಸ್ವತಿಪುರಂ, ಕಾಮಾಕ್ಷಿ ಆಸ್ಪತ್ರೆ ರಸ್ತೆ, 5ನೇ ಮುಖ್ಯರಸ್ತೆಯ ಡಾ.ದತ್ತಾತ್ರೇಯ ಅವರ ಮನೆಗೆ ನುಗ್ಗಿದ ಐವರ ಗುಂಪು, ಮನೆಯಲ್ಲಿದ್ದ ದತ್ತಾತ್ರೇಯ ಅವರ ವೃದ್ಧ ತಂದೆ–ತಾಯಿ, ಪುತ್ರ ಹಾಗೂ ಆತನ ಸ್ನೇಹಿತನನ್ನು ಕಟ್ಟಿ ಹಾಕಿ, 10 ಲಕ್ಷ ರೂ. ನಗದು, ಸುಮಾರು 100 ಗ್ರಾಂ ಚಿನ್ನಾಭರಣ ಹಾಗೂ ಬೆಳ್ಳಿ ಪದಾರ್ಥಗಳನ್ನು ದೋಚಿತ್ತು.

ಈ ಸಂಬಂಧ ಸರಸ್ವತಿಪುರಂ ಪೊಲೀಸ್ ಠಾಣೆಯ ಅಂದಿನ ಇನ್ಸ್‌ಪೆಕ್ಟರ್ ಸಿ.ತಿಮ್ಮರಾಜು, ತನಿಖೆ ನಡೆಸಿ ಆರೋಪಿಗಳಾದ ಆರ್.ಅವಿನಾಶ್ ಅಲಿಯಾಸ್ ಅಬಿ (25), ಹೆಚ್.ನವೀನ್ ಕುಮಾರ್(25), ಜೆ.ರವಿ(30), ಸತೀಶ್ ಅಲಿಯಾಸ್ ಶಶಿ(33) ಹಾಗೂ ಉಮೇಶ್(30)ನನ್ನು ಬಂಧಿಸಿ, ಪ್ರಕರಣ ದಾಖಲಿಸಿ, ತನಿಖೆ ಬಳಿಕ ನ್ಯಾಯಾಲಯಕ್ಕೆ ದೋಷಾರೋಪ ಪಟ್ಟಿ ಸಲ್ಲಿಸಿದ್ದರು.

ಪ್ರಕರಣದ ವಿಚಾರಣೆ ನಡೆಸಿದ 7ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ನ್ಯಾಯಾಧೀಶರಾದ ಎಂ. ರಮೇಶ್ ಅವರು ಪ್ರಮುಖ ಆರೋಪಿ ಆರ್. ಅವಿನಾಶ್, ಎರಡನೇ ಆರೋಪಿ ಹೆಚ್.ನವೀನ್‌ಕುಮಾರ್ ಹಾಗೂ ನಾಲ್ಕನೇ ಆರೋಪಿ ಸತೀಶ್ ಅಲಿಯಾಸ್ ಶಶಿ ವಿರುದ್ಧದ ಆರೋಪ ಸಾಬೀತಾದ ಹಿನ್ನೆಲೆಯಲ್ಲಿ ಇವರಿಗೆ 7 ವರ್ಷ ಜೈಲು ಹಾಗೂ ತಲಾ 10 ಸಾವಿರ ದಂಡ ವಿಧಿಸಿ, ಅ.30ರಂದು ತೀರ್ಪು ಪ್ರಕಟಿಸಿದ್ದಾರೆ.

ಸರ್ಕಾರದ ಪರವಾಗಿ ಈ ಹಿಂದಿನ ಸರ್ಕಾರಿ ಅಭಿಯೋಜಕ ಕೆ.ನಾಗರಾಜ ಹಾಗೂ ಹಾಲಿ ಸರ್ಕಾರಿ ಅಭಿಯೋಜಕಿ ಎನ್.ಬಿ.ವಿಜಯಲಕ್ಷ್ಮೀ ಅವರು ವಾದ ಮಂಡಿಸಿದ್ದರು.

ಪ್ರಕರಣದ ಹಿನ್ನೆಲೆ: ಡಾ.ದತ್ತಾತ್ರೇಯ ಹಾಗೂ ಅವರ ಪತ್ನಿ ವೈದ್ಯರಾಗಿದ್ದು ಅವರ ಕ್ಲಿನಿಕ್‌ಗೆ ಹೋಗಿದ್ದಾಗ ಈ ಘಟನೆ ನಡೆದಿತ್ತು. 2021 ಮಾರ್ಚ್ 17ರಂದು ರಾತ್ರಿ ದತ್ತಾತ್ರೇಯ ಅವರ ತಂದೆ ಪಿ.ವಿಶ್ವನಾಥ ಶಾಸ್ತ್ರಿ ಹಾಗೂ ತಾಯಿ ಪದ್ಮಾವತಿ ಅವರು ಮನೆಯಲ್ಲಿದ್ದರು. ಆ ವೇಳೆ ದತ್ತಾತ್ರೇಯ ಅವರ ಮಗ ಸುಮುಖ್ ತನ್ನ ಸ್ನೇಹಿತ ಆಕಾಶ್‌ನೊಂದಿಗೆ ಮಹಡಿಯ ಕೊಠಡಿಯಲ್ಲಿ ಓದಿಕೊಳ್ಳುತ್ತಿದ್ದನು.

ರಾತ್ರಿ ಸುಮಾರು 7.30ರ ಸಮಯದಲ್ಲಿ ಬೆಲ್ ಶಬ್ಧ ಕೇಳಿಸಿದ್ದರಿಂದ ಪದ್ಮಾವತಿ ಅವರು ಬಾಗಿಲು ತೆಗೆದಿದ್ದಾರೆ. ಆಗ ಏಕಾಏಕಿ ಐವರು ಖದೀಮರ ಗುಂಪು ಮನೆಯೊಳಗೆ ನುಗ್ಗಿ, ಸ್ಕ್ರೂ ಡ್ರೈವರ್, ಸುತ್ತಿಗೆ ಹಾಗೂ ಚಾಕು ತೋರಿಸಿ ಬೆದರಿಸಿದ್ದಾರೆ ಅಲ್ಲದೆ ದಂಪತಿಯ ಕೈಕಾಲುಗಳನ್ನು ಕಟ್ಟಿ, ಬಾಯಿಗೆ ವೇಸ್ಟ್ ಬಟ್ಟೆಯನ್ನು ತುರುಕಿ, ಪ್ಲಾಸ್ಟರ್ ಸುತ್ತಿ, ಪದ್ಮಾವತಿ ಅವರ ಬಳಿ ಇದ್ದ 70 ಗ್ರಾಂ ಚಿನ್ನದ ಸರ, 30 ಗ್ರಾಂ ಚಿನ್ನದ ಬಳೆ ಕಿತ್ತುಕೊಂಡು, ಮನೆಯ ವಾಡ್ರೋಬ್‌ನಲ್ಲಿದ್ದ 10 ಲಕ್ಷ ರೂ. ನಗದು, ಚಿನ್ನ ಮತ್ತು ಬೆಳ್ಳಿಯ ವಸ್ತುಗಳನ್ನು ಒಂದು ಬ್ಯಾಗ್‌ನಲ್ಲಿ ತುಂಬಿಕೊಂಡಿತ್ತು.

ಈ ವೇಳೆ ಶಬ್ಧ ಕೇಳಿಸಿಕೊಂಡ ಸುಮುಖ್ ಕೊಠಡಿಯಿಂದ ಹೊರ ಬರಲು ಮುಂದಾದಾಗ ಆತನನ್ನು ಕೊಠಡಿಯೊಳಗೆ ತಳ್ಳಿದ್ದಾರೆ. ಬಳಿಕ ಸುಮುಖ್ ಹಾಗೂ ಸ್ನೇಹಿತ ಆಕಾಶ್‌ನನ್ನು ಚಾರ್ಜರ್ ವೈರ್‌ನಿಂದ ಕಟ್ಟಿ ಹಾಕಿ, ಬಾಯಿಗೆ ಪ್ಲಾಸ್ಟರ್ ಹಾಕಿ ಪರಾರಿಯಾಗಿದ್ದರು. ಹೇಗೋ ಕಟ್ಟು ಬಿಡಿಸಿಕೊಂಡು, ತಾತ–ಅಜ್ಜಿಗೆ ಕಟ್ಟಿದ್ದ ಕಟ್ಟು ಬಿಚ್ಚಿದ್ದರು. ಈ ಸಂಬಂಧ ಸುಮುಖ್ ನೀಡಿದ ದೂರಿನನ್ವಯ ಪ್ರಕರಣ ದಾಖಲಿಸಿಕೊಂಡಿದ್ದ ಸರಸ್ವತಿಪುರಂ ಠಾಣೆ ಪೊಲೀಸರು, ನಾಲ್ಕೈದು ದಿನಗಳಲ್ಲಿ ಆರೋಪಿಗಳನ್ನು ಬಂಧಿಸಿದ್ದರು.

ಗಾಂಜಾ ಬೆಳೆದಿದ್ದ ವ್ಯಕ್ತಿಗೆ ಮೂರು ವರ್ಷ ಜೈಲು ಶಿಕ್ಷೆ

ಮೈಸೂರು, ನ.4– ಭೋಗ್ಯಕ್ಕೆ ಪಡೆದಿದ್ದ ಜಮೀನಿನಲ್ಲಿ ಗಾಂಜಾ ಬೆಳೆದಿದ್ದ ವ್ಯಕ್ತಿಗೆ ಮೈಸೂರಿನ 7ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ 3 ವರ್ಷ ಜೈಲು ಶಿಕ್ಷೆ ವಿಧಿಸಿದೆ.

ಪಿರಿಯಾಪಟ್ಟಣ ತಾಲೂಕು ಆಯರಬೀಡು ಗ್ರಾಮದ ಅಜೀಜ್ ಅಲಿಯಾಸ್ ಅಜಿತ್(41)ಗೆ ಶಿಕ್ಷೆ ವಿಧಿಸಲಾಗಿದ್ದು, ಈತ ಲಿಂಗಾಪುರ ಹಾಡಿ ಬಳಿಯ ಸಿದ್ದಮ್ಮ ಅವರಿಗೆ ಸೇರಿದ ಜಮೀನನ್ನು ಐದು ವರ್ಷಕ್ಕೆ ಭೋಗ್ಯಕ್ಕೆ ಪಡೆದು, ಅದರಲ್ಲಿ ಗಾಂಜಾ ಬೆಳೆದಿದ್ದ. ಗಾಂಜಾ ಗಿಡಗಳನ್ನು ಕಿತ್ತು, ಅವುಗಳನ್ನು ಮಾರಾಟ ಮಾಡಲೆಂದು ಜಮೀನಿನ ಶೆಡ್‌ನಲ್ಲಿ ದಾಸ್ತಾನು ಮಾಡಿದ್ದ. ವಿಷಯ ತಿಳಿದ ಪೊಲೀಸರು 2023ರ ಜುಲೈ 30ರಂದು ದಾಳಿ ನಡೆಸಿ, ಐದೂವರೆ ಕೆಜಿ ಗಾಂಜಾ ವಶಪಡಿಸಿಕೊಂಡಿದ್ದರು.

ಈ ಸಂಬಂಧ ಬೈಲಕುಪ್ಪೆ ಪೊಲೀಸ್ ಠಾಣೆ ಸಬ್‌ಇನ್ಸ್‌ಪೆಕ್ಟರ್ ಆಗಿದ್ದ ಡಿ.ಎನ್. ಅಜಯ್‌ಕುಮಾರ್ ತನಿಖೆ ನಡೆಸಿ, ನ್ಯಾಯಾಲಯಕ್ಕೆ ದೋಷಾರೋಪ ಪಟ್ಟಿ ಸಲ್ಲಿಸಿದ್ದರು. ಪ್ರಕರಣ ವಿಚಾರಣೆ ನಡೆಸಿದ 7ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ನ್ಯಾಯಾಧೀಶ ಎಂ.ರಮೇಶ್ ಅವರು ಅಜೀಜ್ ವಿರುದ್ಧದ ಆರೋಪ ಸಾಬೀತಾದ ಹಿನ್ನೆಲೆಯಲ್ಲಿ ಆತನಿಗೆ 3 ವರ್ಷ ಜೈಲು ಹಾಗೂ 60 ಸಾವಿರ ರೂ. ದಂಡ ವಿಧಿಸಿ, ತೀರ್ಪು ಪ್ರಕಟಿಸಿದ್ದಾರೆ. ಸರ್ಕಾರದ ಪರವಾಗಿ ಸರ್ಕಾರಿ ಅಭಿಯೋಜಕಿ ಎನ್.ಬಿ. ವಿಜಯಲಕ್ಷ್ಮೀ ವಾದ ಮಂಡಿಸಿದ್ದರು.

ಟ್ರಸ್ಟ್ ಅಧ್ಯಕ್ಷರಾಗಿ ಆಯ್ಕೆ



ಮೈಸೂರು, ನ.4– ಮೈಸೂರಿನ ನ್ಯೂ ಕಾಂತರಾಜ ಅರಸ್ ರಸ್ತೆಯಲ್ಲಿನ ಕುಂಬಾರರ ಸಾರ್ವಜನಿಕ ವಿದ್ಯಾರ್ಥಿನಿಲಯ ಟ್ರಸ್ಟ್‌ನ ಅಧ್ಯಕ್ಷರಾಗಿ ಕುಂಬಾರಗೇರಿ ನಿವಾಸಿ ಸಿ.ರಾಮಣ್ಣ ಆಯ್ಕೆಯಾಗಿದ್ದಾರೆ. ಕಳೆದ ತಿಂಗಳು ನಡೆದ ಟ್ರಸ್ಟ್‌ನ ಆಡಳಿತ ಮಂಡಳಿ ಸಭೆಯಲ್ಲಿ ಇವರನ್ನು ಸರ್ವಾನುಮತದಿಂದ ಅನುಮೋದಿಸಿ ಆಯ್ಕೆ ಮಾಡಲಾಗಿದೆ ಎಂದು ಟ್ರಸ್ಟ್‌ನ ಕಾರ್ಯದರ್ಶಿ ಟಿ.ರಾಜು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಉದ್ಘಾಟನೆಯಾದ ಮಾರನೆ ದಿನವೇ ದೇವರಾಜ ಅರಸು ಪ್ರತಿಮೆ ವಿಚಾರದಲ್ಲಿ ಅಪಸ್ವರ

- ಪ್ರತಿಮೆಯಲ್ಲಿ ಮಾರ್ಪಾಡು ಮಾಡುವಂತೆ ಹತ್ತು ಹಲವು ಸಲಹೆ
- ಶೀಘ್ರ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗೆ ಈ ಬಗ್ಗೆ ಪತ್ರ ಬರೆಯಲು ನಿರ್ಧಾರ
- ಪ್ರತಿಮೆ ಅರಸು ಅವರ ಹೋಲಿಕೆ ಆಗದ ಬಗ್ಗೆ ಸಾರ್ವಜನಿಕರ ಆಕ್ಷೇಪ
- ಅರಸು ಅವರ ಪುತ್ರಿ ಭಾರತಿ ಅರಸ್ ಸಲಹೆಯಂತೆ ಪ್ರತಿಮೆ ರೂಪಿಸಿದ್ದೇವೆ; ಶಿಲ್ಪಿ

ಮೈಸೂರು,ನ.4(ಎಂಟಿವೈ)– ಮೈಸೂರಿನ ಸಿದ್ಧಾರ್ಥನಗರದ ನೂತನ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಪ್ರತಿಷ್ಠಾಪಿಸಿರುವ ಡಿ.ದೇವರಾಜ ಅರಸ್ ಅವರ ಪ್ರತಿಮೆ ಅರಸು ಅವರನ್ನು ಹೋಲಿಕೆಯಾಗದ ಕಾರಣ, ಅದನ್ನು ಪುನರ್ ರೂಪಿಸುವಂತೆ ಸಾರ್ವಜನಿಕ ವಲಯದಿಂದ ಆಗ್ರಹ ಕೇಳಿ ಬಂದಿದೆ.

ಸಾಮಾಜಿಕ ನ್ಯಾಯದ ಹರಿಕಾರರೂ, ಹಿಂದುಳಿದ ವರ್ಗಗಳ ಆಶಾಕಿರಣ ಎನಿಸಿರುವ, ಕರ್ನಾಟಕ ಕಂಡ ಅಪರೂಪದ ಸಾಮಾಜಿಕ ಕಳಕಳಿಯುಳ್ಳ ರಾಜಕಾರಣಿಗಳಲ್ಲಿ ಒಬ್ಬರಾಗಿರುವ ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸ್ ಅವರ ಪ್ರತಿಮೆಯನ್ನು ಮೈಸೂರಿನ ನೂತನ ಜಿಲ್ಲಾಧಿಕಾರಿ ಕಚೇರಿ ಮುಂಭಾಗ ಪ್ರತಿಷ್ಠಾಪಿಸಲು ಅವರ ಅಭಿಮಾನಿಗಳು ಹಾಗೂ ಸಾರ್ವಜನಿಕ ವಲಯದಿಂದ ಆಗ್ರಹ ಕೇಳಿಬಂದಿತ್ತು.

ಈ ಹಿನ್ನೆಲೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮೂಲಕ ಜಿಲ್ಲಾಡಳಿತ ಅಂದಾಜು 92 ಲಕ್ಷ ರೂ. ವೆಚ್ಚದಲ್ಲಿ 13 ಅಡಿ ಎತ್ತರದ ಡಿ.ದೇವರಾಜ ಅರಸ್ ಅವರ ಪ್ರತಿಮೆಯನ್ನು ರೂಪಿಸಿ, ಸೋಮವಾರವಷ್ಟೇ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಂದ ಲೋಕಾರ್ಪಣೆ ಮಾಡಿಸಲಾಗಿತ್ತು. ಲೋಕಾರ್ಪಣೆಗೊಂಡ ದಿನದಿಂದಲೇ ಪ್ರತಿಮೆ ಡಿ.ದೇವರಾಜ ಅರಸ್ ಅವರನ್ನು ಹೋಲುತ್ತಿಲ್ಲ. ಅದನ್ನು ಸರಿಪಡಿಸುವಂತೆ ಒತ್ತಾಯ ಆರಂಭವಾಗಿದೆ.



ದೇವರಾಜ ಅರಸ್

ಸರಿ ಮಾಡಬೇಕು: ವಿಧಾನ ಪರಿಷತ್ ಸದಸ್ಯ ಅಡಗೂರು ಹೆಚ್.ವಿಶ್ವನಾಥ್ ಮಾತನಾಡಿ, ಮೈಸೂರಿನ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಪ್ರತಿಷ್ಠಾಪಿಸಿರುವ ಡಿ.ದೇವರಾಜ ಅರಸ್ ಪ್ರತಿಮೆ ಸರಿ ಇಲ್ಲ ಎಂದು ಜನಾಭಿಪ್ರಾಯ ವ್ಯಕ್ತವಾಗುತ್ತಿರುವುದರಿಂದ ಅದನ್ನು ಸರಿಪಡಿಸುವ ಕೆಲಸ ಆಗಬೇಕು. ಪ್ರತಿಮೆ ಕೆತ್ತನೆ ಸಂದರ್ಭದಲ್ಲಿಯೇ ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಸಂಬಂಧಪಟ್ಟವರು ಕೆತ್ತನೆ ವೇಳೆ ವೀಕ್ಷಣೆ ಮಾಡಿ ಸರಿಮಾಡಿಸಬೇಕಾಗಿತ್ತು ಆದರೆ, ಅದು ಆಗಿಲ್ಲ.

ಈ ಹಿಂದೆ ವಿಧಾನಸೌಧದ ಆವರಣದಲ್ಲಿರುವ ದೇವರಾಜ ಅರಸ್ ಅವರ ಪ್ರತಿಮೆಯೂ ಚೆನ್ನಾಗಿರಲಿಲ್ಲ. ಅದು, ಕೆ.ಆರ್. ನಗರದ ಮಾಜಿ ಶಾಸಕ ಕೆಂಪೇಗೌಡರಂತೆ ಇತ್ತು. ಕೊನೆಗೆ ಕನ್ನಡಪರ ಹೋರಾಟಗಾರ ವಾಟಾಳ್ ನಾಗರಾಜ್ ಹೋರಾಟ ಮಾಡಿ ಅದನ್ನು ಸರಿ ಮಾಡಿಸಿದರು. ಅದರಂತೆ ಮೈಸೂರಿನಲ್ಲಿ ಪ್ರತಿಷ್ಠಾಪಿಸಿರುವ ಪ್ರತಿಮೆಯನ್ನು ಸರಿ ಮಾಡಬೇಕು. ಅರಸು ಅವರು ಬಹಳ ಎತ್ತರ ಇದ್ದರು. ಪ್ರತಿಮೆಯಲ್ಲಿ ಅದು ಬಿಂಬಿತವಾಗಿಲ್ಲ.



ಪ್ರತಿಮೆ ಸರಿ ಮಾಡಲು ಪತ್ರ ಬರೆಯುವೆ: ಶಾಸಕ ತನ್ವೀರ್ ಸೇಠ್ ಮಾತನಾಡಿ, ದೇವರಾಜ ಅರಸ್ ಅವರ ಪ್ರತಿಮೆ ಅರಸು ಅವರನ್ನು ಹೋಲುತ್ತಿಲ್ಲ. ಇದನ್ನು ಸ್ವತಃ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೇ ತಿಳಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗೆ ಪತ್ರ ಬರೆದು ದೇವರಾಜ ಅರಸ್ ಅವರ ಪ್ರತಿಮೆಯನ್ನು ಸರಿಪಡಿಸಲು ಕ್ರಮ ಕೈಗೊಳ್ಳುವಂತೆ ಒತ್ತಾಯಿಸಲಾಗುವುದು. ಪ್ರತಿಮೆ ನಿರ್ಮಾಣದ ವೇಳೆ ಸರಿಯಾದ ಅಳತೆ ತೆಗೆದುಕೊಂಡಿಲ್ಲದೇ ಇರುವುದು ಇಂತಹ ಲೋಪಕ್ಕೆ ಕಾರಣವಿರಬಹುದು ಎಂದರು.

ಉತ್ತಮವಾಗಿ ಮೂಡಿ ಬಂದಿದೆ: ದೇವರಾಜ ಅರಸ್ ಪ್ರತಿಮೆ ಪ್ರತಿಷ್ಠಾನ ಸಮಿತಿ ಅಧ್ಯಕ್ಷ ಜಾಕೀರ್ ಹುಸೇನ್ ಮಾತನಾಡಿ, ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಪ್ರತಿಷ್ಠಾಪಿಸಲಾಗಿರುವ ಡಿ.ದೇವರಾಜ ಅರಸ್ ಪ್ರತಿಮೆ ಉತ್ತಮವಾಗಿ ಮೂಡಿ ಬಂದಿದೆ. ದೇವರಾಜ ಅರಸ್ ಅವರ ಹುಟ್ಟೂರಾದ ಹುಣಸೂರಿನ ಕಲ್ಲಹಳ್ಳಿ ಹಾಗೂ ಬೆಂಗಳೂರಲ್ಲಿ ಪ್ರತಿಷ್ಠಾಪಿಸಿರುವ ಪುತ್ಥಳಿ, ಪ್ರತಿಮೆಗಿಂತಲೂ ಚೆನ್ನಾಗಿದೆ. ಕೆತ್ತನೆ ಮಾಡಿದ ಕಲಾವಿದರು ಪ್ರತಿಯೊಂದು ಹಂತದಲ್ಲಿಯೂ ಡಿ.ದೇವರಾಜ ಅರಸ್ ಅವರ ಪುತ್ರಿಯವರಾದ ಭಾರತಿ ಅರಸ್ ಅವರ ಸಲಹೆ, ಸೂಚನೆ ಪಡೆದಿದ್ದಾರೆ. ಪ್ರತಿಮೆ ಕೆತ್ತನಾ ಕಾರ್ಯ ಪೂರ್ಣಗೊಂಡಾಗ ಭಾರತಿ ಅರಸ್ ಅವರ ಅನುಮತಿ ಪಡೆದು ಜಿಲ್ಲಾಧಿಕಾರಿ ಕಚೇರಿ ಆವರಣಕ್ಕೆ ಸಾಗಿಸಲಾಗಿದೆ.

ಹಂತ ಹಂತದಲ್ಲೂ ಸಲಹೆ ಪಡೆಯಲಾಗಿದೆ: ಪ್ರತಿಮೆ ಕೆತ್ತನೆ ಮಾಡಿದ ಕಲಾವಿದರೊಬ್ಬರು ಮಾತನಾಡಿ, ಈ ಹಿಂದೆ ದೇವರಾಜ ಅರಸ್ ಅವರ ಪ್ರತಿಮೆ ಕೆತ್ತನೆ ಮಾಡಲು ನಮಗೆ ಅವಕಾಶ ನೀಡಿದಾಗ ಒಂದು ಫೋಟೋ ನೀಡಿದ್ದರು. ಅದರಂತೆ ಒಂದು ಮಾದರಿ ರೂಪಿಸಲಾಗಿತ್ತು. ಆದರೆ, ದೇವರಾಜ ಅರಸ್ ಅವರ ಪುತ್ರಿ ಭಾರತಿ ಅರಸ್ ಅವರು ತಮ್ಮ ಬಳಿ ಒಂದು ಫೋಟೋ ಇದ್ದು, ಅದರಂತೆ ಪ್ರತಿಮೆ ಕೆತ್ತನೆ ಮಾಡಬೇಕು ಎಂದರು. ಪ್ರತಿಮೆ ಕೆತ್ತನೆ ವೇಳೆ ಪ್ರತಿಯೊಂದು ಹಂತದಲ್ಲೂ ಅವರ ಸಲಹೆ ಸೂಚನೆ ಪಡೆದು ಕೆತ್ತನೆ ಮಾಡಲಾಗಿದೆ. ಪ್ರತಿಮೆ ಕಣ್ಣು, ಭುಜ, ತಲೆ ಕೂದಲು, ಪಂಚೆಯ ನೆರಿಗೆ ಸೇರಿದಂತೆ ವಿವಿಧ ಸಲಹೆಯನ್ನೂ ಭಾರತಿ ಅರಸ್ ಅವರಿಂದಲೇ ಪಡೆದು ಕೆತ್ತನೆ ಮಾಡಲಾಗಿದೆ. ಪ್ರತಿಮೆ ಕುರಿತು ಭಾರತಿ ಅರಸ್ ಅವರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ ಎಂದು ತಿಳಿಸಿದರು.

ತಿ.ನರಸೀಪುರ ವಿದ್ಯೋದಯ ಕಾಲೇಜಿನಲ್ಲಿ ಪ್ರವೇಶ ದ್ವಾರ, ದಾಸೋಹ ಭವನ, ಬಯಲು ರಂಗಮಂದಿರ ಲೋಕಾರ್ಪಣೆ

ದಾಸೋಹ, ಶಿಕ್ಷಣ ಪರಂಪರೆ ಮುನ್ನಡೆಸುತ್ತಿರುವ ವಿದ್ಯೋದಯ ಸಂಘದ ಕಾರ್ಯಕ್ಕೆ ಸುತ್ತೂರು ಶ್ರೀಗಳು ಶ್ಲಾಘನೆ


ತಿ.ನರಸೀಪುರ ಪಟ್ಟಣದ ವಿದ್ಯೋದಯ ಕಾಲೇಜು ಆವರಣದಲ್ಲಿ ಮಂಗಳವಾರ ಆಯೋಜಿಸಲಾಗಿದ್ದ ಕಾರ್ಯಕ್ರಮದಲ್ಲಿ ಗ್ರಾಮ ವಿದ್ಯೋದಯ ಸಂಘದ ಗೌರವ ಪ್ರಧಾನ ಕಾರ್ಯದರ್ಶಿ ಕೆ.ಪಿ.ಮಹದೇವಸ್ವಾಮಿ ಹಾಗೂ ಕುಟುಂಬ ವರ್ಗದವರನ್ನು ಅಭಿನಂದನಾ ಸಮಿತಿ ಸದಸ್ಯರು, ಹರಗುರು ಚರಮೂರ್ತಿಗಳ ಸಮ್ಮುಖದಲ್ಲಿ ಸನ್ಮಾನಿಸಲಾಯಿತು..

ನಾನು ಹುಟ್ಟಿನಿಂದ ಯಾವತ್ತೂ ಹುಟ್ಟುಹಬ್ಬ ಆಚರಣೆ ಮಾಡಿಕೊಂಡಿಲ್ಲ. ಈಗಲೂ ಬೇಡ ಎಂದು ಸುತ್ತೂರು ಶ್ರೀಗಳ ಬಳಿ ಹೇಳಿದಾಗ ಅವರ ಆದೇಶದ ಮೇರೆಗೆ ಒಪ್ಪಿಕೊಂಡೆ, ಆ ಕಾರಣದಿಂದ ಹಿತೈಷಿಗಳು, ಆಡಳಿತ ಮಂಡಳಿಯವರು ಸೇರಿ ಕಾರ್ಯಕ್ರಮ ಆಯೋಜನೆ ಮಾಡಿದ್ದಾರೆ. ಇದು ನನ್ನ ಜೀವಮಾನದ ಸೌಭಾಗ್ಯ ಎಂದೇ ಭಾವಿಸುತ್ತೇನೆ. ಕಾರ್ಯಕ್ರಮದಲ್ಲಿ ಎಲ್ಲ ಸಮಾಜದ ಜಗದ್ಗುರುಗಳು, ಹರಗುರು ಚರಮೂರ್ತಿಗಳು ಭಾಗವಹಿಸಿ ನನಗೆ ಮತ್ತು ನನ್ನ ಕುಟುಂಬಕ್ಕೆ ಆಶೀರ್ವದಿಸಿದ್ದಾರೆ. ಅವರಿಗೆ ಪ್ರಣಾಮಗಳನ್ನು ಸಲ್ಲಿಸುತ್ತೇನೆ. ಶಿವಾನಂದ ಶರ್ಮರು ಸಂಸ್ಥೆ ಸ್ಥಾಪನೆ ಮಾಡದಿದ್ದರೆ ಸಂಸ್ಥೆಯ ಕಾರ್ಯದರ್ಶಿಯಾಗಲು ಸಾಧ್ಯವಾಗುತ್ತಿರಲಿಲ್ಲ. ನನ್ನ ಇಂದಿನ ಶ್ರೇಯಸ್ಸು, ಕೀರ್ತಿ ಶರ್ಮರಿಗೆ ಸಲ್ಲಬೇಕಿದೆ. 36 ವರ್ಷಗಳಲ್ಲಿ ಶರ್ಮರ ಆದರ್ಶಕ್ಕೆ ಚ್ಯುತಿ ಬಾರದಂತೆ ಸಂಸ್ಥೆಯ ಆರ್ಥಿಕ ಇತಿ ಮಿತಿಗಳಿಗೆ ಒಳಪಟ್ಟು ಅಭಿವೃದ್ಧಿ ಕಾರ್ಯ ಮಾಡಿಕೊಂಡು ಬಂದಿದ್ದೇನೆ. ನನ್ನ ವಿದ್ಯಾಭ್ಯಾಸದ ವೇಳೆ ಶರ್ಮರು ನನ್ನನ್ನು ನಿಜಲಿಂಗಪ್ಪ ಎಂದು ಕರೆದಿದ್ದರು. ಅಂದಿನ ಕಾಲದಲ್ಲಿಯೇ ಶರ್ಮರು ಮುಂದೆ ನೀನು ಈ ಸಂಸ್ಥೆಯನ್ನು ಮುನ್ನಡೆಸುತ್ತೀಯ ಎಂದು ಭವಿಷ್ಯ ನುಡಿದಿದ್ದರು. ಅವರ ಹಾರೈಕೆಯ ಫಲವಾಗಿ 1989 ರಲ್ಲಿ ಸಂಸ್ಥೆಯ ಕಾರ್ಯದರ್ಶಿಯಾಗಿ ಸಂಸ್ಥೆಯ ಬೆಳವಣಿಗೆಗೆ ಅಹರ್ನಿಶಿ ದುಡಿಯುತ್ತಾ ಬಂದಿದ್ದೇನೆ. ವರ್ಷವೊಂದಕ್ಕೆ 280 ಕ್ವಿಂಟಾಲ್ ಅಕ್ಕಿಯನ್ನು ಮಠ ಮಾನ್ಯಗಳು, ವಿದ್ಯಾರ್ಥಿ ನಿಲಯಗಳ ದಾಸೋಹಕ್ಕೆ ನೀಡುತ್ತಾ ಬರಲಾಗುತ್ತಿದೆ. ಶ್ರೀ ಸಿದ್ದಲಿಂಗ ಸ್ವಾಮೀಜಿಯವರ ಆಶೀರ್ವಾದ ನನ್ನ ಮೇಲಿದ್ದು, ನನ್ನೆಲ್ಲಾ ಶ್ರೇಯಸ್ಸು ಸಿದ್ದಗಂಗಾ ಮಠ ಹಾಗೂ ಶಿವಾನಂದ ಶರ್ಮರಿಗೆ ಸೇರುತ್ತದೆ. –ಕೆ.ಪಿ.ಮಹದೇವಸ್ವಾಮಿ, ಗೌರವ ಕಾರ್ಯದರ್ಶಿ, ಗ್ರಾಮ ವಿದ್ಯೋದಯ ಸಂಘ

ತಿ.ನರಸೀಪುರ, ನ.4– ಮಠ–ಮಾನ್ಯಗಳ ದಾಸೋಹ, ಶಿಕ್ಷಣ ಪರಂಪರೆಯನ್ನು ಗ್ರಾಮ ವಿದ್ಯೋದಯ ಸಂಘ ಅಳವಡಿಸಿಕೊಂಡು ಮುನ್ನಡೆಯುತ್ತಿರುವುದು ಅಭಿನಂದನಾರ್ಹ ಕಾರ್ಯ ಎಂದು ಸುತ್ತೂರು ವೀರಸಿಂಹಾಸನ ಮಠದ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಮೆಚ್ಚುಗೆ ವ್ಯಕ್ತಪಡಿಸಿದರು. ಮಂಗಳವಾರ ಪಟ್ಟಣದ ವಿದ್ಯೋದಯ ಕಾಲೇಜು ಆವರಣದಲ್ಲಿ ಆಯೋಜಿಸಿದ್ದ ಎಂ.ಸಿ.ಶಿವಾನಂದ ಶರ್ಮ ಸ್ಮಾರಕ ಪ್ರವೇಶದ್ವಾರ, ದಾಸೋಹ ಭವನ,ಡಾ.ಶ್ರೀ ಶಿವಕುಮಾರ ಸ್ವಾಮೀಜಿಗಳ ಬಯಲು ರಂಗಮಂದಿರ ಹಾಗೂ ನಿಸ್ವಾರ್ಥಿ ಅಭಿನಂದನಾ ಗ್ರಂಥ ಬಿಡುಗಡೆ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸಂಸ್ಥೆಯ ಗೌರವ ಪ್ರಧಾನ ಕಾರ್ಯದರ್ಶಿಯಾಗಿ ಮೂರು ದಶಕಕ್ಕೂ ಹೆಚ್ಚು ಕಾಲ ಸೇವೆ ಸಲ್ಲಿಸಿರುವ ಅವರು, ತಮ್ಮ ಜೀವಿತಾವಧಿಯ ಸುಮಾರು 36 ವರ್ಷಗಳನ್ನು ತ್ಯಾಗ, ಸೇವೆಗಾಗಿಯೇ ನೀಡಿದ್ದಾರೆ. ಸಂಸ್ಥೆಯ ಸ್ಥಾಪಕ ಶಿವಾನಂದ ಶರ್ಮ ಅವರು ಕಂಡಿದ್ದ ಕನಸನ್ನು ನನಸು ಮಾಡುವತ್ತ ಮಹದೇವಸ್ವಾಮಿ ಅವರು ಸಾಗಿದ್ದಾರೆ. ಅವರ ಕನಸು ನನಸಾಗಲಿ, ಸಂಸ್ಥೆ ಮತ್ತಷ್ಟು ಅಭಿವೃದ್ಧಿ ಪಥದಲ್ಲಿ ಸಾಗಲಿ ಎಂದು ಹಾರೈಸಿದರು.

ಸಂಸ್ಥೆಯ ಸಂಸ್ಥಾಪಕರಾದ ಎಂ.ಸಿ.ಶಿವಾನಂದ ಶರ್ಮರವರು 1940ರಲ್ಲಿ ಬೆಂಗಳೂರಿನಲ್ಲಿ 1946ರಲ್ಲಿ ತಿ.ನರಸೀಪುರದಲ್ಲಿ ಗ್ರಾಮ ವಿದ್ಯೋದಯ ಸಂಘ ಸ್ಥಾಪನೆ ಮಾಡಿದ್ದು ಅವರ ಉದಾರ ಚಿಂತನೆಯ ಫಲವಾಗಿದೆ. ವಿದ್ಯಾರ್ಥಿಗಳು ಹೆಚ್ಚಾದಾಗ 1951ರಲ್ಲಿ ವಿಶಾಲವಾದ ಕಟ್ಟಡ ಸ್ಥಾಪಿಸಿ ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳಿಗೆ ಅನುಕೂಲ ಕಲ್ಪಿಸಿಕೊಟ್ಟಿದ್ದ ಶರ್ಮರ ಕನಸನ್ನು ಸಾಕಾರಗೊಳಿಸುವಲ್ಲಿ ಟಿ.ಪಿ.ಬೋರಯ್ಯ ಸಹ ಒಬ್ಬರಾಗಿದ್ದಾರೆ. ನಂತರದಲ್ಲಿ ಸಂಸ್ಥೆಯ ಜವಾಬ್ದಾರಿ ವಹಿಸಿಕೊಂಡ ಕೆ.ಪಿ.ಮಹದೇವಸ್ವಾಮಿಯವರು 36 ವರ್ಷಗಳ ಕಾಲ ಅವಿರತವಾದ ಶ್ರಮದಿಂದ ಸಂಸ್ಥೆಯನ್ನು ಶ್ರೇಯಸ್ಸಿನ ಪಥದತ್ತ ಮುನ್ನಡೆಸಿಕೊಂಡು ಬಂದಿದ್ದಾರೆ ಎಂದರು.

ಮಹದೇವಸ್ವಾಮಿಯವರನ್ನು ಕೆಲವರು ಕಟುಕತನ ಹಾಗೂ ಸಿಟ್ಟಿನ ಮನುಷ್ಯ ಎನ್ನುತ್ತಾರೆ, ಅದಕ್ಕೆ ಅಪವಾದ ಎನ್ನುವಂತೆ ಅವರ ಕಟುಕತನ, ಬಿಗಿಯಾದ ಆಡಳಿತವೇ ಜನರ ಪ್ರೀತಿ ಗಳಿಸಿದೆ ಎಂಬುದಕ್ಕೆ ಇಂದು ಇಲ್ಲಿ ನೆರೆದಿರುವ ಅಭಿಮಾನಿ ಬಳಗವೇ ಸಾಕ್ಷಿಯಾಗಿದೆ. ಯಾರು ಒಳ್ಳೆಯ ಕೆಲಸ ಮಾಡುತ್ತಾರೆ ಅವರನ್ನು ಜನರು ಗುರುತಿಸುತ್ತಾರೆ ಎಂಬುದಕ್ಕೆ ಇಂದಿನ ಅಭಿಮಾನದ ಅಭಿನಂದನೆಯ ಕಾರ್ಯಕ್ರಮವೇ ಸಾಕ್ಷಿ ಎಂದರು.

ಕೆ.ಪಿ.ಮಹದೇವಸ್ವಾಮಿಯವರು ಕೇವಲ ಶಿಕ್ಷಣಕ್ಕೆ ಮಾತ್ರವೇ ಪ್ರಾಮುಖ್ಯತೆ ನೀಡುತ್ತಿಲ್ಲ, ಸಂಸ್ಥೆಯ ಸಂಪತ್ತು, ಆದಾಯದಲ್ಲಿ ಮಠ ಮಾನ್ಯಗಳು, ದೇವಸ್ಥಾನಗಳು, ದಾಸೋಹಕ್ಕೆ ಲಕ್ಷಾಂತರ ಹಣ ನೀಡುವ ಮೂಲಕ ಉದಾರವಾದ ಕಾಣಿಕೆ ನೀಡುತ್ತಿದ್ದು ಭಗವಂತ ಅವರಿಗೆ ಆಯಸ್ಸು ಆರೋಗ್ಯ ಕೊಟ್ಟು ಮತ್ತಷ್ಟು ಸಮಾಜ ಮುಖಿ ಕೆಲಸ ಮಾಡುವ ಶಕ್ತಿ ಕೊಡಲಿ ಎಂದು ಪ್ರಾರ್ಥಿಸಿದರು.

ಸಿದ್ಧಗಂಗಾ ಮಠದ ಶ್ರೀ ಸಿದ್ದಲಿಂಗ ಸ್ವಾಮೀಜಿ ಮಾತನಾಡಿ, ಬೆಂಗಳೂರಿನಲ್ಲಿ ರಾಷ್ಟ್ರೀಯ ಶಿಕ್ಷಣ ಸಂಸ್ಥೆ(ಆರ್.ವಿ) ಸ್ಥಾಪಿಸಿದ ಶರ್ಮ ಅವರು, ಹುಟ್ಟೂರಿನ ಋಣ ತೀರಿಸಲು ನರಸೀಪುರದಲ್ಲಿ ಗ್ರಾಮ ವಿದ್ಯೋದಯ ಸಂಘ ಸ್ಥಾಪಿಸಿ, ಬಡ ವಿದ್ಯಾರ್ಥಿಗಳಿಗೆ ಶಿಕ್ಷಣ ನೀಡಿದರು. ಅಂದೇ ವಿದ್ಯಾರ್ಥಿಗಳಿಗೆ ಬಿಸಿಯೂಟ ಯೋಜನೆ ಜಾರಿಗೆ ತಂದರು. ಅವರು ದೂರದೃಷ್ಟಿ ಇಟ್ಟುಕೊಂಡು ಶಿಕ್ಷಣ ಸಂಸ್ಥೆಗಳನ್ನು ಕಟ್ಟಿದರು. ಕೆ.ಪಿ.ಮಹದೇವಸ್ವಾಮಿಯವರು ಶಿವಾನಂದ ಶರ್ಮರ ಹುಟ್ಟೂರಾದ ಮಾದ್ರಹಳ್ಳಿ ಗ್ರಾಮದಲ್ಲಿ ಶಿಕ್ಷಣ ಸಂಸ್ಥೆ ತೆರೆದು ಅಲ್ಲಿನ ಮಕ್ಕಳಿಗೆ ಉಚಿತವಾದ ಗುಣಮಟ್ಟದ ಶಿಕ್ಷಣ ನೀಡುವ ಯೋಜನೆ ಜೊತೆಗೆ ಹನೂರಿನಲ್ಲಿ ಸಿಬಿಎಸ್ ಶಾಲೆ ತೆರೆಯಲು ಚಿಂತನೆ ನಡೆಸಿದ್ದು ಅವರ ಯೋಜನೆ ತ್ವರಿತವಾಗಿ ಕಾರ್ಯ ರೂಪಕ್ಕೆ ಬರುವಂತಾಗಲಿ ಎಂದರು.

ವಿಧಾನಪರಿಷತ್ ಸದಸ್ಯ ಯತೀಂದ್ರ ಸಿದ್ದರಾಮಯ್ಯ ಮಾತನಾಡಿ, ಯಾವುದೇ ವಿದ್ಯಾ ಸಂಸ್ಥೆಗಳಾಗಲಿ ಯಾವಾಗಲೂ ಸಮಾಜಕ್ಕೆ ಉತ್ತಮವಾದ ಕೊಡುಗೆಯನ್ನು ನೀಡುತ್ತಾ ಬಂದಿವೆ. ವಿದ್ಯೋದಯ ಶಿಕ್ಷಣ ಸಂಸ್ಥೆ ಇದಕ್ಕೆ ಹೊರತಾಗಿಲ್ಲ. ಗ್ರಾಮ ವಿದ್ಯೋದಯ ಸಂಘ ಸ್ವಾತಂತ್ರ್ಯ ಪೂರ್ವದಲ್ಲೇ ಸ್ಥಾಪನೆಯಾಗಿದ್ದ ಸಂಸ್ಥೆ,ಸ್ವಾತಂತ್ರ್ಯ ಬಂದಾಗ ನಮ್ಮ ದೇಶ ದುಸ್ಥಿತಿಯಲ್ಲಿತ್ತು.ಸಾಕ್ಷರತೆ ಪ್ರಮಾಣ ಕೇವಲ ಶೇ.12ರಷ್ಟಿತ್ತು. ಆ ವೇಳೆ ದಾನಿಗಳ ಕೊರತೆ ಇತ್ತು. ಬಡತನ, ಹಸಿವಿನಿಂದ ಬಳಲುವ ಪರಿಸ್ಥಿತಿಯಲ್ಲಿದ್ದೆವು. ಇಂತಹ ಕ್ಲಿಷ್ಟಕರವಾದ ಪರಿಸ್ಥಿತಿಯಲ್ಲಿ ಶಿವಾನಂದ ಶರ್ಮರು ವಿದ್ಯಾಸಂಸ್ಥೆ ಕಟ್ಟಿ ಸಾವಿರಾರು ಬಡ ಮಕ್ಕಳ ಶಿಕ್ಷಣದ ಬದುಕಿಗೆ ದಾರಿ ದೀಪವಾದರು. ಇವತ್ತು ದೇಶ ಸುಶಿಕ್ಷಿತವಾಗಬೇಕಾದರೆ ವಿದ್ಯೋದಯ ಸಂಸ್ಥೆಯಂತಹ ಸಾವಿರಾರು ಶಿಕ್ಷಣ ಸಂಸ್ಥೆಗಳು ಸ್ಥಾಪನೆಯಾಗಬೇಕು, ಆದರೆ ಶಿಕ್ಷಣ ಸಂಸ್ಥೆ ನಡೆಸುವುದು ಸುಲಭವಲ್ಲ, ಇಲ್ಲಿನ ಗೌರವ ಕಾರ್ಯದರ್ಶಿ ಕೆ.ಪಿ.ಮಹದೇವಸ್ವಾಮಿಯವರು ಶಿಕ್ಷಣ ಸಂಸ್ಥೆಯನ್ನು ಚೆನ್ನಾಗಿ ಕಟ್ಟಿ ಬೆಳೆಸಿದ್ದಾರೆ. ಅವರ ಶ್ರಮ ಶ್ಲಾಘನೆಗೆ ಪಾತ್ರವಾಗಿದ್ದು, ಯಾವುದೇ ರಾಜಕಾರಣಿಗಳು ಇಂತಹ ಸಂಘ ಸಂಸ್ಥೆಗಳಿಗೆ ಸಹಕಾರ ನೀಡುವ ಕೆಲಸ ಮಾಡಬೇಕು ಎಂದರು.


ತಿ.ನರಸೀಪುರ ವಿದ್ಯೋದಯ ಶಿಕ್ಷಣ ಸಂಸ್ಥೆಗಳ, ಸಂಸ್ಥಾಪಕ ಕಾರ್ಯದರ್ಶಿ ಕೆ.ಪಿ.ಮಹದೇವಸ್ವಾಮಿಯವರ ಅಮೃತ ಮಹೋತ್ಸವ ಸಮಾರಂಭದಲ್ಲಿ ಪಿಕಾರ್ಡ್ ಬ್ಯಾಂಕ್ ಮಾಜಿ ಅಧ್ಯಕ್ಷ ಕೆ.ವಜ್ರೇಗೌಡ ಅಭಿನಂದಿಸಿದರು. ತಾಪಂ ಮಾಜಿ ಅಧ್ಯಕ್ಷ ದೊಡ್ಡಬಾಗಿಲು ಮಲ್ಲಿಕಾರ್ಜುನ ಸ್ವಾಮಿ, ಕೃಷಿಕ ಸಮಾಜದ ಉಪಾಧ್ಯಕ್ಷ ನಾಗರಾಜು ಇದ್ದಾರೆ.


ತಿ.ನರಸೀಪುರ ವಿದ್ಯೋದಯ ಶಿಕ್ಷಣ ಸಂಸ್ಥೆಗಳ ಸಂಸ್ಥಾಪಕ ಕಾರ್ಯದರ್ಶಿ ಕೆ.ಪಿ.ಮಹದೇವಸ್ವಾಮಿ ಅವರ ಅಮೃತ ಮಹೋತ್ಸವ ಸಮಾರಂಭದಲ್ಲಿ ಅಖಿಲ ಭಾರತ ವೀರಶೈವ ಮಹಾಸಭಾ ಉಪಾಧ್ಯಕ್ಷ ಹಾಗೂ ಪುರಸಭಾ ಸದಸ್ಯ ಎಸ್.ಕೆ.ಕಿರಣ್ ಅಭಿನಂದಿಸಿದರು. ಕೆಬ್ಬೆಹುಂಡಿ ಶಿವಕುಮಾರ್, ಕುರುಬೂರು ಶಿವು, ದಯಾನಂದ ಪಟೇಲ್, ಬಾಗಳಿ ಮಹೇಶ್ ಇದ್ದಾರೆ.

ಈ ವೇಳೆ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಶ್ರೀ ಸಿದ್ದಲಿಂಗ ಸ್ವಾಮೀಜಿ ಸೇರಿದಂತೆ ಹಲವಾರು ಮಠಗಳ ಮಠಾಧೀಶರು ಕೆ.ಪಿ.ಮಹದೇವಸ್ವಾಮಿ ಹಾಗೂ ಪತ್ನಿ ಸುಜಾತಾ ಅವರನ್ನು ಅಭಿನಂದಿಸಿದರು.

ಹರಿಹರದ ಪಂಚಮಸಾಲಿ ಪೀಠದ ಶ್ರೀ ವಚನಾನಂದ ಸ್ವಾಮೀಜಿ, ಚಿತ್ರದುರ್ಗದ ಛಲವಾದಿ ಗುರುಪೀಠದ ಶ್ರೀ ಬಸವ ನಾಗಿದೇವ ಸ್ವಾಮೀಜಿ, ಹೊಸದುರ್ಗ ಶ್ರೀ ಭಗೀರಥ ಮಹಾಸಂಸ್ಥಾನ ಮಠದ ಡಾ.ಪುರುಷೋತ್ತಮಾನಂದಪುರಿ ಸ್ವಾಮೀಜಿ, ಕೂಡಲ ಸಂಗಮ–ಬೆಂಗಳೂರು ಬಸವಧರ್ಮ ಪೀಠದ ಶ್ರೀ ಮಾತೆ ಗಂಗಾದೇವಿ, ಸಾಲೂರು ಮಠದ ಶ್ರೀ ಶಾಂತಮಲ್ಲಿಕಾರ್ಜುನ ಸ್ವಾಮೀಜಿ, ಮೈಸೂರು ಕುಂದೂರು ಮಠದ ಶ್ರೀ ಶರತ್ ಚಂದ್ರ ಸ್ವಾಮೀಜಿ ಮಾತನಾಡಿದರು.

ಹರಿಹರ ವಾಲ್ಮೀಕಿ ಮಠದ ಶ್ರೀ ವಾಲ್ಮೀಕಿ ಪ್ರಸನ್ನಾನಂದ ಸ್ವಾಮೀಜಿ, ಕುಂತೂರು ಮಠದ ಶ್ರೀ ಶಿವಪ್ರಭು ಸ್ವಾಮೀಜಿ, ಮುಡುಕುತೊರೆ ಕಲ್ಮಠದ ಶ್ರೀ ನಂದಿಕೇಶ್ವರ ಸ್ವಾಮೀಜಿ, ಗಾವಡಗೆರೆ ಗುರುಲಿಂಗ ಜಂಗಮ ಮಠದ ಶ್ರೀ ನಟರಾಜ ಸ್ವಾಮೀಜಿ, ಬೆಂಗಳೂರು ಮಹಾಬೋಧಿ ಸೊಸೈಟಿಯ ಆನಂದ ಭಂತೇಜಿ ಸೇರಿದಂತೆ ಹಲವು ಮಠಗಳ ಸ್ವಾಮೀಜಿಗಳು ಪಾಲ್ಗೊಂಡಿದ್ದರು.

ಸಮಾರಂಭದಲ್ಲಿ ಅಭಿನಂದನಾ ಸಮಿತಿ ಕಾರ್ಯಾಧ್ಯಕ್ಷ ಹಾಗೂ ಸಂಸ್ಥೆ ಆಡಳಿತಾಧಿಕಾರಿ ಕೆ.ಪಿ.ಉದಯ್ ಕುಮಾರ್, ಕೆ.ಪಿ.ಮಹದೇವಸ್ವಾಮಿ ಅವರ ಪುತ್ರಿ ಪ್ರಿಯಾಂಕಾ, ಅಭಿನಂದನಾ ಗ್ರಂಥದ ಸಂಪಾದಕ ಪ್ರೊ.ಡಿ.ಎಸ್. ಸದಾಶಿವಮೂರ್ತಿ, ಕೃಷಿಕ ಸಮಾಜದ ಅಧ್ಯಕ್ಷ ಬಿ.ಎಂ.ಶಿವಮಲ್ಲಪ್ಪ, ವಿದ್ಯೋದಯ ಸಂಸ್ಥೆ ಪ್ರಾಂಶುಪಾಲರಾದ ಎಚ್.ಎಸ್. ಮಾನಸ, ಎನ್.ಕಲ್ಪನಾ, ಉಪನ್ಯಾಸಕರಾದ ಟಿ.ಎಸ್.ಬಸವಣ್ಣಸ್ವಾಮಿ, ರವಿಕುಮಾರ್, ಮೂಗೂರು ಕುಮಾರಸ್ವಾಮಿ, ಆಕಾಶವಾಣಿ ಕಲಾವಿದೆ ಸವಿತಾ ಶಿವಕುಮಾರ್ ಮತ್ತಿತರರು ಹಾಜರಿದ್ದರು.

ತೆಂಗು, ತಾಳೆ ಗ್ರಾಮೀಣ ಜನರ ಆರ್ಥಿಕ ಬೆಳೆ

ನಂಜನಗೂಡು: ತೆಂಗು ಮತ್ತು ತಾಳೆ ಬೆಳೆಯು ಗ್ರಾಮೀಣ ಆರ್ಥಿಕತೆ ಆಗಿದೆ. ರೈತರು ನವೀನ ಮಾದರಿಯ ತಾಂತ್ರಿಕತೆಯನ್ನು ಅಳವಡಿಸಿಕೊಂಡು, ತೆಂಗು ಸಮಗ್ರ ಬೇಸಾಯ ಮಾಡುವುದರಿಂದ ಉತ್ಪಾದನೆಯನ್ನು ಅಧಿಕಗೊಳಿಸಿ ಆರ್ಥಿಕವಾಗಿ ಲಾಭಗಳಿಸಬಹುದು ಎಂದು ಶಾಸಕ ದರ್ಶನ್ ಧ್ರುವನಾರಾಯಣ ಹೇಳಿದರು.

ನಗರದ ತೋಟಗಾರಿಕಾ ಇಲಾಖೆಯ ಕಚೇರಿಯಲ್ಲಿ ತೋಟಗಾರಿಕಾ ಇಲಾಖೆ ವತಿಯಿಂದ ತೆಂಗು ಮತ್ತು ತಾಳೆ ಬೆಳೆಯ ಸಮಗ್ರ ಕೃಷಿ ಕುರಿತು ಆಯೋಜಿಸಲಾಗಿದ್ದ ವಿಚಾರ ಸಂಕಿರಣ ಉದ್ಘಾಟಿಸಿ ಮಾತನಾಡಿದರು.


ತೆಂಗು ಮತ್ತು ತಾಳೆ ಬೆಳೆಯ ಸಮಗ್ರ ಕೃಷಿ ವಿಚಾರ ಸಂಕಿರಣ ಉದ್ಘಾಟಿಸಿದ ಕ್ಷಣ.

ನಮ್ಮ ತಾಲೂಕಿನಲ್ಲಿ ಅತಿ ಹೆಚ್ಚು ತೆಂಗು ಮತ್ತು ಅಡಿಕೆ ಬೆಳೆಗಾರರನ್ನು ಕಾಣುತ್ತೇವೆ, ತಾಲೂಕಿನಲ್ಲಿ ಸುಮಾರು 5 ಸಾವಿರ ಹೆಕ್ಟೇರ್‌ನಷ್ಟು ತೆಂಗು ಬೆಳೆಯಿದೆ, ಸುಮಾರು 150 ಹೆಕ್ಟೇರ್ ಪ್ರದೇಶದಲ್ಲಿ ತಾಳೆ ಬೆಳೆಯನ್ನು ಕಾಣುತ್ತೇವೆ, ಇಂದಿನ ಆಧುನಿಕ ಯುಗದಲ್ಲಿ ಹವಾಮಾನ ಏರುಪೇರು ಆಗುತ್ತಿದ್ದು ಅದಕ್ಕೆ ಹೊಂದಾಣಿಕೆ ಮಾಡಿಕೊಂಡು ಕೃಷಿ ಅನುಸರಿಸುವುದು ಕಷ್ಟದಾಯಕ ಕೆಲಸ. ಅಲ್ಲದೆ ಇತ್ತೀಚಿನ ದಿನಗಳಲ್ಲಿ ಕಾಡು ಹಂದಿಗಳ ಹಾವಳಿಯಿಂದಲೂ ಕೂಡ ತೆಂಗಿನ ಬೆಳೆಗೆ ಕೊಳೆರೋಗ ಬರುತ್ತಿದೆ, ಆದ್ದರಿಂದ ವಿಜ್ಞಾನಿಗಳು ರೈತರ ತಾಕುಗಳಿಗೆ ಭೇಟಿ ನೀಡಿ ನೈಸರ್ಗಿಕವಾಗಿ ತೋಟಗಾರಿಕೆ ಅನುಸರಿಸುವ ಕ್ರಮ ಹಾಗೂ ನವೀನ ಮಾದರಿಯ ತಂತ್ರಜ್ಞಾನ ಅಳವಡಿಸಿಕೊಳ್ಳುವ ಬಗೆ, ರೋಗ ನಿರೋಧಕಗಳನ್ನು ಅನುಸರಿಸುವ ಕ್ರಮಗಳನ್ನು ರೈತರಿಗೆ ತಿಳುವಳಿಕೆ ಮೂಡಿಸಿ ಅರಿವು ಮೂಡಿಸಬೇಕು ಎಂದರು.

ಪ್ರಮುಖವಾಗಿ ತೆಂಗಿನ ಉಪಕಸುಬು ಅನುಸರಿಸಿ ಮಾರುಕಟ್ಟೆ ಮಾಡುವುದು, ಮತ್ತು ತೆಂಗಿನ ಸಂಸ್ಕರಣ ವಿಧಾನಗಳನ್ನು ರೈತರಿಗೆ ನಿರಂತರವಾಗಿ ಮಾರ್ಗದರ್ಶನ ಮಾಡುವ ನಿಟ್ಟಿನಲ್ಲಿ ಇಂತಹ ಹೆಚ್ಚಿನ ವಿಚಾರ ಸಂಕಿರಣಗಳ ಆಯೋಜನೆ ಮತ್ತು ಪ್ರಾತ್ಯಕ್ಷಿಕೆ ಮೂಲಕ ಅರಿವು ಮೂಡಿಸಿ ಅವರನ್ನು ಉದ್ಯಮಿಗಳಾಗುವಂತೆ ಪ್ರೋತ್ಸಾಹ ನೀಡಬೇಕು, ಎಂದು ತೋಟಗಾರಿಕಾ ಅಧಿಕಾರಿಗಳು ಮತ್ತು ವಿಜ್ಞಾನಿಗಳಿಗೆ ಸಲಹೆ ನೀಡಿದರು.

ರೈತರು ಕೂಡ ತೆಂಗಿನ ಬೆಳೆಯ ಮಧ್ಯದಲ್ಲಿ ಮಣ್ಣಿನ ಫಲವತ್ತತೆಯನ್ನು ಹೆಚ್ಚಿಸಲು ಸಮಗ್ರ ಕೃಷಿ ಪದ್ಧತಿಯನ್ನು ಅನುಸರಿಸಬೇಕು ಮತ್ತು ಸಮಗ್ರ ಕೃಷಿ ಬೇಸಾಯದಿಂದ ಆರ್ಥಿಕವಾಗಿ ಲಾಭಗಳಿಸಲು ಸಾಧ್ಯವಾಗಲಿದೆ ಎಂದು ಹೇಳಿದರು.

ತೋಟಗಾರಿಕಾ ಸಹಾಯಕ ನಿರ್ದೇಶಕ ಚಂದ್ರು ಮಾತನಾಡಿದರು. ಕಾರ್ಯಕ್ರಮದಲ್ಲಿ ತೆಂಗು ಮತ್ತು ತಾಳೆ ಬೆಳೆಯನ್ನು ಪ್ರೋತ್ಸಾಹ ನೀಡುವ ಸಲುವಾಗಿ ರೈತರಿಗೆ ತಾಳೆ ಸಸಿ ಮತ್ತು ಗೊಬ್ಬರ ವಿತರಣೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಡಾ.ವಿನಯ್ ಪ್ರಸಾದ್, ಪ್ರಸಾದ್ ಬಾಬು, ಚಂದ್ರು, ನಾಗೇಶ್ ರಾಜ್ ಸೇರಿದಂತೆ ವಿವಿಧ ರೈತ ಸಂಘಗಳ ಪ್ರತಿನಿಧಿಗಳು, ತೋಟಗಾರಿಕಾ ಇಲಾಖೆಯ ಅಧಿಕಾರಿಗಳು ಮತ್ತು ಅನೇಕ ರೈತರು ಉಪಸ್ಥಿತರಿದ್ದರು.

ಶಿಂಡೇನಹಳ್ಳಿ ಡೇರಿಗೆ ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆ

ಹೆಚ್.ಡಿ.ಕೋಟೆ: ಶಿಂಡೇನಹಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷರಾಗಿ ಜೆಡಿಎಸ್ ಬೆಂಬಲಿತ ಅಭ್ಯರ್ಥಿ ಮಹದೇವ, ಉಪಾಧ್ಯಕ್ಷರಾಗಿ ಉಮಾ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.


ಶಿಂಡೇನಹಳ್ಳಿ ಡೇರಿಗೆ ಆಯ್ಕೆಯಾದ ಅಧ್ಯಕ್ಷ, ಉಪಾಧ್ಯಕ್ಷರನ್ನು ಅಭಿನಂದಿಸಲಾಯಿತು.

ತಾಲೂಕಿನ ಶಿಂಡೇನಹಳ್ಳಿ ಹಾಲು ಉತ್ಪಾದಕರ ಸಂಘಕ್ಕೆ ನಡೆದ ಚುನಾವಣೆಯಲ್ಲಿ ಒಟ್ಟು 11 ಸದಸ್ಯರುಗಳ ಪೈಕಿ ಇಬ್ಬರು ಕಾಂಗ್ರೆಸ್ ಸದಸ್ಯರಿದ್ದು, 9 ಮಂದಿ ಜೆಡಿಎಸ್‌ನ ಸದ್ಯಸರುಗಳಿದ್ದಾರೆ. ಕಾಂಗ್ರೆಸ್ ಪಕ್ಷದ ಲಕ್ಷ್ಮಮ್ಮ, ಬೀರೇಗೌಡ, ನಾಮಪತ್ರ ಸಲ್ಲಿಸದ ಕಾರಣ ಜೆಡಿಎಸ್ ಪಕ್ಷದ ಮಹದೇವ ಮತ್ತು ಉಮಾ ಅಧ್ಯಕ್ಷರು ಮತ್ತು ಉಪಾಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿ ರೇಣುಕಾ ಘೋಷಿಸಿದರು.

ಜೆಡಿಎಸ್ ಮುಖಂಡ ಶಿಂಡೇನಹಳ್ಳಿ ಯತೀಶ ಅವರ ಅಧ್ಯಕ್ಷತೆಯಲ್ಲಿ ನಡೆದ ಚುನಾವಣೆಯಲ್ಲಿ ಅವಿರೋಧವಾಗಿ ಆಯ್ಕೆಯಾದ ನೂತನ ಅಧ್ಯಕ್ಷ, ಉಪಾಧ್ಯಕ್ಷರನ್ನು, ನಿರ್ದೇಶಕರುಗಳಾದ ಬಸವೇಗೌಡ, ಕರೀಗೌಡ, ಮಲೇಗೌಡ, ಈರಣ್ಣ, ಬನ್ನಮ್ಮ, ಪುಟ್ಟಮ್ಮ, ಗುರುವಮ್ಮ, ಗ್ರಾಮದಲ್ಲಿ ಅಭಿನಂದಿಸಿ ಸಿಹಿ ಹಂಚಿ ಪಟಾಕಿ ಸಿಡಿಸಿ ಸಂಭ್ರಮಿಸಿದರು.

ಜೆಡಿಎಸ್ ಮುಖಂಡ ಶಿಂಡೇನಹಳ್ಳಿ ಯತೀಶ್ ಕುಮಾರ್ ಮಾತನಾಡಿ, ಮಾಜಿ ಮುಖ್ಯಮಂತ್ರಿ ಹಾಗೂ ಕೇಂದ್ರ ಸಚಿವ ಕುಮಾರಸ್ವಾಮಿಯವರ ಕೈ ಬಲಪಡಿಸಲು ಎಚ್.ಡಿ.ಕೋಟೆ ಕ್ಷೇತ್ರದಲ್ಲಿ, ಹಂತ ಹಂತವಾಗಿ ಜೆಡಿಎಸ್ ಪಕ್ಷವನ್ನು ಕ್ಷೇತ್ರದ ಜನತೆ ಬಲಪಡಿಸುತ್ತಿದ್ದಾರೆ, ಮುಂದಿನ ದಿನಗಳಲ್ಲಿ ಕ್ಷೇತ್ರದಲ್ಲಿ ಕಾಂಗ್ರೆಸ್ ಪಕ್ಷವನ್ನು ಧೂಳಿಪಟ ಮಾಡಿ ಹೆಚ್.ಡಿ.ಕೋಟೆ ಕ್ಷೇತ್ರದಲ್ಲಿ ಮುಂದಿನ ವಿಧಾನಸಭಾ ಚುನಾವಣೆಯಲ್ಲಿ ಜೆಡಿಎಸ್ ಅಭ್ಯರ್ಥಿ ಶಾಸಕರಾಗುವುದು ಖಚಿತ ಎಂದು ತಿಳಿಸಿದರು.

ಮುಖಂಡರುಗಳಾದ ನಾಗೇಗೌಡ, ಸಿದ್ದರಾಜು ಮಾದೇಗೌಡ ಮಾದಪ್ಪ ಕಾಳಪ್ಪ ಮಹೇಶ್, ಗ್ರಾಪಂ ಸದಸ್ಯ ಕೃಷ್ಣಮೂರ್ತಿ ಶಿವಣ್ಣ, ಕೃಷ್ಣ, ಶಿವಪ್ಪ, ಮಂಜು, ಮಾದೇವ, ಕಾರ್ಯದರ್ಶಿ ಆಶಾ ಇದ್ದರು.

ಮಲ್ಕುಂಡಿಯಲ್ಲಿ ವೈಭವದ ಮಹದೇಶ್ವರರ ಆರಾಧನೆ

ಮಲ್ಕುಂಡಿ: ನಂಜನಗೂಡು ತಾಲೂಕಿನ ಮಲ್ಕುಂಡಿ ಗ್ರಾಮದಲ್ಲಿ ಕಾರ್ತಿಕ ಮಾಸದ ಪ್ರಯುಕ್ತ ಸೋಮವಾರ ಶ್ರೀ ಮಲೆ ಮಹದೇಶ್ವರ ಆರಾಧನಾ ಮಹೋತ್ಸವವು ವಿಜೃಂಭಣೆಯಿಂದ ಜರುಗಿತು.

ಸೋಮವಾರ ಗ್ರಾಮದಲ್ಲಿ ಅನ್ನಸಂತರ್ಪಣೆ ಏರ್ಪಡಿಸಲಾಗಿತ್ತು. ಮಂಗಳವಾರ ಗಂಗಾಪೂಜೆಯನ್ನು ಗ್ರಾಮದ ಹೊರ ವಲಯದ ಬಳಿ ಇರುವ ಮಹದೇಶ್ವರ ದೇವಸ್ಥಾನದ ಬಳಿಯ ಕೆರೆಯಲ್ಲಿ ನೆರವೇರಿಸಿ ಡೋಲು ಕುಣಿತದೊಂದಿಗೆ ನಂದಿಕಂಬ ಬಸವವನ್ನು ಗ್ರಾಮದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮಾಡಲಾಯಿತು.



ಗ್ರಾಮದ ಬೀದಿಗಳನ್ನು ತಳಿರು–ತೋರಣಗಳಿಂದ ಅಲಂಕರಿಸಲಾಗಿತ್ತು. ಗ್ರಾಮಸ್ಥರು ಶ್ರದ್ಧಾಭಕ್ತಿಯಿಂದ ಬಸವನಿಗೆ ಪೂಜೆ ಸಲ್ಲಿಸಿದರು. ಈ ವೇಳೆ ತಾಪಂ ಮಾಜಿ ಸದಸ್ಯ ಎಸ್.ಬಸವರಾಜ್, ಗುತ್ತಿಗೆದಾರ ಎಂ.ಪುಟ್ಟಸ್ವಾಮಿ, ಪುಟ್ಟಬುದ್ದಿ, ಯಜಮಾನ್ ಕರಿಪುಟ್ಟಯ್ಯ, ಮಹದೇವಯ್ಯ, ದಸಂಸ ಮುಖಂಡ ಕೃಷ್ಣ, ಚಿಕ್ಕಯಜಮಾನ ಶ್ರೀನಿವಾಸ್, ಶಿವಬಸವಯ್ಯ, ದುಂಡಯ್ಯ, ಗುರುಮಲ್ಲಪ್ಪ, ಶಿವರುದ್ರ ಸೇರಿದಂತೆ ಗ್ರಾಮಸ್ಥರು ಹಾಜರಿದ್ದರು.

ಕಲಾ ಕಲರವದಲ್ಲಿ ಹುಣಸೂರು ರೋಟರಿಗೆ ಸಮಗ್ರ ಪ್ರಶಸ್ತಿ

ಹುಣಸೂರು: ಮಡಿಕೇರಿ ಮಿಸ್ಟರಿ ಹಿಲ್ಸ್‌ನಲ್ಲಿ ನಡೆದ ಕಲಾ ಕಲರವ ಸಾಂಸ್ಕೃತಿಕ ಸ್ಪರ್ಧಾಕೂಟದಲ್ಲಿ ನಮ್ಮ ಹುಣಸೂರು ರೋಟರಿ ಸದಸ್ಯರು ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸಿ ಸಮಗ್ರ ಪ್ರಶಸ್ತಿ ಮುಡಿಗೇರಿಸಿಕೊಳ್ಳುವ ಮೂಲಕ 12 ಬಹುಮಾನಗಳನ್ನು ಪಡೆದುಕೊಂಡಿದ್ದಾರೆ.



ಭಾನುವಾರ ಮಡಿಕೇರಿ ಕಾರ್ಯಪ್ಪ ಕಾಲೇಜಿನಲ್ಲಿ ನಡೆದ ಕಲಾ ಕಲರವದಲ್ಲಿ. ಪ್ರಥಮ ಬಹುಮಾನ, 3 ಸೋಲೊ ಡಾನ್ಸ್ ಮೃದಂಗ್ 1 ಗ್ರೂಪ್ ಸಾಂಗ್ ಕುವೆಂಪು ಅವರ ಓ ನನ್ನ ಚೇತನ ಗೀತೆಗೆ ಪ್ರಥಮ. ಕಿರು ನಾಟಕ ವಾಸನೆಯ ಭೂತ ಪ್ರಥಮ ಸ್ಥಾನ ಪಡೆದುಕೊಂಡಿದ್ದಾರೆ. ಸೋಲೊ ಡ್ಯಾನ್ಸ್ ಮೃದಂಗ್ ಪ್ರಥಮ. ದ್ವಿತೀಯ ಬಹುಮಾನ 7, ಸ್ಟ್ಯಾಂಡಪ್ ಕಾಮಿಡಿ 1, ಡಾ. ಬಸವರಾಜು. ಕೆ, ಡುಯಟ್ ಸಾಂಗ್ 2, ಡಾಕ್ಟರ್ ಸಂಗೀತ ಮತ್ತು ಶ್ರೀ ಚಿಲ್ಕುಂದ ಮಹೇಶ್, ಡಯಟ್ ಡ್ಯಾನ್ಸ್ 2, ಡಾಕ್ಟರ್ ಸಂಗೀತ ಮತ್ತು ಕು.ಮೃದಂಗ್, ಸೋಲೋ ಸಾಂಗ್ 1, ಡಾ. ಸಂಗೀತ, ಗ್ರೂಪ್ ಡ್ಯಾನ್ಸ್ 1, ತೃತೀಯ ಬಹುಮಾನ, ಸೋಲೋ ಡ್ಯಾನ್ಸ್, ಸೃಜನ್ 1, ಮೃದಂಗ್ 1, ಒಟ್ಟು 12 ಪ್ರಶಸ್ತಿಗಳನ್ನು ಗೆದ್ದಿದ್ದು ಸಮಗ್ರ ಪ್ರಶಸ್ತಿ ಬಹುಮಾನಕ್ಕೆ ಭಾಜನರಾಗಿದ್ದಾರೆ.

ಹೆಚ್.ಡಿ.ಕೋಟೆಯಲ್ಲಿ ಅಕ್ರಮ ರೆಸಾರ್ಟ್‌ಗಳ ತನಿಖೆಗೆ ಸಮಿತಿ ರಚನೆ

ವರದಿ ಬಂದ ನಂತರ ಚರ್ಚಿಸಿ ಕ್ರಮ: ಶಾಸಕ ಅನಿಲ್ ಚಿಕ್ಕಮಾದು ಪ್ರಕಟ

ಹೆಚ್.ಡಿ.ಕೋಟೆ, ನ.4– ಅಕ್ರಮ ರೆಸಾರ್ಟ್‌ಗಳ ನಿರ್ಮಾಣದಿಂದ ಹುಲಿಗಳು ಕಾಡು ಬಿಟ್ಟು ನಾಡಿಗೆ ಬರುತ್ತಿವೆ ಎಂಬ ಆರೋಪದ ಹಿನ್ನೆಲೆಯಲ್ಲಿ ಅಕ್ರಮ ರೆಸಾರ್ಟ್‌ಗಳ ಬಗ್ಗೆ ತನಿಖೆ ನಡೆಸಿ ವರದಿ ನೀಡಲು ಸಮಿತಿ ರಚಿಸಲಾಗಿದೆ ಎಂದು ಶಾಸಕ ಅನಿಲ್ ಚಿಕ್ಕಮಾದು ತಿಳಿಸಿದ್ದಾರೆ.

ತಾಲೂಕಿನ ಹೈರಿಗೆ ಗ್ರಾಮದಲ್ಲಿ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಕಾಂಕ್ರೀಟ್ ರಸ್ತೆ ಹಾಗೂ ಚರಂಡಿ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಅವರು, ವರದಿ ಸರ್ಕಾರದ ಕೈ ಸೇರಿದ ಕೂಡಲೇ ಚರ್ಚಿಸಿ ಸೂಕ್ತ ಕ್ರಮ ಜರುಗಿಸಲಾಗುವುದು ಎಂದರು.

ಮೈಸೂರು ಮಾನಂದವಾಡಿ ಮುಖ್ಯ ರಸ್ತೆಯನ್ನು ನಿರ್ಮಾಣ ಮಾಡಲು, ರಾಜ್ಯಮಟ್ಟದಲ್ಲಿ ರಾಷ್ಟ್ರೀಯ ಹೆದ್ದಾರಿಯ ಅಧಿಕಾರಿಗಳೊಂ ದಿಗೆ ತಯಾರಾಗಿರುವ ಡಿಪಿಆರ್‌ನ್ನು ಪರಿಶೀಲಿಸಲಾಗುವುದು ಎಂದು ತಿಳಿಸಿದರು.

ತಾಲೂಕಿನ ಹಿರೇನಂದಿ, ಕುಣಿಗಲ್, ನಂಜಯ್ಯನ ಕಾಲೋನಿ, ಭೀಮನಹಳ್ಳಿ, ಕುಂಟೇರಿ ಹಾಡಿ, ಮುಗತನ ಮಾಳ, ಗ್ರಾಮಗಳಲ್ಲಿ ಕಾಂಕ್ರೀಟ್ ರಸ್ತೆ ನಿರ್ಮಾಣಕ್ಕೆ ಒಂದು ಕೋಟಿ, ಐದು ಲಕ್ಷ ವೆಚ್ಚದ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿದ್ದೇನೆ. ಅದಲ್ಲದೆ ಖ್ಯಾತನಹಳ್ಳಿ ಗ್ರಾಮದಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ವಸತಿ ಶಾಲೆ ಉದ್ಘಾಟಿಸಿದ್ದೇನೆ. ತಾಲೂಕಿನಲ್ಲಿ ವಸತಿ ಹಾಗೂ ಮನೆಗಳ ಸಮಸ್ಯೆಗಳಿದ್ದು, ಮುಂದಿನ ಅಧಿವೇಶನದಲ್ಲಿ ಸರ್ಕಾರದ ಗಮನ ತಂದು ಬಗೆಹರಿಸಲಾಗುವುದು ಎಂದರು.

ಕಬಿನಿ ಜಲಾಶಯದ ಮುಂಭಾಗ ನಿರ್ಮಾಣವಾಗುತ್ತಿರುವ ಸೇತುವೆ ಕಾಮಗಾರಿ ಮಾರ್ಚ್ ತಿಂಗಳಲ್ಲಿ ಪೂರ್ಣ ಗೊಳ್ಳಲಿದೆ ಎಂದು ನೀರಾವರಿ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ. ತಾಲೂಕಿನಲ್ಲಿ ಹುಲಿ ದಾಳಿಯಿಂದ ಇಬ್ಬರು ರೈತರು ಮೃತಪಟ್ಟಿದ್ದು ಮತ್ತೊರ್ವ ರೈತ ಗಾಯಗೊಂಡಿರುವ ಘಟನೆ ನಡೆದಿದೆ. ಈ ಬಗ್ಗೆ ಅರಣ್ಯ ಸಚಿವ ಈಶ್ವರ ಖಂಡ್ರೆ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಸಿ.ಮಹದೇವಪ್ಪ, ಮೈಸೂರು ಚಾಮರಾಜನಗರ ಜಿಲ್ಲೆ ಶಾಸಕರ ನೇತೃತ್ವದಲ್ಲಿ ಸಭೆ ನಡೆಸಿ ಪ್ರಾಣಿಗಳು ಅರಣ್ಯದಿಂದ ಗ್ರಾಮಗಳತ್ತ ಏಕೆ ಬರುತ್ತಿವೆ ಎಂಬ ವಿಚಾರವಾಗಿ ಅಧ್ಯಯನ ನಡೆಸಿ ಮಾಹಿತಿ ನೀಡಿ ಎಂದು ತಿಳಿಸಲಾಗಿದೆ ಎಂದರು.


ಹೈರಿಗೆ ಗ್ರಾಮದಲ್ಲಿ ಕಾಂಕ್ರೀಟ್ ರಸ್ತೆ ಹಾಗೂ ಚರಂಡಿ ಕಾಮಗಾರಿಗೆ ಶಾಸಕ ಅನಿಲ್ ಚಿಕ್ಕಮಾದು ಭೂಮಿ ಪೂಜೆ ನೆರವೇರಿಸಿದರು.

ಗ್ರಾಮಸ್ಥರಿಂದ ಮನವಿ: ಹೈರಿಗೆ ಗ್ರಾಮ ದೊಡ್ಡ ಗ್ರಾಮವಾಗಿದ್ದು ಜನಸಂಖ್ಯೆ ಬಹಳಷ್ಟು ಇದೆ. ನಿವೇಶನ ಅವಶ್ಯಕತೆ ಇದೆ, ಗ್ರಾಮದ ಸಮೀಪ ಹೆಬ್ಬಾಳ ಸೇತುವೆ ಮುರಿದಿದ್ದು ದುರಸ್ತಿ ಮಾಡಿಕೊಡಿ, ಎಸ್‌ಟಿ ಸಮುದಾಯದ ಬೀದಿಗಳಿಗೆ ಕಾಂಕ್ರೀಟ್ ರಸ್ತೆ ಚರಂಡಿ ವ್ಯವಸ್ಥೆ ಮಾಡಿಕೊಡಿ. ಇನ್ನು ಹಲವಾರು ಮೂಲಭೂತ ಸೌಕರ್ಯಗಳನ್ನು ಒದಗಿಸಿ ಕೊಡಿ ಎಂದು ಶಾಸಕ ಅನಿಲ್ ಚಿಕ್ಕಮಾದು ಅವರಿಗೆ ಗ್ರಾಮಸ್ಥರು ಮನವಿ ಮಾಡಿದರು.

ಮನವಿ ಸ್ವೀಕರಿಸಿದ ಶಾಸಕ ಅನಿಲ್ ಚಿಕ್ಕಮಾದು ಗ್ರಾಮಗಳಲ್ಲಿ ನಿವೇಶನ ಇಲ್ಲದವರಿಗೆ ನಿವೇಶನ ನೀಡುವ ಭರವಸೆ ಜೊತೆಗೆ ಹೆಬ್ಬಾಳ ಸೇತುವೆ ನಿರ್ಮಾಣ ಹಾಗೂ ಎಸ್‌ಟಿ ಸಮುದಾಯ ಬೀದಿಗೆ ಕಾಂಕ್ರೀಟ್ ರಸ್ತೆ, ಚರಂಡಿ ಸದ್ಯದಲ್ಲೇ ಆರಂಭಿಸಲಾಗುವುದು ಎಂಬ ಭರವಸೆಯನ್ನು ನೀಡಿದರು.

ಇದೇ ಸಂದರ್ಭದಲ್ಲಿ ಗ್ರಾಪಂ ಅಧ್ಯಕ್ಷೆ ಜಯಮ್ಮ, ಸದಸ್ಯರುಗಳಾದ ಪುಷ್ಪ ಗೋವಿಂದೇಗೌಡ, ಕೆಂಪಮ್ಮ, ರುಕ್ಮಿಣಿ, ಶಿವಣ್ಣ, ದಿನೇಶ, ರಾಮು, ಮುಖಂಡರುಗಳಾದ ದೇವರಾಜ್, ಮಲ್ಲೇಶ್, ಮುದ್ದು ಮಲ್ಲಯ್ಯ, ಮಾದಯ್ಯ, ಕಾಳಯ್ಯ ಕೆಪಿಸಿಸಿ ಕಾರ್ಮಿಕ ವಿಭಾಗದ ಪ್ರಧಾನ ಕಾರ್ಯದರ್ಶಿ ಮಂಜುನಾಥ್ ಕೋಟೆ, ನಂಜುಂಡ, ಪ್ರದೀಪ್, ಕೆಂಪಣ್ಣ, ಮಹದೇವು, ದೇವರಾಜು, ಕಾಳಸ್ವಾಮಿ, ಪಿಡಿಓ ಅವ್ವಯಮ್ಮ ಅಶೋಕ್, ಉಮೇಶ್, ಇಂಜಿನಿಯರ್ ಸುಪ್ರೀತ್ ಗೌಡ ಇದ್ದರು.

ರೈಸ್‌ಮಿಲ್ ಮಾಲೀಕ ವಾರದಲ್ಲಿ ಭತ್ತದ ಹಣ ನೀಡದಿದ್ದರೆ ಉಪವಾಸ ಸತ್ಯಾಗ್ರಹ

ತಿ.ನರಸೀಪುರ, ನ.4 ರೈತರಿಂದ ಭತ್ತ ಪಡೆದು ಹಣ ನೀಡದೇ ವಂಚನೆ ಮಾಡಿರುವ ರೈಸ್ ಮಿಲ್ ಮಾಲೀಕ ಒಂದು ವಾರದೊಳಗೆ ಹಣ ನೀಡದಿದ್ದರೆ ವಂಚನೆಗೊಳಗಾದ ಭತ್ತದ ವ್ಯಾಪಾರಿಗಳು ರೈಸ್ ಮಿಲ್ ಮುಂದೆ ಉಪವಾಸ ಸತ್ಯಾಗ್ರಹ ಮಾಡುತ್ತೇವೆ ಎಂದು ಭತ್ತದ ವ್ಯಾಪಾರಿಗಳು ಎಚ್ಚರಿಕೆ ನೀಡಿದ್ದಾರೆ.


ಪತ್ರಿಕಾಗೋಷ್ಠಿಯಲ್ಲಿ ತುಂಬಲ ಹರೀಶ್ ಮಾತನಾಡಿದರು.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಭತ್ತದ ವ್ಯಾಪಾರಿ ತುಂಬಲ ಹರೀಶ್, ಗರ್ಗೇಶ್ವರಿ ಗ್ರಾಮದ ಎಂ.ಎನ್.ಆಗ್ರೋ ಇಂಡಸ್ಟ್ರೀಸ್ ಮಾಲೀಕ ನಯೀಮುಲ್ಲಾ ಕಳೆದ ಮೂರು ವರ್ಷಗಳ ಹಿಂದೆ ಭತ್ತ ಪಡೆದು ಇದುವರೆಗೂ ರೈತರಿಗೆ ಭತ್ತದ ಹಣ ನೀಡದೇ ಸುಮಾರು 2 ಕೋಟಿ ರೂ.ಗಳನ್ನು ವಂಚಿಸಿದ್ದು, ಹಣ ಕೇಳಲು ಹೋದರೆ ದಬ್ಬಾಳಿಕೆ ಮಾಡಿ ಭತ್ತದ ವ್ಯಾಪಾರಿಗಳ ಮೇಲೆ ಪೊಲೀಸರಿಗೆ ದೂರು ನೀಡಿದ್ದಾರೆ ಎಂದು ಗಂಭೀರ ಆರೋಪ ಮಾಡಿದರು.

ತಾಲೂಕಿನ ವಿವಿಧ ಗ್ರಾಮಗಳ ಭತ್ತದ ವ್ಯಾಪಾರಿಗಳು ಮಿಲ್‌ಗೆ ಭತ್ತ ನೀಡಿದ್ದಾರೆ. ನಾನು 28 ಲಕ್ಷ ರೂ.ಗಳ ಭತ್ತ, ಮೋಳೆ ಹುಂಡಿ ಜವರಿ ಎಂಬುವರು 60 ಲಕ್ಷ ರೂ. ಗುರುಮಲ್ಲಪ್ಪ ಎಂಬುವರು 78 ಲಕ್ಷ ಹಾಗೂ ಮಹದೇವಪ್ಪ ಎಂಬುವರು 50 ಲಕ್ಷ ಬೆಲೆಯ ಭತ್ತ ನೀಡಿದ್ದು ಯಾರಿಗೂ ಹಣ ಪಾವತಿ ಮಾಡದೇ ರೈಸ್ ಮಿಲ್ ಮಾಲೀಕ ಗೂಂಡಾ ವರ್ತನೆ ತೋರುತ್ತಿದ್ದಾರೆ ಎಂದು ಆರೋಪಿಸಿದರು. ಭತ್ತದ ಹಣ ಕೇಳಲು ಹೋದ ನನ್ನ ಮೇಲೆಯೇ ಹಲ್ಲೆ ಮಾಡಿದ್ದಾರೆ. ತಿ.ನರಸೀಪುರ ಪೊಲೀಸರಿಗೆ ದೂರು ನೀಡಿದ್ದಾರೆ ಎಂದು ಅವರು ಇದೇ ವೇಳೆ ಅಪಾದಿಸಿದರು.

ಉಕ್ಕಲಗೆರೆ ಶಿವಕುಮಾರ್ ಎತ್ತಿನ ಗಾಡಿ ರಾಚೇಗೌಡ, ಗುರುಮಲ್ಲ, ಶಿವು, ರವಿಕುಮಾರ್, ಶ್ರೀಧರ, ಅಭಿ, ಮೋಹನ್, ಮಹದೇವಪ್ಪ, ಕೃಷ್ಣಕುಮಾರ್ ಸೇರಿ ದಂತೆ ಇತರರು ಪತ್ರಿಕಾ ಗೋಷ್ಠಿಯಲ್ಲಿ ಹಾಜರಿದ್ದರು.

ದಸರಾ ವಸ್ತು ಪ್ರದರ್ಶನದಲ್ಲಿ ಸಿದ್ಧವಾಗುತ್ತಿದೆ ಅತ್ಯಾಕರ್ಷಕ

'ರಾಜೀವ್ ಗಾಂಧಿ ಡ್ರ್ಯಾಗನ್ ಪಾಂಡ್'

- ಶೀಘ್ರದಲ್ಲೇ ಮುಖ್ಯಮಂತ್ರಿಗಳಿಂದ ಲೋಕಾರ್ಪಣೆ
- ವರ್ಷದ 365 ದಿನವೂ ಪ್ರವಾಸಿಗರನ್ನು ಆಕರ್ಷಿಸಲು ಸಿದ್ಧತೆ





ವಸ್ತು ಪ್ರದರ್ಶನದ ಆವರಣದಲ್ಲಿ ನಿರ್ಮಾಣಗೊಳ್ಳುತ್ತಿರುವ 'ರಾಜೀವ್ ಗಾಂಧಿ ಡ್ರ್ಯಾಗನ್ ಪಾಂಡ್' ಕಾಮಗಾರಿಯನ್ನು ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್ ಖಾನ್ ಪರಿಶೀಲಿಸಿದರು.

ಮೈಸೂರು,ನ.4(ಜಿಎ)–ದಸರಾ ನಂತರವೂ ಜನ ಜಂಗುಳಿಯಿಂದ ಕೂಡಿರುವ ವಸ್ತು ಪ್ರದರ್ಶನದ ಆವರಣದಲ್ಲಿ 5 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣಗೊಂಡಿರುವ 'ರಾಜೀವ್ ಗಾಂಧಿ ಡ್ರ್ಯಾಗನ್ ಪಾಂಡ್' ಮತ್ತಷ್ಟು ಆಕರ್ಷಿಸಲಿದ್ದು, ಸದ್ಯದಲ್ಲಿಯೇ ಮುಖ್ಯಮಂತ್ರಿಗಳಿಂದ ಲೋಕಾರ್ಪಣೆಗೊಳ್ಳಲಿದೆ.

ಮೈಸೂರು ದಸರಾ ವಸ್ತು ಪ್ರದರ್ಶನ ದಸರಾ ಉದ್ಘಾಟನೆಯಾದ ದಿನದಿಂದ ಇಂದಿನವರೆಗೂ ಪ್ರವಾಸಿಗರಿಂದ ತುಂಬಿ ತುಳುಕುತ್ತಿದ್ದು, ಮತ್ತಷ್ಟು ಮೆರಗು ನೀಡಲು 'ಡ್ರಾಗನ್ ಪಾಂಡ್' ಸಿದ್ಧಗೊಳಿಸಲಾಗುತ್ತಿದೆ. ಪ್ರವಾಸಿಗರಿಗೆ ಪ್ರಮುಖ ಆಕರ್ಷಣೆಯಾಗಿ ಮಕ್ಕಳ ನೆಚ್ಚಿನ ತಾಣವೂ ಆಗಲಿದ್ದು, ವರ್ಷದ 365ದಿನ ಪ್ರವಾಸಿಗರನ್ನು ಸೆಳೆಯಲಿದೆ.

ದಸರಾ ಮಹೋತ್ಸವದ ನಂತರ ಮೈಸೂರಿಗೆ ಬರುವ ಪ್ರವಾಸಿಗರು ಸಂಜೆ ನಂತರ ಕೆಆರ್‌ಎಸ್, ಕೊಡಗು ಸೇರಿದಂತೆ ಮೈಸೂರಿನ ಅಕ್ಕಪಕ್ಕದ ಜಿಲ್ಲೆಗಳಿಗೆ ತೆರಳುತ್ತಾರೆ. ಆದರೆ, 90 ದಿನಗಳು ನಡೆಯುವ ವಸ್ತು ಪ್ರದರ್ಶನ ನಂತರ ಬಾಕಿ ದಿನಗಳು ಖಾಲಿ ಇರುತ್ತದೆ. ಇದಕ್ಕಾಗಿ ವರ್ಷದ 365 ದಿನ ಪ್ರವಾಸಿಗರನ್ನು ಸೆಳೆಯಲು ಚಿಂತಿಸಿದ ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರ ಅಧ್ಯಕ್ಷ ಅಯೂಬ್ ಖಾನ್ ಈ ಬಾರಿ ವಸ್ತು ಪ್ರದರ್ಶನ ಆವರಣದ ಚಿತ್ರಣವನ್ನೇ ಬದಲಿಸಿ, ಹೊಸ ರೂಪ ನೀಡಿದ್ದಾರೆ.

ನೂತನವಾಗಿ ಸಂಗೀತ ನೃತ್ಯ ಕಾರಂಜಿ, ವಾಣಿಜ್ಯ ಮಳಿಗೆಗಳ ವಿಭಾಗಕ್ಕೆ ಕರ್ನಾಟಕ ಪರಂಪರೆ ಬಿಂಬಿಸುವ ಬೇಲೂರು ಹಳೇಬೀಡು ಶೈಲಿಯಲ್ಲಿ ನಿರ್ಮಾಣ ಮಾಡಿದ್ದು, ಮಧ್ಯಭಾಗದಲ್ಲಿ ವಿಶೇಷ ಮಂಟಪ ಹಾಗೂ ಪಾರಂಪರಿಕ ಶೈಲಿಯ ಹೋಟೆಲ್ ಎಲ್ಲರನ್ನೂ ಆಕರ್ಷಿಸುತ್ತಿದೆ. ಸಂಗೀತ ನೃತ್ಯ ಕಾರಂಜಿಯನ್ನು ವೀಕ್ಷಿಸಲು ಜನರು ಕಿಕ್ಕಿರಿದು ನೆರೆಯುತ್ತಿದ್ದಾರೆ. ಈ ಕಾರಂಜಿಯನ್ನು ವರ್ಷದ ಎಲ್ಲ ದಿನವೂ ಚಾಲನೆಗೊಳಿಸಿ ಪ್ರವಾಸಿಗರನ್ನು ಆಕರ್ಷಿಸಲು ಉದ್ದೇಶಿಸಲಾಗಿದೆ. ಇದರೊಟ್ಟಿಗೆ ಈಗ 'ಡ್ರ್ಯಾಗನ್ ಪಾಂಡ್' ಕಾರ್ಯಾರಂಭಗೊಂಡರೆ ಜನರಿಗೆ ವಸ್ತು ಪ್ರದರ್ಶನ ಆವರಣ ಪ್ರವಾಸಿಗರಿಗೆ ಮತ್ತೊಂದು ನೆಚ್ಚಿನ ತಾಣವಾಗಲಿದೆ.

ಚೀನಾ ಸೇರಿದಂತೆ ವಿವಿಧ ದೇಶಗಳಲ್ಲಿ ಡ್ರ್ಯಾಗನ್ ಪಾಂಡ್ ನಿರ್ಮಾಣ ಮಾಡಿ ಹೆಚ್ಚಿನ ಸಂಖ್ಯೆಯಲ್ಲಿ ಪ್ರವಾಸಿಗರನ್ನು ಆಕರ್ಷಿಸಲಾಗುತ್ತಿದೆ. ಅದೇ ರೀತಿ ನಗರಕ್ಕೂ ಹೆಚ್ಚಿನ ಸಂಖ್ಯೆಯಲ್ಲಿ ಪ್ರವಾಸಿಗರನ್ನು ಆಕರ್ಷಿಸುವ ಉದ್ದೇಶದಿಂದ ವಸ್ತು ಪ್ರದರ್ಶನ ಆವರಣದಲ್ಲಿ 'ಡ್ರ್ಯಾಗನ್ ಪಾಂಡ್' ನಿರ್ಮಾಣ ಮಾಡಲಾಗಿದೆ.

ಪ್ರಮುಖ ಆಕರ್ಷಣೆ

ಸಂಗೀತ ಕಾರಂಜಿಯು ಪ್ರತಿ ಸಂಜೆ 6, 7, 8, 9 ಮತ್ತು 10 ಗಂಟೆಗೆ 15 ನಿಮಿಷಗಳ ಕಾಲ ನಡೆಸಲಾಗುತ್ತದೆ. ಡ್ರ್ಯಾಗನ್ ಪಾಂಡ್‌ನಲ್ಲಿ ಬಾಯಿಯ ಮೂಲಕ ಬೆಂಕಿ ಉಗುಳುವುದು, ಲೇಸರ್ ಶೋ, ಫೈರ್ ಶೋ ಹಾಗೂ ಸ್ಮೋಕ್ ಶೋ 30 ನಿಮಿಷಗಳ ಕಾಲ ನಡೆಯಲಿದ್ದು, ಕೊಳದಲ್ಲಿ ಸೈಕ್ಲಿಂಗ್ ಮಾಡುತ್ತಾ ಕಿರು ಬೋಟಿಂಗ್‌ನಲ್ಲಿ ಸಂಚಾರ ಮಾಡಬಹುದು. ವರ್ಷದ 365 ದಿನವೂ ಸಂಗೀತ ಕಾರಂಜಿ ಹಾಗೂ ಡ್ರ್ಯಾಗನ್ ಪಾಂಡ್ ಕಾರ್ಯ ನಿರ್ವಹಿಸಿದರೆ ಪ್ರವಾಸೋದ್ಯಮಕ್ಕೆ ಹೊಸ ರೂಪ ನೀಡಲಿದೆ.

> 5 ಕೋಟಿ ರೂ.ವೆಚ್ಚದ ರಾಜೀವ್ ಗಾಂಧಿ ಡ್ರ್ಯಾಗನ್ ಪಾಂಡ್ ಕಾಮಗಾರಿ ಅಂತಿಮ ಹಂತ ತಲುಪಿದ್ದು, ಶೀಘ್ರದಲ್ಲಿಯೇ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಲೋಕಾರ್ಪಣೆಗೊಳಿಸಲಿದ್ದಾರೆ. ವರ್ಷದ ಎಲ್ಲ ದಿನವೂ ವಸ್ತು ಪ್ರದರ್ಶನ ಆವರಣ ಚಟುವಟಿಕೆಯ ತಾಣವಾಗಬೇಕು ಎಂಬ ಉದ್ದೇಶದಿಂದ ಡ್ರ್ಯಾಗನ್ ಪಾಂಡ್ ನಿರ್ಮಾಣ ಮಾಡಲಾಗಿದೆ. ಸಂಗೀತ ನೃತ್ಯ ಕಾರಂಜಿ ಮಾದರಿಯಲ್ಲಿಯೇ ಹೆಚ್ಚಿನ ಸಂಖ್ಯೆಯಲ್ಲಿ ಪ್ರವಾಸಿಗರನ್ನು ಸೆಳೆಯಲಿದೆ.
>
> **ಅಯೂಬ್ ಖಾನ್**, ಅಧ್ಯಕ್ಷ, ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರ

ಬೃಹತ್ ಆಕಾರದ ಡ್ರ್ಯಾಗನ್ ಸುತ್ತಲೂ ಕೊಳವಿದ್ದು, ಈ ಕೊಳದಲ್ಲಿ ಸಾರ್ವಜನಿಕರಿಗೆ ದೋಣಿ ವಿಹಾರಕ್ಕೆ ಅವಕಾಶ ನೀಡಲಾಗುವುದು. ಇದರ ನಡುವೆ ಡ್ರ್ಯಾಗನ್ ಬಾಯಿಯ ಮೂಲಕ ಬೆಂಕಿ ಉಗುಳುವ ರೀತಿಯ ದೃಶ್ಯಗಳನ್ನು ಸೃಷ್ಟಿಸಲಾಗುವುದು. ಅಲ್ಲದೆ, ಲೇಸರ್ ಶೋ ಸಹ ಆಯೋಜಿಸಲಾಗುವುದು. ಫೈರ್ ಶೋ ಹಾಗೂ ಸ್ಮೋಕ್ ಶೋ ಅನ್ನು 20 ನಿಮಿಷಗಳ ಕಾಲ ಆಯೋಜಿಸಲು ಉದ್ದೇಶಿಸಲಾಗಿದೆ.

ಸಾರ್ವಜನಿಕರು ಕೊಳದಲ್ಲಿ ಸೈಕ್ಲಿಂಗ್ ಮಾಡುತ್ತಾ ಕಿರು ಬೋಟಿಂಗ್‌ನಲ್ಲಿ ಸಂಚಾರ ಮಾಡಬಹುದು. ಕೊಳದಲ್ಲಿ ನಡೆಯುವ ಚಟುವಟಿಕೆಗಳನ್ನು ವೀಕ್ಷಿಸಲು ಸಾರ್ವಜನಿಕರಿಗೆ ಆಸನದ ವ್ಯವಸ್ಥೆಯನ್ನು ಸಹ ಮಾಡಲಾಗುವುದು. ಸಂಗೀತ ನೃತ್ಯ ಕಾರಂಜಿ ವೀಕ್ಷಿಸಲು ಸಾರ್ವಜನಿಕರಿಗೆ ಉಚಿತವಾಗಿ ಅವಕಾಶ ಕಲ್ಪಿಸಲಾಗಿದೆ. ಆದರೆ, ಡ್ರ್ಯಾಗನ್ ಪಾಂಡ್‌ನ ಚಟುವಟಿಕೆಯಲ್ಲಿ ಪಾಲ್ಗೊಳ್ಳಲು ಟಿಕೆಟ್ ನಿಗದಿ ಮಾಡಲು ಉದ್ದೇಶಿಸಲಾಗಿದೆ. ಇದರಿಂದ ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರಕ್ಕೆ ಮತ್ತೊಂದು ಆದಾಯದ ಮೂಲವಾಗಲಿದೆ.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ	(ದೂ: 2521923)
ಮಾಸ್ ಜಾತರ (ತೆ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್	(ದೂ: 2422871)
ಕಾಂತಾರ ಚಾಪ್ಟರ್–1 (ಕ)	4 ಪ್ರದರ್ಶನಗಳು
ಬಾಲಾಜಿ	(ದೂ: 2497199)
ಏಕ್ ದಿವಾನೆ ಕಿ ದಿವಾನಿಯತ್ (ಹಿಂ)	3 ಪ್ರದರ್ಶನಗಳು
ಮಹದೇಶ್ವರ	(ಮೊ:9900820093)
ಕಾಂತಾರ ಚಾಪ್ಟರ್–1 (ಕ)	4 ಪ್ರದರ್ಶನಗಳು
ಗಾಯಿತ್ರಿ	
ಕಾಂತಾರ ಚಾಪ್ಟರ್–1 (ಕ)	4 ಪ್ರದರ್ಶನಗಳು
ರಾಜಕಮಲ್	
ಆರ್ಯನ್ (ತ) + ಬೈಸನ್ (ತ)	2+2 ಪ್ರದರ್ಶನಗಳು
ಸಂಗಂ	
ಬ್ರಾಟ್ (ಕ)	4 ಪ್ರದರ್ಶನಗಳು
ಲಿಡೋ	
ಕೋಣ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
–	–
ಪ್ರಭಾ	
ಮಂಡ್ಯ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್

ದೂ : 4240422/4241800

ಸ್ಕ್ರೀನ್ 1	ಕಾಂತಾರ ಚಾಪ್ಟರ್ 1(ಕ): ಮ.1.00ಕ್ಕೆ, ರಾ.7.10ಕ್ಕೆ, ರಾ.10.30ಕ್ಕೆ, ಡ್ಯೂಡ್ (ತ): ಬೆ.10.10ಕ್ಕೆ, ಸಂ.4.20ಕ್ಕೆ
ಸ್ಕ್ರೀನ್ 2	ಬೈಸನ್ (ತ): ಬೆ.10.00ಕ್ಕೆ, ಸಂಜೆ 4.15ಕ್ಕೆ, ಡೀಸೆಲ್ (ತ): ಮ.1.20ಕ್ಕೆ, ತೆಲುಸು ಕದ (ತೆ): ರಾ.7.35ಕ್ಕೆ. ದಿ ಪೆಟ್ ಡಿಟೆಕ್ಟಿವ್ (ಇ): ರಾ.10.20ಕ್ಕೆ
ಸ್ಕ್ರೀನ್ 3	ಡ್ಯೂಡ್ (ತ): ರಾ.7.20ಕ್ಕೆ, ರಾ. 10.15ಕ್ಕೆ, ಕಾಂತಾರ ಚಾಪ್ಟರ್ 1(ಕ): ಸಂ. 4.00ಕ್ಕೆ, ಪ್ರೇಮಿಗಳ ಗಮನಕ್ಕೆ (ಕ): ಬೆ.10.25ಕ್ಕೆ, ಟೈಮ್ ಪಾಸ್ (ಕ): ಮ.1.15ಕ್ಕೆ
ಸ್ಕ್ರೀನ್ 4	ಕಾಂತಾರ ಚಾಪ್ಟರ್ 1(ಕ): ಬೆ.9ಕ್ಕೆ, ಮ.12.20ಕ್ಕೆ, ಮ.3.40ಕ್ಕೆ, ರಾ.7.05ಕ್ಕೆ, ರಾ.10.30ಕ್ಕೆ.

ನೆಕ್ಸಸ್ ಮಾಲ್

ಕಾಂತಾರ ಚಾಪ್ಟರ್ 1(ಕ) : ಬೆ: 8.05ಕ್ಕೆ, 9.05ಕ್ಕೆ, 10.25ಕ್ಕೆ, 11.15ಕ್ಕೆ, ಮ: 12.15ಕ್ಕೆ, 2.40ಕ್ಕೆ, 3.40ಕ್ಕೆ, ಸಂಜೆ 6.05ಕ್ಕೆ, 6.55ಕ್ಕೆ, ರಾತ್ರಿ 7.05ಕ್ಕೆ, 9.30ಕ್ಕೆ, 9.45ಕ್ಕೆ, 10ಕ್ಕೆ, 10.30ಕ್ಕೆ.
ಕಾಂತಾರ ಚಾಪ್ಟರ್ 1(ಹಿ): ಬೆ: 9.10ಕ್ಕೆ, ಮ.3.10ಕ್ಕೆ.
ಡ್ಯೂಡ್ (ತ): ಬೆ: 10ಕ್ಕೆ, ಸಂ: 4ಕ್ಕೆ, ರಾ: 10.20ಕ್ಕೆ
ಟೈಮ್ ಪಾಸ್ (ಕ): ಬೆ: 11.15ಕ್ಕೆ
ತೆಲುಸು ಕಾದಾ (ತೆ): ಮ: 12.20ಕ್ಕೆ, ರಾತ್ರಿ 7.20ಕ್ಕೆ
ಬೈಸನ್ ಕಾಳಮಂದಾನ್ (ತ): ಬೆ: ಮ: 12.40ಕ್ಕೆ, ಸಂಜೆ 6.35ಕ್ಕೆ
ಡೀಸೆಲ್ (ತ): ಮ: 1.40ಕ್ಕೆ
ಮಹಾಯೋಧ ರಾಮ (ಹಿ): ಮ: 1.50ಕ್ಕೆ
ಕೆ–ರ್‍ಯಾಂಪ್ (ತೆ): ಸಂ: 4.15ಕ್ಕೆ, ರಾ: 10.10ಕ್ಕೆ
ಮಿತ್ರ ಮಂಡಳಿ (ತೆ): ಸಂ: 4.40ಕ್ಕೆ
ಗುಡ್ ಫಾರ್ಚ್ಯೂನ್ (ಇ): ಸಂ: 7.30ಕ್ಕೆ

ಗರುಡ ಮಾಲ್

ಕಾಂತಾರ ಚಾಪ್ಟರ್ 1(ಕ) : ಬೆ: 8.20ಕ್ಕೆ, 9.05ಕ್ಕೆ, 9.40ಕ್ಕೆ, 11.30ಕ್ಕೆ, ಮ: 12.15ಕ್ಕೆ, 2.55ಕ್ಕೆ, 3.40ಕ್ಕೆ, ಸಂ: 6.20ಕ್ಕೆ, 7.05ಕ್ಕೆ, ರಾ: 9.45ಕ್ಕೆ, 10.30ಕ್ಕೆ
ಪ್ರೇಮಿಗಳ ಗಮನಕ್ಕೆ (ಕ): ಬೆ: 11.05ಕ್ಕೆ
ಡ್ಯೂಡ್ (ತ): ಮ: 12.50ಕ್ಕೆ, ರಾ: 7.10ಕ್ಕೆ
ಟೈಮ್ ಪಾಸ್ (ಕ): ಮ: 1.50ಕ್ಕೆ
ಬೈಸನ್ ಕಾಳಮಂದಾನ್ (ತ): ಮ: 3.40ಕ್ಕೆ, ರಾ.10.05ಕ್ಕೆ
ತೆಲುಸು ಕಾದಾ (ತೆ): ಮ: 4.30ಕ್ಕೆ
ಕೆ–ರ್‍ಯಾಂಪ್ (ತೆ): ರಾ: 7.20ಕ್ಕೆ
ಮಿತ್ರ ಮಂಡಳಿ (ತೆ): ರಾ: 10.15ಕ್ಕೆ

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಅಂಕಪಟ್ಟಿ ನೀಡಲು ನಿರಾಕರಣೆ

ಕ್ರಾಫರ್ಡ್ ಭವನದ ರಸ್ತೆಯಲ್ಲಿ ಮಲಗಿ ವಿದ್ಯಾರ್ಥಿನಿ ಪ್ರತಿಭಟನೆ



ಮೈಸೂರು,ನ.4(ಎಂಟಿವೈ)–ಅಂಕಪಟ್ಟಿ ನೀಡುವಂತೆ ಒತ್ತಾಯಿಸಿ ವಿದ್ಯಾರ್ಥಿನಿಯೊಬ್ಬರು ರಸ್ತೆಯಲ್ಲಿ ಮಲಗಿ ಪ್ರತಿಭಟನೆ ನಡೆಸಿ, ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಮೈಸೂರು ವಿಶ್ವವಿದ್ಯಾನಿಲಯದ ಕ್ರಾಫರ್ಡ್ ಭವನದ ಮುಂಭಾಗದ ಕೃಷ್ಣರಾಜ ಬುಲೆವಾರ್ಡ್ ರಸ್ತೆಯಲ್ಲಿ ರಾಜ್ಯಶಾಸ್ತ್ರ ಅಧ್ಯಯನ ವಿಭಾಗದ ವಿದ್ಯಾರ್ಥಿ ಡಿ.ಸಿ. ಪ್ರಭಾ ವಿನೂತನ ಪ್ರತಿಭಟನೆ ಮೂಲಕ ಗಮನ ಸೆಳೆದರು. ವಿದ್ಯಾರ್ಥಿನಿ ಅನಾರೋಗ್ಯದಿಂದ ರಸ್ತೆಯಲ್ಲಿ ಬಿದ್ದಿರಬೇಕು ಎಂದು ಭಾವಿಸಿ, ನೆರವಿಗೆ ಬಂದ ಸಾರ್ವಜನಿಕರಿಗೆ ಅಂಕಪಟ್ಟಿ ನೀಡಲು ವಿವಿಯವರು ಹಣ ಕೇಳುತ್ತಿದ್ದಾರೆ. ಅದಕ್ಕೆ ಬುದ್ಧಿ ಕಲಿಸಲು ರಸ್ತೆಯಲ್ಲಿ ಮಲಗಿ ಪ್ರತಿಭಟಿಸುತ್ತಿರುವುದಾಗಿ ತಿಳಿಸಿದರು.

ಬಿ.ಇಡಿ ಪ್ರವೇಶಕ್ಕೆ ಎಸ್‌ಎಸ್‌ಎಲ್‌ಸಿ ಮತ್ತು ಪದವಿ ಅಂಕಪಟ್ಟಿಗಳನ್ನು ನೀಡುವಂತೆ ಕುಲಸಚಿವರಿಗೆ ಪತ್ರ ಬರೆದಿದ್ದೇನೆ. ಆರ್ಥಿಕ ಸಮಸ್ಯೆ ಇರುವುದರಿಂದ ನಕಲಿ ಅಂಕಪಟ್ಟಿ ಪಡೆಯಲು ಸಾಧ್ಯವಾಗುತ್ತಿಲ್ಲ. ಪ್ರವೇಶಾತಿ ಪಡೆದ ಬಳಿಕ ಮತ್ತೆ ಅಂಕಪಟ್ಟಿಯನ್ನು ಮರಳಿ ನೀಡುವುದಾಗಿ ಹೇಳಿದರೂ ಅಧಿಕಾರಿಗಳು ಅಂಕಪಟ್ಟಿ ನೀಡುತ್ತಿಲ್ಲ. ಅಂಕಪಟ್ಟಿ ಕೊಡಲು ಲಂಚ ಕೊಡುವಂತೆ ಕೇಳುತ್ತಿದ್ದಾರೆ ಎಂದು ಆರೋಪಿಸಿದರು.

ಕೆಲ ಸಮಯದ ಬಳಿಕ ಸ್ಥಳಕ್ಕೆ ಬಂದ ಪೊಲೀಸರು ವಿದ್ಯಾರ್ಥಿನಿಯನ್ನು ರಸ್ತೆ ಪಕ್ಕಕ್ಕೆ ಕರೆತಂದು ಮನವೊಲಿಸಿದರು.

ಭತ್ತ ಖರೀದಿ ಕೇಂದ್ರ ಆರಂಭಕ್ಕೆ ಆಗ್ರಹಿಸಿ ಕಬ್ಬು ಬೆಳೆಗಾರರ ಪ್ರತಿಭಟನೆ



ಭತ್ತ ಖರೀದಿ ಕೇಂದ್ರ ನೋಂದಣಿ ಆರಂಭಿಸುವಂತೆ ಒತ್ತಾಯಿಸಿ ಕರ್ನಾಟಕ ರಾಜ್ಯ ಕಬ್ಬು ಬೆಳೆಗಾರ ಸಂಘದ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ಮೈಸೂರು, ನ.4(ಎಂಟಿವೈ)– ಭತ್ತ ಖರೀದಿ ಕೇಂದ್ರ ನೋಂದಣಿ ಆರಂಭಿಸುವಂತೆ ಒತ್ತಾಯಿಸಿ ಕರ್ನಾಟಕ ರಾಜ್ಯ ಕಬ್ಬು ಬೆಳೆಗಾರರ ಸಂಘದ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ಮೈಸೂರಿನ ಸಿದ್ಧಾರ್ಥನಗರದಲ್ಲಿರುವ ನೂತನ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ಮಂಗಳವಾರ ಪ್ರತಿಭಟನೆ ನಡೆಸಿದ ರೈತರು, ಭತ್ತ ಖರೀದಿ ಕೇಂದ್ರ ಆರಂಭಕ್ಕೆ ಅಧಿಕಾರಿಗಳು ನಿರ್ಲಕ್ಷಿಸುತ್ತಿದ್ದಾರೆ.

ಕೇಂದ್ರ ಸರ್ಕಾರ ನಿಗದಿ ಮಾಡಿರುವ ಎಫ್‌ಆರ್‌ಪಿ 2369 ದರದ ಜೊತೆ ರಾಜ್ಯ ಸರ್ಕಾರ ಪ್ರತಿ ಕ್ವಿಂಟಾಲ್ ಭತ್ತಕ್ಕೆ 500 ರೂ. ಹೆಚ್ಚುವರಿ ದರ ನಿಗದಿ ಮಾಡಿ ಗ್ರಾಮ ಪಂಚಾಯತ್ ಮಟ್ಟದಲ್ಲಿ ನೊಂದಣಿ ಪ್ರಕ್ರಿಯೆ ಆರಂಭಿಸಬೇಕು. ರಾಜ್ಯ ಸರ್ಕಾರವು ಪಡಿತರ ವ್ಯವಸ್ಥೆಯಲ್ಲಿ ಅಕ್ಕಿ ವಿತರಣೆ ಮಾಡುತ್ತಿರುವುದರಲ್ಲಿ ಬೇರೆ ರಾಜ್ಯದ ಅಕ್ಕಿಯನ್ನು ವಿತರಿಸಲಾಗುತ್ತಿದೆ. ಆದ್ದರಿಂದ ರಾಜ್ಯದ ಪಡಿತರ ವ್ಯವಸ್ಥೆಗೆ ಅಕ್ಕಿ ವಿತರಿಸಲು ಭತ್ತ ಬೆಳೆಗಾರರಿಗೆ ಯಾವುದೇ ಷರತ್ತನ್ನು ವಿಧಿಸದೆ ರೈತರು ಬೆಳೆದಿರುವ ಎಲ್ಲಾ ಭತ್ತವನ್ನು ಖರೀದಿ ಕೇಂದ್ರದ ಮೂಲಕ ಖರೀದಿಸಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು.

ಭತ್ತ ಖರೀದಿ ದಲ್ಲಾಳಿಗಳು ಹಾಗೂ ಏಜೆನ್ಸಿ ಎಫ್‌ಆರ್‌ಪಿ ದರಕ್ಕಿಂತ ಕಡಿಮೆ ಬೆಲೆಗೆ ಖರೀದಿ ಮಾಡಿದರೆ ಕ್ರಿಮಿನಲ್ ಪ್ರಕರಣ ದಾಖಲಿಸುವ ಕ್ರಮವನ್ನು ರಾಜ್ಯ ಸರ್ಕಾರ ಜಾರಿಗೆ ತರಬೇಕು. ರಾಜ್ಯದ್ಯಂತ ಭತ್ತ ಖರೀದಿಗಾಗಿ ರಾಜ್ಯ ಸರ್ಕಾರ ವಿಶೇಷ ಆವರ್ತ ನಿಧಿಯನ್ನು ಘೋಷಣೆ ಮಾಡಬೇಕು. ಈ ಮೂಲಕ ಭತ್ತ ಖರೀದಿಗಾರರನ್ನು ರಕ್ಷಣೆ ಮಾಡಲು ಸರ್ಕಾರ ಮುಂದಾಗಬೇಕು ಎಂದು ಆಗ್ರಹಿಸಿದರು.

ಕಾಡುಪ್ರಾಣಿ ಮತ್ತು ಹುಲಿ ದಾಳಿಗೆ ಬಲಿಯಾದ ರೈತ ಕುಟುಂಬಕ್ಕೆ 1 ಕೋಟಿ ರೂ. ಪರಿಹಾರವನ್ನು ಕೇಂದ್ರ ಮತ್ತು ರಾಜ್ಯ ಸರ್ಕಾರ ಘೋಷಿಸಲು ಕ್ರಮ ಕೈಗೊಳ್ಳಬೇಕು. ಇಲ್ಲವಾದರೆ ಮುಂದಿನ ದಿನಗಳಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ರಾಜ್ಯಾದ್ಯಂತ ಅಹೋರಾತ್ರಿ ಧರಣಿ ನಡೆಸಲಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಪ್ರತಿಭಟನೆಯಲ್ಲಿ ಕರ್ನಾಟಕ ರಾಜ್ಯ ಕಬ್ಬು ಬೆಳೆಗಾರ ಸಂಘದ ಅಧ್ಯಕ್ಷ ಹಳ್ಳಿಕೆರೆ ಹುಂಡಿ ಭಾಗ್ಯರಾಜ್, ಮುಖಂಡರಾದ ಅಡಿವಿನಹಳ್ಳಿ ಹೆಚ್.ಎಸ್.ರಾಜು, ಕೆರೆಹುಂಡಿ ರಾಜಣ್ಣ, ಒಳಗೆರೆ ಗಣೇಶ್, ಮಲಿಯೂರು ಮಹೇಂದ್ರ, ಹೊನ್ನಗೌಡನಹಳ್ಳಿ ಮಹೇಶ್, ದೇವನೂರು ನಾಗೇಂದ್ರ, ದೇವಿರಾಮನಳ್ಳಿ ಪ್ರಭು, ಚಿಕ್ಕಬಸಪ್ಪ, ಶ್ರೀಕಂಠ ಸ್ವಾಮಿ, ಅಂಡುವಿನಹಳ್ಳಿ ಜಗದೀಶ್, ಮಹದೇವಪ್ಪ, ಮದನ್, ಚಿದಂಬರ, ಜಗದೀಶ್, ನಾಗರಾಜಪ್ಪ ಇನ್ನಿತರರು ಪಾಲ್ಗೊಂಡಿದ್ದರು.

ಹೆಚ್.ಡಿ.ಕೋಟೆ, ಸರಗೂರಲ್ಲಿ 28 ರೆಸಾರ್ಟ್, ಹೋಂ ಸ್ಟೇ; ಕಾಡು ಪ್ರಾಣಿಗಳು ನಾಡಿನತ್ತ ವಲಸೆ

ಪ್ರಭಾವಿಗಳ ರೆಸಾರ್ಟ್, ಹೋಂ ಸ್ಟೇಗಳ ಬಗ್ಗೆ ಕ್ರಮ ಕೈಗೊಳ್ಳಲು ಆಗ್ರಹ



ಮೈಸೂರು,ನ.4(ಜಿಎ)–ಹೆಚ್.ಡಿ. ಕೋಟೆ, ಸರಗೂರು ಅರಣ್ಯ ಭಾಗದಲ್ಲಿ ಸುಮಾರು 28 ರೆಸಾರ್ಟ್, ಹೋಂಸ್ಟೇಗಳನ್ನು ಪ್ರಭಾವಿಗಳು ನಿರ್ಮಿಸಿಕೊಂಡಿದ್ದಾರೆ. ಇವುಗಳ ಚಟುವಟಿಕೆಯಿಂದ ವಿಚಲಿತವಾಗಿ ಕಾಡುಪ್ರಾಣಿಗಳು ಹೊರ ಬರುತ್ತಿವೆ. ಆದರೆ ಪ್ರಭಾವಿಗಳ ಒತ್ತಡಕ್ಕೆ ಮಣಿದು ಸಂಬಂಧಪಟ್ಟ ಅಧಿಕಾರಿಗಳು ಅವುಗಳ ವಿರುದ್ಧ ಕ್ರಮ ಕೈಗೊಂಡಿಲ್ಲ ಎಂದು ಸೇವ್ ಕಬಿನಿ ಸದಸ್ಯ, ರೈತ ಮುಖಂಡ ಹೊನ್ನೂರು ಪ್ರಕಾಶ್ ಆರೋಪಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಕ್ರಮ ರೆಸಾರ್ಟ್, ಹೋಂ ಸ್ಟೇಗಳ ನಿರ್ಮಾಣಗಳಿಂದ ಪರಿಸರ ಸೂಕ್ಷ್ಮ ವಲಯಕ್ಕೂ ಅಪಾಯ ಎದುರಾಗಿದೆ. ಇವುಗಳನ್ನು ನಿರ್ಮಿಸಿಕೊಂಡಿರುವವರು ಪ್ರಭಾವೀ ವ್ಯಕ್ತಿಗಳಾಗಿದ್ದಾರೆ. ಈ ಕುರಿತು ಈಗಾಗಲೇ ಸಂಬಂಧಿಸಿದವರಿಗೆ ದೂರು ನೀಡಿದ್ದೇವೆ. ಸಚಿವ ಈಶ್ವರ ಖಂಡ್ರೆ ಈಚಿನ ಮಾನವ–ಪ್ರಾಣಿ ಸಂಘರ್ಷದಿಂದ ಇಬ್ಬರು ಬಲಿಯಾಗಿ ಓರ್ವ ಚಿಂತಾಜನಕ ಸ್ಥಿತಿಯಲ್ಲಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಘಟನೆ ಹಿನ್ನೆಲೆ ಅಂತಹ ಅಕ್ರಮ ನಿರ್ಮಾಣಗಳ ವಿರುದ್ಧ ಕ್ರಮ ಕೈಗೊಳ್ಳುವುದಾಗಿ ಹೇಳಿದ್ದಾರೆ. ಆದರೆ ಇಲ್ಲಿ ಅಕ್ರಮ, ಸಕ್ರಮ ಎಂಬ ಪ್ರಶ್ನೆಯಿಲ್ಲ. ಕಾಡಿನೊಳಗೆ ಯಾವುದೇ ರೆಸಾರ್ಟ್, ಹೋಂಸ್ಟೇ ನಿರ್ಮಾಣ ಮಾಡುವುದೂ ಅಕ್ರಮವೇ ಎಂದರು.

ಸರಗೂರು, ಎಚ್.ಡಿ.ಕೋಟೆ ಅರಣ್ಯ, ಕಬಿನಿ ನದಿಭಾಗದ ಹುಲಿ ಸಂರಕ್ಷಿತ ಪ್ರದೇಶ, ಆನೆ ಕಾರಿಡಾರ್‌ಗಳಲ್ಲಿ ಹೋಂ ಸ್ಟೇ, ರೆಸಾರ್ಟ್, ಸ್ಟಾರ್ ಹೋಟೆಲ್, ವಾಟರ್ ಸ್ಪೋರ್ಟ್ಸ್, ಕ್ಲಬ್, ಬಾರ್, ರೆಸ್ಟೋರೆಂಟ್, ಬೋಟ್ ವಿಹಾರ, ಸಫಾರಿ ಮೊದಲಾದವು ನಡೆಯುತ್ತಿವೆ. ಕ್ರಷರ್‌ಗಳೂ ಇವೆ. ಸಫಾರಿಯ ಸುಮಾರು 25 ವಾಹನಗಳು ಸಂಚರಿಸುತ್ತಿವೆ. ಅಕ್ರಮ ರೆಸಾರ್ಟ್ ಮೊದಲಾದವುಗಳ ಸುಮಾರು 20 ವಾಹನಗಳು ಸಹ ಬೆಳಗ್ಗೆ ಕಾಡು ಪ್ರವೇಶಿಸಿದರೆ ರಾತ್ರಿ 7 ಗಂಟೆಯಾದರೂ ಹೊರ ಬರುವುದಿಲ್ಲ. ಇದರಿಂದಾಗಿ ಕಾಡು ಪ್ರಾಣಿಗಳು ವಿಚಲಿತ ವಾಗಿ ನಾಡಿನತ್ತ ಆಗಮಿಸಿ, ಮಾನವ–ಪ್ರಾಣಿ ಸಂಘರ್ಷ ನಡೆಯುತ್ತಿದೆ ಎಂದು ದೂರಿದರು.

ವಕೀಲ ವಿ.ರವಿಕುಮಾರ್ ಮಾತನಾಡಿ, ಇವುಗಳ ವಿರುದ್ಧ ನಾವು ದಾಖಲೆ ಸಂಗ್ರಹಿಸಿ ಕಳೆದ ಮಾರ್ಚ್ ತಿಂಗಳಿಂದಲೂ ಹೋರಾಟ ನಡೆಸುತ್ತಿದ್ದೇವೆ. ಆದರೂ ಯಾರು ಕ್ರಮ ಕೈಗೊಂಡಿಲ್ಲ. ಅರಣ್ಯ ಇಲಾಖೆ, ಪರಿಸರ ಮಾಲಿನ್ಯ ನಿಯಂತ್ರಣ ಇಲಾಖೆ, ನೀರಾವರಿ ಇಲಾಖೆ, ಪೊಲೀಸರು ತಮಗೂ ಇದಕ್ಕೂ ಸಂಬಂಧವಿಲ್ಲ ಎಂಬಂತಿದ್ದಾರೆ. ಇವುಗಳನ್ನು ನಿರ್ಮಿಸಿಕೊಂಡಿರುವವರು ದೊಡ್ಡ ದೊಡ್ಡ ವ್ಯಕ್ತಿಗಳಾಗಿವುದು ಇದಕ್ಕೆ ಕಾರಣ. ಹೀಗಾಗಿ ಹೈಕೋರ್ಟ್ ಹಾಗೂ ಸುಪ್ರೀಂಕೋರ್ಟ್ ಸ್ವಯಂಪ್ರೇರಿತ ಪ್ರಕರಣ ದಾಖಲಿಸಿಕೊಂಡು ಕ್ರಮ ಕೈಗೊಳ್ಳಬೇಕೆಂದು ಕೋರಿದರು.

ಸುಮಾರು 28 ಅಂತಹ ಅಕ್ರಮ ಕಟ್ಟಡ, ಚಟುವಟಿಕೆಪಟ್ಟಿ ಬಿಡುಗಡೆ ಗೊಳಿಸಲಾಗಿದೆ. ಅನುಮತಿ ಪಡೆದಿರುವುದಾಗಿ ಹೇಳಿಕೊಂಡು ಚಟುವಟಿಕೆ ನಡೆಸುತ್ತಿರುವವು ಸಹ ಅಸಂಖ್ಯ. ಇವುಗಳಿಂದ ವಿಚಲಿತವಾಗಿ ಇಲ್ಲಿನ ವನ್ಯ ಜೀವಿಗಳು ಕಾಡಿನಿಂದ ಹೊರ ಬರುವಂತಾಗಿದೆ. ಪರಿಸರಕ್ಕೂ ಹಾನಿಯಾಗುತ್ತಿದೆ ಎಂದರು. ಸುದ್ದಿಗೋಷ್ಠಿಯಲ್ಲಿ ಮಧು ಯಡಿಯಾಲ, ಕರಿಯಪ್ಪ ಉಪಸ್ಥಿತರಿದ್ದರು.

ಕಾಡಂಚಲ್ಲಿ ವನ್ಯಜೀವಿ ಉಪಟಳ ತಡೆಗೆ ಆಗ್ರಹಿಸಿ ರೈತರ ಪ್ರತಿಭಟನೆ

ಈಗಾಗಲೇ ಹುಲಿ ದಾಳಿಯಿಂದ ಜೀವ ಕಳೆದುಕೊಂಡವರ ಕುಟುಂಬಕ್ಕೆ 50 ಲಕ್ಷ ಪರಿಹಾರಕ್ಕೆ ಆಗ್ರಹ



ಮೈಸೂರಿನ ಅಶೋಕಪುರಂನ ಅರಣ್ಯ ಭವನದ ಮುಂದೆ ರಾಜ್ಯ ರೈತ ಸಂಘಟನೆಗಳ ಒಕ್ಕೂಟದ ಕಾರ್ಯಕರ್ತರು ಮಾನವ–ವನ್ಯಜೀವಿ ಸಂಘರ್ಷಕ್ಕೆ ಶಾಶ್ವತ ಪರಿಹಾರಕ್ಕಾಗಿ ಒತ್ತಾಯಿಸಿ ಪ್ರತಿಭಟನೆ ನಡೆಸಿದರು.

> ಹುಲಿ ದಾಳಿಗೆ ಬಲಿಯಾದ ಇಬ್ಬರು ರೈತರಿಗೆ ಈಗಾಗಲೇ ಸರ್ಕಾರದಿಂದ ಪರಿಹಾರ ಕೊಡಲಾಗಿದೆ. ಗಂಭೀರವಾಗಿ ಗಾಯಗೊಂಡ ಮಹದೇವ ಅವರು ಈಗ ಚಿಕಿತ್ಸೆಗೆ ಸ್ಪಂದಿಸುತ್ತಿದ್ದಾರೆ. ಅ.16 ರಂದು ದಾಳಿ ನಡೆದು, ಈಗ 20 ದಿನ ಕಳೆದಿದೆ ಇನ್ನೂ ತೀವ್ರ ನಿಗಾ ಘಟಕದಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಅವರಿಗೂ ಎಲ್ಲಾ ಚಿಕಿತ್ಸಾ ವೆಚ್ಚವನ್ನು ಸರ್ಕಾರವೇ ಭರಿಸುತ್ತಿದೆ. ಮುಂದೆ ಇಂತಹ ಘಟನೆಗಳು ನಡೆಯದಂತೆ ಮುನ್ನೆಚ್ಚರಿಕೆ ವಹಿಸಲಾಗಿದೆ. ಈಗಾಗಲೇ ಹುಲಿ ಸೆರೆ ಕಾರ್ಯಾಚರಣೆ ನಿರಂತರವಾಗಿ ನಡೆಯುತ್ತಿದೆ. ಹೊಸ ತಂತ್ರಜ್ಞಾನ ಬಳಸಿಕೊಂಡು ಹುಲಿ ಸೆರೆಗೆ ಕಾರ್ಯಾಚರಣೆ ಮಾಡುತ್ತಿದ್ದೇವೆ. ಈಗಾಗಲೇ ಎರಡು ಹುಲಿ ಸೆರೆ ಹಿಡಿಯಲಾಗಿದೆ. ಕಾಡಂಚಿನ ಗ್ರಾಮದಲ್ಲಿರುವ ಜನರು ಎಚ್ಚರಿಕೆ ವಹಿಸಬೇಕು. ಎಲ್ಲಿಯಾದರೂ ಹುಲಿ, ಚಿರತೆ ದಾಳಿಯ ಸೂಕ್ಷ್ಮ ತಿಳಿದರೆ, ತಕ್ಷಣ ಸ್ಥಳೀಯ ಅರಣ್ಯ ಇಲಾಖೆ ಸಿಬ್ಬಂದಿ ಗಮನಕ್ಕೆ ತರಬೇಕು. ಸಾಧ್ಯವಾದಷ್ಟು ಎಚ್ಚರಿಕೆ ವಹಿಸಬೇಕು.
>
> – **ರವಿಶಂಕರ್**, ಸಿಎಫ್, ಮೈಸೂರು ವೃತ್ತ

ಮೈಸೂರು, ನ.4(ಎಂಟಿವೈ)– ಕಾಡಂಚಿನ ಗ್ರಾಮಗಳಲ್ಲಿ ವನ್ಯಜೀವಿಗಳ ಉಪಟಳಕ್ಕೆ ಶಾಶ್ವತ ಕಡಿವಾಣ ಹಾಕಿ, ವನ್ಯಜೀವಿಗಳ ದಾಳಿಯಿಂದ ಮೃತಪಟ್ಟವರ ಕುಟುಂಬಕ್ಕೆ 50 ಲಕ್ಷ ರೂ. ಪರಿಹಾರ ನೀಡುವುದೂ ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ, ರಾಜ್ಯ ರೈತ ಸಂಘಟನೆಗಳ ಒಕ್ಕೂಟದ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ಮೈಸೂರಿನ ಅಶೋಕಪುರಂನ ಅರಣ್ಯ ಭವನದ ಮುಂದೆ ರಾಜ್ಯ ರೈತ ಸಂಘಟನೆಗಳ ಒಕ್ಕೂಟದ ರಾಜ್ಯಾಧ್ಯಕ್ಷ ಕುರುಬೂರು ಶಾಂತಕುಮಾರ್ ನೇತೃತ್ವದಲ್ಲಿ ರೈತ ಮುಖಂಡರು ಪ್ರತಿಭಟನೆ ನಡೆಸಿ, ಮೈಸೂರು, ಚಾಮರಾಜನಗರ, ಕೊಡಗು ಸೇರಿದಂತೆ ರಾಜ್ಯದ ವಿವಿಧ ಜಿಲ್ಲೆಗಳ ಕಾಡಂಚಿನ ಗ್ರಾಮಗಳಲ್ಲಿ ವನ್ಯಜೀವಿಗಳ ಉಪಟಳ ತಡೆಗೆ ಶಾಶ್ವತ ಕ್ರಮ ಕೈಗೊಳ್ಳುವುದರೊಂದಿಗೆ ವನ್ಯಜೀವಿಗಳ ದಾಳಿಗೆ ಒಳಗಾಗಿ ಮೃತಪಟ್ಟ ಸಂತ್ರಸ್ತ ಕುಟುಂಬಗಳಿಗೆ 50 ಲಕ್ಷ ರೂ. ಪರಿಹಾರ ನೀಡಬೇಕು ಎಂದು ಆಗ್ರಹಿಸಿದರು.

ಕುರುಬೂರು ಶಾಂತಕುಮಾರ್ ಮಾತನಾಡಿ, ಮೈಸೂರು, ಚಾಮರಾಜನಗರ ಮತ್ತು ಕೊಡಗು ಜಿಲ್ಲೆಗಳಲ್ಲಿ ಇತ್ತೀಚೆಗೆ ಮಾನವ ಮತ್ತು ಕಾಡು ಪ್ರಾಣಿಗಳ ಸಂಘರ್ಷ ಹೆಚ್ಚಾಗುತ್ತಿದ್ದು ಅಮಾಯಕ ರೈತರು ಬಲಿಯಾಗುತ್ತಿದ್ದಾರೆ. ಇದಕ್ಕೆ ಕಾರಣ ಅರಣ್ಯ ಇಲಾಖೆ ಅಧಿಕಾರಿ, ಸಿಬ್ಬಂದಿಗಳ ನಿರ್ಲಕ್ಷ್ಯವೇ ಕಾರಣ. ಮೈಸೂರು ಜಿಲ್ಲೆಯ ಹೆಚ್.ಡಿ.ಕೋಟೆ, ಸರಗೂರು ತಾಲೂಕಿನಲ್ಲಿ ಕಳೆದ ಒಂದು ತಿಂಗಳ ಅಂತರದಲ್ಲಿ ಮೂವರ ಮೇಲೆ ಹುಲಿ ದಾಳಿ ನಡೆದು, ಇಬ್ಬರು ಬಲಿಯಾಗಿ, ಮತ್ತೊಬ್ಬನ ಪರಿಸ್ಥಿತಿ ಚಿಂತಾಜನಕವಾಗಿದೆ. ಇನ್ನೂ ಕೆಲವರು ಕೂದಲೆಳೆ ಅಂತರದಲ್ಲಿ ಹುಲಿ ದಾಳಿಯಿಂದ ಪಾರಾಗಿದ್ದಾರೆ. ಕೇವಲ ಹುಲಿ ಮಾತ್ರವಲ್ಲದೆ, ಚಿರತೆ, ಆನೆ, ಹಂದಿಗಳ ದಾಳಿಯಿಂದಲೂ ರೈತರು ಗಾಯಗೊಂಡ ಉದಾಹರಣೆಗಳಿವೆ ಎಂದರು.

ಮಾನವ–ವನ್ಯಜೀವಿ ಸಂಘರ್ಷ ತಡೆಯುವ ನಿಟ್ಟಿನಲ್ಲಿ ಶಾಶ್ವತ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಅರಣ್ಯ ಇಲಾಖೆ ವಿಫಲವಾಗಿದೆ. ಹಾಗಾಗಿ ರೈತರ ಪಾಲಿಗೆ ಅರಣ್ಯ ಇಲಾಖೆ ಸಿಬ್ಬಂದಿ ಇದ್ದು ಇಲ್ಲದಂತಾಗಿದ್ದಾರೆ. ಇಂತಹ ಘಟನೆಗಳು ಪದೇ ಪದೆ ಮರುಕಳಿಸಲು ಕಾರಣ ಅಕ್ರಮ ರೆಸಾರ್ಟ್ ಮತ್ತು ಸಫಾರಿ. ಮೋಜು ಮಸ್ತಿಗೆಂದು ಅಕ್ರಮ ರೆಸಾರ್ಟ್ ನಿರ್ಮಾಣ ಮಾಡಲಾಗಿದೆ. ಇದರಿಂದ ಪ್ರಾಣಿಗಳು ಗಾಬರಿಯಾಗಿ ಕಾಡಿನಿಂದ ನಾಡಿನತ್ತ ಬರುತ್ತವೆ. ಹಾಗಾಗಿ ಈ ಅಕ್ರಮ ರೆಸಾರ್ಟ್ ತೆರವುಗೊಳಿಸಬೇಕು, ಹುಲಿ ದಾಳಿಗೆ ಒಳಗಾದ ಸಂತ್ರಸ್ತ ಕುಟುಂಬದ ಸದಸ್ಯರೊಬ್ಬರಿಗೆ ಸರ್ಕಾರಿ ಉದ್ಯೋಗ ಕೊಡಬೇಕು, ರೈತರಿಗೆ ರಕ್ಷಣೆ ಕೊಡಬೇಕು ಎಂದು ಒತ್ತಾಯಿಸಿದರು. ಇದೆ ವೇಳೆ ಮೈಸೂರು ವೃತ್ತದ ಸಿಎಫ್ ರವಿಶಂಕರ್ ಅವರಿಗೆ ಮನವಿ ಸಲ್ಲಿಸಲಾಯಿತು.

ಗೂಡ್ಸ್ ರೈಲಿಗೆ ಪ್ಯಾಸೆಂಜರ್ ರೈಲು ಡಿಕ್ಕಿ; 6 ಮಂದಿ ಸಾವು!

ಬಿಲಾಸ್‌ಪುರ: ಛತ್ತೀಸ್‌ಗಢದ ಬಿಲಾಸ್‌ಪುರ ಬಳಿ ಪ್ರಯಾಣಿಕ ರೈಲು, ಸರಕು ಸಾಗಾಣೆ ರೈಲಿಗೆ ಡಿಕ್ಕಿ ಹೊಡೆದು ಪ್ರಥಮ ಮಾಹಿತಿ ಪ್ರಕಾರ 6 ಮಂದಿ ಸಾವನ್ನಪ್ಪಿದ್ದಾರೆ. ಗಾಯಾಳುಗಳ ಚಿಕಿತ್ಸೆಗಾಗಿ ಎಲ್ಲಾ ಸಂಪನ್ಮೂಲಗಳು ಮತ್ತು ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತಿದೆ ಎಂದು ರೈಲ್ವೆ ಇಲಾಖೆ ತಿಳಿಸಿದೆ.

ಇಂದು ಕೆಲವೆಡೆ ವಿದ್ಯುತ್ ವ್ಯತ್ಯಯ

ಮೈಸೂರು, ನ.4–ದೇವನೂರು ವಿದ್ಯುತ್ ವಿತರಣಾ ಕೇಂದ್ರದಿಂದ ಹೊರಹೊಮ್ಮುವ ಸಾತಗಳ್ಳಿ, ಹಂಚ್ಯ ಐಪಿ ಫೀಡರ್‌ನಲ್ಲಿ ತುರ್ತು ಕಾಮಗಾರಿ ನಡೆಯುತ್ತಿರುವುದರಿಂದ ನ.5ರಂದು ಬೆಳಗ್ಗೆ 10 ಗಂಟೆಯಿಂದ ಸಂಜೆ 5ರವರೆಗೆ ಸಾತಗಳ್ಳಿ, ರಮ್ಮನಹಳ್ಳಿ, ಹಂಚ್ಯ, ಕಾಳಿಸಿದ್ದನಹುಂಡಿ ಹಾಗೂ ಸುತ್ತಮುತ್ತಲಿನ ಪ್ರದೇಶದಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದೆ ಎಂದು ಚೆಸ್ಕಾಂನ ಕಾರ್ಯನಿರ್ವಾಹಕ ಇಂಜಿನಿಯರ್ ಪ್ರಕಟಣೆ ಮೂಲಕ ತಿಳಿಸಿದ್ದಾರೆ.


ಕರ್ನಾಟಕ ಬಿಜೆಪಿ ರಾಜ್ಯಾಧ್ಯಕ್ಷರಾದ
ಶ್ರೀ ಬಿ.ವೈ.ವಿಜಯೇಂದ್ರ ರವರಿಗೆ
50 ಹುಟ್ಟುಹಬ್ಬದ ಶುಭಾಶಯಗಳು
ಶುಭಕೋರುವವರು:
ಎಸ್. ಸಚ್ಚಿದಾನಂದ
ಬಿ.ಜೆ.ಪಿ. ಮುಖಂಡರು,
ಶ್ರೀರಂಗಪಟ್ಟಣ ವಿಧಾನಸಭಾ ಕ್ಷೇತ್ರ
ಮಂಡ್ಯ ಬಿಗ್ ಪ್ರಿಂಟ್
ಆರ್.ಪಿ. ರಸ್ತೆ, ಗುರುಭವನ ಪಕ್ಕ, ಮಂಡ್ಯ.
ಮೊ: 9900434353


ಕರ್ನಾಟಕ ರಾಜ್ಯದ ಬಿ.ಜೆ.ಪಿ ರಾಜ್ಯಾಧ್ಯಕ್ಷರು ಹಾಗು ಶಿಕಾರಿಪುರ ಕ್ಷೇತ್ರದ ಶಾಸಕರು
ಶ್ರೀ ಬಿ.ವೈ ವಿಜಯೇಂದ್ರ ರವರಿಗೆ
ಜನ್ಮದಿನದ ಶುಭಾಶಯಗಳು
50ನೇ ವರ್ಷದ
ನಾಡಿನ ಅಧಿದೇವತೆ ಶ್ರೀ ಚಾಮುಂಡೇಶ್ವರಿ ತಾಯಿಯು
ಆಯಸ್ಸು, ಆರೋಗ್ಯ ಹಾಗೂ ಹೆಚ್ಚಿನ ಅಧಿಕಾರ
ನೀಡಲೆಂದು ಪ್ರಾರ್ಥಿಸುತ್ತೇನೆ...
ಶುಭಕೋರುವವರು : ಎಲ್. ನಾಗೇಂದ್ರ
ಮಾಜಿ ಶಾಸಕರು, ಚಾಮರಾಜ ಕ್ಷೇತ್ರ
ಮೈಸೂರು ನಗರ ಬಿ.ಜೆ.ಪಿ ಅಧ್ಯಕ್ಷರು